ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

45

ಡಿಸೆಂಬರ್ 24 ಮಂಗಳವಾರ 2024

ಸಂಪುಟ: 45 | ಸಂಚಿಕೆ: 247 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಫೇಲ್ ಆಗುವ 5–8 ತರಗತಿ ವಿದ್ಯಾರ್ಥಿಗಳಿಗೆ ಇನ್ಮುಂದೆ ಬಡ್ತಿ ಇಲ್ಲ

ಕೇಂದ್ರ ಸರ್ಕಾರ ಮಹತ್ವದ ನಿರ್ಧಾರ

ನವದೆಹಲಿ, ಡಿ.23– 5 ಮತ್ತು 8ನೇ ತರಗತಿಯ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ ಕೇಂದ್ರವು ಪ್ರಮುಖ ನಿರ್ಧಾರವನ್ನು ತೆಗೆದುಕೊಂಡಿದೆ. ವಾರ್ಷಿಕ ಪರೀಕ್ಷೆಗಳಲ್ಲಿ ಉತ್ತೀರ್ಣರಾಗದ 5 ಮತ್ತು 8ನೇ ತರಗತಿಯ ವಿದ್ಯಾರ್ಥಿಗಳಿಗೆ Detention Policy ನೀತಿಯನ್ನು ರದ್ದುಪಡಿಸಲಾಗಿದೆ. ಇದರರ್ಥ ಆ ಎರಡು ತರಗತಿಗಳ ವಿದ್ಯಾರ್ಥಿಗಳು ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು. ಉತ್ತೀರ್ಣರಾಗದ ವಿದ್ಯಾರ್ಥಿಗಳನ್ನು ಎರಡು ತಿಂಗಳ ಅವಧಿಯಲ್ಲಿ ಮತ್ತೊಂದು ಪರೀಕ್ಷೆಗೆ ಒಳಪಡಿಸಲಾಗುವುದು. ನೀವು ಆ ಪರೀಕ್ಷೆಗಳಲ್ಲಿ ಉತ್ತೀರ್ಣರಾದರೆ, ಉನ್ನತ ತರಗತಿಗೆ ಹೋಗಲು ನಿಮಗೆ ಅವಕಾಶವಿದೆ.

ಶೇ.50:50ರ ಮುಡಾ ನಿವೇಶನ ಹಂಚಿಕೆ ಹಗರಣ; ಮುಡಾಗೆ ಭಾರಿ ನಷ್ಟ ಉಂಟುಮಾಡಿದ ಅಧಿಕಾರಿಗಳ

ಬಚಾವ್ ಮಾಡಲು ಪ್ರಯತ್ನಿಸಿದರೆ ಕಠಿಣ ಕ್ರಮ

ಮುಡಾ ಆಯುಕ್ತರಿಗೆ ಸರ್ಕಾರದ ಎಚ್ಚರಿಕೆ



ಎಸ್.ಟಿ.ರವಿಕುಮಾರ್

ಮೈಸೂರು, ಡಿ.23– ಕಾನೂನುಬಾಹಿರವಾಗಿ ಸಾವಿರಾರು ನಿವೇಶನಗಳನ್ನು ಮಂಜೂರು ಮಾಡಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಮತ್ತು ಸರ್ಕಾರಕ್ಕೆ ಭಾರಿ ನಷ್ಟ ಉಂಟು ಮಾಡಿದ ಅಧಿಕಾರಿಗಳು ಹಾಗೂ ನೌಕರರು ಶಿಸ್ತು ಕ್ರಮದಿಂದ ಹೊರಗುಳಿಯಲು ಆಸ್ಪದ ನೀಡಿದಲ್ಲಿ ಅದನ್ನು ಗಂಭೀರವಾಗಿ ಪರಿಗಣಿಸಿ, ಕಠಿಣ ಕ್ರಮ ಕೈಗೊಳ್ಳುವುದಾಗಿ ಸರ್ಕಾರ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದ ಆಯುಕ್ತರಿಗೆ ಖಡಕ್ ನಿರ್ದೇಶನ ನೀಡಿದೆ.

ಶೇ. 50:50ರ ಅನುಪಾತ, ಪ್ರೋತ್ಸಾಹದಾಯಕ ಯೋಜನೆ, ಬದಲಿ ನಿವೇಶನ ಹಾಗೂ ಹರಾಜು ಪ್ರಕ್ರಿಯೆಯಲ್ಲಿ ಅಕ್ರಮವಾಗಿ ಮುಡಾ ನಿವೇಶನ ಹಂಚಿಕೆ ಮಾಡುವಲ್ಲಿ ಅಧಿಕೃತ ಜ್ಞಾಪನ ಹೊರಡಿಸಿರುವ ಆಯುಕ್ತರು, ಅದಕ್ಕೆ ಸಹಕರಿಸಿದ ಭೂಸ್ವಾಧೀನ ಶಾಖೆ, ನಿವೇಶನ ಶಾಖೆ, ಲೆಕ್ಕಪತ್ರ ಶಾಖೆ, ಇಂಜಿನಿಯರಿಂಗ್ ಶಾಖೆ, ಅಭಿಲೇಖಾಲಯ(ರೆಕಾರ್ಡ್ ರೂಂ), ಮುಡಾ ಪರವಾಗಿ ಕಾರ್ಯನಿರ್ವಹಿಸಿದ ಉಪನೋಂದಣಾಧಿಕಾರಿಗಳ ಕುರಿತಂತೆ ಸಮಗ್ರ ಮಾಹಿತಿಯನ್ನು 3 ದಿನದೊಳಗಾಗಿ ಸಲ್ಲಿಸುವಂತೆ ನಗರಾಭಿವೃದ್ಧಿ ಇಲಾಖೆ ಅಧೀನ ಕಾರ್ಯದರ್ಶಿ ಕೆ.ಲತಾ, ಆಯುಕ್ತರಿಗೆ ಸೂಚನೆ ನೀಡಿದ್ದಾರೆ. ತುಂಡು ಭೂಮಿ ಹಂಚಿಕೆ, ಭೂ ಪರಿಹಾರವಾಗಿ ಜಾಗ ನೀಡುವ ಕುರಿತು 2023ರ ಮಾ.14ರಂದು ತನಿಖೆಗಾಗಿ ಸರ್ಕಾರ ರಚಿಸಿದ್ದ ಪೌರಾಡಳಿತ ನಿರ್ದೇಶನಾಲಯದ ನಿರ್ದೇಶಕರ ನೇತೃತ್ವದ ಸಮಿತಿಯ ಅಧ್ಯಕ್ಷರಾದ, ಐಎಎಸ್ ಅಧಿಕಾರಿ ಪ್ರಭುಲಿಂಗ ಕಾವಳಿಕಟ್ಟಿ ಅವರು 2024ರ ಜೂನ್ 24ರಂದು ಸಲ್ಲಿಸಿರುವ ತನಿಖಾ ವರದಿಯ ಹಿನ್ನೆಲೆಯಲ್ಲಿ ಸರ್ಕಾರವು ಮುಡಾ ಆಯುಕ್ತರಿಗೆ ಪತ್ರ ಬರೆದು ಈ ಹಿಂದಿನ ಆಯುಕ್ತರಾದ ಜಿ.ಟಿ.ದಿನೇಶ್‌ಕುಮಾರ್ ಸೇರಿದಂತೆ ಹಲವು ಅಧಿಕಾರಿಗಳು ಹಾಗೂ ಸಿಬ್ಬಂದಿ ನಿವೇಶನ ಹಂಚಿಕೆ ಹಗರಣದಲ್ಲಿ ಭಾಗಿಯಾಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವ ಹಿನ್ನೆಲೆಯಲ್ಲಿ ಸದರಿ ಅಧಿಕಾರಿಗಳ ಮಾಹಿತಿಯನ್ನು ನೀಡಬೇಕೆಂದು ತಿಳಿಸಲಾಗಿದೆ. ಸರ್ಕಾರದ ನಿರ್ದೇಶನಗಳನ್ನು ಉಲ್ಲಂಘಿಸಿ ಪ್ರಾಧಿಕಾರಕ್ಕೆ ನಷ್ಟ ಉಂಟು ಮಾಡಿರುವ ಪ್ರಕರಣಗಳನ್ನು ಪರಿಶೀಲಿಸಲು ಹಾಗೂ ಇಂತಹ ಪ್ರಕರಣಗಳಲ್ಲಿ ಹಂಚಿಕೆಯಾಗಿರುವ ನಿವೇಶನಗಳನ್ನು ರದ್ದುಪಡಿಸುವ ಕುರಿತು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ನ್ಯಾಯಾಲಯಗಳು ನೀಡಿರುವ ಆದೇಶದನ್ವಯ ಕಾನೂನುಸಮ್ಮತ ಕಾರಣ ಮತ್ತು ಕರ್ನಾಟಕ ನಗರಾಭಿವೃದ್ಧಿ ಕಾಯ್ದೆ 1987 ಮತ್ತು ಇತರೆ ನಿಯಮಗಳನ್ವಯ ಪರಿಶೀಲಿಸಿ ವರದಿ ನೀಡಲು ತನಿಖಾ ಸಮಿತಿಯನ್ನು ■6ನೇ ಪುಟಕ್ಕೆ

ಮೂಲ ಸೌಕರ್ಯವುಳ್ಳ ಭೂಮಿ ಪಡೆದೂ ಉದ್ಯಮ ಸ್ಥಾಪಿಸದವರ ವಿರುದ್ಧ

ಕಠಿಣ ಕ್ರಮ ಕೈಗೊಳ್ಳಿ

- ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಖಡಕ್ ಎಚ್ಚರಿಕೆ
- ದಂಡ ವಿಧಿಸುವುದು ಸೇರಿದಂತೆ ಸೂಕ್ತ ಕ್ರಮಕ್ಕೆ ಸೂಚನೆ
- ಉನ್ನತ ಮಟ್ಟದ ಸಭೆಯಲ್ಲಿ 9,823.31 ಕೋಟಿ ಬಂಡವಾಳ ಹೂಡಿಕೆಯ 9 ಯೋಜನೆಗಳಿಗೆ ಅನುಮತಿ




ಬೆಂಗಳೂರು, ಡಿ.23(ಕೆಎಂಶಿ)– ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಕೈಗಾರಿಕೆ ಸ್ಥಾಪನೆಗೆ ಜಮೀನು ಪಡೆದು ನಿಗದಿತ ಅವಧಿಯಲ್ಲಿ ಉದ್ಯಮ ಆರಂಭಿಸದಿದ್ದರೆ ದಂಡ ವಿಧಿಸುವುದು ಸೇರಿದಂತೆ ಸೂಕ್ತ ಕ್ರಮ ಕೈಗೊಳ್ಳಿ ಎಂದು ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ಖಡಕ್ ಎಚ್ಚರಿಕೆ ನೀಡಿದ್ದಾರೆ.

ಗೃಹ ಕಚೇರಿ ಕೃಷ್ಣಾದಲ್ಲಿ ತಮ್ಮ ಅಧ್ಯಕ್ಷತೆಯಲ್ಲಿ ನಡೆದ ಉನ್ನತ ಮಟ್ಟದ ಸಭೆಯಲ್ಲಿ ಮಾತನಾಡಿದ ಅವರು, ಸರ್ಕಾರದಿಂದ ಮೂಲಸೌಕರ್ಯ ಪಡೆದು ಉದ್ದೇಶಿತ ಯೋಜನೆಗಳನ್ನು ಅನುಷ್ಠಾನಗೊಳಿಸದಿದ್ದರೆ, ಅಂತಹವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಿ ಎಂದರು.

ಹಲವು ವರ್ಷಗಳ ಹಿಂದೆಯೇ ಕೈಗಾರಿಕೆ ಸ್ಥಾಪಿಸಲು ಭೂಮಿ ಪಡೆದಿದ್ದರೂ ಇದುವರೆಗೂ ಯೋಜನೆ ಜಾರಿಯಾಗಿಲ್ಲ. ಇಲಾಖೆಯ ಕಾನೂನುಗಳನ್ನು ಬಳಸಿಕೊಂಡು ನ್ಯಾಯಾಲಯದಿಂದ ರಕ್ಷಣೆ ಪಡೆದು ಕೈಗಾರಿಕೆಗಳನ್ನೇ ಸ್ಥಾಪಿಸಿಲ್ಲ. ಮುಂದೆ ಇಂತಹ ಘಟನೆಗಳು ನಡೆಯದಂತೆ ಎಚ್ಚರ ವಹಿಸಿ. ಉನ್ನತ ಮಟ್ಟದ ಸಭೆಯು ಒಟ್ಟು 9,823.31 ಕೋಟಿ ರೂ. ಬಂಡವಾಳ ಹೂಡಿಕೆಯ ಒಂಬತ್ತು ಯೋಜನೆ ಗಳಿಗೆ ಅನುಮತಿ ನೀಡಿದ್ದು, 5,605 ಉದ್ಯೋಗಗಳು ಸೃಷ್ಟಿಯಾಗಲಿವೆ.

ಅನುಮೋದನೆ ಪಡೆದ ಯೋಜನೆಗಳಲ್ಲಿ ಡಿ.ಎನ್. ಸಲ್ಯೂಷನ್ಸ್‌ನ 998 ಕೋಟಿ ರೂ. (ಐಟಿಐಆರ್, ದೇವನಹಳ್ಳಿ), ಸೈಲೆಕ್ಟ್ರಿಕ್ ಸೆಮಿ ಕಂಡಕ್ಟರ್ಸ್ ಮ್ಯಾನುಫ್ಯಾಕ್ಚರಿಂಗ್‌ನ 3,425.60 ಕೋಟಿ ರೂ.(ಕೋಚನಹಳ್ಳಿ ಕೈಗಾರಿಕಾ ಪ್ರದೇಶ, ಮೈಸೂರು) ಮತ್ತು ಸನ್ಸೆರಾ ಇಂಜಿನಿಯರಿಂಗ್ ಸಂಸ್ಥೆಯ 2150 ಕೋಟಿ ರೂ.(ಹಾರೋಹಳ್ಳಿ) ಹೂಡಿಕೆ ಯೋಜನೆಗಳು ಹೊಸದಾಗಿವೆ, ಇವುಗಳಿಂದ ಕ್ರಮವಾಗಿ 467, 460 ಮತ್ತು 3,500 ಉದ್ಯೋಗಗಳು ಸೃಷ್ಟಿಯಾಗಲಿವೆ. ಉಳಿದಂತೆ 6 ಯೋಜನೆಗಳು ಹೆಚ್ಚುವರಿ ಬಂಡವಾಳ ಹೂಡಿಕೆಯ ಪ್ರಸ್ತಾವನೆಗಳಾಗಿವೆ, ಇವುಗಳಲ್ಲಿ ಮುಸಾಶಿ ಆಟೋ ಪಾರ್ಟ್ಸ್ (ದೊಡ್ಡಬಳ್ಳಾಪುರ) 122.66 ಕೋಟಿ ರೂ., ಜೆಎಸ್‌ಡಬ್ಲ್ಯು ಸಿಮೆಂಟ್ (ತೋರಣಗಲ್, ಬಳ್ಳಾರಿ) 486.82 ಕೋಟಿ ರೂ., ನೈಡೆಕ್ ಇಂಡಸ್ಟ್ರಿಯಲ್ ಆಟೋಮೇಷನ್ (ಬೇಲೂರು, ಧಾರವಾಡ) 200 ಕೋಟಿ ರೂ., ಎಪ್ಸಿಲಾನ್ ಕಾರ್ಬನ್ (ಸಂಡೂರು) 740 ಕೋಟಿ ರೂ., ಕೆ.ಬಿ.ಸ್ಟೀಲ್ಸ್ (ಹೊಸಪೇಟೆ, ವಿಜಯನಗರ) 852.49 ಕೋಟಿ ರೂ., ಮತ್ತು ಸಿಫಿ ಡೇಟಾ ಮ್ಯಾನೇಜ್ಡ್ ಸರ್ವೀಸಸ್ (ಹೈಟೆಕ್ ಡಿಫೆನ್ಸ್ ಮತ್ತು ಏರೋಸ್ಪೇಸ್ ಪಾರ್ಕ್) 847.74 ಕೋಟಿ ರೂ.ಗಳನ್ನು ಹೆಚ್ಚುವರಿಯಾಗಿ ಹೂಡಿಕೆ ಮಾಡಲಿವೆ, ಇವುಗಳಿಂದ ಕ್ರಮವಾಗಿ ಮೊದಲ ನಾಲ್ಕು ಕಂಪನಿಗಳಲ್ಲಿ 478, 225, 150 ಮತ್ತು 325 ಉದ್ಯೋಗಗಳು ಸೃಷ್ಟಿಯಾಗಲಿವೆ. ಸೆಮಿಕಂಡಕ್ಟರ್ ವಲಯದ ಪ್ರಥಮ ಯೋಜನೆಯು ಮೈಸೂರು ಬಳಿ ಕೋಚನಹಳ್ಳಿಯ ಎಲೆಕ್ಟ್ರಾನಿಕ್ಸ್ ಮ್ಯಾನುಫ್ಯಾಕ್ಚರಿಂಗ್ ಕ್ಲಸ್ಟರ್‌ನಲ್ಲಿ ಅಸ್ತಿತ್ವಕ್ಕೆ ಬರಲಿದೆ. ಸಕ್ಕರೆ ಕಾರ್ಖಾನೆಗಳ ಉಪ ಉತ್ಪನ್ನಗಳಲ್ಲಿ ರೈತರಿಗೆ ಲಾಭಾಂಶದ ಪಾಲು ನೀಡುವ ಕುರಿತು ಪರಿಶೀಲಿಸಲಾಗುವುದು, ಮಹಾರಾಷ್ಟ್ರ ಮತ್ತು ತಮಿಳುನಾಡಿನಲ್ಲಿ ಈ ಸಂಬಂಧ ಅನುಸರಿಸುತ್ತಿರುವ ನಿಯಮಗಳನ್ನು ಅಧಿಕಾರಿಗಳು ಪರಿಶೀಲಿಸಬೇಕು, ಒಟ್ಟಾರೆ ಕೈಗಾರಿಕೆಗಳು ಸರ್ಕಾರದ ನಿಯಮಗಳಿಗೆ ತಕ್ಕಂತೆ ಕಾರ್ಯ ನಿರ್ವಹಿಸುವುದನ್ನು ಖಾತ್ರಿಪಡಿಸಿಕೊಳ್ಳಲಾಗುವುದು ಎಂದರು.

ಮೈಸೂರು ಪಾಲಿಕೆಯಿಂದ ಇ–ಖಾತಾ ಅಭಿಯಾನ



ಮೈಸೂರು ಮಹಾನಗರಪಾಲಿಕೆಯು ನಗರದಾದ್ಯಂತ ಇ–ಆಸ್ತಿ ಖಾತಾ ನೋಂದಣಿ ಅಭಿಯಾನವನ್ನು ಆರಂಭಿಸಿತು.

ಒದಗಿಸಬೇಕಾದ ದಾಖಲೆಗಳು

1. ಲಿಖಿತ ಅರ್ಜಿ (ಹ್ಯಾಂಡ್ ರಿಟನ್ ಅಪ್ಲಿಕೇಶನ್)
2. ಆಸ್ತಿ ದಾಖಲೆ ನೋಂದಾಯಿತ ಪತ್ರಗಳು (ಸೇಲ್ ಡೀಡ್)
3. ಕ್ರಯಪತ್ರ (ಟೈಟಲ್ ಡೀಡ್)
4. ಖಾತಾ ಮತ್ತು ಆಸ್ತಿ ತೆರಿಗೆ ರಶೀದಿ (ಪ್ರಾಪರ್ಟಿ ಟ್ಯಾಕ್ಸ್ ರೆಸಿಟ್)
5. ನೀರಿನ ಕಂದಾಯ ಪಾವತಿ ರಶೀದಿ (ವಾಟರ್ ಬಿಲ್ ರಿಸಿಪ್ಟ್)
6. ವಿದ್ಯುತ್ ಶುಲ್ಕ ಪಾವತಿ ಬಿಲ್ (ಎಲೆಕ್ಟ್ರಿಸಿಟಿ ಬಿಲ್ ರೆಸಿಟ್)
7. ಮನೆ ಫೋಟೋ
8. ಖಾತಾದಾರರ ಭಾವಚಿತ್ರ
9. ಋಣಭಾರ ಪ್ರಮಾಣ ಪತ್ರ (ಇಸಿ)
10. ಪಾನ್‌ಕಾರ್ಡ್/ಮತದಾರರ ಗುರುತಿನ ಚೀಟಿ/ ಪಾಸ್‌ಪೋರ್ಟ್/ಡ್ರೈವಿಂಗ್ ಲೈಸೆನ್ಸ್
11. ನಕ್ಷೆ ಮತ್ತು ಸಿಆರ್

ಮೈಸೂರು, ಡಿ.23(ಆರ್‌ಕೆ)– ಮೈಸೂರು ಮಹಾನಗರಪಾಲಿಕೆಯು ನಗರದಾದ್ಯಂತ ಇ–ಆಸ್ತಿ ಖಾತಾ ನೋಂದಣಿ ಅಭಿಯಾನವನ್ನು ಆರಂಭಿಸಿದೆ. ಮೈಸೂರು ಮಹಾನಗರಪಾಲಿಕೆ ಸೇರಿದಂತೆ ಪಟ್ಟಣ ಪಂಚಾಯಿತಿ, ನಗರಸಭೆ ಹಾಗೂ ಎಲ್ಲಾ ಸ್ಥಳೀಯ ಸಂಸ್ಥೆಗಳಲ್ಲಿ ಇರುವ ಆಸ್ತಿಗಳಿಗೆ ಇ–ಆಸ್ತಿ (ಇ–ಸ್ವತ್ತು) ಖಾತಾ ನೋಂದಣಿ ಮಾಡಿ ತೆರಿಗೆ ಸಂಗ್ರಹಿಸುವ ಮೂಲಕ ಕೆಎಂಎಫ್–24 ಆಸ್ತಿ ಕಣಜ ತಂತ್ರಾಂಶದಲ್ಲಿ ಕಾಲೋಚಿತಗೊಳಿಸುವ ಕಾರ್ಯವನ್ನು ಕೈಗೊಳ್ಳುವಂತೆ 2024ರ ನವೆಂಬರ್ 27ರಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದ ಹಿನ್ನೆಲೆಯಲ್ಲಿ ಮೈಸೂರು ಮಹಾನಗರಪಾಲಿಕೆಯು ಇಂದಿನಿಂದ ಪ್ರಕ್ರಿಯೆ ಆರಂಭಿಸಿದ್ದು, ಮೊದಲ ದಿನವಾದ ಇಂದು ಮೈಸೂರಿನ 1ನೇ ವಾರ್ಡಿನಲ್ಲಿರುವ ಹೆಬ್ಬಾಳಿನ ಶ್ರೀ ಸುಬ್ರಹ್ಮಣ್ಯ ■6ನೇ ಪುಟಕ್ಕೆ

ಮುಖ್ಯಮಂತ್ರಿ ಸಿದ್ದರಾಮಯ್ಯರಿಂದ ಪೊಲೀಸರ ಮೂಲಕ ರಾಜಕೀಯ ವಿರೋಧಿಗಳ ದಮನ

- ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಕಿಡಿನುಡಿ
- ತಾವೇ ಗೃಹ ಸಚಿವರೆಂದು ಬಿಂಬಿಸಿಕೊಂಡು ಕೆಲವು ಸಚಿವರಿಂದ ಅಧಿಕಾರ ದುರ್ಬಳಕೆ



ಬೆಂಗಳೂರು, ಡಿ.23(ಕೆಎಂಶಿ)– ಬೆರಳೆಣಿಕೆಯಷ್ಟು ಪೊಲೀಸ್ ಅಧಿಕಾರಿಗಳನ್ನು ಇಟ್ಟುಕೊಂಡು ರಾಜಕೀಯ ವಿರೋಧಿಗಳನ್ನು ದಮನ ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರ ಹೊರಟಿದೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಕಿಡಿಕಾರಿದ್ದಾರೆ.

ಡಾ.ಜಿ.ಪರಮೇಶ್ವರ್ ಅವರನ್ನು ಗೃಹ ಸಚಿವರೆಂದು ಬಿಂಬಿಸಿಕೊಂಡು ಅವರ ಅರಿವಿಗೆ ಬಾರದಂತೆ ಕೆಲವು ಸಚಿವರು ತಮ್ಮ ಅಧಿಕಾರ ದುರ್ಬಳಕೆ ಮಾಡಿಕೊಂಡು ವಿರೋಧಿಗಳ ದಮನಕ್ಕೆ ಹೊರಟಿದ್ದಾರೆ.

ಈ ರಾಜ್ಯದಲ್ಲಿ ಗೃಹ ಸಚಿವರು ಎನ್ನುವವರು ಇದ್ದಾರಾ ಎಂದು ಪ್ರಶ್ನಿಸಿದ ಅವರು, ಕಳೆದ ಆರೇಳು ತಿಂಗಳಿಂದ ಹಲವಾರು ಪ್ರಕರಣಗಳು ■6ನೇ ಪುಟಕ್ಕೆ

ಸಿ.ಟಿ.ರವಿಗೆ ಶಿಕ್ಷೆ ಆಗೋವರೆಗೆ ಈ ಲಕ್ಷ್ಮಿ ಹೆಬ್ಬಾಳ್ಕರ್ ಬಿಡಲ್ಲ

ಅವಾಚ್ಯ ಶಬ್ದ ಆಡಿದ ಬಗ್ಗೆ ತನಿಖೆಗೆ ಮತ್ತೊಮ್ಮೆ ಸಭಾಪತಿ, ಮುಖ್ಯಮಂತ್ರಿ, ಪ್ರಧಾನಿ, ರಾಷ್ಟ್ರಪತಿ ಮೊರೆ ಹೋಗ್ತೇನೆ; ಹೆಬ್ಬಾಳ್ಕರ್



ಬೆಂಗಳೂರು, ಡಿ.23(ಕೆಎಂಶಿ)– ತಮ್ಮ ವಿರುದ್ಧ ಅವಾಚ್ಯ ಪದ ಬಳಸಿದ ಬಿಜೆಪಿ ಶಾಸಕ ಸಿ.ಟಿ.ರವಿ ಅವರನ್ನು ಕ್ಷಮಿಸುವ ಮಾತೇ ಇಲ್ಲ ಎಂದಿರುವ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ಅವರಿಗೆ ಶಿಕ್ಷೆ ಆಗುವವರೆಗೂ ನನ್ನ ಹೋರಾಟ ನಿಲ್ಲುವುದಿಲ್ಲ ಎಂದು ಶಪಥ ತೊಟ್ಟಿದ್ದಾರೆ.

ವಿಧಾನಪರಿಷತ್‌ನಲ್ಲಿ ತಮ್ಮ ವಿರುದ್ಧ ಬಳಸಿದ ಅವಾಚ್ಯ ಪದದ ದಾಖಲೆಗಳನ್ನು ಸುದ್ದಿಗಾರರ ಮುಂದೆ ಬಹಿರಂಗಪಡಿಸಿದ ಅವರು, ಈತನ ವಿರುದ್ಧ ತನಿಖೆ ನಡೆಸಿ ಕ್ರಮ ಕೈಗೊಳ್ಳುವಂತೆ ಸಭಾಪತಿ ಹಾಗೂ ಮುಖ್ಯಮಂತ್ರಿ ಅವರಿಗೆ ಮತ್ತೆ ಮನವಿ ಮಾಡುವುದಾಗಿ ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪೊಲೀಸರು ತ್ವರಿತವಾಗಿ ತನಿಖೆ ನಡೆಸಬೇಕು. ಎಫ್‌ಎಸ್‌ಎಲ್ ವರದಿ ಬಹಿರಂಗಗೊಳ್ಳಬೇಕು ಎಂದು ಒತ್ತಾಯಿಸಿದರು.

ರವಿ ಅವರ ಗೋಮುಖ ವ್ಯಾಘ್ರದ ಮುಖವಾಡ ಕಳಚಿ ಬೀಳುವವರೆಗೂ ನಾನು ವಿಶ್ರಮಿಸುವುದಿಲ್ಲ. ಕಳೆದ 28 ವರ್ಷಗಳಿಂದ ಹೋರಾಟ ಮಾಡಿಕೊಂಡು ಈ ಸ್ಥಾನಕ್ಕೆ ಬಂದಿದ್ದೇನೆ. ಇಂತಹ ನೂರು ಸಿ.ಟಿ.ರವಿ ಬಂದರೂ ಎದುರಿಸುತ್ತೇನೆ.

ಅವಾಚ್ಯ ಶಬ್ದ ಬಳಸಿದ್ದು ಅವರು, ಅನ್ನಿಸಿಕೊಂಡಿದ್ದು ನಾನು, ಇಡೀ ರಾಜ್ಯಾದ್ಯಂತ ಹಾರ–ತುರಾಯಿ ಹಾಕಿಸಿಕೊಂಡು ವೈಭವೀಕರಣ ಮಾಡಿಕೊಳ್ಳುತ್ತಿದ್ದಾರೆ. ತಲೆಗೆ ಎಷ್ಟು ಪೆಟ್ಟು ಬಿದ್ದಿದೆ, ಎಷ್ಟು ಹೊಲಿಗೆ ಹಾಕಿಸಿಕೊಂಡಿದ್ದಾರೆ, ತಲೆಗೆ ದೊಡ್ಡ ಪಟ್ಟಿ ಕಟ್ಟಿಕೊಂಡು ಜನರನ್ನು ವಂಚಿಸುವ ಕೆಲಸ ಮಾಡುತ್ತಿದ್ದಾರೆ. ಈತ ಮಾಡಿದ ಅಸಹ್ಯ ಕೆಲಸಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ, ಪ್ರತಿಪಕ್ಷ ನಾಯಕ ಅಶೋಕ್, ನಮ್ಮ ಸಮಾಜದ ಮುಖಂಡ ಯತ್ನಾಳ್, ಆತನ ಬೆಂಬಲಕ್ಕೆ ನಿಂತಿದ್ದಾರೆ ಎಂದು ಟೀಕಿಸಿದರು. ಪೊಲೀಸರು ಎನ್‌ಕೌಂಟರ್ ಮಾಡುತ್ತಿದ್ದರು ಎನ್ನುತ್ತಾರಲ್ಲಾ, ನಾಚಿಕೆ ಆಗಲ್ಲವೆ ನಿಮಗೆ. ಇಡೀ ಕರ್ನಾಟಕದ ಜನತೆ ನಿಮಗೆ ■6ನೇ ಪುಟಕ್ಕೆ

ಅಂಬೇಡ್ಕರ್ ಕುರಿತು ಅಮಿತ್ ಶಾ ಹೇಳಿಕೆ ಖಂಡಿಸಿ

ಮೈಸೂರಿನಲ್ಲಿ ಕಾಂಗ್ರೆಸ್ ಭಾರಿ ಪ್ರತಿಭಟನೆ

ರಾಜೀನಾಮೆ ನೀಡುವ ತನಕ ನಿರಂತರ ಹೋರಾಟದ ಎಚ್ಚರಿಕೆ

- ಬಿಜೆಪಿ ಸಮಾನತೆ ವಿರೋಧಿ; ಆರ್‌ಎಸ್‌ಎಸ್‌ನಿಂದ ಮನುವಾದ ಜೀವಂತ
- ಅಂಬೇಡ್ಕರ್ ದೇವರಿಗಿಂತ ದೊಡ್ಡವರು; ಸಂವಿಧಾನ ಬದಲಾವಣೆ ವಿರುದ್ಧ ಸಿಡಿದೇಳಬೇಕು





ಡಾ.ಅಂಬೇಡ್ಕರ್ ಕುರಿತು ಕೇಂದ್ರ ಗೃಹ ಸಚಿವ ಅಮಿತ್ ಶಾ ನೀಡಿರುವ ಹೇಳಿಕೆ ಖಂಡಿಸಿ ಕಾಂಗ್ರೆಸ್ ಕಾರ್ಯಕರ್ತರು ಮೈಸೂರಿನಲ್ಲಿ ಸೋಮವಾರ ಪ್ರತಿಭಟನಾ ಮೆರವಣಿಗೆ ನಡೆಸಿದರು. (ಎಡಚಿತ್ರ), ತರುವಾಯ ಜಿಲ್ಲಾಧಿಕಾರಿ ಕಚೇರಿಯಲ್ಲಿ ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ ಅವರಿಗೆ ಮನವಿ ಪತ್ರ ಸಲ್ಲಿಸಿದರು. ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಶಾಸಕರಾದ ತನ್ವೀರ್ ಸೇಠ್, ಕೆ.ಹರೀಶ್‌ಗೌಡ, ಯತೀಂದ್ರ, ಡಾ.ತಿಮ್ಮಯ್ಯ, ರವಿಶಂಕರ್, ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ, ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ ಹಾಗೂ ಇತರರನ್ನು (ಬಲಚಿತ್ರ) ಕಾಣಬಹುದು.

ಮೈಸೂರು, ಡಿ.23(ಬಿಎಲ್‌ಯು)– ಡಾ.ಅಂಬೇಡ್ಕರ್ ಕುರಿತು ಕೇಂದ್ರ ಗೃಹ ಸಚಿವ ಅಮಿತ್ ಶಾ ನೀಡಿರುವ ಹೇಳಿಕೆ ಖಂಡಿಸಿ ಕಾಂಗ್ರೆಸ್ ಕಾರ್ಯಕರ್ತರು ಮೈಸೂರಿನಲ್ಲಿ ಸೋಮವಾರ ಭಾರಿ ಪ್ರತಿಭಟನೆ ನಡೆಸಿದರು.

ಚಾಮುಂಡಿಬೆಟ್ಟಕ್ಕೆ ಹೋಗುವ ನಗರದ ಕುರುಬರಹಳ್ಳಿ ಸರ್ಕಲ್‌ನಲ್ಲಿ ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್ ಅವರು ಸಂಗೊಳ್ಳಿ ರಾಯಣ್ಣ ಪ್ರತಿಮೆಗೆ ಮಾಲಾರ್ಪಣೆ ಮಾಡುವ ಮೂಲಕ ಪ್ರತಿಭಟನಾ ಮೆರವಣಿಗೆಗೆ ಚಾಲನೆ ನೀಡಿದರು. ಅಮಿತ್ ಶಾಗೆ ಧಿಕ್ಕಾರ, ಸಚಿವ ಸ್ಥಾನದಿಂದ ಅಮಿತ್ ಶಾ ವಜಾ ಮಾಡಬೇಕು, 'ಬಿಜೆಪಿಗರೇ ದೇಶ ಬಿಟ್ಟು ತೊಲಗಿ' ಎಂಬ ಘೋಷಣಾ ಫಲಕ ಹಿಡಿದಿದ್ದ ಕಾಂಗ್ರೆಸ್ ಕಾರ್ಯಕರ್ತರು ಬಿಜೆಪಿ ವಿರುದ್ಧ ಸಿಡಿದೆದ್ದರು.

ಕುರುಬಾರಹಳ್ಳಿಯ ಸಂಗೊಳ್ಳಿ ರಾಯಣ್ಣ ವೃತ್ತದಲ್ಲಿ ಸುಮಾರು ಒಂದು ಗಂಟೆಗಳ ಕಾಲ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದ್ದರಿಂದ ಇಲ್ಲಿಂದ ಚಾಮುಂಡಿಬೆಟ್ಟ ಸೇರಿದಂತೆ ಇತರೆಡೆಗೆ ಹೋಗುವ ಸಂಪರ್ಕ ರಸ್ತೆಗಳಲ್ಲಿ ವಾಹನ ಸಂಚಾರ ನಿರ್ಬಂಧಿಸಲಾಗಿತ್ತು. ಇದರಿಂದ ಚಾಮುಂಡಿಬೆಟ್ಟಕ್ಕೆ ಹೋಗುವ ಪ್ರವಾಸಿಗರು ಸೇರಿದಂತೆ ವಾಹನ ಸವಾರರಿಗೆ ತೀವ್ರ ತೊಂದರೆ ಉಂಟಾಯಿತು.

ಈ ವೇಳೆ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಅಮಿತ್ ಶಾ ಹೇಳಿಕೆಯಿಂದ ಇಡೀ ದೇಶದ ಜನರು ದಿಗ್ಭ್ರಾಂತರಾಗಿದ್ದಾರೆ. ಸ್ವಾತಂತ್ರ್ಯ ಲಭಿಸಿ 75 ವರ್ಷವಾದರೂ ಇನ್ನು ಕೂಡ ಜಾತೀಯತೆ ಗಟ್ಟಿಯಾಗಿ ಬೇರೂರಿದೆ. ದೇಶದ ಜನರ ಹಕ್ಕು ಹಾಗೂ ಸಂವಿಧಾನ ರಕ್ಷಣೆ ಮಾಡಬೇಕಾದ ಕೇಂದ್ರ ಗೃಹ ಸಚಿವ ಅಮಿತ್ ಶಾ ಸಂವಿಧಾನ ವಿರೋಧಿ ಹೇಳಿಕೆ ನೀಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ದೇಶದ ಜನರ ಹಕ್ಕು ದಮನ ಮಾಡುತ್ತಿರುವ ಬಿಜೆಪಿಯವರು ಸಂವಿಧಾನವನ್ನು ಇನ್ನೂ ಒಪ್ಪಿಕೊಂಡಿಲ್ಲ ಎಂಬುದು ಅವರ ■6ನೇ ಪುಟಕ್ಕೆ

ಮೈಸೂರು ಮಿತ್ರ

ಮಂಗಳವಾರ 24 ಡಿಸೆಂಬರ್ 2024

ಬ್ರಾಹ್ಮಣರಿಗೆ ಸಿಗದ ಪ್ರಾತಿನಿಧ್ಯ: ಜನವರಿಯಲ್ಲಿ ಬೃಹತ್ ಸಮಾವೇಶ



ಬ್ರಾಹ್ಮಣರ ಮಂಡಳಿಯ 2025ರ ಕ್ಯಾಲೆಂಡರ್ ಬಿಡುಗಡೆ ಮಾಡಲಾಯಿತು.

ಮೈಸೂರು, ಡಿ. 23– ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾಗೆ 50 ವರ್ಷ ತುಂಬಿದ್ದು, ಜನವರಿ ತಿಂಗಳಿನಲ್ಲಿ ಬೆಂಗಳೂರಿನ ಅರಮನೆ ಮೈದಾನದಲ್ಲಿ ಬೃಹತ್ ಸಮಾವೇಶ ಏರ್ಪಡಿಸಲಾಗಿದೆ ಎಂದು ನಗರಪಾಲಿಕೆ ಮಾಜಿ ಸದಸ್ಯ ಮಾ.ವಿ.ರಾಮ್‌ಪ್ರಸಾದ್ ಹೇಳಿದರು.

ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಯುವ ವೇದಿಕೆ ವತಿಯಿಂದ ನಂಜನಗೂಡಿನ ಹುರ ಗ್ರಾಮದಲ್ಲಿ ಬ್ರಾಹ್ಮಣರ ಮಂಡಳಿಯ 2025ರ ಕ್ಯಾಲೆಂಡರ್ ಬಿಡುಗಡೆ ಕಾರ್ಯಕ್ರಮ ಹಾಗೂ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಸಮಾವೇಶದ ಪೂರ್ವಭಾವಿ ಸಭೆ ಉದ್ಘಾಟಿಸಿ ಮಾತನಾಡಿದರು.

ಪ್ರಸ್ತುತ ಯಾವುದೇ ಪಕ್ಷದಲ್ಲಿ ಬ್ರಾಹ್ಮಣ ಸಮುದಾಯಕ್ಕೆ ಸೂಕ್ತ ಸ್ಥಾನಮಾನ, ಪ್ರಾತಿನಿಧ್ಯ ಹಾಗೂ ಪ್ರಾಶಸ್ತ್ಯ ದೊರೆಯುತ್ತಿಲ್ಲ. ಅಸಡ್ಡೆಯಿಂದ ಕಾಣಲಾಗುತ್ತಿದೆ. ವಿಪ್ರ ಸಮುದಾಯದ ಒಗ್ಗಟ್ಟು ಪ್ರದರ್ಶನ, ಜನರಲ್ಲಿ ಜಾಗೃತಿ ಮೂಡಿಸಲು ಸಮಾವೇಶ ಉತ್ತಮ ವೇದಿಕೆಯಾಗಲಿದೆ. ಹೆಚ್ಚಿನ ಸಂಖ್ಯೆಯಲ್ಲಿ ವಿಪ್ರರು ಭಾಗವಹಿಸಬೇಕೆಂದು ಮನವಿ ಮಾಡಿದರು

ನಗರಪಾಲಿಕೆ ಮಾಜಿ ಸದಸ್ಯ ಎಂ.ಡಿ. ಪಾರ್ಥಸಾರಥಿ ಮಾತನಾಡಿ, ನಮ್ಮ ಭವ್ಯ ಪರಂಪರೆ ಮೆಲುಕು ಹಾಕುತ್ತಾ, ಮುಂದಿನ ಐವತ್ತು ವರ್ಷಗಳಿಗೆ ಸುಭದ್ರ ಅಡಿಪಾಯ ಹಾಕಬೇಕು. ಯುವ ಸಮೂಹವನ್ನು ಮುನ್ನೆಲೆಗೆ ತರಬೇಕು. ವಿವಿಧ ಕ್ಷೇತ್ರಗಳ ಗಣ್ಯರ ಜತೆ ಸಂವಾದ, ಉದ್ಯೋಗ ಮೇಳ ಹಾಗೂ ಸ್ವಂತ ಉದ್ದಿಮೆ ಪ್ರಾರಂಭಿಸುವವರಿಗೆ 'ನಿಮ್ಮ ಆಲೋಚನೆ–ನಮ್ಮ ಹಣ' ಘೋಷಣೆಯಡಿ ಆರ್ಥಿಕ ಸೌಲಭ್ಯ ಕಲ್ಪಿಸುವುದೂ ಸೇರಿ ಹಲವು ವಿಶೇಷ ಕಾರ್ಯಕ್ರಮ ಆಯೋಜಿಸಲಾಗುವುದು ಎಂದು ವಿವರಿಸಿದರು.

ಮೈಸೂರು ಜಿಲ್ಲಾ ಬ್ರಾಹ್ಮಣ ಯುವ ವೇದಿಕೆ ಪ್ರಧಾನ ಕಾರ್ಯದರ್ಶಿ ವಿಕ್ರಮ ಅಯ್ಯಂಗಾರ್, ಸುಚಿಂದ್ರ, ಎಚ್.ಎಸ್. ಸತೀಶ, ಎನ್.ವಲ್ಲೀಶ, ಎಚ್.ಸಿ.ರಾಜೇಂದ್ರ ಶರ್ಮ, ನಾಗರಾಜ್, ವೆಂಕಟೇಶ್ ಇನ್ನಿತರರು ಈ ವೇಳೆ ಉಪಸ್ಥಿತರಿದ್ದರು.

ಸಿಬ್ಬಂದಿಗೆ ದಾಖಲೆ ನಿರ್ವಹಣೆ ಸಂಬಂಧ ತರಬೇತಿ ಕಾರ್ಯಾಗಾರ

● ಸಾರ್ವಜನಿಕ ದಾಖಲೆಗಳ ಸಂರಕ್ಷಣೆ ಅಧಿಕಾರಿಗಳ ಕರ್ತವ್ಯವೂ ಹೌದು ● ಪತ್ರಾಗಾರ ಇಲಾಖೆ ನಿವೃತ್ತ ನಿರ್ದೇಶಕಿ ಡಾ.ಗಾಯತ್ರಿ ಸಲಹೆ



ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ ಮೈಸೂರಿನ ವಿಭಾಗೀಯ ಪತ್ರಾಗಾರ ಕಚೇರಿ ವತಿಯಿಂದ ಮೈಸೂರು ಜಿಲ್ಲೆಯ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳಿಗೆ ಒಂದು ದಿನದ ಸಾರ್ವಜನಿಕ ದಾಖಲೆಗಳ ಅಧಿನಿಯಮ ಮತ್ತು ದಾಖಲೆಗಳ ನಿರ್ವಹಣೆ ಕುರಿತಂತೆ ಏರ್ಪಡಿಸಿದ್ದ ತರಬೇತಿ ಕಾರ್ಯಾಗಾರವನ್ನು ಪತ್ರಾಗಾರ ಇಲಾಖೆ ನಿವೃತ್ತ ನಿರ್ದೇಶಕಿ ಡಾ.ಜೆ.ವಿ.ಗಾಯತ್ರಿ ಉದ್ಘಾಟಿಸಿದರು.

ಮೈಸೂರು, ಡಿ.23(ಜಿಎ)–ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆಯ ಮೈಸೂರಿನ ವಿಭಾಗೀಯ ಪತ್ರಾಗಾರ ಕಚೇರಿ ವತಿಯಿಂದ ಮೈಸೂರು ಜಿಲ್ಲೆಯ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗೆ ಒಂದು ದಿನದ ಸಾರ್ವಜನಿಕ ದಾಖಲೆಗಳ ಅಧಿನಿಯಮ ಮತ್ತು ದಾಖಲೆಗಳ ನಿರ್ವಹಣೆ ಕುರಿತಂತೆ ತರಬೇತಿ ಕಾರ್ಯಾಗಾರವನ್ನು ಸೋಮವಾರ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿತ್ತು.

ಕಾರ್ಯಾಗಾರವನ್ನು ಉದ್ಘಾಟಿಸಿದ ವಿಭಾಗೀಯ ಪತ್ರಾಗಾರ ಇಲಾಖೆ ನಿವೃತ್ತ ನಿರ್ದೇಶಕಿ ಡಾ.ಜೆ.ವಿ.ಗಾಯತ್ರಿ ಮಾತನಾಡಿ, ದಾಖಲೆಗಳು ದೇಶದ ಅಭಿವೃದ್ಧಿಗೆ ಬಹುಮುಖ್ಯವಾಗಿದ್ದು, ಸಾರ್ವಜನಿಕರ ಹಲವು ಸಮಸ್ಯೆಗಳಿಗೆ ದಾಖಲೆಗಳಿಂದ ಪರಿಹಾರ ಸಿಗುತ್ತದೆ. ಸರ್ಕಾರಿ ಇಲಾಖೆಗಳಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿ, ನೌಕರರು ಸಾರ್ವಜನಿಕ ದಾಖಲೆಗಳನ್ನು ಸಂರಕ್ಷಿಸಬೇಕು ಹಾಗೂ ತಂತ್ರಜ್ಞಾನದ ಸಹಾಯದಿಂದ ಡಿಜಿಟಲೀಕರಣ ಮಾಡಿ ದಾಖಲೆಗಳನ್ನು ಉಪಯೋಗಿಸಬೇಕು. ಸಾರ್ವಜನಿಕರಿಗೆ ದಾಖಲೆಗಳ ಸೇವಾ ಕಾರ್ಯವನ್ನು ಉತ್ತಮ, ತ್ವರಿತವಾಗಿ ಅರ್ಜಿ ವಿಲೇವಾರಿ ಮಾಡಬೇಕು ಎಂದು ಸಲಹೆ ನೀಡಿದರು.

ನಂತರ ಹಿರಿಯ ಸಹಾಯಕ ನಿರ್ದೇಶಕ ಹೆಚ್.ಎಲ್.ಮಂಜುನಾಥ್ ಮಾತನಾಡಿ, ಸರ್ಕಾರಿ ಇಲಾಖೆಗಳಲ್ಲಿ ಸಾರ್ವಜನಿಕ ದಾಖಲೆಗಳನ್ನು ಸಂರಕ್ಷಿಸಬೇಕು ಎಂಬುದಕ್ಕೆ ಸರ್ಕಾರಿ ಇಲಾಖೆಗಳಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿ, ನೌಕರರಿಗೆ ಸಾರ್ವಜನಿಕ ದಾಖಲೆಗಳ ಅಧಿನಿಯಮ ಮತ್ತು ದಾಖಲೆಗಳ ನಿರ್ವಹಣೆ ಕುರಿತ ತರಬೇತಿ ಕಾರ್ಯಾಗಾರದ ಮುಖ್ಯ ಉದ್ದೇಶವಾಗಿದೆ. ದಾಖಲೆಗಳ ಪಟ್ಟಿ, ಸೂಚಿ ತಯಾರಿಕೆ ಹಾಗೂ ನಿರ್ವಹಣೆ, ದಾಖಲೆ ಅಧಿಕಾರಿಗಳ ನೇಮಕ, ಕರ್ತವ್ಯ, ಜವಾಬ್ದಾರಿಗಳು, ಸಾರ್ವಜನಿಕ ದಾಖಲೆಗಳನ್ನು ನಿಯಮಬದ್ಧವಾಗಿಯೇ ನಾಶಪಡಿಸುವಿಕೆಯ ನಿಯಮಗಳು ಹಾಗೂ ದಾಖಲೆಗಳ ಸಂರಕ್ಷಣೆಯಲ್ಲಿ ಗಣಕೀಕರಣ ಮತ್ತು ಟಿಷ್ಯೂ ಲ್ಯಾಮಿನೇಷನ್ ಕಾರ್ಯವನ್ನು ಅಳವಡಿಸಿಕೊಳ್ಳಬೇಕು ಎಂದರು.

ಸಂರಕ್ಷಣೆ ಹಿತದೃಷ್ಟಿಯಿಂದ ದಾಖಲೆಗಳನ್ನು ವಿವಿಧ ವರ್ಗಗಳಾಗಿ ವಿಂಗಡಿಸಬೇಕು. ದಾಖಲೆಗಳ ಸೇವೆಯನ್ನು ಸಾರ್ವಜನಿಕರಿಗೆ ತ್ವರಿತವಾಗಿ ಒದಗಿಸಬೇಕು. ಇದರಿಂದ ಸಾರ್ವಜನಿಕರ ಹತ್ತು ಹಲವು ಸಮಸ್ಯೆಗಳು ಪರಿಹಾರವಾಗುತ್ತವೆ. ಈ ನಿಟ್ಟಿನಲ್ಲಿ ಸರ್ಕಾರವು 2013ರಲ್ಲಿ ಸಾರ್ವಜನಿಕ ದಾಖಲೆಗಳ ಅಧಿನಿಯಮ ಕಾಯ್ದೆಯನ್ನು ಜಾರಿಗೆ ತಂದಿದೆ. ಇದನ್ನು ಗಮನದಲ್ಲಿಟ್ಟುಕೊಂಡು ಕರ್ತವ್ಯ ನಿರ್ವಹಿಸಬೇಕು ಎಂದು ತಿಳಿಸಿದರು.

ರಾಜ್ಯ ಪತ್ರಾಗಾರ ಇಲಾಖೆ ನಿರ್ದೇಶಕ ಡಾ.ಗವಿಸಿದ್ದಯ್ಯ, ದಾಖಲೆಗಳನ್ನು ಹೇಗೆ ಪಟ್ಟಿ ಮಾಡಬೇಕು, ಕ್ಯಾಟಲಾಗ್ ತಯಾರಿಕೆ ಮತ್ತು ದಾಖಲೆಗಳ ಸಂರಕ್ಷಣೆ ಮತ್ತು ನಿರ್ವಹಣೆ ಬಗ್ಗೆ ವಿವರವಾಗಿ ತಿಳಿಸಿ, ಇದರಿಂದಾಗಿ ಸಾರ್ವಜನಿಕರಿಗೆ ಆರ್‌ಟಿಐ, ಸಕಾಲ, ಸೇವೆ ಸಿಂಧು ಯೋಜನೆಯಡಿ ತ್ವರಿತವಾಗಿ ಮಾಹಿತಿ ನೀಡಲು ಅನುಕೂಲವಾಗುತ್ತದೆ ಎಂದು ವಿವರಿಸಿದರು.

ಕಾರ್ಯಾಗಾರದಲ್ಲಿ ಸಾರ್ವಜನಿಕ ದಾಖಲೆಗಳ ಅಧಿನಿಯಮ ಪರಿಚಯ, ದಾಖಲೆಗಳ ಪಟ್ಟಿ ಸೂಚಿ ತಯಾರಿಕೆ ಹಾಗೂ ನಿರ್ವಹಣೆ, ದಾಖಲೆ ಅಧಿಕಾರಿಗಳ ನೇಮಕ, ಕರ್ತವ್ಯ, ಜವಾಬ್ದಾರಿಗಳು, ಸಾರ್ವಜನಿಕ ದಾಖಲೆಗಳ ನಾಶಪಡಿಸುವಿಕೆಯ ನಿಯಮಗಳು, ದಾಖಲೆಗಳ ವರ್ಗೀಕರಣ ತತ್ವಗಳು ಹಾಗೂ ದಾಖಲೆಗಳ ಬಳಕೆಯಲ್ಲಿ ಡಿಜಿಟಲೀಕರಣ ದಾಖಲೆಗಳ ಸಂರಕ್ಷಣೆಯಲ್ಲಿ ಗಣಕೀಕರಣ ಮತ್ತು ಟಿಷ್ಯೂ ಲ್ಯಾಮಿನೇಷನ್ ವಿಷಯಗಳ ಬಗ್ಗೆ ಸರ್ಕಾರಿ ಇಲಾಖೆಗಳಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿ, ನೌಕರರಿಗೆ ತರಬೇತಿಯನ್ನು ನೀಡಲಾಯಿತು.

49ನೇ ಅಂತರರಾಷ್ಟ್ರೀಯ ನಿರಂತರ ಕಲೆಮನೆ ಉತ್ಸವ



ಅಂತರರಾಷ್ಟ್ರೀಯ ನಿರಂತರ ಕಲೆಮನೆ ಉತ್ಸವದಲ್ಲಿ ಕಲಾವಿದರನ್ನು ಸನ್ಮಾನಿಸಲಾಯಿತು.

ಮೈಸೂರು,ಡಿ.23–ಮೈಸೂರಿನ ಕುಮಾರ್ ಪ್ರದರ್ಶಕ ಕಲೆಗಳ ಕೇಂದ್ರವು ಕಲೆಮನೆ ಸಭಾಂಗಣದಲ್ಲಿ 49ನೇ ಅಂತರರಾಷ್ಟ್ರೀಯ ನಿರಂತರ ಕಲೆಮನೆ ಉತ್ಸವ ಹಮ್ಮಿಕೊಂಡಿತ್ತು. ಕರ್ನಾಟಕ "ಕಲಾಶ್ರೀ ಪ್ರಶಸ್ತಿ" ಪುರಸ್ಕೃತರಾದ ಗುರು ಗಾಯತ್ರಿ ಕೇಶವನ್, ಗುರು ಡಾ ಮಾಲಾ ಶಶಿಕಾಂತ್, ಗುರು ಅನುರಾಧ ವಿಕ್ರಾಂತ್, ನೃತ್ಯ ಕಲಾವಿದರಾದ ಸುಗ್ಗನಹಳ್ಳಿ ಷಡಕ್ಷರಿ, ಕಲಾವಿದ ಕೆ.ಎಸ್. ರಾಘವೇಂದ್ರ ಅವರನ್ನು ಈ ವೇಳೆ ಅಭಿನಂದಿಸಲಾಯಿತು. ಇದೇ ವೇಳೆ ಗಾಯತ್ರಿ ಕೇಶನ್ ಮತ್ತು ಶಿಷ್ಯರು ಭರತನಾಟ್ಯ, ಕೇರಳದ ಡಾ.ಲಕ್ಷ್ಮಿ ಪ್ರಿಯ ಮತ್ತು ಇವರ ಶಿಷ್ಯರು ಮೋಹಿನಿ ಆಟಂ ನೃತ್ಯ ತುಮಕೂರಿನ ನೃತ್ಯ ಕಲಾವಿದ ವಿದ್ವಾನ್ ಗಿರೀಶ್ ಮತ್ತು ಅವರ ಶಿಷ್ಯರು ಭರತನಾಟ್ಯ, ಬೆಂಗಳೂರಿನ ನೃತ್ಯ ಕಲಾವಿದರಾದ ಸಂಚಿತಾ ಲಾಹೂಟಿ ಮತ್ತು ಇವರ ಶಿಷ್ಯರು ಕಥಕ್ ನೃತ್ಯ ಪ್ರದರ್ಶನ ನಡೆಯಿತು.

'ಶುಲ್ಕ ಮರುಪಾವತಿ' ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

ಮೈಸೂರು,ಡಿ.23–2024–2025ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ 'ಶುಲ್ಕ ಮರುಪಾವತಿ' ಕಾರ್ಯಕ್ರಮದ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಸಲಾಗಿದ್ದು, ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಧಿಯನ್ನು 2025ರ ಫೆಬ್ರವರಿ 15ರವರೆಗೆ ವಿಸ್ತರಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ wwwhttps:ssp.postmatrickarnataka.gov.in ಮೂಲಕ ಅರ್ಜಿ ಸಲ್ಲಿಸಬಹುದಾಗಿದ್ದು, ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ವಿಳಾಸ www. https:bcwd.karnataka.gov.in ಅನ್ನು ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ ಇಲಾಖಾ ಸಹಾಯವಾಣಿ ದೂ.ಸಂ. 8050770005, ಇ–ಮೇಲ್ bcwdhelpline@gmail.com ಹಾಗೂ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇಮೇಲ್ post matrichelp@karanataka.gov.in ಅನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

ಕಿಡ್ಸ್ ಕ್ರಿಯೇಟಿವ್ ಫೆಸ್ಟ್



ಮೈಸೂರಿನ ಬಿಎಸ್‌ಎಸ್ ವಿದ್ಯೋದಯ ಶಾಲೆಯಲ್ಲಿ ಆಯೋಜಿಸಿದ್ದ 'ಕಿಡ್ಸ್ ಕ್ರಿಯೇಟಿವ್ ಫೆಸ್ಟ್' ಅನ್ನು ಆರ್.ವಾಸುದೇವ ಭಟ್ ಉದ್ಘಾಟಿಸಿದರು.

ಮೈಸೂರು, ಡಿ.23(ಎಸ್‌ಬಿಡಿ)– ಮೈಸೂರಿನ ಕೃಷ್ಣಮೂರ್ತಿಪುರಂನಲ್ಲಿರುವ ಬಿಎಸ್‌ಎಸ್ ವಿದ್ಯೋದಯ ಶಾಲೆಯಲ್ಲಿ 'ಕಿಡ್ಸ್ ಕ್ರಿಯೇಟಿವ್ ಫೆಸ್ಟ್' ಆಯೋಜಿಸಲಾಗಿತ್ತು.

ಶಾಲೆಯ ಗೌರವ ಕಾರ್ಯದರ್ಶಿ ಆರ್.ವಾಸುದೇವ ಭಟ್ ದೀಪ ಬೆಳಗುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ, ಶುಭ ಕೋರಿದರು. ಈ ವೇಳೆ ಟ್ರಸ್ಟಿಗಳಾದ ಮುರುಳಿಧರ ಭಟ್, ಪ್ರಾಂಶುಪಾಲರಾದ ಎನ್.ಆರ್.ಪವನ್‌ಕುಮಾರ್, ಎಸ್.ಎ.ವೀಣಾ, ವಿಜಯ ವಿಠಲ ಸಂಯುಕ್ತ ಪಿಯು ಕಾಲೇಜಿನ ಪ್ರಾಂಶುಪಾಲ ಸತ್ಯಪ್ರಸಾದ್ ಮತ್ತಿತರರು ಉಪಸ್ಥಿತರಿದ್ದರು.

ಮಕ್ಕಳ ಕಲ್ಪನಾಶಕ್ತಿ ಹಾಗೂ ವ್ಯಕ್ತಿತ್ವ ವಿಕಸನಗೊಳಿಸುವ ಉದ್ದೇಶದಿಂದ ಆಯೋಜಿಸಿದ್ದ ಕಿಡ್ಸ್ ಕ್ರಿಯೇಟಿವ್ ಫೆಸ್ಟ್‌ನಲ್ಲಿ 300ಕ್ಕೂ ಹೆಚ್ಚು ಮಕ್ಕಳು ಭಾಗವಹಿಸಿದ್ದರು. ಬಣ್ಣ ಹಚ್ಚುವುದು, ಪದ್ಯ ಹಾಡುವುದು, ಬಟನ್ ಕಲೆ, ಲೀಫ್ ಪೇಂಟಿಂಗ್, ಪರ್ಫೆಕ್ಟ್ ಶೋ, ಹ್ಯಾಂಡ್ ಐ ಗೇಮ್ಸ್, ಪಪ್ಪೆಟ್ ಶೋ, ಪ್ರೆಷರ್ ಹ್ಯಾಂಡ್ ಕ್ವಿಜ್, ಕ್ಲೇ ಮಾಡೆಲಿಂಗ್ ಇನ್ನಿತರ ಸೃಜನಾತ್ಮಕ ಚಟುವಟಿಕೆಗಳನ್ನು ಏರ್ಪಡಿಸಲಾಗಿತ್ತು.



ಅನ್ನಸಂತರ್ಪಣೆ

ಮೈಸೂರಿನ ದೇವರಾಜ ಅರಸು ರಸ್ತೆಯಲ್ಲಿರುವ ಶ್ರೀ ಜಯದೇವಾಂಜನೇಯ ಸ್ವಾಮಿ ದೇವಸ್ಥಾನ ಹನುಮ ಜಯಂತಿ ಮಹೋತ್ಸವದ ಅನ್ನಸಂತರ್ಪಣೆಗೆ ಶಾಸಕ ಕೆ.ಹರೀಶ್‌ಗೌಡ ಚಾಲನೆ ನೀಡಿದರು. ರಾಮರಾಜ್, ಶಂಕ್ರಪ್ಪ, ಪುರುಷೋತ್ತಮ್, ರವಿಚಂದ್ರ, ನವೀನ್ ಹಾಗೂ ಇನ್ನಿತರರು ಈ ವೇಳೆ ಉಪಸ್ಥಿತರಿದ್ದರು.

ರಾಯಲ್ ಪಿಜನ್ ಟೂರ್ನಮೆಂಟ್ ವಿಜೇತರಿಗೆ ಬಹುಮಾನ ವಿತರಣೆ



ಪೈ.ಲಕ್ಷ್ಮಣ್ ಸ್ಮರಣಾರ್ಥ ಏರ್ಪಡಿಸಿದ್ದ ರಾಯಲ್ ಪಿಜನ್ ಟೂರ್ನಮೆಂಟ್ ವಿಜೇತರಿಗೆ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಬಹುಮಾನ ವಿತರಿಸಿದರು.

ಮೈಸೂರು,ಡಿ.23–ಪೈ.ಲಕ್ಷ್ಮಣ್ ಅವರ ಸ್ಮರಣಾರ್ಥ ರಾಯಲ್ ಪಿಜನ್ ಟೂರ್ನಮೆಂಟ್ ಅನ್ನು ಏರ್ಪಡಿಸಲಾಗಿತ್ತು. ವಿಜೇತರಿಗೆ ಬಹುಮಾನ ವಿತರಣಾ ಸಮಾರಂಭ ಇಟ್ಟಿಗೆಗೂಡಿನ ಸಿದ್ದಪ್ಪ ಕನ್ವೆನ್ಷನ್ ಹಾಲ್‌ನಲ್ಲಿ ಜರುಗಿತು. ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ವಿಜೇತರಿಗೆ ಬಹುಮಾನ ವಿತರಿಸಿದರು. ಈ ವೇಳೆ ಪಾಲಿಕೆ ಮಾಜಿ ಸದಸ್ಯ ಲೋಕೇಶ್ ಪಿಯಾ, ಸುವರ್ಣಮ್ಮ, ಲಾರಿ ಸ್ವಾಮಿ, ವಿಶ್ವನಾಥ್ (ವಿಶ್ವ), ಟೂರ್ನಮೆಂಟ್ ಅಧ್ಯಕ್ಷ ವಾಲೆ ರವಿ, ಅರ್ಜುನ್, ಕೆಂಚ ಮಧು, ರಾಜ ಮಂಜ, ಪೈರಾಘು, ಮನಸು, ಮಯೂರ್ ವಿಶ್ವನಾಥ್ ಮತ್ತಿತರರು ಉಪಸ್ಥಿತರಿದ್ದರು.

ಪ್ರಥಮ ಬಹುಮಾನ–ಶೇರ್ ಎಂ. ಮೈಸೂರು (ವಸೀಂ) ಮತ್ತು ಮೊಹಮ್ಮದ್, ಶಾಂತಿನಗರ, ಮೈಸೂರು. ಹಕ್ಕಿ ಹಾರಿದ ಸಮಯ–12 ಗಂಟೆ 25 ನಿಮಿಷ, ದ್ವಿತೀಯ ಬಹುಮಾನ–ಶರತ್ ಕೊಳ್ಳೇಗಾಲ, ಹಾರಿದ ಸಮಯ–10 ಗಂಟೆ 45 ನಿಮಿಷ, ತೃತೀಯ ಬಹುಮಾನ–ಲಯನ್ಸ್ ಲಾಫ್ಟ್ (ಅಲೀಮ್ ಫೈರೋಜ್) ಮೈಸೂರು ಹಾರಿದ ಸಮಯ– 9 ಗಂಟೆ 26 ನಿಮಿಷ, 4ನೇ ಬಹುಮಾನ–ಚಾಮುಂಡೇಶ್ವರಿ ನಾಲ್ವಡಿ, ಹೂಟಗಳ್ಳಿ. ಹಾರಿದ ಸಮಯ– 8 ಗಂಟೆ 47 ನಿಮಿಷ, ಪೈ.ಲಕ್ಷ್ಮಣ್ ಬಹುಮಾನ–ದಸ್ತಗಿರ್ ಫಯಾಜ್ ಧಾವಡಿ, ಭಾರತ್‌ನಗರ ಮೈಸೂರು ಹಾರಿದ ಸಮಯ 8 ಗಂಟೆ 16 ನಿಮಿಷ, 3 ಹಕ್ಕಿಗಳ ಕೌಂಟಿಂಗ್–ಪ್ರಥಮ ಬಹುಮಾನ ದಸ್ತಗಿರ್ ಫಯಾಜ್ ಧಾವಡಿ ಭಾರತ್‌ನಗರ ಹಾರಿದ ಸಮಯ–24 ಗಂಟೆ 39 ನಿಮಿಷ, ದ್ವಿತೀಯ ಬಹುಮಾನ–ಅಹಲ್ಯಾದೇವಿ ಲಾಫ್ಟ್ ಕ್ಯಾತನಹಳ್ಳಿ ಪಾಂಡವಪುರ, ಹಾರಿದ ಸಮಯ–20 ಗಂಟೆ 29 ನಿಮಿಷ, ತೃತೀಯ ಬಹುಮಾನ–ಎಂಎಂಎಸ್ ಲಾಫ್ಟ್ ಶಾಂತಿನಗರ, ಹಾರಿದ ಸಮಯ– 18 ಗಂಟೆ 44 ನಿಮಿಷ, ವಿಶೇಷ ಬಹುಮಾನ –ಒಂದು ಕೊಳ್ಳಿ ಪಟ, ಹಾರಿದ ಸಮಯ– 13 ಗಂಟೆ

ಬಿಜೆಪಿ, ಜೆಡಿಎಸ್‌ನಿಂದ ಸಿದ್ದರಾಮಯ್ಯ ವಿರುದ್ಧ ಷಡ್ಯಂತ್ರ




ಮೈಸೂರು ತಾಲೂಕು ಹೊಸಕಾಮನಕೊಪ್ಪಲಿನಲ್ಲಿ ಕಾಂಗ್ರೆಸ್ ಮುಖಂಡ ಎಂ.ಸ್ವಾಮಿ ನೇತೃತ್ವದಲ್ಲಿ ಮುಡಾ ಮಾಜಿ ಅಧ್ಯಕ್ಷ ಕೆ.ಮರೀಗೌಡರಿಗೆ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ಅಭಿನಂದಿಸಲಾಯಿತು.

ಮೈಸೂರು,ಡಿ.23–ಸಿದ್ದರಾಮಯ್ಯ ಅವರು ಎರಡನೇ ಬಾರಿ ಮುಖ್ಯಮಂತ್ರಿಯಾಗಿರುವುದನ್ನು ಸಹಿಸದ ಬಿಜೆಪಿ ಮತ್ತು ಜೆಡಿಎಸ್‌ನವರು ಸಿದ್ದರಾಮಯ್ಯ ಅವರನ್ನು ಮುಡಾ ಹಗರಣದಲ್ಲಿ ಸಿಲುಕಿಸಲು ಷಡ್ಯಂತ್ರ ನಡೆಸುತ್ತಿದ್ದಾರೆ ಎಂದು ಮುಡಾ ಮಾಜಿ ಅಧ್ಯಕ್ಷ ಕೆ.ಮರೀಗೌಡ ಆರೋಪಿಸಿದರು.

ಕಾಂಗ್ರೆಸ್ ಮುಖಂಡ ಎಂ.ಸ್ವಾಮಿ ನೇತೃತ್ವದಲ್ಲಿ ಹೊಸಕಾಮನಕೊಪ್ಪಲಿನಲ್ಲಿ ನಡೆದ ಅವರ ಹುಟ್ಟುಹಬ್ಬದ ಅಭಿನಂದನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಮತ್ತು ನನ್ನದ್ದು ದೇವರು ಮತ್ತು ಭಕ್ತನ ಸಂಬಂಧವಿದ್ದಂತೆ. ಆ ದೇವರಿಗೆ ದ್ರೋಹ ಬಗೆಯುವ ಕೆಲಸವನ್ನು ನನ್ನ ಉಸಿರಿರುವವರೆಗೂ ಮಾಡುವುದಿಲ್ಲ. ಅವರು ನನ್ನನ್ನು ತಾಲೂಕು ಪಂಚಾಯ್ತಿ ಅಧ್ಯಕ್ಷ, ಜಿಲ್ಲಾ ಪಂಚಾಯ್ತಿ ಉಪಾಧ್ಯಕ್ಷ, ಅಧ್ಯಕ್ಷ ಮುಡಾ ಅಧ್ಯಕ್ಷನಾಗಿ ಮಾಡಿದ್ದಾರೆ. ನನ್ನ ಉಸಿರಿರುವವರೆಗೂ ಅವರ ಜೊತೆಯಲ್ಲಿರುತ್ತೇನೆ 40 ವರ್ಷದ ರಾಜಕಾರಣದಲ್ಲಿ ಸಿದ್ದರಾಮಯ್ಯ ಅವರು ಒಂದೇ ಒಂದು ಕಪ್ಪು ಚುಕ್ಕೆ ಇಲ್ಲದಂತೆ ಜನ ಸೇವೆ ಮಾಡಿದ್ದಾರೆ. ಅಂತಹ ನಾಯಕನ ಹೆಸರಿಗೆ ಮಸಿ ಬಳಿಯಲು ವಿರೋಧ ಪಕ್ಷಗಳು ಸುಳ್ಳು ಆರೋಪಗಳನ್ನು ಮಾಡುತ್ತಿವೆ ಎಂದರು.

ಮುಡಾ ಹಗರಣದಲ್ಲಿ ಸಿದ್ದರಾಮಯ್ಯ ಪಾತ್ರವೇ ಇಲ್ಲ. ಆದರೂ ಅವರನ್ನು ಮಾನಸಿಕವಾಗಿ ಕುಗ್ಗಿಸಲು ಆರೋಪಗಳನ್ನು ಮಾಡುತ್ತಿದ್ದಾರೆ. ಇಂತಹ ಆರೋಪಗಳಿಗೆ ಅವರು ಹೆದರಬೇಕಾಗಿಲ್ಲ. ಶೀಘ್ರವೇ ಅವರು ಆರೋಪ ಮುಕ್ತರಾಗಿ ಹೊರಬರಲಿದ್ದು, ಇನ್ನೂ ಮೂರೂವರೆ ವರ್ಷ ಮುಖ್ಯಮಂತ್ರಿಯಾಗಿ ಅಧಿಕಾರ ನಡೆಸುತ್ತಾರೆ ಎಂದ ಅವರು, ಎಂ.ಸ್ವಾಮಿ ಅವರಿಗೆ ಬರುವ ಜಿಪಂ ಚುನಾವಣೆಯಲ್ಲಿ ಎಲ್ಲಾ ಸಹಕಾರ ನೀಡುತ್ತೇನೆ ಎಂದರು. ಜಿ.ಪಂ. ಮಾಜಿ ಸದಸ್ಯ ಜವರಪ್ಪ ಸೋಮನಾಯ್ಕ ಸೋಮಶೇಖರ್, ಸಿದ್ದನಾಯ್ಕ, ವಿನೋದ್, ಮಹಾದೇವ್, ಬಿ.ರವಿ, ಬಸವರಾಜ್, ಇಲವಾಲ ಹೋಬಳಿ ಗ್ರಾಮಸ್ಥರು ಹಾಜರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

24.12.2024 ಮಂಗಳವಾರ, ಮಳೆ ನಕ್ಷತ್ರ: ಮೂಲ, 16.12.2024 ರಿಂದ 28.12.2024
ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಹೇಮಂತ ಋತು, ಧನುರ್ಮಾಸ, ಕೃಷ್ಣ ಪಕ್ಷ,
ತಿಥಿ: ನವಮಿ, ನಕ್ಷತ್ರ: ಹಸ್ತ, ರಾಹುಕಾಲ: ಮಧ್ಯಾಹ್ನ 3 ರಿಂದ 4.30ರವರೆಗೆ

■ **ಶಬರಿಮಲೆ ಶ್ರೀ ಅಯ್ಯಪ್ಪ ಪೂಜಾ ಸಮಿತಿ (ಶ್ರೀ ಅಯ್ಯಪ್ಪ ಸ್ವಾಮಿ ಮತ್ತು ಶ್ರೀ ಗುರುವಾಯೂರಪ್ಪನ್ ದೇವಾಲಯ) :** 64ನೇ ವಾರ್ಷಿಕ ಪೂಜಾ ಮಹೋತ್ಸವ, ಬೆಳಗ್ಗೆ 5.30 ರಿಂದ ಮಹಾ ಗಣಪತಿ ಹೋಮ, ಉಷ ಪೂಜಾ, ಶೀವೇಲಿ ವಾದ್ಯದೊಂದಿಗೆ, ಮಧ್ಯಾಹ್ನ 12 ರಿಂದ ದೇವರಿಗೆ ಉತ್ಸವ, ಕಳಶಾಭಿಷೇಕಂ, ಕಲಭಾಭಿಷೇಕಂ, ಗಣಪತಿಗೆ ಪಂಚಗವ್ಯ, ಉಚ್ಚಪೂಜಾ, ಮಧ್ಯಾಹ್ನ 12.30 ರಿಂದ ಮಹಾ ಅನ್ನದಾನ, ಸಂಜೆ 5.30 ರಿಂದ ದೀಪಾರಾಧನೆ, ಪಳ್ಳಿವೇಟ್ಟ, ಅತ್ತಾಳ ಪೂಜಾ, ಶ್ರೀ ಭೂತ ಬಲಿ, ರಾತ್ರಿ 9ರವರೆಗೆ ವಿಳಕ್ಕು ಪ್ರಸಾದ ವಿನಿಯೋಗ, ಸ್ಥಳ: ದೇವಸ್ಥಾನ ಪ್ರಾಂಗಣ, ಚಾಮುಂಡಿಬೆಟ್ಟ ಪಾದ.

■ **ಪಾಳ್ಯಂ ಶ್ರೀ ಶಾಸ್ತಾ ಪೀಠಂ, ಅಭಯದಾಯಕ ಶ್ರೀ ಅಯ್ಯಪ್ಪಸ್ವಾಮಿ ದೇವಸ್ಥಾನಂ:** ಧನುರ್ಮಾಸದ ವಿಶೇಷ ಪೂಜಾ ಲಕ್ಷಾರ್ಚನಾ ಮತ್ತು ಕುಂಭಾಭಿಷೇಕ ಪೂಜಾ ಮಹೋತ್ಸವ, ಬೆಳಗ್ಗೆಯಿಂದ ಮಹತೋಬಾರ ಶ್ರೀ ಧರ್ಮ ಶಾಸ್ತಾ ಸ್ವಾಮಿಯವರಿಗೆ, ಮಹಾಭಿಷೇಕ, ಅಲಂಕಾರ ಸೇವೆ, ನಾಮಾರ್ಚನೆ, ಮಹಾ ನಿವೇದನೆ, ಮಂಗಳಾರತಿ, ತೀರ್ಥ–ಪ್ರಸಾದ ವಿನಿಯೋಗ, ಸ್ಥಳ: ದೇವಸ್ಥಾನದ ಆವರಣ, ರಾಘವೇಂದ್ರನಗರ.

■ **ರಾಮ್‌ಸನ್ಸ್ ಪ್ರತಿಷ್ಠಾನ :** ಬೊಂಬೆ ಮನೆ ದಸರೆ ಬೊಂಬೆ ಪ್ರದರ್ಶನ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10ರಿಂದ.

■ **ಹೆಬ್ಬಾರ್ ಶ್ರೀ ವೈಷ್ಣವ ಸಭಾ (ಬೆಂಗಳೂರು), ಹೆಬ್ಬಾರ್ ಶ್ರೀ ವೈಷ್ಣವ ಉಪಸಭಾ :** ಬೆಂಗಳೂರು ಮಹಾರಾಣಿ ಕಾಲೇಜು ನಿವೃತ್ತ ಸಂಸ್ಕೃತ ಪ್ರಾಧ್ಯಾಪಕ ಕೆ.ಎಸ್. ಶ್ರೀಧರನ್ ಅವರಿಂದ ತಿರುಪ್ಪಾವೈ ಕಾಲಕ್ಷೇಪ, ಸ್ಥಳ: ಸನಾತನ ಸಭಾ, ಜಯನಗರ, ಸಂಜೆ 6.15ರಿಂದ.

■ **ಶ್ರೀ ವೇಣುಗೋಪಾಲಸ್ವಾಮಿ ದೇವಸ್ಥಾನ :** ತಿರುಪ್ಪಾವೈ ಪ್ರವಚನ ಕಾರ್ಯಕ್ರಮ, ಮೈಸೂರು ಮಹಾರಾಣಿ ಕಲಾ ಕಾಲೇಜು ನಿವೃತ್ತ ಸಂಸ್ಕೃತ ಪ್ರಾಧ್ಯಾಪಕಿ, ವಿದುಷಿ ಡಾ. ಕೆ.ಎಲ್. ಪ್ರಸನ್ನಾಕ್ಷಿ ವಿದ್ವನ್ಮಣಿ, ದರ್ಶನ ವಾರಿಧಿ ಡಾ. ಕೆ.ಎಲ್. ಪ್ರಸನ್ನಾಕ್ಷಿ ಅವರಿಂದ, ಸ್ಥಳ: ದೇವಸ್ಥಾನದ ಆವರಣ, ತ್ಯಾಗರಾಜ ರಸ್ತೆ, ಸಂಜೆ 6.30ಕ್ಕೆ.

■ **ಗಾನಭಾರತೀ :** ಸಂಜೆ 6 ರಿಂದ ವಿದ್ಯಾರ್ಥಿ ಕೌಶಲ ಪ್ರದರ್ಶನ, ಸಂಜೆ 7 ರಿಂದ ವಿದ್ವಾನ್ ಸತ್ಯನಾರಾಯಣ ಅವರ ಶಿಷ್ಯರಿಂದ ವೇಣುವಾದನ, ವಿದ್ವಾನ್ ಬಿ. ಉಮಾಪತಿಯವರ ಶಿಷ್ಯರಿಂದ ಕೀಬೋರ್ಡ್ ವಾದನ, ಸ್ಥಳ: ವೀಣೆ ಶೇಷಣ್ಣ ಭವನ, ಆದಿಚುಂಚನಗಿರಿ ರಸ್ತೆ, ಕುವೆಂಪುನಗರ.

■ **ಮೈಸೂರು ವಿಶ್ವವಿದ್ಯಾನಿಲಯ:** ಪ್ರಥಮ ವರ್ಷದ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಅಭಿವಿನ್ಯಾಸ ಕಾರ್ಯಕ್ರಮ, ಉದ್ಘಾಟನೆ: ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತರೆಡ್ಡಿ, ಪ್ರಧಾನ ಭಾಷಣ: ವಾಗ್ಮಿ ಪ್ರೊ.ಎಂ.ಕೃಷ್ಣೇಗೌಡ, ಮುಖ್ಯ ಅತಿಥಿಗಳು: ಮೈಸೂರು ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ಅಧ್ಯಕ್ಷತೆ: ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್, ಉಪಸ್ಥಿತರು: ಕುಲಸಚಿವರಾದ ಶ್ರೀಮತಿ ವಿ.ಆರ್. ಶೈಲಜಾ, ಪ್ರೊ.ಎನ್.ನಾಗರಾಜ, ಹಣಕಾಸು ಅಧಿಕಾರಿ ಶ್ರೀಮತಿ ಕೆ.ಎಸ್.ರೇಖಾ, ಸ್ಥಳ: ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಸಭಾಂಗಣ, ಸೆನೆಟ್ ಭವನ, ಮಾನಸಗಂಗೋತ್ರಿ, ಬೆಳಗ್ಗೆ 10ರಿಂದ.

■ **ಮೈಸೂರು ವಿಶ್ವವಿದ್ಯಾನಿಲಯ, ಇತಿಹಾಸ ಅಧ್ಯಯನ ವಿಭಾಗ, ಟಿಪ್ಪು ಸುಲ್ತಾನ ಅಧ್ಯಯನ ಪೀಠ :** ಟಿಪ್ಪು ಸುಲ್ತಾನ್ ಜನ್ಮ ದಿನಾಚರಣೆ ಹಾಗೂ ಟಿಪ್ಪು ಸುಲ್ತಾನ್ ಕುರಿತ ಪ್ರೊ. ವೈ.ಎಚ್. ನಾಯಕವಾಡಿರವರು ಸಂಪಾದಿಸಿರುವ ಕೃತಿ ಬಿಡುಗಡೆ ಕಾರ್ಯಕ್ರಮ, ಉದ್ಘಾಟನೆ : ಮೈಸೂರು ವಿವಿ ಕುಲಪತಿ ಪ್ರೊ. ಎನ್.ಕೆ. ಲೋಕನಾಥ್, ಕೃತಿ ಬಿಡುಗಡೆ : ಶಾಸಕ ತನ್ವೀರ್ ಸೇಠ್, ಮುಖ್ಯ ಅತಿಥಿಗಳು : ಮೈಸೂರು ವಿವಿ ಕುಲಸಚಿವ ಪ್ರೊ. ಎನ್.ನಾಗರಾಜ, ಕೃತಿ ಕುರಿತು : ಹಿರಿಯ ಪ್ರಾಧ್ಯಾಪಕ ಪ್ರೊ. ಕೆ.ಎಂ. ಲೋಕೇಶ್, ಉಪಸ್ಥಿತರು : ಪ್ರೊ. ಮಹಾದೇವಿ, ಅಧ್ಯಕ್ಷತೆ : ಇತಿಹಾಸ ಅಧ್ಯಯನ ವಿಭಾಗದ ಅಧ್ಯಕ್ಷ ಪ್ರೊ. ವೈ.ಎಚ್. ನಾಯಕವಾಡಿ, ಸ್ಥಳ: ರಾಣಿ ಬಹದ್ದೂರ್ ಸಭಾಂಗಣ, ಮೈಸೂರು ವಿವಿ, ಮಾನಸಗಂಗೋತ್ರಿ, ಬೆಳಗ್ಗೆ 10.30ಕ್ಕೆ.

■ **ವ್ಯವಸ್ಥಾಪಕರು :** ಮಾಜಿ ಮುಖ್ಯಮಂತ್ರಿ ದಿವಂಗತ ಎಸ್.ಎಂ. ಕೃಷ್ಣ ಅವರಿಗೆ ಶ್ರದ್ಧಾಂಜಲಿ ಸಭೆಯ ನಡಾವಳಿಗಳನ್ನು ಚರ್ಚಿಸಲು ಪೂರ್ವಭಾವಿ ಸಭೆ, ಸ್ಥಳ: ಮಂಡ್ಯ ಜಿಲ್ಲಾ ಬಳಗದ ಸಭಾಂಗಣ, ಗಂಗೋತ್ರಿ ಬಡಾವಣೆ, ಸಂಜೆ 4.30ಕ್ಕೆ.

■ **ಶ್ರೀ ಪ್ರಜ್ಞಾ ಗುರುಕುಲ ಮತ್ತು ಚಿರಾಗ್ ಪಿಯು ಕಾಲೇಜು :** ವಾರ್ಷಿಕೋತ್ಸವ, ಮುಖ್ಯ ಅತಿಥಿಗಳು: ಜಿಪಂ ಸಿಇಓ ಶ್ರೀಮತಿ ಕೆ.ಎಂ. ಗಾಯತ್ರಿ, ಹೆಚ್ಚುವರಿ ಆಯುಕ್ತರಾದ ಶ್ರೀಮತಿ ಕೆ.ಆರ್. ನಂದಿನಿ, ಅಡಿಷನಲ್ ಎಸ್ಪಿ ಎಲ್. ನಾಗೇಶ್, ಅಧ್ಯಕ್ಷತೆ : ಶ್ರೀ ಬುಂಡೇಗೌಡ ಮೆಮೋರಿಯಲ್ ಟ್ರಸ್ಟ್ ಅಧ್ಯಕ್ಷ ಡಾ. ಕೆ.ಬಿ. ಸಿದ್ದೇಗೌಡ, ಸ್ಥಳ: ಶ್ರೀ ಪ್ರಜ್ಞಾ ಗುರುಕುಲ, ಕಂಚನಹಳ್ಳಿ, ಬನ್ನೂರು, ಸಂಜೆ 5ಕ್ಕೆ.

■ **ಮೈಸೂರು ಅರಮನೆ ಮಂಡಳಿ :** ಅರಮನೆ ಫಲಪುಷ್ಪ ಪ್ರದರ್ಶನ–2024, ಸಂಜೆ 6 ರಿಂದ ಶಡಜ್ ಗೊಡ್ಖಿಂಡಿ (ಕೊಳಲು) ಮತ್ತು ಅಪೂರ್ವ ಕೃಷ್ಣ (ಪಿಟೀಲು ವಾದನ) ಹಾಗೂ ತಂಡದವರಿಂದ ಫ್ಯೂಶನ್ ಸಂಗೀತ, ಸಂಜೆ 7 ರಿಂದ ಶ್ರೀ ಸಿದ್ದಾರ್ಥ ಬೆಲ್ಮಣ್ಣು ಅವರಿಂದ ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ, ಗಂಜೀಫಾ ರಘುಪತಿ ಭಟ್ ವರ್ಣಚಿತ್ರ ಕಲಾವಿದರು ಅವರಿಂದ ದಾಸವಾಣಿ ಚಿತ್ರಣ, ಸಂಜೆ 8 ರಿಂದ ಚಂಪಕ ಅಕಾಡೆಮಿ ವೃಂದ, ಡಾ. ನಾಗಲಕ್ಷ್ಮಿ ನಾಗರಾಜನ್ ಮತ್ತು ತಂಡದವರಿಂದ ಶ್ರೀ ಕೃಷ್ಣ ಲೀಲಾ ವಿಭೂತಿ ಪದ್ಮಭೂಷಣ ಡಿ.ವಿ.ಜಿ. ವಿರಚಿತ ಗೇಯ 'ನೃತ್ಯ ನಾಟಕ' ಸ್ಥಳ: ಮೈಸೂರು ಅರಮನೆ ಆವರಣ.

ಮೈಸೂರು ಆಕಾಶವಾಣಿ




ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಶ್ರದ್ಧೆಯ ಶಿಲ್ಪ–ಕರ್ನಾಟಕದ ಪ್ರಾಚೀನ ದೇವಾಲಯಗಳ ಪರಿಚಯ ಮಾಲಿಕೆ, ಲೇಖನ ಮತ್ತು ಪ್ರಸ್ತುತಿ: ಟಿ.ಎಸ್. ಗೋಪಾಲ್, ಪ್ರಾಯೋಜಕರು: ಅದಮ್ಯ ಚೇತನ ಫೌಂಡೇಶನ್, ಬೆಂಗಳೂರು, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ ಗಾಯನ–ಕೆ.ಶ್ರೇಯಾ, ಎ.ಎಸ್.ನಾಗಲಕ್ಷ್ಮೀ ಮತ್ತು ಟಿ.ಎಸ್. ಸ್ನೇಹಾ, ವ್ಯಾಖ್ಯಾನ–ಡಾ.ಬಿ.ವಿ.ವಸಂತಕುಮಾರ್, 6.50 ರೈತರಿಗೆ ಸಲಹೆ, 7.15 ಕಾದಂಬರಿ ವಿಹಾರ: ಎಂ.ಆರ್.ಶ್ರೀನಿವಾಸಮೂರ್ತಿಯವರ 'ರಂಗಣ್ಣನ ಕನಸಿನ ದಿನಗಳು' ಕಾದಂಬರಿಯ ಬಾನುಲಿ ಓದು. ಪ್ರಸ್ತುತಿ: ಉಮೇಶ್ ಎಸ್.ಎಸ್., 8.30 ಬಾನುಲಿ ಇಂಗ್ಲೀಷ್ ಪಾಠ– ರೇಡಿಯೋ ಸರಣಿ, ಪ್ರಸ್ತುತಿ: ಸದಾನಂದ. ಆರ್., 8.40 ಕರೆಗೊಂದು ಗೀತೆ–ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ನೇರ ಫೋನ್ ಇನ್ ಕಾರ್ಯಕ್ರಮ, 9.05 ಕ್ಯಾನ್ಸರ್ ಕುರಿತ ಮಿಥ್ಯೆಗಳು–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು–ಭಾರತೀಯ ಕ್ಯಾನ್ಸರ್ ಸೊಸೈಟಿ, ಕರ್ನಾಟಕ ಚಾಪ್ಟರ್, 10.00–ಕರ್ನಾಟಕ ಶಾಸ್ತ್ರೀಯ ಸಂಗೀತ: ಎಂ.ಜೆ.ಶ್ರೀನಿವಾಸ್ ಅಯ್ಯಂಗಾರ್–ವೀಣಾವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ–ಕಥೆಯಲ್ಲಿದೆ ಉತ್ತರ, ಪ್ರಸ್ತುತಿ: ಪ್ರಭುಸ್ವಾಮಿ ಮಳಿಮಠ್, ಚೈತ್ರಿಕಾ ಹಾಗೂ ಕಾರ್ತಿಕ್ ಎಂ.ಎಸ್

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ, 12.45 ಕನ್ನಡದಲ್ಲಿ ಭಾಷಣ, 1.00 ಪ್ರಗತಿ ಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಬಾನುಲಿ ಇಂಗ್ಲೀಷ್ ಪಾಠ–ರೇಡಿಯೋ ಸರಣಿ, ಪ್ರಸ್ತುತಿ : ಸದಾನಂದ. ಆರ್., 3.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಎಂ.ಚಂದ್ರಶೇಖರನ್–ಹಾಡುಗಾರಿಕೆ, 4.00 ಕಥಾ ಕಾಲಕ್ಷೇಪ–ವಾಲಿ ಮೋಕ್ಷ, ಪ್ರಸ್ತುತಿ: ಸಂತ ಕೇಶವದಾಸರು, 6.50 ಕೃಷಿರಂಗ: ಕಿಸಾನ್‌ವಾಣಿ–ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ. ರೇಷ್ಮೆ ಐಸಿರಿ – ರೇಷ್ಮೆ ಕೃಷಿ ತಾಂತ್ರಿಕತೆಗಳನ್ನು ಕುರಿತ ಬಾನುಲಿ ಸರಣಿ ಹಿಪ್ಪುನೇರಳೆಯಲ್ಲಿ ಯಾಂತ್ರೀಕರಣ ಹಾಗೂ ಹನಿ ರಸಾವರಿ ತಾಂತ್ರಿಕತೆಗಳನ್ನು ಕುರಿತ ನೇರ ಫೋನ್ ಇನ್ ಕಾರ್ಯಕ್ರಮ. ಭಾಗವಹಿಸುತ್ತಾರೆ : ಮೈಸೂರಿನ ಕೇಂದ್ರ ರೇಷ್ಮೆ ಸಂಶೋಧನೆ ಹಾಗೂ ತರಬೇತಿ ಸಂಸ್ಥೆಯ ವಿಜ್ಞಾನಿಗಳಾದ ಡಾ.ಆರ್. ಮಹೇಶ್ ಮತ್ತು ಡಾ. ಸಿ. ಎಂ. ಬಾಬು, ಪ್ರಸ್ತುತಿ : ಆರ್. ಲೋಕೇಶ್ವರಿ, 7.45 ಮೈಸೂರು ಜಂಕ್ಷನ್–ಸಾಪ್ತಾಹಿಕ ಸಂಚಿಕೆ, ಪ್ರಸ್ತುತಿ : ಜಾಂಪಣ್ಣ ಆಶೀಹಾಳ್, 8.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ, ಪಂಡಿತ್. ಹರಿಪ್ರಸಾದ್ ಚೌರಾಸಿಯಾ–ಬಾನ್ಸುರಿ ವಾದನ, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ : ಟಿ.ಹೆಚ್. ಸುಬ್ರಹ್ಮಣ್ಯಂ–ವೈಯೋಲಿನ್ ವಾದನ, 10.00 ಚೈತ್ರವನ–ಲಕ್ಷ್ಮೀಶನ ಜೈಮಿನಿ ಭಾರತದ ಸಮಗ್ರ ವಾಚನ ಹಾಗೂ ವ್ಯಾಖ್ಯಾನ, ಪ್ರಸ್ತುತಿ: ಡಾ.ಎ.ಎಸ್. ಶಂಕರನಾರಾಯಣ, 10.30 ಸವಿನೆನಪು

ಕನ್ನಡದಲ್ಲಿಯೇ ಪರೀಕ್ಷೆ ಬರೆದು ರೈಲ್ವೆಯಲ್ಲಿ ಉದ್ಯೋಗಕ್ಕೆ ಸೇರಲು ಈಗ ಸದವಕಾಶವಿದೆ

● ಕೇಂದ್ರದ ಜಲಶಕ್ತಿ, ರೈಲ್ವೆ ರಾಜ್ಯ ಸಚಿವ ವಿ.ಸೋಮಣ್ಣ ವಿವರಣೆ ● ರೈತ ಮಕ್ಕಳಿಗೆ ಉದ್ಯೋಗ ಕಲ್ಪಿಸಲು ಪ್ರಧಾನಿ ಮೋದಿ ತೀವ್ರಾಸಕ್ತಿ ನಿರ್ಧಾರ ● ವಿಶ್ವ ರೈತ ದಿನದ ಸಮಾರೋಪದಲ್ಲಿ ಕೇಂದ್ರ ಸಚಿವರು ಭಾಗಿ



ವಿಶ್ವ ರೈತ ದಿನದ ಸಮಾರೋಪದಲ್ಲಿ ಪಾಲ್ಗೊಂಡ ಕೇಂದ್ರದ ಜಲಶಕ್ತಿ, ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಅವರನ್ನು ಸನ್ಮಾನಿಸಲಾಯಿತು.

ಮೈಸೂರು, ಡಿ.23(ಎಸ್‌ಪಿಎನ್)– ಕನ್ನಡದಲ್ಲಿ ಸ್ಪರ್ಧಾತ್ಮಕ ಪರೀಕ್ಷೆ ಬರೆದು ರಾಜ್ಯದ ಯುವಕರು ರೈಲ್ವೆ ಇಲಾಖೆಯಲ್ಲಿ ಕೆಲಸಕ್ಕೆ ಸೇರಲು ಪ್ರಧಾನಿ ನರೇಂದ್ರ ಮೋದಿ ಅವಕಾಶ ಮಾಡಿಕೊಟ್ಟಿದ್ದಾರೆ ಎಂದು ರೈಲ್ವೆ ಮತ್ತು ಜಲಶಕ್ತಿ ಇಲಾಖೆ ರಾಜ್ಯ ಸಚಿವ ವಿ.ಸೋಮಣ್ಣ ಸಲಹೆ ನೀಡಿದರು.

ಮೈಸೂರು ಕೆಎಸ್‌ಓಯು ಘಟಿಕೋತ್ಸವ ಭವನದಲ್ಲಿ ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಹಾಗೂ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಸಹಯೋಗದೊಂದಿಗೆ ಏರ್ಪಡಿಸಿದ್ದ ವಿಶ್ವ ರೈತ ದಿನದ ಸಮಾರೋಪದಲ್ಲಿ ಪಾಲ್ಗೊಂಡು ಮಾತನಾಡಿದ ಸಚಿವರು, ನಮ್ಮ ಹುಡುಗರು ರೈಲ್ವೆ ಇಲಾಖೆಯಲ್ಲಿ ಉದ್ಯೋಗ ಪಡೆಯಲು ಆಸಕ್ತಿ ತೋರುತ್ತಿಲ್ಲ ಎಂದು ಬೇಸರ ಹೊರಹಾಕಿದರು. ದೇಶಾದ್ಯಂತ ರೈಲ್ವೆ ಇಲಾಖೆಯಲ್ಲಿ 12 ಲಕ್ಷ ನೌಕರರಿದ್ದಾರೆ. ದಕ್ಷಿಣ ಭಾರತದಲ್ಲಿ ಶೇ.99ರಷ್ಟು ಉತ್ತರ ಭಾರತದ ಸಿಬ್ಬಂದಿಯೇ ಇದ್ದಾರೆ. ಕನ್ನಡಿಗರಿಗೂ ಅವಕಾಶ ದೊರಕಲೆಂದು ನಾನು ಅಧಿಕಾರ ವಹಿಸಿಕೊಂಡ ನಂತರ ಕನ್ನಡದಲ್ಲಿ ಪರೀಕ್ಷೆ ಬರೆಯಲು ಅವಕಾಶ ಕೊಡಿಸಿದ್ದೇನೆ.ಇದಕ್ಕೆ ಪ್ರಧಾನಿ ಮೋದಿ ಅನುಮತಿ ನೀಡಿದ್ದಾರೆ. ಆದರೆ, ಹೆಚ್ಚು ಮಂದಿ ಆಸಕ್ತಿ ತೋರುತ್ತಿಲ್ಲ. ನಿಮ್ಮ ಇಲಾಖೆಯದ್ದು ದಿನದ 24 ಗಂಟೆ ಕೆಲಸ. ನಮಗೆ ಈ ಕೆಲಸ ಬೇಡ ಎನ್ನುವವರೇ ಹೆಚ್ಚು ಎಂದು ವಿಷಾದಿಸಿದರು.

ಮೋದಿ ಸರ್ಕಾರದಲ್ಲಿ ರೈಲ್ವೆ ಸಚಿವನಾಗುವ ಅವಕಾಶ ನನಗೆ ಬಯಸದೇ ಬಂದ ಭಾಗ್ಯ. ನನ್ನ ಕಾಲದಲ್ಲಿ ಇಲಾಖೆಗೆ ಒಂದಿಷ್ಟು ಕನ್ನಡಿಗರು ಸೇರಿದರೆ ಅದೇ ನನಗೆ ಸಂತೋಷದ ವಿಚಾರ. ಹೀಗಾಗಿ ರೈತರ ಮಕ್ಕಳು ರೈಲ್ವೆ ಉದ್ಯೋಗ ಪಡೆಯಲು ಆಸಕ್ತಿ ತೋರಬೇಕು. ನಾನು ಸಂಸದನಾಗಿ ದೆಹಲಿಗೆ ಬಂದಾಗ ಹಿಂದಿ ಬರುತ್ತಿರಲಿಲ್ಲ. ಹಿಂದಿ ಬಾರದ ನನಗೆ ಕೇಂದ್ರ ಸಚಿವ ಸ್ಥಾನ ವಹಿಸಿಕೊಳ್ಳಲು ಹಿಂಜರಿಕೆ ಇತ್ತು ಎಂದರು.

ಹಿಂದಿ ಕಲಿಕೆಗೂ ಆದ್ಯತೆ ನೀಡಬೇಕು: ಆಗ ಪ್ರಧಾನ ಮಂತ್ರಿ ಮೋದಿ ಅವರು, ನನಗೆ ಧೈರ್ಯ ತುಂಬಿದರು. ಈಗ ಶೇ.75 ರಷ್ಟು ಹಿಂದಿ ಮಾತನಾಡುವುದನ್ನು ಕಲಿತುಕೊಂಡಿದ್ದೇನೆ ಎಂದು ಹಿಂದಿಯಲ್ಲಿ ಕೆಲ ಸೆಕೆಂಡ್ ಮಾತನಾಡಿ, ಸಭಿಕರ ಗಮನ ಸೆಳೆದರಲ್ಲದೆ, ಕರ್ನಾಟಕದ ಯುವಕರು ಮಾತೃಭಾಷೆ ಜೊತೆಗೆ ಹಿಂದಿ ಕಲಿಕೆಗೆ ಹೆಚ್ಚಿನ ಆದ್ಯತೆ ನೀಡಿ ಎಂದು ಕಿವಿ ಮಾತು ಹೇಳಿದರು.

ಶಾಂತ ರೀತಿಯಲ್ಲಿ ಚರ್ಚಿಸಿ: ರೈತರು ಅನ್ನದಾತರು. ದೇಶಕ್ಕೆ ಸ್ವಾತಂತ್ರ್ಯ ಬಂದು 75 ವರ್ಷ ಕಳೆದರೂ ತಮ್ಮ ಬದುಕು ಕಟ್ಟಿಕೊಳ್ಳಲು ರೈತರು ಹೋರಾಡುವ ಪರಿಸ್ಥಿತಿ ಬರಬಾರದು. ಎಂದಿಗೂ ಕೇಂದ್ರ ಸರ್ಕಾರ ರೈತ ವಿರೋಧಿಯಲ್ಲ. ಇದು ನಿಮ್ಮ ಸರ್ಕಾರ. ರೈತರ ಬೇಡಿಕೆಗಳಿಗೆ ಅನುಗುಣವಾಗಿ ಕೇಂದ್ರ ಸರ್ಕಾರ ಆದ್ಯತೆ ಮೇರೆಗೆ ಕೆಲಸ ಮಾಡುತ್ತದೆ. ಆದರೆ, ಶಾಂತ ರೀತಿಯಲ್ಲಿ ಎಲ್ಲರ ಜತೆ ಚರ್ಚಿಸಿ ಒಂದು ತೀರ್ಮಾನಕ್ಕೆ ಬರಬೇಕು ಎಂದು ಸಲಹೆ ನೀಡಿದರು.

ಮಧ್ಯಪ್ರದೇಶ ಮಾದರಿ ನೀರಾವರಿಗೆ ಆದ್ಯತೆ ನೀಡಿ: ಕೇಂದ್ರದ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರು ಮಧ್ಯಪ್ರದೇಶದ ಮುಖ್ಯಮಂತ್ರಿ ಆಗಿದ್ದಾಗ ಆ ರಾಜ್ಯದಲ್ಲಿ ಸಂಪೂರ್ಣ ನೀರಾವರಿಗೆ ಒತ್ತು ನೀಡಿದ್ದಾರೆ. ಈ ಬದಲಾವಣೆ ಕುರಿತು ಅಧ್ಯಯನ ನಡೆಸಲು ನಮ್ಮ ರಾಜ್ಯದ ರೈತ ಮುಖಂಡರು ಇಷ್ಟಪಟ್ಟರೆ ನಿಯೋಗ ಕಳುಹಿಸಲು ನಾನು ರೆಡಿ. ಈ ಮಾದರಿಯನ್ನು ನಮ್ಮ ರಾಜ್ಯದಲ್ಲೂ ಅಳವಡಿಸಿದರೆ ಉಪಯೋಗವಾಗಲಿದೆ ಎಂದರು.

ರೈತ ಮುಖಂಡ ಕುರುಬೂರು ಶಾಂತಕುಮಾರ್ ಹಾಗೂ ನನ್ನ ಸಂಬಂಧ ನಲ್ವತ್ತು ವರ್ಷಗಳದ್ದು. ನಾನು ರಾಜಕಾರಣಕ್ಕೆ ಬರುವುದಕ್ಕೂ ಮುಂಚಿನ ದಿನಗಳಿಂದಲೂ ಪರಿಚಯವಾಗಿದ್ದಾರೆ. ಚಾಮರಾಜನಗರ, ವರುಣ ವಿಧಾನಸಭಾ ಕ್ಷೇತ್ರದಲ್ಲಿ ಚುನಾವಣೆಯಲ್ಲಿ ನಿಂತು ಸೋತಾಗ ಮೊಬೈಲ್ ಕರೆ ಮಾಡಿ, ಮುಂದೆ ಒಳ್ಳೆಯ ದಿನಗಳು ಬರುತ್ತವೆ ಎಂದು ಧೈರ್ಯ ತುಂಬಿದ್ದ ಪ್ರಸಂಗವನ್ನು ವಿವರಿಸಿದರು.

2 ಲಕ್ಷ ವೈಯಕ್ತಿಕ ದೇಣಿಗೆ: ಭಾನುವಾರ ಈ ಕಟ್ಟಡದಿಂದ ಬಿದ್ದ ಉಂಡುವಾಡಿ ರೈತ ಸತೀಶ್ ಎಂಬುವರಿಗೆ ಜೆಎಸ್‌ಎಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ವಿಚಾರವನ್ನು ಶಾಂತಣ್ಣ ನನ್ನ ಗಮನಕ್ಕೆ ತಂದಿದ್ದಾರೆ. ಈ ಘಟನೆಗೆ ವಿಷಾದ ವ್ಯಕ್ತಪಡಿಸಿ, ವೈಯಕ್ತಿಕವಾಗಿ ಚಿಕಿತ್ಸಾ ವೆಚ್ಚಕ್ಕಾಗಿ 2 ಲಕ್ಷ ಕೊಡುವುದಾಗಿ ಘೋಷಿಸಿದರಲ್ಲದೆ, ಪಿಎಂ ಪರಿಹಾರ ನಿಧಿಯಿಂದಲೂ ಚಿಕಿತ್ಸಾ ವೆಚ್ಚವನ್ನು ಕೊಡಿಸುವುದಾಗಿ ಭರವಸೆ ನೀಡಿದರು.

ತಾಂತ್ರಿಕ ವ್ಯವಸ್ಥೆ ಎಷ್ಟೇ ಬೆಳೆದಿದ್ದರೂ ಇಂದಿಗೂ ದೇಶದ ಆರ್ಥಿಕತೆಯಲ್ಲಿ ಕೃಷಿಯೇ ಅಗ್ರಗಣ್ಯ. ಅದು ಭಗವಂತನಿಗೆ ಸಲ್ಲುವ ಸೇವೆ. ಕೇಂದ್ರದಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಕಳೆದ 10 ವರ್ಷದ ಅವಧಿಯಲ್ಲಿ ವಿವಿಧ ಬೆಳೆಗಳ ಬೆಂಬಲ ಬೆಲೆಯು ದ್ವಿಗುಣಗೊಂಡಿದೆ. ಪ್ರತಿ ಕ್ವಿಂಟಾಲ್‌ಗೆ ಭತ್ತ 1,410ರಿಂದ 2,300, ಜೋಳ 1,450ರಿಂದ 3,300ಕ್ಕೆ ಏರಿಕೆ ಆಗಿದೆ. ಒಣಕೊಬ್ಬರಿ ಬೆಲೆ ಪ್ರತಿ ಕ್ವಿಂಟಾಲ್‌ಗೆ 14ಸಾವಿರ–15ಸಾವಿರ ಇದೆ. ರೈತರಿಗೆ ನೀಡಬೇಕಾದ 380 ಕೋಟಿ ಬಾಕಿ ಹಣ ಬಿಡುಗಡೆ ಆಗಿದೆ. ಪ್ರಧಾನಿ ನರೇಂದ್ರ ಮೋದಿ ಸರ್ಕಾರ ರೈತರನ್ನು ಕಡೆಗಣಿಸಿಲ್ಲ ಎಂದರು.

ರೈತ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಕುರುಬೂರು ಶಾಂತಕುಮಾರ್ ನೇತೃತ್ವದ ಸಭೆಯಲ್ಲಿ ಕೈಗೊಳ್ಳಲಾದ 21 ನಿರ್ಣಯಗಳ ಬೇಡಿಕೆಗೆ ಸ್ಪಂದಿಸಿದ ಸಚಿವರು, ಈ ಸಂಬಂಧ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಜೊತೆಗೂಡಿ ಕೃಷಿ ಸಚಿವರ ಬಳಿಗೆ ಆಯ್ದ ಕೆಲ ರೈತ ಮುಖಂಡರ ನಿಯೋಗ ಕರೆದೊಯ್ದು ಚರ್ಚಿಸಲು ಅವಕಾಶ ಮಾಡಿಕೊಡುವುದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಶಾಸಕ ಟಿ.ಎಸ್. ಶ್ರೀವತ್ಸ, ಕೇರಳ, ತಮಿಳು ನಾಡು, ತೆಲಂಗಾಣ ಹಾಗೂ ತಮಿಳುನಾಡಿನ ರೈತ ಮುಖಂಡರು ಹಾಜರಿದ್ದರು.

> **“** ದೆಹಲಿಯ ಪಂಜಾಬ್ ಗಡಿಯಲ್ಲಿ ರೈತ ಮುಖಂಡ ಜಗಜಿತ್ ಸಿಂಗ್ ಧಲೇವಾಲ ನೇತೃತ್ವದಲ್ಲಿ ಎಂಎಸ್‌ಪಿ ಕಾನೂನು ಜಾರಿಗಾಗಿ ಕಳೆದ 28 ದಿನಗಳಿಂದ ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದು, ಅವರ ಆರೋಗ್ಯ ತೀರ ಗಂಭೀರವಾಗಿದೆ ಎಂಬ ವಿಷಯವನ್ನು ಶಾಂತಣ್ಣ ನನ್ನ ಗಮನಕ್ಕೆ ತಂದಿದ್ದಾರೆ. ಈ ಸಂಬಂಧ ಮಂಗಳವಾರ ದೆಹಲಿಗೆ ತೆರಳಿದ ತಕ್ಷಣ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಸೇರಿದಂತೆ ಇತರೆ ಸಂಸದ ನೇತೃತ್ವದಲ್ಲಿ ಕೃಷಿ ಸಚಿವರನ್ನು ಭೇಟಿ ಮಾಡಿ, ರೈತ ಮುಖಂಡರ ನಿಯೋಗ ಚರ್ಚಿಸಲು ವೇದಿಕೆ ಒದಗಿಸಲಾಗುವುದು. ಅಲ್ಲದೆ, ರೈತರ ಯಾವುದೇ ಬೇಡಿಕೆಗಳ ಈಡೇರಿಸಲು ಕೇಂದ್ರ ಸರ್ಕಾರ ಬದ್ಧವಾಗಿದೆ.
> –ವಿ.ಸೋಮಣ್ಣ, ಕೇಂದ್ರದ ರೈಲ್ವೆ ಮತ್ತು ಜಲಶಕ್ತಿ ಇಲಾಖೆ

ಕಳೆದ ಒಂದೂವರೆ ವರ್ಷದಲ್ಲಿ ದಾಖಲೆ ಪ್ರಮಾಣದಲ್ಲಿ ಯುವ ಜನತೆಗೆ ಸರ್ಕಾರಿ ಉದ್ಯೋಗ: ಪ್ರಧಾನಿ ಮೋದಿ



ನವದೆಹಲಿ: ಕಳೆದ ಒಂದೂವರೆ ವರ್ಷದಲ್ಲಿ ದಾಖಲೆ ಪ್ರಮಾಣದಲ್ಲಿ ಅಂದರೆ ಸುಮಾರು 10 ಲಕ್ಷ ಖಾಯಂ ಸರ್ಕಾರಿ ನೌಕರಿಯನ್ನು ಯುವ ಜನತೆಗೆ ಒದಗಿಸಲಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಸೋಮವಾರ ಹೇಳಿದ್ದಾರೆ.

ರೋಜ್‌ಗಾರ್ ಮೇಳದಲ್ಲಿ ನೇಮಕಾತಿಯಾದವರನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ಇಂತಹ ಕಾರ್ಯಕ್ರಮದ ಮೂಲಕ ಇಷ್ಟೊಂದು ದಾಖಲೆ ಪ್ರಮಾಣದಲ್ಲಿ ಈ ಹಿಂದಿನ ಸರ್ಕಾರಗಳ ಅವಧಿಯಲ್ಲಿ ಉದ್ಯೋಗ ನೀಡಿರಲಿಲ್ಲ ಎಂದು ಹೇಳಿದರು. ಈ ರೋಜ್ ಗಾರ್ ಮೇಳದಲ್ಲಿ 71,000 ಅಭ್ಯರ್ಥಿಗಳಿಗೆ ನೇಮಕಾತಿ ಪತ್ರ ವಿತರಿಸಲಾಗಿದೆ.

ಕೇಂದ್ರ ಸರ್ಕಾರದ ನೀತಿಗಳು, ಕಾರ್ಯಕ್ರಮಗಳಲ್ಲಿ ಯುವ ಜನತೆಗೆ ಆದ್ಯತೆ ನೀಡಲಾಗಿದೆ. ನೇಮಕಾತಿ ಪ್ರಕ್ರಿಯೆಯಲ್ಲಿ ಪ್ರಾಮಾಣಿಕತೆ, ಪಾರದರ್ಶಕತೆ ಕಾಯ್ದುಕೊಳ್ಳಲಾಗಿದೆ. ಹೆಚ್ಚಿನ ಪ್ರಮಾಣದಲ್ಲಿ ಮಹಿಳೆಯರ ನೇಮಕಾತಿ ಮಾಡಿಕೊಳ್ಳಲಾಗುತ್ತಿದೆ. ಮಹಿಳೆಯರು ಪ್ರತಿಯೊಂದು ಕ್ಷೇತ್ರದಲ್ಲಿ ಸ್ವಾವಲಂಬಿಯನ್ನಾಗಿಸುವುದು ಸರ್ಕಾರದ ಪ್ರಯತ್ನವಾಗಿದೆ ಎಂದರು.

ಮಹಿಳೆಯರಿಗೆ 26 ವಾರಗಳ ಹೆರಿಗೆ ರಜೆ ನೀಡುವ ಸರ್ಕಾರದ ನಿರ್ಧಾರ ಅವರ ವೃತ್ತಿಜೀವನಕ್ಕೆ ಸಾಕಷ್ಟು ನೆರವಾಗಿದೆ. ಪ್ರಧಾನಿ ಆವಾಸ್ ಯೋಜನೆಯಡಿ ನಿರ್ಮಿಸಲಾದ ಮನೆಯ ಬಹುತೇಕ ಮಾಲೀಕರು ಮಹಿಳೆಯರೇ ಆಗಿದ್ದಾರೆ.

ಭಾರತೀಯ ಯುವಕರ ಸಾಮರ್ಥ್ಯ ಮತ್ತು ಪ್ರತಿಭೆಯನ್ನು ಗರಿಷ್ಟವಾಗಿ ಬಳಸಿಕೊಳ್ಳುವುದು ತಮ್ಮ ಸರ್ಕಾರದ ಆದ್ಯತೆಯಾಗಿದೆ. ಸ್ಟಾರ್ಟ್ ಅಪ್ ಇಂಡಿಯಾ, ಡಿಜಿಟಲ್ ಇಂಡಿಯಾ ಅಥವಾ ಬಾಹ್ಯಾಕಾಶ ರಕ್ಷಣಾ ಕ್ಷೇತ್ರಗಳಲ್ಲಿನ ಸುಧಾರಣೆಗಳಂತಹ ಹಲವಾರು ಯೋಜನೆಗಳಲ್ಲಿ ಯುವ ಜನರೇ ತುಂಬಿದ್ದಾರೆ ಎಂದರು.

ಎಸ್‌ಸಿ,ಎಸ್‌ಟಿ: 17 ದುಬಾರಿ ಕಾಯಿಲೆಗಳ ಚಿಕಿತ್ಸೆಗೆ ನೆರವು

ಬೆಂಗಳೂರು: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯದ ಜನರಿಗೆ ಅಪರೂಪದ ಮತ್ತು ದುಬಾರಿ ವೆಚ್ಚದ 17 ಕಾಯಿಲೆಗಳ ಚಿಕಿತ್ಸಾ ವೆಚ್ಚವನ್ನು 'ಕಾರ್ಪಸ್ ಫಂಡ್' ಸ್ಥಾಪಿಸಿ ಭರಿಸುವ ಯೋಜನೆ ಜಾರಿಗೊಳಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್‌ನಲ್ಲಿ ಪರಿಶಿಷ್ಟರ ಕಲ್ಯಾಣ ಯೋಜನೆ (ಎಸ್‌ಸಿಎಸ್‌ಪಿ, ಟಿಎಸ್‌ಪಿ) ಅಡಿಯಲ್ಲಿ ಪ್ರಸ್ತುತ ಲಭ್ಯ ಇರುವ 47 ಕೋಟಿ ಮೊತ್ತದಲ್ಲಿ ಕಾರ್ಪಸ್ ಫಂಡ್ ಸೃಜಿಸಿ ಅದರ ಬಡ್ಡಿಯ ಮೊತ್ತದಿಂದ ಈ ಕಾಯಿಲೆಗಳ ಚಿಕಿತ್ಸಾ ವೆಚ್ಚ ಭರಿಸಲಾಗುತ್ತದೆ. ವಿರಳ ಮತ್ತು ದುಬಾರಿ ವೆಚ್ಚದ ಒಟ್ಟು 33 ಕಾಯಿಲೆಗಳಲ್ಲಿ 16 ಕಾಯಿಲೆಗಳಿಗೆ ರಾಜ್ಯ ಸರ್ಕಾರದ ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ, ಜೀವ ಸಾರ್ಥಕತೆ ಮುಂತಾದ ಯೋಜನೆಗಳಲ್ಲಿ ಚಿಕಿತ್ಸೆ ಒದಗಿಸಲಾಗುತ್ತಿದೆ.

ಮಾಜಿ ಕ್ರಿಕೆಟಿಗ ವಿನೋದ್ ಕಾಂಬ್ಳಿ ಆರೋಗ್ಯ ಗಂಭೀರ; ಆಸ್ಪತ್ರೆಗೆ ದಾಖಲು



ಮುಂಬೈ: ಭಾರತ ಕ್ರಿಕೆಟ್ ತಂಡದ ಮಾಜಿ ಸ್ಟಾರ್ ಆಟಗಾರ ವಿನೋದ್ ಕಾಂಬ್ಳಿ ಅವರ ಆರೋಗ್ಯ ತೀವ್ರ ಹದಗೆಟ್ಟಿದ್ದು, ಅವರನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಸಚಿನ್ ತೆಂಡೂಲ್ಕರ್ ಅವರ ದೀರ್ಘಕಾಲದ ಸಹ ಆಟಗಾರ ವಿನೋದ್ ಕಾಂಬ್ಳಿ ಅವರು ಶನಿವಾರ ತಡರಾತ್ರಿ ಥಾಣೆಯ ಆಕೃತಿ ಆಸ್ಪತ್ರೆಗೆ ದಾಖಲಾಗಿದ್ದಾರೆ. ಸದ್ಯ ವೈದ್ಯರ ಮೇಲ್ವಿಚಾರಣೆಯಲ್ಲಿರುವ ವಿನೋದ್ ಕಾಂಬ್ಳಿ ಅವರ ಸ್ಥಿತಿ ಈಗ ಸ್ಥಿರವಾಗಿದೆ. ಆದರೆ ಗಂಭೀರವಾಗಿದೆ ಎಂದು ಐಎಎನ್‌ಎಸ್ ವರದಿ ಮಾಡಿದೆ. ಸೋಮವಾರ ಅಭಿಮಾನಿಯೊಬ್ಬರು ವಿನೋದ್ ಕಾಂಬ್ಳಿ ಅವರ ವಿಡಿಯೋವನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ. ಈ ವಿಡಿಯೋದಲ್ಲಿ ಅವರು ಆಸ್ಪತ್ರೆಯಲ್ಲಿ ದಾಖಲಾಗಿರುವುದನ್ನು ಕಾಣಬಹುದಾಗಿದೆ. ಕಾಂಬ್ಳಿ ಇತ್ತೀಚೆಗೆ ಯೂಟ್ಯೂಬ್ ಚಾನೆಲ್‌ನ ಸಂದರ್ಶನವೊಂದರಲ್ಲಿ ತಾನು ಗಂಭೀರ ಮೂತ್ರದ ಸೋಂಕಿನಿಂದ ಬಳಲುತ್ತಿದ್ದೇನೆ ಎಂದು ಹೇಳಿಕೊಂಡಿದ್ದರು. ಇದಲ್ಲದೆ ಕಾಂಬ್ಳಿ ಅನೇಕ ಕಾಯಿಲೆಗಳಿಂದ ಬಳಲುತ್ತಿರುವುದಾಗಿಯೂ ಹೇಳಿಕೊಂಡಿದ್ದರು.

ಸಿಲಿಂಡರ್ ಸ್ಫೋಟ: 9 ಅಯ್ಯಪ್ಪ ಸ್ವಾಮಿ ಮಾಲಾಧಾರಿಗಳಿಗೆ ಗಂಭೀರ ಗಾಯ



ಹುಬ್ಬಳ್ಳಿ: ಸಿಲಿಂಡರ್ ಸ್ಫೋಟಗೊಂಡ ಪರಿಣಾಮ 9 ಮಂದಿ ಅಯ್ಯಪ್ಪ ಸ್ವಾಮಿ ಮಾಲಾಧಾರಿಗಳು ಗಂಭೀರವಾಗಿ ಗಾಯಗೊಂಡಿರುವ ಘಟನೆ ಹುಬ್ಬಳ್ಳಿಯಲ್ಲಿ ನಡೆದಿದೆ.

ಹುಬ್ಬಳ್ಳಿಯ ಸಾಯಿನಗರದ ಅಚ್ಚವ್ವನ ಕಾಲೊನಿಯ ಈಶ್ವರ ದೇವಸ್ಥಾನದಲ್ಲಿ ಈ ಘಟನೆ ನಡೆದಿದ್ದು, ಅಡುಗೆ ಅನಿಲದ ಸಿಲಿಂಡರ್ ಸ್ಫೋಟಗೊಂಡು 9 ಅಯ್ಯಪ್ಪ ಮಾಲಾಧಾರಿಗಳು ತೀವ್ರ ಗಾಯಗೊಂಡಿದ್ದಾರೆ. ಬಹುತೇಕ ಎಲ್ಲರ ದೇಹ ಶೇ 50 ರಷ್ಟು ಸುಟ್ಟು ಹೋಗಿದ್ದು, 58 ವರ್ಷದ ಅಜ್ಜಾಸ್ವಾಮಿ ಅವರ ಸ್ಥಿತಿ ಗಂಭೀರವಾಗಿದೆ ಎಂದು ವೈದ್ಯರು ತಿಳಿಸಿದ್ದಾರೆ.

ಮೂಲಗಳ ಪ್ರಕಾರ ಭಾನುವಾರ ತಡರಾತ್ರಿ 1.30ರ ವೇಳೆ ಈ ಘಟನೆ ನಡೆದಿದ್ದು, ಗಾಯಾಳುಗಳನ್ನು ರಾಜು ಹರ್ಲಾಪುರ(21), ಸಂಜಯ ಸವದತ್ತಿ (20), ವಿನಾಯಕ ಬಾತಕೇರ(12), ಪ್ರಕಾಶ ಬಾತಕೇರ(42), ಮಂಜು ತೋರದ(22), ಅಜ್ಜಾಸ್ವಾಮಿ(58), ಪ್ರವೀಣ ಚಲವಾದಿ (24), ತೇಜಸ್ ರೆಡ್ಡಿ(26) ಮತ್ತು ಶಂಕರ ರಾಯನಗೌಡ್ರ(29) ಎಂದು ಗುರುತಿಸಲಾಗಿದ್ದು, ಇವರೆಲ್ಲ ಸಾಯಿನಗರದ ನಿವಾಸಿಗಳು ಎಂದು ತಿಳಿದುಬಂದಿದೆ.

ಈ ದುರಂತಕ್ಕೆ ಅಯ್ಯಪ್ಪ ಮಾಲಾಧಾರಿಯೊಬ್ಬರ ನಿದ್ದೆಗಣ್ಣು ಕಾರಣ ಎಂದು ಹೇಳಲಾಗಿದ್ದು, ಅಯ್ಯಪ್ಪ ಮಾಲೆ ಧರಿಸಿ ವ್ರತ ಆಚರಿಸುತ್ತಿದ್ದ ಇವರು, ಈಶ್ವರ ದೇವಸ್ಥಾನದಲ್ಲಿ ವಾಸ್ತವ್ಯ ಹೂಡಿದ್ದರು. ರಾತ್ರಿ ಮಲಗಿದ್ದಾಗ ಮಾಲಾಧಾರಿಯೊಬ್ಬರ ಕಾಲು ಸಿಲಿಂಡರ್‌ಗೆ ತಾಗಿ ಅದು ಉರುಳಿದೆ. ಈ ವೇಳೆ ರೆಗ್ಯೂಲೇಟರ್ ಸಡಿಲಗೊಂಡು ಗ್ಯಾಸ್ ಸೋರಿಕೆಯಾಗಿದೆ. ಇದೇ ವೇಳೆ ದೇವಸ್ಥಾನದಲ್ಲಿ ಹಚ್ಚಿದ್ದ ದೀಪಕ್ಕೆ ಗ್ಯಾಸ್ ತಾಗಿ ಬೆಂಕಿ ಹೊತ್ತುಕೊಂಡು ಸಿಲಿಂಡರ್ ಸ್ಫೋಟವಾಗಿದೆ. ದೇವಸ್ಥಾನದ ಪ್ರಾಂಗಣದಲ್ಲೆಲ್ಲಾ ಬೆಂಕಿ ಹೊತ್ತುಕೊಂಡಿದ್ದು, ಸ್ಥಳೀಯರು ಬೆಂಕಿಗೆ ತುತ್ತಾಗಿದ್ದ ಅಯ್ಯಪ್ಪ ಮಾಲಾಧಾರಿಗಳನ್ನು ರಕ್ಷಿಸಿ ಆಸ್ಪತ್ರೆಗೆ ದಾಖಲಿಸಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಘಟನಾ ಸ್ಥಳಕ್ಕೆ ಡಿಸಿಪಿ ನಂದಾವಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಕಾಂಗ್ರೆಸ್ ಪ್ರಚಾರ ವೇದಿಕೆಯಾದ ಮಂಡ್ಯ ಸಾಹಿತ್ಯ ಸಮ್ಮೇಳನ




ಛಲವಾದಿ ನಾರಾಯಣಸ್ವಾಮಿ

ಬೆಂಗಳೂರು: ಮಂಡ್ಯದಲ್ಲಿ ನಡೆದ ಸಾಹಿತ್ಯ ಸಮ್ಮೇಳನವು ಕನ್ನಡ ಸಾಹಿತ್ಯ, ಕಲೆ, ಸಂಸ್ಕೃತಿ ಮತ್ತು ಭಾಷೆಯ ವಿಷಯಗಳಿಗೆ ಪ್ರಾಮುಖ್ಯತೆ ಪಡೆಯದೇ ಕಾಂಗ್ರೆಸ್ ಸರ್ಕಾರದ ರಾಜಕೀಯ ಪ್ರಚಾರ ವೇದಿಕೆಯಾಗಿ ಮಾರ್ಪಟ್ಟಿದ್ದು ನೋವಿನ ಸಂಗತಿ ಎಂದು ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣ ಸ್ವಾಮಿ ಹೇಳಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಉದ್ಘಾಟನಾ ಭಾಷಣ ಕನ್ನಡದ ಬೆಳವಣಿಗೆ, ಸಾಹಿತ್ಯ ಮತ್ತು ಸಂಸ್ಕೃತಿಯ ಬಗ್ಗೆ ಮಾತುಕತೆ ನಡೆಸುವ ಬದಲು ಕೇಂದ್ರ ಸರ್ಕಾರದ ತೆರಿಗೆ ಹಂಚಿಕೆ, ಮನುಸ್ಮೃತಿಯ ವಿವಾದ, ಹಿಂದಿ ಪ್ರಭಾವದ ವಿಚಾರಗಳತ್ತ ಮುಖ ಮಾಡಿತ್ತು. ರಾಜಕೀಯ ಚರ್ಚೆಗಳನ್ನು ಸಾಹಿತ್ಯದ ವೇದಿಕೆಗೆ ತಂದಿದ್ದು ಖಂಡನೀಯ ಎಂದು ತಿಳಿಸಿದ್ದಾರೆ.

ಬೆಲವತ್ತ ಹನುಮಂತು ಕೊಲೆ ಪ್ರಕರಣ ನಾಲ್ವರು ಮಹಿಳೆಯರು ಸೇರಿ 13ಕ್ಕೂ ಅಧಿಕ ಮಂದಿ ವಿರುದ್ಧ ಎಫ್‌ಐಆರ್

ಮೈಸೂರು, ಡಿ.23– ಮೈಸೂರಿನ ಬೆಲವತ್ತ ಹನುಮಂತು ಕೊಲೆ ಸಂಬಂಧ ನಾಲ್ವರು ಮಹಿಳೆಯರೂ ಸೇರಿದಂತೆ 13ಕ್ಕೂ ಹೆಚ್ಚು ಮಂದಿ ವಿರುದ್ಧ ಮೈಸೂರಿನ ಮೇಟಗಳ್ಳಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಹನುಮಂತು ಅವರ ಪತ್ನಿ ನೀಡಿರುವ ದೂರಿನನ್ವಯ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, ಕೆಲವರ ವಿಚಾರಣೆ ನಡೆಸಿದ್ದಾರೆ ಎಂದು ತಿಳಿದುಬಂದಿದೆ. ಭಾನುವಾರ ಸಂಜೆ ರಿಂಗ್‌ರೋಡ್ ಕಡೆಯಿಂದ ಬೆಲವತ್ತಕ್ಕೆ ದ್ವಿಚಕ್ರ ವಾಹನದಲ್ಲಿ ತೆರಳುತ್ತಿದ್ದ ಹನುಮಂತು ಅವರನ್ನು ನಡುರಸ್ತೆಯಲ್ಲೇ ಬರ್ಬರವಾಗಿ ಹತ್ಯೆ ಮಾಡಿದ್ದು, ಜಮೀನು ವಿಚಾರವಾಗಿ ಕಳೆದ ತಿಂಗಳು ಗಲಾಟೆ ಮಾಡಿದ್ದವರೇ ದ್ವೇಷದಿಂದ ಈ ದುಷ್ಕೃತ್ಯವೆಸಗಿದ್ದಾರೆ. ಇಬ್ಬರು ಬೈಕ್‌ನಲ್ಲಿ ಹಿಂಬಾಲಿಸಿಕೊಂಡು ಬಂದ ಇಬ್ಬರು, ಬೆಲವತ್ತ ಮುಖ್ಯರಸ್ತೆಯಲ್ಲಿ ಹನುಮಂತು ದ್ವಿಚಕ್ರ ವಾಹನಕ್ಕೆ ಡಿಕ್ಕಿ ಹೊಡೆಸಿ ಬೀಳಿಸಿ, ಚಾಕುವಿನಿಂದ ಹಲವು ಬಾರಿ ಚುಚ್ಚಿ ಕೊಲೆ ಮಾಡಿ ಪರಾರಿಯಾಗಿದ್ದಾರೆ. ಇವರಿಗೆ ಹಲವರು ಕುಮ್ಮಕ್ಕು ನೀಡಿದ್ದಾರೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

ಕ್ರಿಸ್‌ಮಸ್ ಪ್ರಯುಕ್ತ ಶೃಂಗಾರಗೊಂಡ ಚರ್ಚ್‌ಗಳು....



ಮೈಸೂರಿನ ಸಂತ ಫಿಲೋಮಿನಾ ಚರ್ಚ್ ಕ್ರಿಸ್‌ಮಸ್ ಹಬ್ಬದ ಪ್ರಯುಕ್ತ ವಿದ್ಯುತ್ ದೀಪಗಳ ಸೂಸುವ ಬಗೆಬಗೆಯ ಬಣ್ಣಗಳಿಂದ ಕಂಗೊಳಿಸುತ್ತಿರುವುದನ್ನು ಚಿತ್ರದಲ್ಲಿ ಕಾಣಬಹುದು.



ಮೈಸೂರಿನ ಸೆಂಟ್ ಬಾರ್ತೋಲೋಮ್ಯೂಸ್ ಚರ್ಚ್ ಕೂಡ ವಿದ್ಯುತ್ ದೀಪಗಳಿಂದ ಅಲಂಕಾರವಾಗಿರುವುದನ್ನು ಕಾಣಬಹುದು. ಚರ್ಚ್‌ಗಳಲ್ಲಿ ಮಂಗಳವಾರ ರಾತ್ರಿ 12ಕ್ಕೆ ಯೇಸುಕ್ರಿಸ್ತನ ಆರಾಧನೆಯೊಂದಿಗೆ ಪೂಜಾ ಕೈಂಕರ್ಯ ನಡೆಯಲಿದೆ.

ಈಗಿರುವವರು ನಕಲಿ ಗಾಂಧಿಗಳು



ಪ್ರಲ್ಹಾದ ಜೋಶಿ

ಹುಬ್ಬಳ್ಳಿ: ಈಗಿನ ಕಾಂಗ್ರೆಸ್‌ಗೂ, ಮಹಾತ್ಮ ಗಾಂಧೀಜಿಗೂ ಏನು ಸಂಬಂಧ. ಈಗಿನದು ನಕಲಿ ಕಾಂಗ್ರೆಸ್, ಹಳೇ ಕಾಂಗ್ರೆಸ್ ತುಂಡು ತುಂಡಾಗಿ ಹೋಗಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ವ್ಯಂಗ್ಯವಾಡಿದರು.

ಬೆಳಗಾವಿಯಲ್ಲಿ ನಡೆಯಲಿರುವ ಅಖಿಲ ಭಾರತ ಕಾಂಗ್ರೆಸ್ ಸಮಿತಿ ಶತಮಾನೋತ್ಸವದ ಕುರಿತು ಸೋಮವಾರ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಅವರು, ಕಾಂಗ್ರೆಸ್‌ನಲ್ಲಿ ಈಗಿರುವವರೆಲ್ಲ ನಕಲಿ ಗಾಂಧಿಗಳು. ಅದು ಕಳ್ಳಕಾಕರ ಗುಂಪು. ಇವರ್‍ಯಾರು ಮಹಾತ್ಮ ಗಾಂಧೀಜಿ ಅವರ ಕಾಂಗ್ರೆಸ್‌ನ ವಾರಸುದಾರಲ್ಲ. ನಕಲಿ ಕಾಂಗೆಸ್‌ಗೆ ಸರ್ಕಾರಿ ದುಡ್ಡು ಯಾಕೆ ಹಾಕುತ್ತೀರ ಎಂದು ಪ್ರಶ್ನಿಸಿದರು.

ವಿಧಾನ ಪರಿಷತ್ ಸದಸ್ಯ ಸಿ.ಟಿ. ಅವರನ್ನು ಕಾರಿನಲ್ಲಿ ಸುತ್ತಾಡಿಸಿದ್ದು ತನಗೆ ಗೊತ್ತಿಲ್ಲ ಎಂದು ಗೃಹ ಸಚಿವ ಜಿ. ಪರಮೇಶ್ವರ ಹೇಳಿಕೆ ನೀಡುತ್ತಾರೆ. ಅಂದರೆ, ಗೃಹ ಸಚಿವರನ್ನೇ ಕತ್ತಲಲ್ಲಿ ಇಟ್ಟು ಪೊಲೀಸರು ಹೀಗೆ ಮಾಡಿದ್ದಾರಾ? ಜಿಲ್ಲಾ ಉಸ್ತುವಾರಿ ಸಚಿವರು ಸಹ ಪೊಲೀಸರು ತಪ್ಪು ಮಾಡಿದ್ದಾರೆ ಎಂದಿದ್ದಾರೆ. ಹಾಗಾದರೆ ಸರ್ಕಾರದಲ್ಲಿ ಏನು ನಡೆಯುತ್ತಿದೆ? ಇದರ ಹಿಂದಿನ ಸೂತ್ರಧಾರರು ಯಾರು ಎನ್ನುವುದನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು. ಸಿ.ಟಿ. ರವಿ ಅವರ ಆಕ್ಷೇಪಾರ್ಹ ಹೇಳಿಕೆ ಮುಚ್ಚಿಕೊಳ್ಳಲು ಬಿಜೆಪಿ ಮುಖಂಡರು ಪೊಲೀಸರ ಮೇಲೆ ಆರೋಪ ಮಾಡುತ್ತಿದ್ದಾರೆ ಎನ್ನುವ ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿಕೆಗೆ ಪ್ರತಿಕ್ರಿಯಿಸಿದ ಸಚಿವ ಜೋಶಿ, ನಾವು ಯಾವಾಗಲೂ ಮರ್ಯಾದೆಯಿಂದಲೇ ವರ್ತಿಸುತ್ತಿದ್ದೇವೆ. ಅವರ ಹಾಗೆ ನಾವೇನೂ ಮರ್ಯಾದೆ ಬಿಟ್ಟಿಲ್ಲ. ಕಾಂಗ್ರೆಸ್‌ನಲ್ಲಿ ಸಂಸ್ಕೃತಿ, ಸಂಸ್ಕಾರ ಅನ್ನುವುದೇ ಇಲ್ಲ. ಕೆಲವಷ್ಟು ನಾಯಕರನ್ನು ಹೊರತುಪಡಿಸಿ ಉಳಿದವರೆಲ್ಲ ಅನಾಗರಿಕರ ಹಾಗೆ ವರ್ತಿಸುತ್ತಾರೆ ಎಂದು ಹರಿಹಾಯ್ದರು.

ನಕ್ಕರೆ ಅದೇ ಸ್ವರ್ಗ

ಎಲ್‌ಕೆಜಿ ಹುಡುಗ ಪರೀಕ್ಷೆ ಬರೆಯುವಾಗ ಪೇಪರ್ ಮೇಲೆ ಸೂಸು ಮಾಡಿದ.
ಟೀಚರ್ : ಯಾಕೋ ಪೇಪರ್ ಮೇಲೆ ಸೂಸು ಮಾಡ್ದೆ ಕತ್ತೆ?
ಹುಡುಗ : ಅಮ್ಮ ಹೇಳಿದ್ರು.. ಪೇಪರ್ ಕೊಟ್ಟ ಮೇಲೆ ಮೊದಲು ಯಾವುದು ಬರುತ್ತೋ ಅದನ್ನು ಮಾಡು ಅಂತ !

ಮೈಸೂರು ಮಿತ್ರ
ಮಂಗಳವಾರ, 24 ಡಿಸೆಂಬರ್ 2024
ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ.........

ಬಡವರು ಹಸಿದಿರುವುದು ಅಕ್ಕರೆಗಾಗಿ. ರೊಟ್ಟಿಗಾಗಿ ಅಲ್ಲ.
–ಮದರ್ ತೆರೇಸಾ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ನಿನ್ನಲ್ಲಿರುವ ಮಾನ ನಿನಗೆ ಕೊಡುವುದು ಬಹುಮಾನ.

ನಿಮ್ಮ ಪತ್ರಗಳು

ದೇವಾಲಯಗಳ ಸುಲಿಗೆ!

ಮಾನ್ಯರೆ,

ತಮಿಳುನಾಡು ದೇವಾಲಯವೊಂದರಲ್ಲಿ ಆಕಸ್ಮಿಕವಾಗಿ ಬಿದ್ದು ಹೋದ ಭಕ್ತರೊಬ್ಬರ ಐ ಫೋನ್ ಅನ್ನು ಅವರಿಗೆ ವಾಪಸ್ ನೀಡಲು ನಿರಾಕರಿಸಿದ ಅಲ್ಲಿನ ಆಡಳಿತ ಮಂಡಳಿ ಹುಂಡಿಗೆ ಬಿದ್ದ ಯಾವುದೇ ವಸ್ತು ದೇವಾಲಯದ ಖಾತೆಗೆ ಸೇರುತ್ತದೆ. 1975ರ ಹುಂಡಿ ನಿಯಮಗಳ ಅನ್ವಯ ಅದನ್ನು ಭಕ್ತರಿಗೆ ವಾಪಸ್ ನೀಡಲು ಅವಕಾಶವಿಲ್ಲ ಎಂದು ತಮಿಳುನಾಡಿನ ಸಚಿವರು ಹಾಗೂ ಅಲ್ಲಿನ ಅಧಿಕಾರಿಯೊಬ್ಬರು ವಿವರಿಸಿರುವುದು ವರದಿಯಾಗಿದೆ. ಇದು ಕೂಡ ದೇವಸ್ಥಾನಗಳ ಸುಲಿಗೆಯ ಇನ್ನೊಂದು ಮುಖವನ್ನು ಅನಾವರಣ ಮಾಡಿದೆ. ದೇವಸ್ಥಾನಗಳ ಇಂತಹ ಸರ್ವಾಧಿಕಾರ ಧೋರಣೆ ಖಂಡನೀಯ. ಬೆಂಗಳೂರಿನ ದೇವಸ್ಥಾನ ಒಂದರ ಹುಂಡಿ ಎಣಿಕೆ ಸಂದರ್ಭದಲ್ಲಿ ಅಲ್ಲಿನ ಸಿಬ್ಬಂದಿಗಳು ನೋಟಿನ ಕಂತೆಯನ್ನು ಕಳ್ಳತನದಿಂದ ಕೈ ಬದಲಾಯಿಸುತ್ತಿದ್ದ ವಿಡಿಯೋ ಒಂದು ಇತ್ತೀಚೆಗೆ ವೈರಲ್ ಆಗಿತ್ತು. ಪೂಜಾರಿಗಳು ದೇವರ ಹಣ ಕದ್ದರೂ ಅವರನ್ನು ದೇವರು ಕ್ಷಮಿಸುತ್ತಾನೆ. ಆದರೆ ಆಕಸ್ಮಿಕವಾಗಿ ಹುಂಡಿಗೆ ಬಿದ್ದ ಐ ಫೋನ್ ಅನ್ನು ಭಕ್ತರಿಗೆ ವಾಪಸ್ ಕೊಟ್ಟರೆ ದೇವರು ಕ್ಷಮಿಸುವುದಿಲ್ಲ! ಓ ಮೈ ಗಾಡ್!!!

–ಮುಳ್ಳೂರು ಪ್ರಕಾಶ್,ಕನಕದಾಸ ನಗರ, ಮೈಸೂರು.

ಅಂಬೇಡ್ಕರ್ ಒಂದು ಹೆಸರಲ್ಲ, ಅದು ಭಾರತೀಯರ ಮಹಾ ಬೆಳಕು

ಮಾನ್ಯರೇ,

ಸಾವಿರಾರು ವರ್ಷಗಳ ಕಾಲ ಈ ದೇಶದ ಮೂಲನಿವಾಸಿಗಳಾದ SC,ST ಮತ್ತು OBC ಸಮುದಾಯಗಳು ನಿಮ್ಮ ಕಾಣದ ಭಗವಂತನನ್ನು ಸ್ಮರಣೆ ಮಾಡಿದ ಕಾರಣಕ್ಕೆ ಸಿಕ್ಕ ಪ್ರತಿಫಲವೆಂದರೆ ಜಾತಿ–ಧರ್ಮದ ತಾರತಮ್ಯ, ಮೇಲು ಕೀಳು ಎಂಬ ಅಸಮಾನತೆ, ಮಾನವೀಯ ಮೌಲ್ಯಗಳನ್ನು ಮರೆಮಾಚಿದ್ದು, ಹಕ್ಕುಗಳನ್ನು ನಿರಾಕರಣೆ ಮಾಡಿದ್ದು, ದಬ್ಬಾಳಿಕೆ, ದೌರ್ಜನ್ಯ ಮತ್ತು ಮಹಿಳೆಯರ ಶೋಷಣೆ ಹೀಗೆ ಹಲವಾರು ಅಮಾನವೀಯ ಪದ್ಧತಿಯನ್ನು ಅನುಭವಿಸಿದ ಜೀವಗಳಿಗೆ ನಿಮ್ಮ ಭಗವಂತ ಈ ಎಲ್ಲಾ ನೋವುಗಳಿಗೆ ಮುಕ್ತಿ ನೀಡಲು ಮುಂದೆ ಬರಲೇ ಇಲ್ಲ. ಬಂದಿದ್ದು ನಮ್ಮ ಬಾಬಾ ಸಾಹೇಬ್ ಅಂಬೇಡ್ಕರ್ ಅವರು. ಈಗಿರುವಾಗ ಮತ್ತೆ ಮತ್ತೆ ನಿಮ್ಮ ಜಾತಿ ಜೀವಂತಿಕೆ ಮನಸ್ಥಿತಿಯನ್ನು ತುಂಬಿಕೊಂಡು ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅವರನ್ನು ಕುರಿತು ನಿಮ್ಮ ಅಜೆಂಡಾಗಳ ಮೂಗಿನ ನೇರಕ್ಕೆ ಮಾತನಾಡುವ ನಿಮ್ಮ ವ್ಯಕ್ತಿತ್ವವನ್ನು ಧಿಕ್ಕರಿಸಬೇಕಾಗಿದೆ. ಜಾತಿ ವ್ಯವಸ್ಥೆಯ ಕತ್ತಲು ತುಂಬಿದ ಈ ದೇಶಕ್ಕೆ ನಿಮ್ಮ ಭಗವಂತ ಬೆಳಕನ್ನು ಚೆಲ್ಲುವುದರಲ್ಲಿ ಸಂಪೂರ್ಣವಾಗಿ ಸೋತಿದ್ದಾನೆ. ಆದರೆ ಡಾ.ಅಂಬೇಡ್ಕರ್ ಎಂಬ ಹೆಸರಿನ ಮಹಾಬೆಳಕು ಈ ನಮ್ಮ ದೇಶಕ್ಕೆ ತಾಕಿದ ದಿನದಿಂದ ಹಿಡಿದು ಈ ದಿನದವರೆಗೂ ಭಾರತೀಯರ ಬದುಕು ಎಷ್ಟು ಉತ್ತಮವಾಗಿದೆ ಎಂಬುದು ಇಡೀ ಜಗತ್ತಿಗೆ ಅವರು ನೀಡಿದ ಸಂವಿಧಾನದ ಮೂಲಕ ತಿಳಿದಿದೆ. ಇದಕ್ಕೆ ಒಂದು ಸ್ಪಷ್ಟತೆ ಎಂದರೆ ಒಂದು ಸಮಯದಲ್ಲಿ ಗಡಿಪಾರಾಗಿದ್ದ ವ್ಯಕ್ತಿ ಕೇಂದ್ರ ಸರ್ಕಾರದ ಗೃಹ ಸಚಿವನಾದ. ಅಂದರೆ ಅಂಬೇಡ್ಕರ್ ಸಂವಿಧಾನವೇ ಇದಕ್ಕೆ ಕಾರಣ. ಇದನ್ನು ತಿಳಿಯದ ಪ್ರಸ್ತುತ ಗೃಹ ಸಚಿವನಾದ ಅಮಿತ್ ಷಾ, ಡಾ ಅಂಬೇಡ್ಕರ್ ಅವರ ಹೆಸರನ್ನು ಅಪಹಾಸ್ಯ ಮಾಡಿರುವುದು ಷಾ ಅವರ ಕೆಟ್ಟ ಮನಸ್ಥಿತಿ ಎಂಥದ್ದು ಎಂಬುದು ಈ ದೇಶಕ್ಕೆ ರವಾನೆಯಾಗಿದೆ. ಭಾರತವು ಅಂಬೇಡ್ಕರ್ ಅವರನ್ನು ಸ್ಮರಿಸದೇ ಇರೋ ದಿನವೇ ಇಲ್ಲ. ಅಂಬೇಡ್ಕರ್ ಎಂದರೆ ಭಾರತ! ಭಾರತ ಎಂದರೆ ಅಂಬೇಡ್ಕರ್. ಅದಕ್ಕೆ ಅಂಬೇಡ್ಕರ್ ಒಂದು ಹೆಸರಲ್ಲ ಅದು ಭಾರತೀಯರ ಮಹಾ ಬೆಳಕು.

–ಪವನ್ ಜಯರಾಂ, ಸಿದ್ದಯ್ಯನಪುರ, ಚಾ.ನಗರ.

ಪೇಪರ್ ಲೋಟ ಬಳಕೆಯಿಂದ ಕ್ಯಾನ್ಸರ್ ಅಪಾಯ ಭೀತಿ



ಮಾನ್ಯರೆ,

ಇತ್ತೀಚಿನ ದಿನಗಳಲ್ಲಿ ದೇಶದಲ್ಲಿ ಹಲವಾರು ಕಾಯಿಲೆಗಳು ಬಂದಿವೆ. ಅದರಲ್ಲಿ ಕ್ಯಾನ್ಸರ್ ಎಂಬ ಕಾಯಿಲೆ ತುಂಬಾ ಅಪಾಯಕಾರಿ. ಈ ಒಂದು ಪೇಪರ್ ಲೋಟದಿಂದ ಕ್ಯಾನ್ಸರ್ ಬರುವ ಸಾಧ್ಯತೆ ಇದೆ. ಇಂದು ಕೂಡ ಆಸ್ಪತ್ರೆಯಲ್ಲಿ ಕ್ಯಾನ್ಸರ್‌ನಿಂದ ಸಾವು ನೋವುಗಳನ್ನು ಅನುಭವಿಸುತ್ತಿದ್ದಾರೆ. ದೇಶದ ನಗರ ಮತ್ತು ಹಳ್ಳಿಗಳ ಬೀದಿ ಬೀದಿಗಳಲ್ಲಿ ಟೀ ಅಂಗಡಿಗಳು ಇವೆ. ರಸ್ತೆಗಳಲ್ಲಿನ ಟೀ ಅಂಗಡಿಗಳಲ್ಲಿ ಟೀ, ಕಾಫಿ ಇತರೆ ಪಾನೀಯಗಳನ್ನು ಪೇಪರ್ ಲೋಟದಲ್ಲಿ ಕೊಡುತ್ತಾರೆ. ಅದರಲ್ಲೂ ಟೀ ಅಂಗಡಿಗಳಲ್ಲಿ ಪೇಪರ್ ಲೋಟವನ್ನು ಅತೀ ಹೆಚ್ಚಾಗಿ ಬಳಸುತ್ತಾರೆ. ಇನ್ನು ಕೆಲವು ಟೀ ಸ್ಟಾಲ್ ಹಾಗೂ ಅಂಗಡಿಗಳಲ್ಲಿ ಗ್ಲಾಸ್ ಲೋಟವನ್ನು ಉಪಯೋಗಿಸುತ್ತಿದ್ದಾರೆ. ಎಲ್ಲಾ ಟೀ ಅಂಗಡಿ ಹಾಗೂ ಟೀ ಸ್ಟಾಲ್ ಗಾಜಿನ ಲೋಟ ಬಳಕೆ ಮಾಡಿದಷ್ಟು ರೋಗಗಳು ಕಡಿಮೆ ಮಾಡಬಹುದು. ಅಹಮದಾಬಾದ್ ಹಾಗೂ ತಮಿಳುನಾಡಿನ ಕೆಲವು ನಗರದಲ್ಲಿ ಪೇಪರ್ ಲೋಟವನ್ನು ನಿಷೇಧಿಸಿದ್ದಾರೆ. ಎಲ್ಲರೂ ಪೇಪರ್ ಲೋಟದ ಬಳಕೆ ನಿಲ್ಲಿಸಿ, ಗಾಜಿನ ಲೋಟದ ಬಳಕೆ ಹೆಚ್ಚು ಬಳಸಿ, ನಿಮ್ಮ ಆರೋಗ್ಯ ಕಾಪಾಡಿಕೊಳ್ಳಿ.

–ಕಿಶೋರ್ ಸಿ. ಮೈಸೂರು

ಅಡಿಕೆ ಬಗ್ಗೆ ವಿಶ್ವ ಆರೋಗ್ಯ ಸಂಸ್ಥೆ ಸೂಕ್ತ ಅಧ್ಯಯನ ಮಾಡಲಿ

ಮಾನ್ಯರೆ,

ದೇಶದಲ್ಲೇ, ಕರ್ನಾಟಕ ಅಡಿಕೆ ಬೆಳೆಯುವ ರಾಜ್ಯಗಳಲ್ಲಿ ಮೊದಲ ಸ್ಥಾನ ಪಡೆದಿದೆ. ಅಡಿಕೆ ಬೆಳೆಯನ್ನೇ ನಂಬಿ, ಲಕ್ಷಾಂತರ ಕುಟುಂಬಗಳು ತಮ್ಮ ಬದುಕನ್ನು ಕಟ್ಟಿಕೊಂಡಿವೆ. ಮಲೆನಾಡಿನ ಪರಿಸರದಲ್ಲಿ ಬೆಳೆಯುತ್ತಿದ್ದ, ಈ ವಾಣಿಜ್ಯ ಬೆಳೆ ಇಂದು ಮಂಡ್ಯ, ಮೈಸೂರು, ಚಾಮರಾಜನಗರ ಜಿಲ್ಲೆಯಂತಹ ಬಯಲುಸೀಮೆಯ ಜಿಲ್ಲೆಗಳಲ್ಲೂ, ಅಡಿಕೆ ಬೆಳೆಯನ್ನೇ ನಂಬಿ ಬದುಕುತ್ತಿದ್ದಾರೆ.

ಮೊನ್ನೆ ವಿಶ್ವ ಆರೋಗ್ಯ ಸಂಸ್ಥೆ 'ಅಡಿಕೆ ಕ್ಯಾನ್ಸರ್‌ಕಾರಕ' ಎಂದು ವರದಿ ಮಾಡಿದೆ. ಇದು ಈಗ ಅಡಿಕೆ ಬೆಳೆಯುವ ಪ್ರದೇಶಗಳ ರೈತರಲ್ಲಿ ಆತಂಕ ಮೂಡಿಸಿದೆ. ಕಳೆದ 5 ವರ್ಷಗಳ ಹಿಂದೆಯೂ ಇಂತಹ ವರದಿ ನೀಡಿತ್ತು. ಆದರೆ ಅದು ವೈಜ್ಞಾನಿಕವಾಗಿ ದೃಢಪಟ್ಟಿರಲಿಲ್ಲ. ಮುಖ್ಯವಾಗಿ ದಕ್ಷಿಣ ಭಾರತದಲ್ಲಿ ಅಡಿಕೆಯನ್ನು ಶುಭ ಸಮಾರಂಭಗಳಲ್ಲಿ ಶುಭ ಸಂಕೇತವಾಗಿಯೂ ಉಪಯೋಗಿಸುತ್ತಾರೆ. ಅಡಿಕೆಯ ಜೊತೆ ವಿಳ್ಳೆದೆಲೆ ತಾಂಬೂಲ ಸೇವಿಸುವುದರಿಂದ ಜೀರ್ಣಶಕ್ತಿ ವೃದ್ಧಿಸುತ್ತದೆ ಎಂದು ವೈದ್ಯಕೀಯವಾಗಿಯೂ ದೃಢಪಟ್ಟಿದೆ. ಇತ್ತೀಚೆಗೆ ಅಡಿಕೆಯಲ್ಲಿ ಮಾಡಿದ ಪೇಯವೂ ಜನಪ್ರಿಯವಾಗುತ್ತಿದೆ. ವಿಶ್ವ ಆರೋಗ್ಯ ಸಂಸ್ಥೆಯು ಮತ್ತೊಮ್ಮೆ ಈ ಬಗ್ಗೆ ಸೂಕ್ತ ಅಧ್ಯಯನ ಮಾಡಲಿ.

–ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು

ಮೋಡಿ ಮಾಡಿದ ಗಾಯಕ ಮಹಮದ್ ರಫಿ



ಜೆ.ಬಿ.ರಂಗಸ್ವಾಮಿ
ವಿಶ್ರಾಂತ ಪೊಲೀಸ್ ಅಧಿಕಾರಿ, ಮೈಸೂರು

ಅಕೇಲೆ ಅಕೇಲೆ ಕಹ್ಞಾಜಾ ರಹೇ ಹೋ? ಆಳ ದನಿಯಲ್ಲಿ ಕೆಣಕುವ ಪ್ರೇಮದ ಕರೆ.

ವಿಷಣ್ಣ ಖಿನ್ನ ಕಂಠದಲ್ಲಿ ನೀಡಿದ ದುಃಖ ಸುಹಾನಿ ರಾತ್ ಡಲ್ ಚುಕೀ ಪುಕಾರ್ ತಾ ಚಲಾ ಹೂ ಮೈ: ನವಿರಾದ ದನಿಯಲ್ಲಿ ಮೋಹಕವಾಗಿ ಸೆಳೆಯುವ ಪ್ರೇಮದ ಆಶಯ.

ದೀವಾನ ಹುವಾ ಬಾದಲ್: ಕಸುವು ತುಂಬಿದ ಯೌವ್ವನದ ಹುರುಪು. ಚಲ್ ಕಾಯೇ ಜಾಮ್ ಕುಡುಕನೊಬ್ಬನ ತೇಲು ದನಿ. ಅಮಲೇರಿದ ಪರಿ. ಯಾಹೂ.... ಚಾಹೆ ಮುಝೆ ಕೋಯಿ ಜಂಗಲೀ ಕಹೇ: ಲವಲವಿಕೆಯ ಉತ್ಸಾಹದಲ್ಲಿ ಲಗಾಮಿಲ್ಲದೆ ಹರಿಬಿಟ್ಟ ದನಿ. ಇವೆಲ್ಲಾ ರಾಗ ಭಾವಗಳ ಹಿಂದೆ ಒಬ್ಬನೇ ಗಾಯಕ ಮಹಮದ್ ರಫಿ.

ಇಂತಹ ನೂರಾರು ಸಾವಿರಾರು ಗೀತೆಗಳನ್ನು ಹಾಡಿದ್ದ ರಫಿ ಜನಿಸಿ ಇಂದಿಗೆ 100 ವರ್ಷ (24–12–1924). ಹಿನ್ನೆಲೆ ಗಾಯಕರಾಗಿ ಎಲ್ಲರ ಹೃದಯಕ್ಕೂ ಲಗ್ಗೆ ಹಾಕಿದ್ದ ರಫೀ, ಪ್ರವೃತ್ತಿಯಲ್ಲಿ ಯಾರ ಕಣ್ಣಿಗೂ ಬೀಳದಂತೆ ಹಿನ್ನೆಲೆಯಲ್ಲೇ ಇರ ಬಯಸಿದ್ದ ವ್ಯಕ್ತಿ. ಅವರು ಹಾಡಿದ ಗೀತೆಗಳ ಒಟ್ಟು ಸಂಖ್ಯೆ ಮೂವತ್ತು ಸಾವಿರಕ್ಕೂ ಹೆಚ್ಚು. ಯಾವುದೇ ಗೀತೆ ಅವರ ಕಂಠದಲ್ಲಿ ಜೀವದನಿ ಪಡೆಯುತ್ತದೆ. ಸ್ಪಷ್ಟ ಅಸ್ಖಲಿತ ಉಚ್ಚಾರದೊಂದಿಗೆ ಮೂಡುವ ಭಾವ ಶ್ರೋತೃ ಹೃದಯಕ್ಕೆ ನೇರ ಮುಟ್ಟುತ್ತದೆ. ಆದ್ದರಿಂದಲೇ ತೀರಿಕೊಂಡು (31–07–1980) ನಾಲ್ಕೂವರೆ ದಶಕಗಳಾದ ನಂತರ ಕೂಡ ಅವರ ಕಂಠ ಮಾಧುರ್ಯಕ್ಕೆ ಕುಗ್ಗದ ಜನಪ್ರಿಯತೆ.

* * *

ಆರಂಭದ ವರ್ಷಗಳಲ್ಲಿ ರಫಿಯದು ತುಂಬ ಪರಿಶ್ರಮದ ಬದುಕು. ಮುಖೇಶ್ ಸೇರಿದಂತೆ ಆಗಿನ ಎಲ್ಲ ಗಾಯಕರೂ ಸೈಗಲ್ ಧಾಟಿ ಯಲ್ಲೇ ಹಾಡುತ್ತಿದ್ದರು. ರಫಿಯ ಕಂಠ ಮೃದು. ತಾರಕಕ್ಕೇರಿದರೂ ಸ್ಥಾಯಿಯಾಗಿ ನಿಲ್ಲಬಲ್ಲ ಇಂಪು. ಉದ್ಯಮದಲ್ಲಿ ಉಳಿಯಬಲ್ಲರೇ ಎಂಬ ಅನುಮಾನ ಹಲವರಿಗೆ.

ಗೀತೆಯಿಂದ ಗೀತೆಗೆ ರಫಿ ವೈವಿಧ್ಯಪೂರ್ಣವಾಗಿ ಬೆಳೆದರು. ಅವರ ಧ್ವನಿಯ ವಿಶಿಷ್ಟ ಮೋಹಕತೆ ಕೇಳುಗರನ್ನು ತನ್ಮಯಗೊಳಿಸಿತು. ಗಜ಼ಲ್ ಇರಲಿ, ಪಕ್ಕಾ ಶಾಸ್ತ್ರೀಯ ಸಂಗೀತವಿರಲಿ, ಭಜನ್, ದುಃಖ, ಸಂತಸ, ಕೀಟಲೆ, ಕ್ಲಬ್ ಎಲ್ಲದರಲ್ಲೂ ರಫಿಯ ಕಂಠ ಹದವಾಗಿ ಪಳಗಿತು. ಹೊಸ ಅಲೆಯ ಸಂಗೀತ ನೀಡುತ್ತಿದ್ದ ಶಂಕರ್ ಜೈಕಿಷನ್, ಓ.ಪಿ.ನಯ್ಯರ್, ಎಸ್.ಡಿ.ಬರ್ಮನ್ ಮುಂತಾದವರು ರಫಿಯ ಕಂಠಕ್ಕೆ ಹೊಸ ಆಯಾಮ ಕೊಟ್ಟರು.

ಐವತ್ತು ಅರವತ್ತರ ದಶಕದ ಚಿತ್ರಗಳಿಗೆ ಸಂಗೀತವೇ ಜೀವಾಳ. ರಫಿಯ ಗಾಯನ ಪ್ರತಿಭೆ ಉಚ್ಛ್ರಾಯಕ್ಕೇರಲು ಆಗಿನ ಸಂಗೀತ ದಿಗ್ಗಜರ ಕಾಣಿಕೆ ಅಪಾರ. ಒಂದೇ ಗೀತೆಗೆ ಹತ್ತು ರಾಗಗಳನ್ನು ಸೃಷ್ಟಿಸಬಲ್ಲ ಅದ್ವಿತೀಯ ಪ್ರತಿಭೆಯ ಸಂಗೀತಗಾರರಾದ ನೌಷಾದ್, ರೋಷನ್, ಎಸ್.ಡಿ.ಬರ್ಮನ್, ಮದನ್ ಮೋಹನ್, ಶಂಕರ್ ಜೈಕಿಷನ್, ಓ.ಪಿ.ನಯ್ಯರ್, ರವಿ ಇವರುಗಳು ಸೃಷ್ಟಿಸಿದ ಗೀತೆಗಳು ಕೇವಲ ಸಾಂದರ್ಭಿಕ ಒಲವಿನಿಂದಾಗಿ ಹುಟ್ಟಿದವಲ್ಲ. ಚಿತ್ರದ ಸನ್ನಿವೇಶಕ್ಕೆ ಹೊಂದುವಂತಹ ಅಪಾರ ಕಲ್ಪನೆ ಅವುಗಳಲ್ಲಿದೆ. ಆದ್ದರಿಂದಲೇ ಅಂದಿನ ಬಹುತೇಕ ಗೀತೆಗಳೆಲ್ಲವೂ ಧ್ವನಿಪೂರ್ಣ ಸಂಗೀತವಾಗಿ ಅರಳಿದವು. ತಕ್ಕಂತೆ ರಫೀ, ಲತಾ, ಆಶಾರ ಪ್ರತಿಭೆ ಸರಿ ಜೋಡಿಯಾಗಿ ಪ್ರತಿಫಲಿಸಿದ್ದರಿಂದ ಹಿಂದಿ ಚಿತ್ರ ಸಂಗೀತಕ್ಕೆ ಗೌರವದ ಸ್ಥಾನ ಲಭ್ಯವಾದದ್ದು ಸುಳ್ಳಲ್ಲ.

* * *

ರಫಿಯ ಗಾಯನದ ಹರವು ಬಹು ವಿಸ್ತಾರವಾದದ್ದು. ಸನ್ನಿವೇಶ ಯಾವುದೇ ಇರಲಿ. ಅದಕ್ಕೆ ತಕ್ಕ ಭಾವವನ್ನು ಪರಿಣಾಮಕಾರಿಯಾಗಿ ಜೀವ ತುಂಬಿ ಹಾಡುವುದು ರಫಿಯ ವೈಶಿಷ್ಟ್ಯ. ಗೀತೆಯ ಮೂಲ ಜೀವ ಕರಗತವಾಗುವವರೆಗೂ ಬಿಡದೆ ತಾಲೀಮು ಮಾಡುವ ಉತ್ಸಾಹ. ಸಿದ್ಧ ಗಾಯಕರಾಗಿ ಹೆಸರು ಮಾಡಿದ ಮೇಲೂ ಹಾಡಿನ ಮತ್ತೊಂದು ರಿಹರ್ಸಲ್‌ಗಾಗಿ ರಫಿಯ ಒತ್ತಾಯ. ಹಾಡಿನ ಹಿನ್ನೆಲೆ ಸನ್ನಿವೇಶಗಳನ್ನು ಪೂರ್ಣ ತಿಳಿದುಕೊಳ್ಳುವ ತವಕ. ದೃಶ್ಯದಲ್ಲಿ ಹಾಡಿಗೆ ಮೊದಲು ಮತ್ತು ನಂತರದಲ್ಲಿ ನಡೆಯುವ ಘಟನಾ ವಳಿಗಳೇನು? ಯಾಕೆ ಗೀತೆಯಲ್ಲಿ ಈ ಶಬ್ದವನ್ನೇ ಬಳಸಿದ್ದಾರೆ? ಯಾವ ಅರ್ಥದಲ್ಲಿ? ಅವುಗಳ ಉಚ್ಚಾರ ಹೇಗೆ? ಚಿತ್ರೀಕರಿಸ ಲಾಗುವ ನಟ ಯಾರು? ಆತನ ಹಾವಭಾವ, ಮಾತುಕತೆಯ ರೀತಿ ಇವೆಲ್ಲವನ್ನೂ ರಫಿ ಒತ್ತಾಯಿಸಿ ಕೇಳಿ ತಿಳಿದುಕೊಳ್ಳುತ್ತಿದ್ದರು. ನಟನ ಮ್ಯಾನರಿಸಂಗೆ ತಕ್ಕ ಧ್ವನಿಭಾವವನ್ನು ಗೀತೆಗೆ ತುಂಬುತ್ತಿದ್ದರು. ಆದ್ದರಿಂದಲೇ ಶಮ್ಮಿಕಪೂರ್, ದೇವ್ ಆನಂದ್, ದಿಲೀಪ್, ಜಾಯ್ ಮುಖರ್ಜಿ ಇವರೆಲ್ಲರಿಗೆ ಕೊಟ್ಟ ಕಂಠದಾನ ಆಯಾ ನಟರೇ ಹಾಡಿದ್ದಾರೇನೋ ಎಂಬಷ್ಟು ಸಮರ್ಪಕವಾಗಿವೆ. ಈ ನಟರ ವಿಶಿಷ್ಟ ನಟನಾ ಶೈಲಿ, ಮಾತಿನ ಧಾಟಿ, ಮ್ಯಾನರಿಸಂ ರೀತಿ ಎಲ್ಲವೂ ಒಡೆದು ಕಾಣುತ್ತವೆ. ಚಿತ್ರವನ್ನು ನೋಡದೆ ಕೂಡ ಇಂಥದೇ ನಟನ ಮೇಲೇ ರಫಿ ಈ ಗೀತೆಯನ್ನು ಹಾಡಿದ್ದಾರೆ ಎಂದು ಖಚಿತವಾಗಿ ಹೇಳಬಲ್ಲವರಿದ್ದಾರೆ. ಹಾಗೆಂದು ಬಾಜಿ ಕಟ್ಟಿ ಗೆದ್ದವರ ಸಂಖ್ಯೆಯೂ ಅಧಿಕ.

ಮಹಮದ್ ರಫಿ

ದೀವಾನೇಕಾ ನಾಮ್ ಸೆ ಪೂಚೋ,
ಏ ದಿಲ್ ಮುಷ್ಕಿಲ್ ಜೀನಾ ಯಹ್ಞಾ,
ಮೈ ಪ್ಯಾರ್ ಕಾ ರಾಹೀ ಹ್ಞೂಂ,
ದಿಲ್ ಕ ಭವ್ವರೆ ಕರೇ ಪುಕಾರ್,
ಬದನ್ ಪೆ ಸಿತಾರೆ ಲಪೇಟೆ ಹುವೇ,
ಕೋಯಿ ಸಾಗರ್ ದಿಲ್ ಕೊ ಬಹಲಾತಾ ಹೈ,
ಹಮ್ ಕಾಲೇ ಹೈ ತೊ ಕ್ಯಾಹುವಾ ದಿಲ್ ವಾಲೇ ಹೈ...

ಈ ಗೀತೆಗಳಿಗೆ ಯಾವ್ಯಾವ ನಟ ಅಭಿನಯಿಸಿರಬಹುದೆಂದು ಹೇಳಬಲ್ಲಿರಾ? ಜ್ಯೂಬಿಲಿ ನಟ ರಾಜೇಂದ್ರಕುಮಾರ್, ಬಿಸ್ವಜೀತ್, ಜಾಯ್ ಮುಖರ್ಜಿ, ಶಮ್ಮಿಕಪೂರ್ ಮುಂತಾದವರ ತಾರಾ ಮೌಲ್ಯ ಬೆಳೆದದ್ದೇ ರಫಿ ಗೀತೆಗಳಿಂದ ಎಂದರೆ ತಪ್ಪಿಲ್ಲ. ಈವನಿಂಗ್ ಇನ್ ಪ್ಯಾರಿಸ್, ಜಂಗ್ಲೀ, ಜಾನ್‌ವರ್, ತೀಸ್ರಿ ಮಂಜಿಲ್ ಮುಂತಾದ ಎಲ್ಲ ಚಿತ್ರಗಳಲ್ಲೂ ಶಮ್ಮಿಕಪೂರನ ಎಲ್ಲ ಕಪಿಚೇಷ್ಟೆ, ಧಾಡಸೀ ಪ್ರೇಮ ಗಳನ್ನೂ ರಫಿ ಸಮರ್ಥವಾಗಿ ಅನಾವರಣಗೊಳಿಸಿದ್ದಾರೆ. ತನ್ನ ಯಾವುದೇ ಸಾಂಗ್ ರೆಕಾರ್ಡಿಂಗ್ ಇರಲಿ. ಅಲ್ಲಿ ಶಮ್ಮಿಕಪೂರ್ ಹಾಜರ್. ಹಾಡಿನ ಭಾವವನ್ನು ತನ್ನ ವಿಶಿಷ್ಟ ಮ್ಯಾನರಿಸಮ್ಮನ್ನು ಶಮ್ಮಿ ತೋರಿಸಿದರೆ ರಫಿ ಅದಕ್ಕೆ ಜೀವ ತುಂಬುತ್ತಿದ್ದರು. ಅಲ್ಲದೆ ಶಮ್ಮಿ ರಫಿಯ ಮೆಚ್ಚಿನ ನಟ. ಆದ್ದರಿಂದಲೇ ಶಮ್ಮಿಗೆ ಹಾಡಿದ ಗೀತೆಗಳಲ್ಲಿ ವಿಶಿಷ್ಟ ಜೀವಂತಿಕೆ.

* * *

ರಫಿಯ ಜೀವನ ಕ್ರಮವೂ ಸರಳ. ಬೆಳಗಿನ ನಾಲ್ಕು ಗಂಟೆಗೆ ತಪ್ಪದ ಶಾಸ್ತ್ರೀಯ ಸಂಗೀತಾಭ್ಯಾಸ. ಕೊಂಚ ಹೊತ್ತು ಬ್ಯಾಡ್‌ಮಿಂಟನ್. ನಂತರ ಸಂಗೀತ ನಿರ್ದೇಶಕರೊಂದಿಗೆ ಹಾಡುಗಳ ರಿಹರ್ಸಲ್. ಬಿಟ್ಟರೆ ದಿನಕ್ಕೆ ಐದು ಬಾರಿ ನಮಾಜು ಮಾಡುವ ಧರ್ಮಶ್ರದ್ಧೆ.

ನಿಮ್ಮ ಬೆಂಬಲದ ಗಾಡ್‌ಫಾದರ್ ಯಾರು? ಅಂತ ಯಾರೋ ಕೇಳಿದಾಗ ರಫಿಯ ಉತ್ತರ: ಆ ದೇವರೇ ನನ್ನ ಗಾಡ್‌ಫಾದರ್? ಮದ್ಯಪಾನ, ಧೂಮಪಾನ ಇರಲಿ ಪಾನ್ ಬೀಡ ಕೂಡಾ ಹಾಕದ ಮನುಷ್ಯ ಚಿತ್ರರಂಗದ ರಂಗುರಂಗಿನ ಪಾರ್ಟಿಗಳಿಂದಲೂ ದೂರ. ತಾನಾಯಿತು. ತನ್ನ ಪಾಡಾಯಿತು. ಸಂಗೀತಕ್ಕಾಗಿ ಸಮರ್ಪಣೆ ಮಾಡಿದ ಬದುಕು.

ಅರವತ್ತರ ದಶಕದಲ್ಲಿ ದಾಪುಗಾಲಿಟ್ಟು ಮುನ್ನಡೆದ ರಫಿ ಎಪ್ಪತ್ತರ ಆರಂಭಕ್ಕೆ ಮಸುಕಾಗತೊಡಗಿದರು. ಅವರ ಗೀತೆಗಳ ಮಹಾ ಪ್ರವಾಹದಿಂದಾಗಿ ಜನ ಬದಲಾವಣೆ ಬಯಸಿದ್ದರು.

ರಫಿ, ಮುಖೇಶ್, ಮಹೇಂದ್ರರ ನವಿರು ಕಂಠದ ಏಕತಾನತೆಯಿಂದ ಭಿನ್ನವಾದ ಗಾಯಕರನ್ನು ಜನ ನಿರೀಕ್ಷಿಸಿದ್ದರು. ಯೌವ್ವನದ ಉತ್ಸಾಹ ಚಿಮ್ಮಿಸುವ ಕೀಟಲೆ ಕಂಠ ಕಿಶೋರ್‌ಕುಮಾರ್ ಮೂಲಕ ಹಾದು ಬಂತು. ಜ್ಯೂಯಲ್ ಥೀಫ್, ಆರಾಧನಾ, ಅಮರ್ ಪ್ರೇಮ್, ಗೀತೆಗಳ ಮೂಲಕ ರಫಿಯನ್ನು ಕಿಶೋರ್ ಸುಲಭವಾಗಿ ಹಿಂದೆ ತಳ್ಳಿದರು.

ಮೇಲಿದ್ದ ಚಕ್ರ ಕೆಳಬಂತು. ಆದರೂ ರಫಿಯ ಕಂಠ ತನ್ನ ಮಾಂತ್ರಿಕತೆ ಉಳಿಸಿಕೊಂಡಿತ್ತು. 1977ರಲ್ಲಿ ಕ್ಯಾ ಹುವಾ ತೇರಾ ವಾದಾ? ಗೀತೆಯ ಮೂಲಕ ರಫಿಯ ಪ್ರತಿಭೆ ಮತ್ತೊಮ್ಮೆ ಬೆಳಗಿತು. ರಾಷ್ಟ್ರೀಯ ಪುರಸ್ಕಾರವೂ ಸಿಕ್ಕಿತು.ಅಭಿಮಾನಿ ಜನ ರಫಿಯ ಉತ್ಕೃಷ್ಟ ಗೀತೆಗಳ ಮೆಲುಕು ಹಾಕುತ್ತಾ ಹೊಸ ಗೀತೆಗಳ ನಿರೀಕ್ಷೆಯಲ್ಲಿದ್ದಾಗ, ದಿಢೀರನೆ ರಫಿ ಅಸ್ತಂಗತರಾದ ಸುದ್ದಿ ಬಂತು.

* * *

(ಜುಲೈ 31, 1980). ರಫಿ ನಂತರ ಯಾರು? ಸಹಜ ಪ್ರಶ್ನೆ ಎಲ್ಲರಲ್ಲಿ? ಬಹು ರತ್ನಾನಿ ವಸುಂಧರಾ?. ಆ ಸ್ಥಾನ ಬಲು ಬೇಗ ತುಂಬುತ್ತದೆ ಎಂಬ ನಿರೀಕ್ಷೆ. ರಫಿಯ ನಕಲಾಗಿ ಅನೇಕರು ಹಾಡಿದರು. ಉತ್ಕೃಷ್ಟ ಗುಣಮಟ್ಟದ ರೆಕಾರ್ಡಿಂಗ್, ಡಿಜಿಟಲ್ ತಾಂತ್ರಿಕತೆ ಮೇಳೈಸಿದ ಸಾವಿರಾರು ಗೀತೆಗಳು ಬಂದವು. ಆದರೆ ರಫಿ ಗಾಯನದ ಆತ್ಮ ಅಲ್ಲಿರಲಿಲ್ಲ. ನಕಲು ಗಾಯಕರಿಂದಾಗಿಯೇ ರಫಿಯ ಗಾಯನ ಶ್ರೇಷ್ಠತೆ ನಿಚ್ಚಳವಾಗಿ ಮನವರಿಕೆಯಾಗುತ್ತದೆ. ಅನುಕರಣ ಗಾಯಕರ ಮಿತಿಗಳೂ ಗೋಚರಿಸುತ್ತವೆ. ರಫಿಯ ದನಿ ತಾರಕದಲ್ಲಿದ್ದರೂ ಕಂಠದಲ್ಲಿ ಇನ್ನಷ್ಟು ಚೈತನ್ಯ ತುಂಬಿರುವುದು ಗೊತ್ತಾಗುತ್ತದೆ. ಹಾಡಿನ ಭಾವಕ್ಕೆ ಒಂದಿಷ್ಟೂ ಕುಂದು ತಾರದಂತೆ ರಫಿ ಎಷ್ಟು ಎತ್ತರಕ್ಕೆ ಬೇಕಾದರೂ ರಫಿಯ ಕಂಠ ಸಾಗಬಲ್ಲದು. ದಣಿವರಿಯದ ರೀತಿಯಲ್ಲಿ ಮಂದ್ರಕ್ಕೂ ಇಳಿಯಬಲ್ಲದು. ಸ್ಖಾಲಿತ್ಯವೇ ಇಲ್ಲದ ರೀತಿಯಲ್ಲಿ ಉಲಿಯ ಬಲ್ಲದು. ಅನುಕರಣೆ ಎಂದಿಗೂ ಅಸಲಿಯ ಮಟ್ಟ ಮುಟ್ಟಲಾರದು ಎಂಬುದಕ್ಕೆ ಉದಾಹರಣೆ.

* * *

ಇತ್ತೀಚಿನ ಸಂದರ್ಶನದಲ್ಲಿ ಆಶಾ ಭೋಸ್ಲೆ ಕಿಶೋರ್‌ಗೆ ಹೋಲಿಸಿದರೆ ರಫಿ ವಿಧೇಯ ವಿದ್ಯಾರ್ಥಿಯಂತೆ. ನಿರ್ದೇಶಕರು ಏನು ಹೇಳಿರುತ್ತಾರೋ ಅದಕ್ಕಿಂತ ಮುಂದೆ ಹೋಗರು. ಆದರೆ ಕಿಶೋರ್ ಹಾಗಲ್ಲ. ತಮ್ಮ ವಿಚಿತ್ರ ಹಾವಭಾವಗಳಿಂದ ಎಲ್ಲೆ ದಾಟಿ ಹೊಸ ತಿರುವು ಕೊಡುತ್ತಾರೆ ಅಂದಿದ್ದರು.


ಇದು ನೆಗೆಟಿವ್ ಕಾಮೆಂಟ್ ಅಲ್ಲ. ರಫಿಯ ನಿಷ್ಠೆ ಮತ್ತು ವಿಧೇಯತೆಗೆ ಹಿಡಿದ ಕನ್ನಡಿ. ಒಂದು ಗೀತೆ ಹೇಳಿ ಕೇಳಿ ಸಂಗೀತಗಾರನ ಸೃಷ್ಟಿ. ಗೀತೆಯ ಸನ್ನಿವೇಶಕ್ಕೆ ತಕ್ಕಂತೆ ರಾಗ ಸಂಯೋಜನೆ ಮಾಡಿರುತ್ತಾನೆ. ಅದನ್ನು ಒಂದಿಂಚೂ ದಾಟದ ಶಿಸ್ತು ರಫಿಯದು. ಹಾಗಾಗಿ ಸಂಗೀತಗಾರನ ಸೃಷ್ಟಿ ಜೀವಂತಿಕೆ ತಳೆಯಲು ಸಾಧ್ಯವಾಗಿದೆ. ಲತಾ ಇರಲಿ, ಕಿಶೋರ್ ಇರಲಿ ಅವರೊಬ್ಬರದೇ ಗೀತೆಗಳನ್ನು ಸತತ ಎರಡು ಗಂಟೆವರೆಗೂ ಬೇಸರವಿಲ್ಲದೆ ಕೇಳಬಹುದು. ಆನಂತರ ಕೇಳಲು ಆಯಾಸವೆನಿಸುತ್ತದೆ. ಇತ್ತೀಚಿನ ಗಾಯಕರನ್ನು ಅಬ್ಬಬ್ಬಾ ಎಂದರೆ 30– 40 ನಿಮಿಷ ಸಹಿಸಿಕೊಳ್ಳ ಬಹುದು. ಆಮೇಲೆ ಸಾಕೋ ಸಾಕು ಎನ್ನಿಸುತ್ತದೆ

* * *

ಮೊಹಮ್ಮದ್ ರಫಿ ಗಾಯನ ಮೂರು ಗಂಟೆ, ನಾಲ್ಕು ಗಂಟೆ ಬೋರ್ ಅನ್ನಿಸುವುದಿಲ್ಲ. ಗೀತೆ ಚೆನ್ನಾಗಿಲ್ಲದಿರಬಹುದು ಅಥವಾ ಎಂದೂ ನಾವು ಕೇಳಿಲ್ಲದಿರಬಹುದು. ಆದರೆ ಸುಸ್ತಾಗುವುದಿಲ್ಲ. ಆ ಕಂಠದ ಮಾಧುರ್ಯವೇ ಹಾಗಿದೆ. ಗೀತೆಯ ಭಾವಕ್ಕೆ ಅನುರಣಿಸುವ ತುಂಬು ಕಂಠವಿದೆ. ಬೆಂಬಲವಾಗಿ ಗ್ರೇಟ್ ಕಂಪೋಸರ್ಸ್‌ಗಳ ಸಂಯೋಜನೆಗಳಿವೆ.

ಒಮ್ಮೆ ಗೋವಾದಿಂದ ಬೆಂಗಳೂರಿನ ತನಕ ರಫೀ ಹಾಡುಗಳನ್ನೇ ಕೇಳುತ್ತಾ, ಅವುಗಳ ಬಗ್ಗೆ ಮಾತಾಡುತ್ತಾ ಏಳೆಂಟು ಗಂಟೆ ಬಂದೆವು. 'ಸಾಕು ತೆಗೆಯಪ್ಪಾ. ಯಾರಾದ್ರೂ ಬೇರೆಯವರ ಹಾಡು ಹಾಕಿ'ಎಂದು ಒಬ್ಬರೂ ಹೇಳಲಿಲ್ಲ. ಹಾಗಿದ್ದವು ಆ ಸೆಲೆಕ್ಷನ್ಸ್!.

ಹಾಡಿನಲ್ಲಿ ರಫಿಯ ಕಂಠ ಎಷ್ಟೇ ತಾರಕಕ್ಕೇರಿರಲಿ. ಇನ್ನೂ ಎತ್ತರದಲ್ಲಿ ಹಾಡುವಷ್ಟು ತ್ರಾಣ ಗಂಟಲಲ್ಲಿದೆ ಅನ್ನಿಸುತ್ತದೆ. ತೇಲುತ್ತಿರುವ ಮಂಜುಗಡ್ಡೆ ಕಾಣುತ್ತಿರುವುದು ಅಲ್ಪ. ಅಗಾಧವಾದದ್ದು ಒಳಗೇ ಅಡಗಿರುವುದು ಗೋಚರಿಸುತ್ತದೆ. ರಫಿಯ ವಿಶಿಷ್ಟತೆಯನ್ನು ನೌಷಾದ್ ಕಂಡದ್ದು ಹೀಗೆ : ರಫಿಗಿಂತ ಉತ್ತಮ ಗಾಯಕರು ಬರಬಹುದು. ಆದರೆ ಮತ್ತೊಬ್ಬ ರಫಿ ಬರಲಾರ.



ಬಿಜೆಪಿಯವರ ಪ್ರತಿಭಟನೆಗೆ ನಾನು ಹೆದರಲ್ಲ



ಬೆಂಗಳೂರು, ಡಿ.23(ಕೆಎಂಶಿ)– ನಾನಿನ್ನು ಸತ್ತಿಲ್ಲ, ಬದುಕಿದ್ದೇನೆ. ಇನ್ನೂ ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಸ್ಥಾನದಲ್ಲಿದ್ದೇನೆ. ಬಿಜೆಪಿಯವರ ಪ್ರತಿಭಟನೆಗೆ ಹೆದರುವುದಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಹಾತ್ಮ ಗಾಂಧಿ ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾಗಿ, ಸ್ವಾತಂತ್ರ್ಯ ಹೋರಾಟದ ನೇತೃತ್ವ ವಹಿಸಿ, ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟಿದ್ದಾರೆ. ಆ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆ, ಸಂವಿಧಾನ, ರಾಷ್ಟ್ರಧ್ವಜ, ರಾಷ್ಟ್ರಗೀತೆ ನೀಡಿದ್ದಾರೆ. ಇದೆಲ್ಲವೂ ಅವರ ನೇತೃತ್ವದ ಹೋರಾಟದ ಫಲ ಎಂದರು.

ಇದೆಲ್ಲವನ್ನು ಉಳಿಸಿಕೊಂಡು ಸರಿಯಾದ ರೀತಿಯಲ್ಲಿ ಜಾರಿಯಲ್ಲಿಡಬೇಕು, ಗಾಂಧಿ ಅವರನ್ನು ದಿನನಿತ್ಯ ನೆನೆಯಬೇಕು ಎಂಬ ಕಾರಣಕ್ಕೆ ಅವರ ಭಾವಚಿತ್ರವನ್ನು ನೋಟುಗಳ ಮೇಲೆ ಮುದ್ರಣ ಮಾಡಲಾಗಿದೆ, ಮಹಾತ್ಮ ಎಂಬ ಹೆಸರು ಪಡೆದ ನಾಯಕನ ಸ್ಮರಣೆ ಮಾಡುವ ಆಚರಣೆ ವೇಳೆ ಬಿಜೆಪಿ ಪ್ರತಿಭಟನೆ ಮಾಡುತ್ತೇವೆಂದರೆ ನಾವು ಹೆದರುವುದಿಲ್ಲ. ಸಿ.ಟಿ.ರವಿ ಅವರನ್ನು ಫೇಕ್ ಎನ್‌ಕೌಂಟರ್ ಮಾಡುವ ಹುನ್ನಾರ ನಡೆದಿತ್ತು ಎಂಬ ಪ್ರಹ್ಲಾದ್ ಜೋಷಿ ಹೇಳಿಕೆಗೆ ಉತ್ತರ ಕೊಡುವುದಿಲ್ಲ, ಅದಕ್ಕೆ ಗೃಹ ಸಚಿವರು, ಪೊಲೀಸರು ಉತ್ತರ ನೀಡುತ್ತಾರೆ. ಸಿ.ಟಿ.ರವಿ ಅವರನ್ನು ಸುತ್ತಾಡಿಸಿದ್ದರ ಬಗ್ಗೆ ಮಾತನಾಡುವ ಬಿಜೆಪಿಯವರನ್ನು, ಅವರು ಮಹಿಳೆಯರ ಬಗ್ಗೆ ಆಡಿರುವ ಮಾತಿನ ಕುರಿತು ಪ್ರಶ್ನೆ ಮಾಡಬೇಕು. ಈ ವಿಚಾರ ನಾವು ಈಗ ಮಾತನಾಡುವುದಿಲ್ಲ, ಡಿ.27ರಂದು ಕಾರ್ಯಕ್ರಮ ಮುಗಿಯಲಿ ನಂತರ ಮಾತನಾಡುತ್ತೇವೆ ಎಂದರು.

ಬಲಿಷ್ಠರಾಗಿದ್ದಷ್ಟು ಹೆಚ್ಚು ಶತ್ರುಗಳು, ಕಡಿಮೆ ಶಕ್ತಿಶಾಲಿಯಾದರೆ ಕಡಿಮೆ ಶತ್ರುಗಳು, ದುರ್ಬಲರಾಗಿದ್ದರೆ ಯಾವುದೇ ಶತ್ರುಗಳಿರುವುದಿಲ್ಲ. ಹೆಚ್ಚು ಕೆಲಸ ಮಾಡಿದಷ್ಟು ಹೆಚ್ಚು ತಪ್ಪುಗಳು, ಕಡಿಮೆ ಕೆಲಸ ಮಾಡಿದಷ್ಟು ಕಡಿಮೆ ತಪ್ಪುಗಳು, ಕೆಲಸಗಳೇ ಮಾಡದಿದ್ದರೆ ತಪ್ಪುಗಳೇ ಇರುವುದಿಲ್ಲ. ಸರ್ಕಾರಕ್ಕೆ ನಾಡಿನ ಭವಿಷ್ಯದ ಬಗ್ಗೆ ಚಿಂತೆ ಇಲ್ಲ ಎಂಬ ಎಚ್.ಡಿ.ಕುಮಾರಸ್ವಾಮಿ ಟೀಕೆ ಬಗ್ಗೆ ಚನ್ನಪಟ್ಟಣದಲ್ಲಿ ಪ್ರತ್ಯೇಕವಾಗಿ ಮಾತನಾಡುತ್ತೇನೆ ಎಂದು ಡಿ.ಕೆ.ಶಿವಕುಮಾರ್ ಹೇಳಿದರು.

ಸದನದ ಘಟನೆಗಳಿಗೆ ಪೊಲೀಸರು ಹಸ್ತಕ್ಷೇಪ ಮಾಡುವಂತಿಲ್ಲ



ಬಸವರಾಜ ಹೊರಟ್ಟಿ

ಬೆಂಗಳೂರು, ಡಿ.23– ಸದನದ ಒಳಗೆ ನಡೆಯುವ ಘಟನೆಗಳಿಗೆ ಪೊಲೀಸರು ಹಸ್ತಕ್ಷೇಪ ಮಾಡುವಂತಿಲ್ಲ ಎಂದು ಸಭಾಪತಿ ಬಸವರಾಜ ಹೊರಟ್ಟಿ ಅವರು ಪೊಲೀಸರ ವಿರುದ್ಧ ಫುಲ್ ಗರಂ ಆಗಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಸಿ.ಟಿ ರವಿ ಮತ್ತು ಲಕ್ಷ್ಮಿ ಹೆಬ್ಬಾಳ್ಕರ್ ಕೇಸ್ ಮುಗಿದ ಅಧ್ಯಾಯ. ಡಿ.19ರಂದೇ ಸದನದಲ್ಲಿ ರೂಲಿಂಗ್ ಕೊಟ್ಟಿದ್ದೇನೆ. ಸದನ ಅನಿರ್ದಿಷ್ಟಾವಧಿವರೆಗೆ ಮುಂದೂಡಿಕೆ ಆಗಿದೆ. ಸದನದ ಒಳಗೆ ನಡೆಯುವ ಘಟನೆಗಳಿಗೆ ಪೊಲೀಸರು ಹಸ್ತಕ್ಷೇಪ ಮಾಡುವಂತಿಲ್ಲ ಎಂದು ತಿಳಿಸಿದ್ದಾರೆ.

ಮಹಜರು ಮಾಡುತ್ತೇವೆ ಎಂದು ಪೊಲೀಸರು ಕೇಳಿದರು. ಅದಕ್ಕೆ ನಾವು ಅನುಮತಿ ಕೊಟ್ಟಿಲ್ಲ. ಬಾಗಿಲು ಹಾಕಿದ್ದೇವೆ. ಸದನದಲ್ಲಿ ಮಹಜರು ಮಾಡಲು ಬರಲ್ಲ. ಯಾವುದೇ ಕಾರಣಕ್ಕೂ ಸದನದ ಒಳಗೆ ಬರಬಾರದು ಎಂದು ಎಚ್ಚರಿಕೆ ನೀಡಿದ್ದೇನೆ. ನನ್ನ ಆದೇಶವನ್ನು ಧಿಕ್ಕರಿಸಿದರೆ ಪೊಲೀಸರೇ ಜೈಲಿಗೆ ಹೋಗಬೇಕಾಗುತ್ತೆ ಎಂದು ಖಡಕ್ ಎಚ್ಚರಿಕೆ ನೀಡಿದ್ದಾರೆ. ಹೊರಗಿನ ವಿಚಾರಕ್ಕೆ ದೂರು ಕೊಟ್ಟಿದ್ದರೆ ಅದರ ಬಗ್ಗೆ ನಾವು ಹಸ್ತಕ್ಷೇಪ ಮಾಡಲ್ಲ. ಆದರೆ ಆ ದಿನ ರಾತ್ರಿ 1 ಗಂಟೆ ತನಕವೂ ಸಿ.ಟಿ.ರವಿ ಜೊತೆ ಸಂಪರ್ಕದಲ್ಲಿ ಇದ್ದೆ. ಪೊಲೀಸ್ ಆಯುಕ್ತರ ಜೊತೆಗೆ ಮಾತನಾಡಿ, ಎಚ್ಚರಿಕೆ ಕೊಟ್ಟಿದ್ದೆ. ಏನಾದರೂ ಆದರೆ ಸುಮ್ಮನೆ ಬಿಡಲ್ಲ ಎಂದು ಹೇಳಿದ್ದೆ. ಬೆಳಗ್ಗೆ ತನಕವೂ ನಾನು ಟ್ರ್ಯಾಕ್ ಮಾಡಿದ್ದೆ, ಬೆಳಗ್ಗೆ 5 ಗಂಟೆಗೆ ಎಸ್ಪಿಗೂ ಕೂಡ ಮಾತಾಡಿದ್ದೆ. ಅಲ್ಲದೇ ಈಗಾಗಲೇ ಸಿ.ಟಿ.ರವಿ ಮೇಲೆ ಹಲ್ಲೆಗೆ ಯತ್ನಿಸಿದವರ ವಿರುದ್ಧ ಕ್ರಮ ಕೈಗೊಳ್ಳಲು ಪೊಲೀಸ್ ಆಯುಕ್ತರಿಗೆ ಸೂಚಿಸಿದ್ದೇನೆ ಎಂದು ಹೊರಟ್ಟಿ ವಿವರಿಸಿದ್ದಾರೆ. ಲಕ್ಷ್ಮಿ ಹೆಬ್ಬಾಳ್ಕರ್ ವಿರುದ್ಧ ಪರಿಷತ್‌ನಲ್ಲಿ ನಿಂದನೆ ಆರೋಪ ಪ್ರಕರಣದಲ್ಲಿ ಮಹಿಳಾ ಆಯೋಗ ಎಂಟ್ರಿ ವಿಚಾರಕ್ಕೆ ಪ್ರತಿಕ್ರಿಯಿಸಿ, ಮಹಿಳಾ ಆಯೋಗಕ್ಕೆ ಸಭಾಪತಿಗೆ ಕೇಳುವ ಅಧಿಕಾರ ಇಲ್ಲ. ಅವರು ಪತ್ರ ಬರೆಯಲಿ, ಆದರೆ ಅದಕ್ಕೆ ನಾನು ಉತ್ತರ ಕೊಡ ಬೇಕಾಗಿಯೂ ಇಲ್ಲ. ಬೇಕಿದ್ದರೆ ಬೇರೆಯವರಿಗೆ ನೋಟೀಸ್ ಕೊಡಲಿ ಎಂದು ತಿಳಿಸಿದ್ದಾರೆ.

ಇನ್ನೂ ಪರಿಷತ್‌ನಲ್ಲಿ ಲಕ್ಷ್ಮಿ ಹೆಬ್ಬಾಳ್ಕರ್ ಅವರು ಸಿ.ಟಿ ರವಿ ಬಳಸಿದ ಪದ ಸಂಬಂಧ ಸೋಷಿಯಲ್ ಮೀಡಿಯಾದಲ್ಲಿ ವಿಡಿಯೋ ವೈರಲ್ ಆಗಿರುವ ಕುರಿತು ಮಾತನಾಡಿ, ನಮ್ಮಲ್ಲಿ ವಿಡಿಯೋ ರೆಕಾರ್ಡ್ ಆಗಿಲ್ಲ. ಅದೆಲ್ಲ ಫೇಕ್ ವಿಡಿಯೋ ಇರಬೇಕು, ಇದ್ದರೆ ದೂರು ಕೊಡಲಿ ಎಫ್‌ಎಸ್‌ಎಲ್‌ಗೆ ಕೊಡ್ತೀವಿ, ಆ ಬಳಿಕ ಏನ್ ಮಾಡಬೇಕು ತೀರ್ಮಾನ ಮಾಡ್ತೀನಿ ಎಂದಿದ್ದಾರೆ.

ಮೈಸೂರು ಕೇಂದ್ರ ಕಾರಾಗೃಹದಲ್ಲಿ ಸಂಭ್ರಮದ ಕ್ರಿಸ್‌ಮಸ್ ಆಚರಣೆ





ಮೈಸೂರು ಕೇಂದ್ರ ಕಾರಾಗೃಹದಲ್ಲಿ ಸಂಭ್ರಮದಿಂದ ಕ್ರಿಸ್‌ಮಸ್ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಅಪೋಸ್ಟೋಲಿಕ್ ಅಡ್ಮಿನಿಸ್ಟ್ರೇಟರ್ ಆಫ್ ಮೈಸೂರು ಡಯೋಸಿಸ್ ಆರ್ಚ್‌ಬಿಷಪ್ ಎಮಿರಿಟಸ್ ಮೋಸ್ಟ್ ರೆ. ಡಾ.ಬರ್ನಾಡ್ ಮೊರಾಸ್, ಮೈಸೂರು ಕೇಂದ್ರ ಕಾರಾಗೃಹದ ಚೀಫ್ ಸೂಪರಿಂಟೆಂಡೆಂಟ್ ಸಿ.ಎಸ್.ರಮೇಶ್ ಇನ್ನಿತರರಿದ್ದರು.

ಮೈಸೂರು,ಡಿ.23–ಮೈಸೂರು ಕೇಂದ್ರ ಕಾರಾಗೃಹದಲ್ಲಿ ಡಿ.21ರಂದು ಸಂಭ್ರಮದಿಂದ ಕ್ರಿಸ್‌ಮಸ್ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಅಪೋಸ್ಟೋಲಿಕ್ ಅಡ್ಮಿನಿಸ್ಟ್ರೇಟರ್ ಆಫ್ ಮೈಸೂರು ಡಯೋಸಿಸ್ ಆರ್ಚ್‌ಬಿಷಪ್ ಎಮಿರಿಟಸ್ ಮೋಸ್ಟ್ ರೆ. ಡಾ. ಬರ್ನಾಡ್ ಮೊರಾಸ್ ಭಾಗವಹಿಸಿದ್ದರು. ಮೈಸೂರು ಕೇಂದ್ರ ಕಾರಾಗೃಹದ ಚೀಫ್ ಸೂಪರಿಂಟೆಂಡೆಂಟ್ ಸಿ.ಎಸ್.ರಮೇಶ್ ಅಧ್ಯಕ್ಷತೆ ವಹಿಸಿದ್ದರು.

ಆರ್ಚ್ ಬಿಷಪ್ ತಮ್ಮ ಸಂದೇಶದಲ್ಲಿ ಕಾರಾಗೃಹದ ಕೈದಿಗಳನ್ನು ಉದ್ದೇಶಿಸಿ ಮಾತನಾಡಿ, ಜೈಲು ಕೈದಿಗಳು ಬಿಡುಗಡೆಗೆ ಮೊದಲು ತಮ್ಮನ್ನು ತಾವು ಸುಧಾರಿಸಿಕೊಳ್ಳಬೇಕು ಎಂದರು.

ಮುಖ್ಯ ಸೂಪರಿಂಟೆಂಡೆಂಟ್ ಸಿ.ಎಸ್. ರಮೇಶ್, ಕೇಂದ್ರ ಕಾರಾಗೃಹ ಸಚಿವಾಲಯ (ಪಿಎಂಐ), ಮೈಸೂರು ಘಟಕದಿಂದ ನಡೆದ ಡಿ–ಅಡಿಕ್ಷನ್ ಕಾರ್ಯಕ್ರಮದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿ, ಈ ಕಾರ್ಯಕ್ರಮದಿಂದ ಹಲವಾರು ಜೈಲು ಕೈದಿಗಳು ಧೂಮಪಾನದಿಂದ ಮುಕ್ತಿ ಹೊಂದಿದರು ಎಂದರು. ಅಲ್ಲದೆ ಕೈದಿಗಳು ತಮ್ಮನ್ನು ತಾವು ಸುಧಾರಿಸಿಕೊಂಡು ಶೀಘ್ರ ಬಿಡುಗಡೆಯಾಗುವಂತೆ ಸಲಹೆ ನೀಡಿದರು.

ವಿದ್ಯಾ ಜ್ಯೋತಿ ಶಾಲೆಯ ವಿದ್ಯಾರ್ಥಿಗಳಾದ ಸೋಮಸ್ಕಾನ್ ಸಿಸ್ಟರ್ಸ್ ಮತ್ತು ಕಮಚಿನ್ ಬ್ರದರ್ಸ್ ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಟ್ಟರು. ಕ್ರಿಸ್‌ಮಸ್ ಆಚರಣೆ ಅಂಗವಾಗಿ ಇಬ್ಬರು ಕೈದಿಗಳು ಆರ್ಚ್ ಬಿಷಪ್ ಮತ್ತು ಚೀಫ್ ಸೂಪರಿಂಟೆಂಡೆಂಟ್ ಅವರೊಂದಿಗೆ ಕೇಕ್ ಕತ್ತರಿಸಿದರು. ಕೇಂದ್ರ ಕಾರಾಗೃಹದ ಅಧಿಕಾರಿಗಳು ಮತ್ತು ಎಲ್ಲಾ ಕೈದಿಗಳಿಗೆ ಕೇಕ್ ವಿತರಿಸಲಾಯಿತು. ಕೇಂದ್ರ ಕಾರಾ ಗೃಹ ಸಚಿವಾಲಯದಿಂದ ನಡೆಸಿದ ಹಾಡುಗಾರಿಕೆ ಸ್ಪರ್ಧೆಯಲ್ಲಿ ವಿಜೇ ತರಿಗೆ ಬಹುಮಾನ ನೀಡಲಾಯಿತು. ಸಿಸ್ಟರ್ ಲಿಲ್ಲಿ, ಎಸ್‌ಜೆಟಿ ಸ್ವಾಗತಿಸಿ, ಬ್ರದರ್ ಡಾಲ್ಫಿ ವಂದಿಸಿದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಸರ್ಕಾರವೇ ರೈತರಲ್ಲಿ ಜಾತಿ, ರಾಜಕೀಯ ವಿಷ ಬೀಜ ಬಿತ್ತುತ್ತಿದೆ

ಕಬ್ಬು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ಆಕ್ರೋಶ



ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಘಟಿಕೋತ್ಸವ ಸಭಾಂಗಣದಲ್ಲಿ ಸೋಮವಾರ ನಡೆದ ವಿಶ್ವ ರೈತ ದಿನ–ರೈತರ ಹಬ್ಬ ರಾಜ್ಯ ಮಟ್ಟದ ರೈತ ಸಮಾವೇಶವನ್ನು ತಮಿಳುನಾಡು ರಾಜ್ಯ ರೈತ ಮುಖಂಡ ಪಿ.ಆರ್.ಪಾಂಡ್ಯನ್ ಉದ್ಘಾಟಿಸಿದರು.

ಮೈಸೂರು,ಡಿ.23(ಬಿಎಲ್‌ಯು)– ಕೃಷಿ ಕ್ಷೇತ್ರ ಅಭಿವೃದ್ಧಿ ಮಾಡುವ ನಿಟ್ಟಿನಲ್ಲಿ ನೈಜ ಕಾರ್ಯ ಮಾಡದ ಸರ್ಕಾರಗಳು ರೈತರಲ್ಲಿ ಜಾತಿ ಮತ್ತು ರಾಜಕೀಯ ಪಕ್ಷದ ವಿಷಬೀಜ ಬಿತ್ತಿ ರಾಜಕಾರಣ ಮಾಡುತ್ತಿವೆ ಎಂದು ರಾಜ್ಯ ಕಬ್ಬು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ಆರೋಪಿಸಿದರು.

ಮೈಸೂರಿನ ಕರ್ನಾಟಕ ಮುಕ್ತ ವಿಶ್ವವಿದ್ಯಾನಿಲಯದ ಘಟಿಕೋತ್ಸವ ಸಭಾಂಗಣದಲ್ಲಿ ಇಂದು ರಾಜ್ಯ ರೈತ ಸಂಘಟನೆಗಳ ಒಕ್ಕೂಟ, ರಾಜ್ಯ ರೈತ ಸಂಘ ಹಸಿರು ಸೇನೆ, ರಾಜ್ಯ ಕಬ್ಬು ಬೆಳೆಗಾರರ ಸಂಘ ಸಂಯುಕ್ತವಾಗಿ ಆಯೋಜಿಸಿದ್ದ ವಿಶ್ವ ರೈತ ದಿನ–ರೈತರ ಹಬ್ಬ ರಾಜ್ಯ ಮಟ್ಟದ ರೈತ ಸಮಾವೇಶದಲ್ಲಿ ಮಾತನಾಡಿದ ಅವರು, ಕೃಷಿ ಕ್ಷೇತ್ರದ ಕಡೆಗಣನೆಯಿಂದ ರೈತರ ಜೀವನಕ್ಕೆ ಭದ್ರತೆ ಇಲ್ಲದಂತಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಹಾಲಿನ ಪ್ರೋತ್ಸಾಹ ಧನ ಸಕಾಲಕ್ಕೆ ಪಾವತಿ ಆಗುತ್ತಿಲ್ಲ, ಭತ್ತಕ್ಕೆ ಬೆಂಬಲ ಬೆಲೆ ಘೋಷಣೆಯಾಗಿಲ್ಲ, ಕಿಸಾನ್ ಸನ್ಮಾನ್ ಯೋಜನೆಗೆ ರಾಜ್ಯ ಸರ್ಕಾರದ ಪಾಲಿನ ವಂತಿಕೆ ಪಾವತಿ ಮಾಡಿಲ್ಲ, ತೀವ್ರ ರೀತಿಯ ಹೋರಾಟ ಮಾಡುತ್ತಿದ್ದರೂ ಸ್ವಾಮಿನಾಥನ್ ವರದಿ ಜಾರಿ ಮಾಡಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸರ್ಕಾರ ಎಲ್ಲಾ ಮಹನೀಯರ ಜಯಂತಿ ಆಚರಣೆ ಮಾಡುತ್ತಿದೆ. ಆದರೆ ಅನ್ನ ಕೊಡುವ ಅನ್ನದಾತರನ್ನು ನೆನೆಯುವ ಕಾರ್ಯ ಮಾತ್ರ ಮಾಡುತ್ತಿಲ್ಲ ಎಂದು ಹೇಳಿದರು.

ಈಗ ಕಬ್ಬಿನ ಉತ್ಪಾದನೆ ಕಡಿಮೆಯಾಗಿದೆ. ಈ ಕಾರಣದಿಂದ ಬೆಳಗಾವಿ ಭಾಗದಲ್ಲಿ ಕಬ್ಬು ಕಟಾವು ಮತ್ತು ಸಾಗಾಣಿಕೆ ವೆಚ್ಚ ಬಿಟ್ಟು ಟನ್ ಕಬ್ಬಿಗೆ 3,500 ರೂಪಾಯಿ ನೀಡಲು ಸಕ್ಕರೆ ಕಾರ್ಖಾನೆಗಳು ಮುಂದಾಗಿವೆ ಎಂದು ಕುರುಬೂರು ಶಾಂತಕುಮಾರ್ ಮಾಹಿತಿ ನೀಡಿದರು.

ಈ ವೇಳೆ ಮಾತನಾಡಿದ ಅಂತರ ರಾಷ್ಟ್ರೀಯ ಪರಿಸರ ವಿಜ್ಞಾನಿ ಚಂದ್ರಶೇಖರ್ ಬಿರಾದಾರ್, ಕಬ್ಬು ಬೆಳೆಯಲು ಒಂದು ಎಕರೆಗೆ 80 ಸಾವಿರ ರೂಪಾಯಿ ವೆಚ್ಚವಾಗುತ್ತದೆ. ಆದರೆ ಅದರಿಂದ 75 ಸಾವಿರ ರೂಪಾಯಿ ಆದಾಯ ಬರುತ್ತಿದೆ. ಇದರಿಂದ ರೈತರಿಗೆ 5 ಸಾವಿರ ರೂಪಾಯಿ ನಷ್ಟವಾಗುತ್ತಿದೆ. ರೈತರಿಗೆ ಕಬ್ಬು ಬೆಳೆಯಿಂದ ಆದಾಯವಿರಲಿ, ಅಸಲು ಹಣ ಕೂಡ ಬರುತ್ತಿಲ್ಲ. ಆದ ಕಾರಣ ರೈತರ ಬೆಳೆಗಳಿಗೆ ಸರ್ಕಾರ ವೈಜ್ಞಾನಿಕ ಬೆಲೆ ನಿಗದಿ ಮಾಡಬೇಕು ಎಂದು ಆಗ್ರಹಿಸಿದರು. ಕಾ.ರಾಮೇಶ್ವರಪ್ಪ ನೇತೃತ್ವ ತಂಡದ ಜನಪದ ಸಂಗೀತ ವೈಭವ ಸಮಾವೇಶಕ್ಕೆ ಮೆರುಗು ನೀಡಿತು. ಸಮಾವೇಶಕ್ಕೂ ಮುನ್ನ ನಗರದ ಗನ್‌ಹೌಸ್ ವೃತ್ತದಿಂದ ಹೊರಟ ಮೆರವಣಿಗೆ ಕಾರ್ಯಕ್ರಮ ನಡೆಯುತ್ತಿದ್ದ ಕರ್ನಾಟಕ ಮುಕ್ತ ವಿಶ್ವ ವಿದ್ಯಾನಿಲಯ ತಲುಪಿತು. ಪ್ರಗತಿಪರ ರೈತರಾದ ಮೈಸೂರಿನ ಉಮೇಶ್, ಚಾಮರಾಜನಗರದ ಚನ್ನನಂಜಪ್ಪ, ದಾವಣಗೆರೆಯ ಟಿ.ಡಿ.ರುದ್ರೇಶ್, ಯಾದಗಿರಿಯ ದೇವೇಂದ್ರಪ್ಪ, ಧಾರವಾಡದ ಬಸವಣ್ಣೆಪ್ಪ, ಬೆಳಗಾವಿಯ ಮಲ್ಲಪ್ಪ, ಶಿವಮ್ಮ ಅವರನ್ನು ಈ ವೇಳೆ ಸನ್ಮಾನಿಸಲಾಯಿತು. ವೇದಿಕೆಯಲ್ಲಿ ಆಪ್ ಪಕ್ಷದ ರಾಜ್ಯಾಧ್ಯಕ್ಷ ಮುಖ್ಯಮಂತ್ರಿ ಚಂದ್ರು, ಕೇರಳ ರಾಜ್ಯದ ರೈತ ಮುಖಂಡ ಕೆ.ವಿ.ಬಿಜು, ತೆಲಂಗಾಣ ರಾಜ್ಯದ ರೈತ ಮುಖಂಡ ವೆಂಕಟೇಶ್ವರ, ತಮಿಳುನಾಡು ರಾಜ್ಯದ ರೈತ ಮುಖಂಡ ಪಿ.ಆರ್.ಪಾಂಡ್ಯನ್ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಒಗ್ಗಟ್ಟು ಪ್ರದರ್ಶಿಸಿದರೆ ಮಾತ್ರ ರೈತ ಸಮುದಾಯದ ಅಭಿವೃದ್ಧಿ ಸಾಧ್ಯ

ವಿಶ್ವ ರೈತ ದಿನಾಚರಣೆಯಲ್ಲಿ ಸಂಸದ ಯದುವೀರ್ ಒಡೆಯರ್ ಅಭಿಮತ





ಕರ್ನಾಟಕ ರಾಜ್ಯ ರೈತ ಸಂಘಟನೆಗಳ ಮಹಾ ಒಕ್ಕೂಟ ಹಾಗೂ ರಾಜ್ಯ ರೈತ ಸಂಘದ ವತಿಯಿಂದ ಮೈಸೂರಿನ ಪುರಭವನದ ಆವರಣದಲ್ಲಿ ಏರ್ಪಡಿಸಿದ್ದ ವಿಶ್ವ ರೈತ ದಿನಾಚರಣೆ ಕಾರ್ಯಕ್ರಮಕ್ಕೆ ಸಂಸದ ಯದುವೀರ್ ಒಡೆಯರ್ ಚಾಲನೆ ನೀಡಿದರು. ಬಲಚಿತ್ರದಲ್ಲಿ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದ ರೈತ ಸಮುದಾಯವನ್ನು ಕಾಣಬಹುದು.

ಮೈಸೂರು, ಡಿ.23(ಆರ್‌ಕೆ)–ಒಗ್ಗಟ್ಟು ಪ್ರದರ್ಶಿಸಿದರೆ ಮಾತ್ರ ರೈತ ಸಮುದಾಯ, ಜೊತೆಗೆ ದೇಶದ ಅಭಿವೃದ್ಧಿ ಸಾಧ್ಯ ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅಭಿಪ್ರಾಯಪಟ್ಟಿದ್ದಾರೆ.

ಕರ್ನಾಟಕ ರಾಜ್ಯ ರೈತ ಸಂಘಟನೆಗಳ ಮಹಾ ಒಕ್ಕೂಟ ಹಾಗೂ ಕರ್ನಾಟಕ ರಾಜ್ಯ ರೈತ ಸಂಘದ ವತಿಯಿಂದ ಮೈಸೂರಿನ ಪುರಭವನದ ಆವರಣದಲ್ಲಿ ಏರ್ಪಡಿಸಿದ್ದ ವಿಶ್ವ ರೈತ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ರೈತರು ತಮ್ಮ ವೈಯಕ್ತಿಕ ಭಿನ್ನಾಭಿಪ್ರಾಯ ಬದಿಗೊತ್ತಿ ಒಂದಾಗಬೇಕೆಂದು ಸಲಹೆ ನೀಡಿದರು.

ಪ್ರಧಾನಿ ನರೇಂದ್ರ ಮೋದಿ ರೈತರಿಗಾಗಿ ಹಲವು ಯೋಜನೆಗಳನ್ನು ಜಾರಿಗೆ ತಂದಿದ್ದು, ವಿಕಸಿತ ಭಾರತ ಪರಿಕಲ್ಪನೆಯಡಿ ರೈತರ ಸಬಲೀಕರಣದ ಕನಸು ಹೊಂದಿರುವ ಪ್ರಧಾನಮಂತ್ರಿಗಳು ಕಿಸಾನ್ ಸಮ್ಮಾನ್ ಯೋಜನೆ ಮೂಲಕ ರೈತರಿಗೆ ಗುಣಮಟ್ಟದ ಬಿತ್ತನೆ ಬೀಜ, ಗೊಬ್ಬರ, ಮಣ್ಣು ಪರೀಕ್ಷೆ, ಹನಿ ನೀರಾವರಿ ಯೋಜನೆಗಳನ್ನು ನೀಡಿದ್ದಲ್ಲದೇ, ದೇಶಾದ್ಯಂತ ಹಲವು ಕೃಷಿ ಅಧ್ಯಯನ ಸಂಸ್ಥೆಗಳನ್ನು ಸ್ಥಾಪಿಸಿದ್ದಾರೆ ಎಂದರು.

ವಿಪರೀತ ರಸಾಯನಿಕ ಗೊಬ್ಬರ ಬಳಸುವುದರಿಂದ ನಶಿಸುತ್ತಿರುವ ಮಣ್ಣಿನ ಫಲವತ್ತತೆ ಹೆಚ್ಚಿಸಲು ಬೇವಿನ ಹಿಂಡಿಯನ್ನು ಗೊಬ್ಬರವಾಗಿ ಬಳಸಬೇಕು ಎಂದ ಅವರು, ರೈತರು ಸುಖವಾಗಿದ್ದರೆ ಮಾತ್ರ ದೇಶ ಸಮೃದ್ಧಿಯಾಗಿರುತ್ತದೆ. ಈ ನಿಟ್ಟಿನಲ್ಲಿ ರೈತ ಬಣದ ಅಧ್ಯಕ್ಷ ಇಂಗಲಗುಪ್ಪೆ ಕೃಷ್ಣೇಗೌಡರು ರೈತರನ್ನು ಸಂಘಟಿಸಿ ಅವರ ಶ್ರೇಯೋಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ. ಇಂತಹ ಸಂಘಟನಾತ್ಮಕ ನಾಯಕತ್ವ ಗುಣವುಳ್ಳವರು ರೈತರಿಗೆ ಅಗತ್ಯವಿದೆ ಎಂದರು.

ಕರ್ನಾಟಕ ರಾಜ್ಯ ರೈತ ಸಂಘಟನೆಗಳ ಮಹಾ ಒಕ್ಕೂಟದ ಅಧ್ಯಕ್ಷ ಭೀರಪ್ಪ ದೇಶನೂರು, ಕರ್ನಾಟಕ ರಾಜ್ಯ ರೈತ ಸಂಘ (ರೈತ ಬಣ)ದ ಅಧ್ಯಕ್ಷ ಇಂಗಲಗುಪ್ಪೆ ಕೃಷ್ಣೇಗೌಡ, ಮುಖಂಡರಾದ ಗಣೇಶ ಇಳಿಗೆರ, ಎನ್.ಎಂ.ಸಿದ್ದೇಶ ಉತ್ತಂಗಿ, ಮಲ್ಲಿಕ ಆರ್ವತಿ, ರವಿಕುಮಾರ, ಬಸವನಗೌಡ, ವಿನೂತನಗೌಡ, ಈಶ್ವರಗೌಡ, ನಾಗರಾಜ್ ಹೂಗಾರ, ಮಂಜು ಪಾಳ್ಯ, ಮೆಹಬೂಬ್ ಸಾಬ್, ಜವರನಾಯಕ, ಮಂಜುನಾಥ, ನಾಗರತ್ನ, ಮಂಗಳ, ಜಯಶೀಲ, ರೇಖಾ, ನಾಗಮಣಿ, ಜ್ಯೋತಿ, ಶೃತಿ ಸೇರಿದಂತೆ ಹಲವರು ರೈತ ದಿನಾಚರಣೆಯಲ್ಲಿ ಪಾಲ್ಗೊಂಡಿದ್ದರು.

ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ರೈತರು, ರೈತ ಮಹಿಳೆಯರು ಹಸಿರು ಶಾಲುಗಳನ್ನು ಹೊದ್ದುಕೊಂಡು ವಿಶ್ವ ರೈತ ದಿನಾಚರಣೆಯಲ್ಲಿ ಪಾಲ್ಗೊಂಡು ಸಂಭ್ರಮಿಸಿದರು. ಇದೇ ವೇಳೆ ನಾಲ್ವಡಿ ಕೃಷ್ಣರಾಜ ಒಡೆಯರ್ ನೆನಪಿನ 'ಮರೆಯೋದುಂಟೆ ಮೈಸೂರು ದೊರೆಯ–ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯ' ಹಾಡು ಮೊಳಗಿತು.

ಬಿಜೆಪಿ, ಜೆಡಿಎಸ್ ಸರ್ಕಾರ ಅಧಿಕಾರಕ್ಕೆ ಬಂದರೆ ಬಾಕಿ ಯೋಜನೆ ಅನುಷ್ಠಾನ

ಕೇಂದ್ರ ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ಭರವಸೆ



ಸಕಲೇಶಪುರದಲ್ಲಿ ನಡೆದ ಕಾಫಿ ಬೆಳೆಗಾರರ ಸಮಾವೇಶವನ್ನು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ಉದ್ಘಾಟಿಸಿದರು. ಕೇಂದ್ರ ವಾಣಿಜ್ಯ ಸಚಿವ ಪಿಯೂಶ್ ಗೋಯಲ್ ಅವರನ್ನು ಚಿತ್ರದಲ್ಲಿ ಕಾಣಬಹುದು.

ಸಕಲೇಶಪುರ, ಡಿ.23(ಬಿಎಲ್‌ಯು)– ರಾಜ್ಯದಲ್ಲಿ ಬಿಜೆಪಿ, ಜೆಡಿಎಸ್ ಮೈತ್ರಿ ಸರ್ಕಾರ ಮುಂದೆ ಅಧಿಕಾರಕ್ಕೆ ಬರಲಿದ್ದು, ನಾನು ಮುಖ್ಯಮಂತ್ರಿ ಆಗಿದ್ದಾಗ ಅಪೂರ್ಣಗೊಂಡ ಎಲ್ಲಾ ಯೋಜನೆಗಳನ್ನು ಅಂದು ಸಾಕಾರಗೊಳಿಸುತ್ತೇನೆ ಎಂದು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ಭರವಸೆ ನೀಡಿದರು.

ಸಕಲೇಶಪುರದಲ್ಲಿ ಇಂದು ನಡೆದ ಕಾಫಿ ಬೆಳೆಗಾರರ ಸಮಾವೇಶ ಉದ್ಘಾಟಿಸಿ ಮಾತನಾಡಿದ ಅವರು, ಬಿಜೆಪಿ, ಜೆಡಿಎಸ್ ಸರ್ಕಾರ 2006 ರಲ್ಲಿ ಅಧಿಕಾರದಲ್ಲಿದ್ದಾಗ ರೂಪಿಸಿದ್ದ ಹಲವು ಜನಪರ ಯೋಜನೆ ಜಾರಿಯಾಗದೆ ಬಾಕಿ ಇದೆ. ಅದನ್ನೆಲ್ಲಾ ಅನುಷ್ಠಾನಕ್ಕೆ ತರಬೇಕಾದರೆ ಮತ್ತೊಮ್ಮೆ ಬಿಜೆಪಿ, ಜೆಡಿಎಸ್ ಮೈತ್ರಿ ಸರ್ಕಾರ ಅಧಿಕಾರಕ್ಕೆ ಬರಬೇಕಿದೆ. ಇದು ಶೀಘ್ರದಲ್ಲೆ ಸಾಕಾರಗೊಳ್ಳಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಹೆಚ್.ಡಿ.ದೇವೇಗೌಡರ ಬಗ್ಗೆ ಅಪಾರ ಗೌರವ ಇಟ್ಟಿರುವ ಪ್ರಧಾನಿ ನರೇಂದ್ರ ಮೋದಿ ಅವರು ನನಗೆ ಅವರ ಸಂಪುಟದಲ್ಲಿ ಸ್ಥಾನ ನೀಡಿದ್ದಾರೆ. ಈಗ ನರೇಂದ್ರ ಮೋದಿ ಅವರ ಕನಸಿನ ವಿಕಸಿತ್ ಭಾರತ್ ಸೇರಿದಂತೆ ಹಲವು ಯೋಜನೆ ಸಾಕಾರಗೊಳ್ಳಲು ವೇಗವಾಗಿ ಕೆಲಸ ಮಾಡುತ್ತೇವೆ ಎಂದು ತಿಳಿಸಿದರು.

ಕೇಂದ್ರ ವಾಣಿಜ್ಯ ಸಚಿವ ಪಿಯೂಶ್ ಗೋಯಲ್ ಅವರು ಸಕಲೇಶಪುರಕ್ಕೆ ಆಗಮಿಸಿರುವ ಹಿನ್ನೆಲೆಯಲ್ಲಿ ಕಾಫಿ ಬೆಳೆಗಾರರ ಸಮಸ್ಯೆಗಳಿಗೆ ಖಂಡಿತವಾಗಿಯೂ ಪರಿಹಾರ ದೊರೆಯಲಿದೆ ಎಂದು ಕುಮಾರಸ್ವಾಮಿ ವಿಶ್ವಾಸ ವ್ಯಕ್ತಪಡಿಸಿದರು.

ಸಕಲೇಶಪುರದಲ್ಲಿ ಜನರು ಆನೆ ಹಾವಳಿಯಿಂದ ತೀವ್ರ ಸಂಕಷ್ಟ ಎದುರಿಸುತ್ತಿದ್ದಾರೆ. ಈ ಬಗ್ಗೆ ದೆಹಲಿ ಮಟ್ಟದಲ್ಲಿ ಚರ್ಚೆಗಳು ನಡೆದಿವೆ. ಈ ಸಂಬಂಧ ಶೀಘ್ರವೇ ಕೇಂದ್ರ ಪರಿಸರ ಖಾತೆ ಸಚಿವರು ಅಧಿಕಾರಿಗಳ ಸಭೆ ನಡೆಸಲಿದ್ದಾರೆ ಎಂದು ಭರವಸೆ ನೀಡಿದರು.

ಆನೆ ಕಾರಿಡಾರ್ ನಿರ್ಮಾಣ ಮಾಡಲು 15 ಸಾವಿರ ಎಕರೆ ಗುರುತಿಸಲಾಗಿದೆ. ಇದರಲ್ಲಿ ರೈತರು ಮೂರು ಸಾವಿರ ಎಕರೆ ಬಿಟ್ಟು ಕೊಡಲು ಸಿದ್ಧರಿದ್ದಾರೆ. ಆದರೆ ಈ ಯೋಜನೆ ನನೆಗುದಿಗೆ ಬಿದ್ದಿದೆ. ನಾನು ಮುಖ್ಯಮಂತ್ರಿ ಆಗಿದ್ದಾಗ ತಡೆಗೋಡೆ ನಿರ್ಮಾಣಕ್ಕೆ ನೂರು ಕೋಟಿ ರೂಪಾಯಿ ಬಿಡುಗಡೆ ಮಾಡಿದ್ದೆ ಎಂದು ತಿಳಿಸಿದರು. ಮಾಜಿ ಸಚಿವರಾದ ಹೆಚ್.ಕೆ.ಕುಮಾರಸ್ವಾಮಿ, ಮೋಟಮ್ಮ, ಕರ್ನಾಟಕ ಗ್ರೋವರ್ಸ್ ಫೆಡರೇಷನ್ ಅಧ್ಯಕ್ಷ ಡಾ.ಹೆಚ್.ಟಿ.ಮೋಹನ್‌ಕುಮಾರ್, ಸಂಸದರಾದ ತೇಜಸ್ವಿ ಸೂರ್ಯ, ಶ್ರೇಯಸ್ ಪಟೇಲ್, ಶಾಸಕರಾದ ಎಸ್.ಮಂಜುನಾಥ್, ಹೆಚ್.ಕೆ.ಸುರೇಶ್, ಮಂಥರ್ ಗೌಡ, ಸ್ವರೂಪ್ ಪ್ರಕಾಶ್, ಕಾಫಿ ಮಂಡಳಿ ಅಧ್ಯಕ್ಷ ಡಿ.ಜೆ.ದಿನೇಶ್ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಅರ್ಜಿ ಆಹ್ವಾನ

ಮೈಸೂರು,ಡಿ.23–ಮೈಸೂರು ಮಹಾನಗರಪಾಲಿಕೆಗೆ ಪೌರಕಾರ್ಮಿಕರ ಸಂಖ್ಯಾತಿರಿಕ್ತ (supernumerary posts) ಮಂಜೂರಾದ ಹುದ್ದೆಗಳನ್ನು ನೇರ ನೇಮಕಾತಿ ಮಾಡುವ ಸಂಬಂಧ ಮೀಸಲಾತಿ ಅನುಸಾರ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಮೈಸೂರು ಮಹಾನಗರ ಪಾಲಿಕೆಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದ್ದು, ಯಾವುದೇ ಆಕ್ಷೇಪಣೆಗಳಿದ್ದಲ್ಲಿ ಜನವರಿ 8ರೊಳಗಾಗಿ ಲಿಖಿತವಾಗಿ ಸಂಬಂಧಿಸಿದ ದಾಖಲಾತಿಗಳೊಂದಿಗೆ ನ್ಯೂ ಸಯ್ಯಾಜಿರಾವ್ ರಸ್ತೆಯಲ್ಲಿರುವ ಮೈಸೂರು ಪಾಲಿಕೆಯ ಆಯುಕ್ತರು ಮತ್ತು ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರದ ಅಧ್ಯಕ್ಷರಿಗೆ ಸಲ್ಲಿಸಬೇಕು ಎಂದು ಮೈಸೂರು ಪಾಲಿಕೆಯ ಆಯುಕ್ತರು ಮತ್ತು ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರದ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹನುಮ ಜಯಂತಿ: ಪಂಚಮುಖಿ ಆಂಜನೇಯ ಸ್ವಾಮಿಗೆ ವಿಶೇಷ ಅಲಂಕಾರ

ಮೈಸೂರು,ಡಿ.23–ನಗರದ ಇರ್ವಿನ್ ರಸ್ತೆಯಲ್ಲಿರುವ ಪಂಚಮುಖಿ ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಅರ್ಚಕರಾದ ವಿದ್ವಾನ್ ಎಸ್.ಕೃಷ್ಣಮೂರ್ತಿ ಅವರ ನೇತೃತ್ವದಲ್ಲಿ 11ನೇ ದಿವಸದ ಹನುಮ ಜಯಂತಿ ಅಂಗವಾಗಿ ಶ್ರೀನಿವಾಸ ಪಂಚಮುಖಿ ಆಂಜನೇಯನಿಗೆ ವಿಶೇಷ ಅಲಂಕಾರ ಹಾಗೂ ಅಭಿಷೇಕದೊಂದಿಗೆ ಹನುಮ ಜಯಂತಿ ಮಹೋತ್ಸವವನ್ನು ಸಂಪನ್ನಗೊಳಿಸಲಾಯಿತು.

ಇಂದು, ಡಿ.26 ವಿದ್ಯುತ್ ವ್ಯತ್ಯಯ

ಮೈಸೂರು,ಡಿ.23– ಡಿ.24 ಮತ್ತು 26 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಕಾಮಗಾರಿ ನಿಮಿತ್ತ ಲಲಿತಾದ್ರಿಪುರ ಗ್ರಾಮ, ಲಲಿತಾದ್ರಿನಗರ ಬಡಾವಣೆ (ಉತ್ತರ), ಲಲಿತಾದ್ರಿನಗರ ಬಡಾವಣೆ (ದಕ್ಷಿಣ) ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ಕವಿಗೋಷ್ಠಿಗೆ ಕವಿತೆಗಳ ಆಹ್ವಾನ

ಮೈಸೂರು: ಕ್ರಿಯಾ, ಮೈಸೂರು ಮತ್ತು ಸ್ಪಂದನ ಸಾಂಸ್ಕೃತಿಕ ಪರಿಷತ್ತು ಸಹಯೋಗದಲ್ಲಿ ಜನವರಿ ಮೊದಲ ವಾರದಲ್ಲಿ ಕವಿಗೋಷ್ಠಿಯನ್ನು ಏರ್ಪಡಿಸಲಾಗಿದೆ. ಕವಿಗೋಷ್ಠಿಯು ಬೋಗಾದಿಯ ಕ್ರಿಯಾ ಶೈಕ್ಷಣಿಕ ಸಂಪನ್ಮೂಲ ಕೇಂದ್ರದಲ್ಲಿ ನಡೆಯಲಿದ್ದು, ತಮ್ಮ ಸ್ವರಚಿತ ಕವಿತೆಗಳನ್ನು ವಾಚನ ಮಾಡಲು ಕವಿತೆಗಳನ್ನು ಆಹ್ವಾನಿಸಲಾಗಿದೆ. ಕವಿಗೋಷ್ಠಿಯಲ್ಲಿ ಭಾಗವಹಿಸಲು ಇಚ್ಛಿಸುವ ಆಸಕ್ತ ಕವಿಗಳು, ತಾವು ವಾಚಿಸಲಿರುವ 24 ಸಾಲುಗಳ ಗರಿಷ್ಠ ಮಿತಿಯ ಒಂದು ಸ್ವರಚಿತ ಅತ್ಯುತ್ತಮ ಕವಿತೆಯನ್ನು ವಾಟ್ಸಪ್ ಸಂಖ್ಯೆಗೆ ಕಳುಹಿಸಬೇಕು. ಕವಿಗಳು ತಮ್ಮ ಸ್ವವಿವರಗಳಾದ ಹೆಸರು, ತಮ್ಮ ಊರು, ವಿದ್ಯಾರ್ಹತೆ, ವೃತ್ತಿ ಮತ್ತು ಮೊಬೈಲ್ ಸಂಖ್ಯೆಗಳನ್ನು ನಮೂದಿಸಿ ಕಳುಹಿಸಲು ಕೋರಲಾಗಿದೆ. ಕವಿತೆಗಳನ್ನು ಕಳುಹಿಸಬೇಕಾದ ದೂರವಾಣಿ ಸಂಖ್ಯೆ 9535421340 (ಮಂದಾರ ಎಸ್. ಉಡುಪಿ) ಆಗಿದ್ದು, ಡಿ.31ರೊಳಗೆ ಕಳುಹಿಸಲು ಕೋರಲಾಗಿದೆ. ಕವಿಗೋಷ್ಠಿಯ ದಿನಾಂಕವನ್ನು ಮುಂದೆ ತಿಳಿಸಲಾಗುವುದು. ಕವಿಗೋಷ್ಠಿಯಲ್ಲಿ ಭಾಗವಹಿಸಿದ ಕವಿಗಳಿಗೂ ಪ್ರಮಾಣಪತ್ರ ನೀಡಲಾಗುವುದು.

ಅಮ್ಮ ಕೊಡವ ಸಮಾಜದಿಂದ ಕಾವೇರಿ ಪೂಜೆ, ಸ್ನೇಹ ಮಿಲನ



ಮೈಸೂರಿನ ಅಮ್ಮ ಕೊಡವ ಸಮಾಜದ ವತಿಯಿಂದ ದಾಸ್ ಪ್ರಕಾಶ್ ಪ್ಯಾರಡೈಸ್ ಹೋಟೆಲ್‌ನಲ್ಲಿ ಕಾವೇರಿ ಪೂಜೆ ಮತ್ತು ಸ್ನೇಹ ಮಿಲನ ಕಾರ್ಯಕ್ರಮ ಏರ್ಪಡಿಸಲಾಯಿತು.

ಮೈಸೂರು,ಡಿ.23–ಮೈಸೂರಿನ ಅಮ್ಮ ಕೊಡವ ಸಮಾಜದ ವತಿಯಿಂದ ದಾಸ್ ಪ್ರಕಾಶ್ ಪ್ಯಾರಡೈಸ್ ಹೋಟೆಲ್‌ನಲ್ಲಿ ಕಾವೇರಿ ಪೂಜೆ ಮತ್ತು ಸ್ನೇಹ ಮಿಲನ ಕಾರ್ಯಕ್ರಮ ಏರ್ಪಡಿಸಲಾಯಿತು. ಕೆಆರ್ ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಈ ಕಾರ್ಯಕ್ರಮದಲ್ಲಿ ಪೊನ್ನಂಪೇಟೆಯ ಕಾವೇರಿ ಅಮ್ಮ ಕೊಡವ ಮಹಿಳಾ ಸಂಘದವರು ಉಮ್ಮತ್ತಾಟ್ ನೃತ್ಯ ಪ್ರದರ್ಶಿಸಿದರು. ಸಮಾರಂಭದಲ್ಲಿ ಶಾಸಕ ಶ್ರೀವತ್ಸ, ಹಿರಿಯ ಸದಸ್ಯರಾದ ಪಾಡಿಯಮ್ಮಂಡ ಸುಬ್ಬಮ್ಮಯ್ಯ, ಶ್ರೀಮತಿ ಪುತ್ತಾಮ್ಮನೆ, ರಾಧಾ ಗಣೇಶ್ ಅವರನ್ನು ಸನ್ಮಾನಿಸಲಾಯಿತು. ಸಂಘದ ಅಧ್ಯಕ್ಷ ಎನ್.ಯು.ಸಂತೋಷ್ ಅಧ್ಯಕ್ಷತೆ ವಹಿಸಿದ್ದರು. ಉಪಾಧ್ಯಕ್ಷ ಹೆಚ್.ಎಮ್.ಸುಬ್ಬಮ್ಮಯ್ಯ, ಕಾರ್ಯದರ್ಶಿ ಹೆಚ್.ಎಸ್.ರಾಧಾ, ಖಜಾಂಚಿ ಸಿ.ಕೆ.ಉಮೇಶ್, ಸಮಿತಿ ಸದಸ್ಯರಾದ ಎ.ಆರ್.ಚಂದ್ರಶೇಖರ್, ಎನ್.ಕೆ.ರಾಮಕೃಷ್ಣ, ಸಿ.ಬಿ.ಗಿರೀಶ್, ಪಿ.ಎಸ್.ಸ್ಮಿತಾ, ಸಿ.ಯು.ರೂಪಾ, ಶ್ರೀಮತಿ ಜಯಂತಿ, ಶ್ರೀಮತಿ ಸಿ.ಎಲ್.ಹರಿಣಿ, ಶ್ರೀಮತಿ ರೀಟಾ ಉಪಸ್ಥಿತರಿದ್ದರು. ಈ ಕಾರ್ಯಕ್ರಮದಲ್ಲಿ ಕೊಡಗಿನ ವಿವಿಧ ಅಮ್ಮ ಕೊಡವ ಸಮಾಜದ ಅಧ್ಯಕ್ಷರು ಭಾಗವಹಿಸಿದ್ದರು.

ಮಾಸ್ಟರ್ ತುವೀಶ್ ಪ್ರಾರ್ಥಿಸಿದರು. ಶ್ರೀಮತಿ ವೀಣಾ ಶೇಖರ್ ಸ್ವಾಗತಿಸಿದರೆ, ಶ್ರೀಮತಿ ಸಿ.ಯು.ರೂಪಾ ಕಾರ್ಯಕ್ರಮ ನಿರೂಪಿಸಿದರು. ಸಿ.ಬಿ.ಗಿರೀಶ್ ವಂದಿಸಿದರು.

ಸುವರ್ಣಸೌಧದಲ್ಲಿ ಸಿ.ಟಿ.ರವಿ ಮೇಲೆ ಹಲ್ಲೆಗೆ ಯತ್ನ ಪ್ರಕರಣ

ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಆಪ್ತ ಸೇರಿ 10 ಜನರ ವಿರುದ್ಧ ಎಫ್‌ಐಆರ್

ಬೆಳಗಾವಿ, ಡಿ.23– ಇಲ್ಲಿನ ಸುವರ್ಣ ಸೌಧದಲ್ಲಿ ಬಿಜೆಪಿ ಎಂಎಲ್‌ಸಿ ಸಿ.ಟಿ.ರವಿ ಮೇಲೆ ಹಲ್ಲೆಗೆ ಯತ್ನಿಸಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಆಪ್ತ ಸೇರಿ 10 ಮಂದಿ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ವಿರುದ್ಧ ಸಿ.ಟಿ.ರವಿ ಅಸಂವಿಧಾನಿಕ ಪದ ಬಳಕೆ ಆರೋಪ ಕೇಳಿ ಬಂದ ಬಳಿಕ ಸುವರ್ಣ ಸೌಧದಲ್ಲಿ ಭಾರಿ ಹೈಡ್ರಾಮಾ ನಡೆದಿತ್ತು. ಲಕ್ಷ್ಮಿ ಹೆಬ್ಬಾಳ್ಕರ್ ಬೆಂಬಲಿಗರು ಸುವರ್ಣಸೌಧದೊಳಕ್ಕೆ ನುಗ್ಗಿ ಸಿ.ಟಿ.ರವಿ ಮೇಲೆ ಹಲ್ಲೆಗೆ ಯತ್ನಿಸಿದ್ದರು. ಅಲ್ಲದೇ ಹಿರೇಬಾಗೇವಾಡಿ ಪೊಲೀಸ್ ಠಾಣೆಯಲ್ಲಿ ಶಾಸಕರ ವಿರುದ್ಧ ಪ್ರಕರಣ ಸಹ ದಾಖಲಾಗಿತ್ತು. ಇದೀಗ ಸಿ.ಟಿ.ರವಿ ಕಾನೂನು ಸಮರಕ್ಕೆ ಮುಂದಾಗಿದ್ದಾರೆ. ಖಾನಾಪುರ ಪೊಲೀಸ್ ಠಾಣೆಗೆ ಸಿ.ಟಿ.ರವಿ ಲಿಖಿತ ದೂರು ಸಲ್ಲಿಸಿದ್ದರು. ಈ ಪ್ರಕರಣವನ್ನು ಹಿರೇಬಾಗೇವಾಡಿ ಠಾಣೆಗೆ ವರ್ಗಾಯಿಸಲಾಗಿತ್ತು ಭಾನುವಾರ ಸಿ.ಟಿ.ರವಿ ಅವರು ನೀಡಿದ್ದ ಲಿಖಿತ ದೂರಿನ ಪ್ರತಿ ಪೋಸ್ಟ್ ಮೂಲಕ ಪೊಲೀಸರ ಕೈ ಸೇರಿದ ಬೆನ್ನಲ್ಲೇ ಹಿರೇಬಾಗೇವಾಡಿ ಠಾಣೆ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ.

ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

ಮೈಸೂರು,ಡಿ.23– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ರಚಿತವಾದ ಬಡಾವಣೆಗಳಲ್ಲಿ ಮಂಜೂರಾತಿ ಪಡೆದಿರುವ ಸಾರ್ವಜನಿಕ ಹಿತದೃಷ್ಟಿಯಿಂದ ಮತ್ತೊಮ್ಮೆ ಸಾರ್ವಜನಿಕರು ತಮ್ಮ ನಿವೇಶನ, ಮನೆಗಳಿಗೆ ಹೊಂದಿಕೊಂಡಂತೆ ತುಂಡು ಜಾಗ ಲಭ್ಯವಿದ್ದಲ್ಲಿ ಅಂತಹ ತುಂಡು ಜಾಗವನ್ನು ಕೋರಿ ಅರ್ಜಿ ಸಲ್ಲಿಸುವ ದಿನಾಂಕವನ್ನು ಡಿ.26ರಿಂದ ಜ.25 ರವರೆಗೆ ವಿಸ್ತರಿಸಲಾಗಿದೆ ಎಂದು ಮುಡಾ ಕಾರ್ಯದರ್ಶಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕ್ರಿಸ್ಮಸ್ ಪ್ರಯುಕ್ತ ಇಂದು ಮೃಗಾಲಯ, ಕಾರಂಜಿಕೆರೆ ವೀಕ್ಷಣೆಗೆ ಅವಕಾಶ

ಮೈಸೂರು,ಡಿ.23– ಕ್ರಿಸ್ಮಸ್ ಹಬ್ಬದ ಪ್ರಯುಕ್ತ ಪ್ರವಾಸಿಗರು, ಜನಸಾಮಾನ್ಯರು ಹಾಗೂ ಸ್ಥಳೀಯರಿಗೆ ಮೃಗಾಲಯವನ್ನು ವೀಕ್ಷಿಸಲು ಅನುವಾಗುವಂತೆ ಡಿ.24ರಂದು ಶ್ರೀ ಚಾಮರಾಜೇಂದ್ರ ಮೃಗಾಲಯ ಹಾಗೂ ಕಾರಂಜಿಕೆರೆ ಪ್ರಕೃತಿ ಉದ್ಯಾನವನವನ್ನು ಸಾರ್ವಜನಿಕ ವೀಕ್ಷಣೆಗೆ ತೆರೆದಿರಲಾಗುವುದು ಎಂದು ಶ್ರೀ ಚಾಮರಾಜೇಂದ್ರ ಮೃಗಾಲಯದ ಕಾರ್ಯನಿರ್ವಾಹಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಡಾ.ಅಮ್ಮಸಂದ್ರ ಸುರೇಶ್‌ಗೆ ವಿಶ್ವೇಶ್ವರಯ್ಯ ರಾಷ್ಟ್ರೀಯ ಸಾಹಿತ್ಯ ಪ್ರಶಸ್ತಿ



ಮೈಸೂರು,ಡಿ.23–ಬೆಂಗಳೂರಿನ ಸುರ್ವೆ ಕಲ್ಚರಲ್ ಅಕಾಡೆಮಿ ಮತ್ತು ಭಾರತ ರತ್ನ ಸರ್.ಎಂ.ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಪ್ರತಿಷ್ಠಾನ ಕೊಡ ಮಾಡುವ ವಿಶ್ವೇಶ್ವರಯ್ಯ ರಾಷ್ಟ್ರೀಯ ಸಾಹಿತ್ಯ ಪ್ರಶಸ್ತಿಗೆ ಡಾ.ಅಮ್ಮಸಂದ್ರ ಸುರೇಶ್ ಆಯ್ಕೆಯಾಗಿದ್ದಾರೆ. ಸಾಹಿತ್ಯ ಕ್ಷೇತ್ರದಲ್ಲಿನ ಸಾಧನೆಗಾಗಿ ಅವರನ್ನು ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಸುರೇಶ್ ಇದುವರೆಗೂ 20ಕ್ಕೂ ಹೆಚ್ಚು ಕೃತಿಗಳನ್ನು ರಚಿಸಿದ್ದಾರೆ. ರಾಜ್ಯಮಟ್ಟದ ಪತ್ರಿಕೆಗಳಿಗೆ ಅಂಕಣಗಳನ್ನು ಬರೆಯುತ್ತಿದ್ದಾರೆ. ಪ್ರಶಸ್ತಿಯನ್ನು ಡಿ.27ರಂದು ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದ ನಯನ ರಂಗ ಮಂದಿರದಲ್ಲಿ ನಡೆಯುವ ಸಮಾರಂಭದಲ್ಲಿ ಪ್ರಧಾನ ಮಾಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

ಕಣ್ಣಿನ ಉಚಿತ ತಪಾಸಣೆ, ಶಸ್ತ್ರಚಿಕಿತ್ಸಾ ಶಿಬಿರ

ಮೈಸೂರು,ಡಿ.23–ಮೈಸೂರಿನ ಅಮೃತಾಂಶು ಟ್ರಸ್ಟ್, ನಾರಾಯಣ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆ, ಜಿಲ್ಲಾ ಅಂಧತ್ವ ನಿಯಂತ್ರಣ ಸಂಸ್ಥೆ, ಮೈಸೂರು ಜಿಲ್ಲಾ ಸಂಚಾರಿ ನೇತ್ರ ಚಿಕಿತ್ಸಾ ಘಟಕ, ಕೆ.ಆರ್.ಆಸ್ಪತ್ರೆ ಸಂಯುಕ್ತ ಆಶ್ರಯದಲ್ಲಿ ಡಿ.26ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 1ರವರೆಗೆ # 2767, ಪಾಂಚಜನ್ಯ, 5ನೇ ಮೇನ್, ಮೇದರಕೇರಿ, ಚಾಮುಂಡಿಪುರಂನಲ್ಲಿ ಉಚಿತ ಕಣ್ಣಿನ ತಪಾಸಣೆ, ಶಸ್ತ್ರಚಿಕಿತ್ಸಾ ಶಿಬಿರ ಏರ್ಪಡಿಲಾಗಿದೆ. ಮಾಹಿತಿಗೆ ಮೊ. 9945270646, 9742634110 ಸಂಪರ್ಕಿಸಬಹುದು.

ನಿಧನ



ಜೆ.ಕೆ.ನಾಗರಾಜ್

ಮೈಸೂರು, ಡಿ. 23– ಕೈಗಾರಿಕೋದ್ಯಮಿ, ಮೈಸೂರು ಸ್ಪೈಸಸ್ ಇಂಡಿಯಾ ಮಾಲೀಕರು ಮತ್ತು ಗೋಕುಲಂ ನಿವಾಸಿ ಜೆ.ಕೆ. ನಾಗರಾಜ್ (87) ಸೋಮವಾರ ಬೆಳಗ್ಗೆ ನಿಧನರಾದರು.

ಮೃತರು ಪತ್ನಿ, ಓರ್ವ ಪುತ್ರ, ಸೊಸೆ, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಗೋಕುಲಂನ ಚಿರಶಾಂತಿ ಧಾಮದಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ವಿದ್ಯಾರ್ಥಿಗಳ ಉಜ್ವಲ ಭವಿಷ್ಯ ರೂಪಿಸುವಲ್ಲಿ ರಾಮಕೃಷ್ಣ ಆಶ್ರಮದ ಪರಿಸರದ ಕೊಡುಗೆ ಅಪಾರ

ಸುವರ್ಣ ಮಹೋತ್ಸವ ಸಮಾರೋಪದಲ್ಲಿ ರಾಯಚೂರು ಸಂಸದ ಜಿ.ಕುಮಾರನಾಯ್ಕ ಅಭಿಮತ



ಹಳೆಯ ವಿದ್ಯಾರ್ಥಿಗಳ ಸಂಘದ ವಾರ್ಷಿಕ ಸಾಮಾನ್ಯ ಸಭೆ, ಸುವರ್ಣ ಮಹೋತ್ಸವದ ಸಮಾರೋಪದಲ್ಲಿ ಸಂಸದ ಕುಮಾರ ನಾಯ್ಕ ಅವರನ್ನು ಅಭಿನಂದಿಸಲಾಯಿತು.

ಮೈಸೂರು, ಡಿ.23(ಎಸ್‌ಪಿಎನ್)– ವಿದ್ಯಾರ್ಥಿಗಳ ಉಜ್ವಲ ಭವಿಷ್ಯವನ್ನು ರೂಪಿಸಲು ಶ್ರೀರಾಮಕೃಷ್ಣಾಶ್ರಮದ ಪರಿಸರ ಸಾಕಷ್ಟು ಕೊಡುಗೆ ನೀಡಿದೆ. ಇಲ್ಲಿ ಕಲಿತ ಪ್ರೀತಿ, ಸಹೋದರತ್ವ ಮತ್ತು ಮದುವೆಯ ಮೌಲ್ಯಗಳೆಲ್ಲ ಸಾಧನೆಯಲ್ಲೂ ಕೈಹಿಡಿದು ನಡೆಸಿವೆ ಎಂದು ರಾಯಚೂರು ಸಂಸದ ಜಿ.ಕುಮಾರ ನಾಯ್ಕ್ ಅಭಿಪ್ರಾಯಪಟ್ಟರು.

ಮೈಸೂರು ಯಾದವಗಿರಿಯ ಶ್ರೀರಾಮಕೃಷ್ಣ ವಿದ್ಯಾಶಾಲೆಯಲ್ಲಿ ನಡೆದ ಹಿರಿಯ ವಿದ್ಯಾರ್ಥಿಗಳ ಸಂಘದ ವಾರ್ಷಿಕ ಸಾಮಾನ್ಯ ಸಭೆ ಹಾಗೂ ಸುವರ್ಣ ಮಹೋತ್ಸವದ ಸಮಾರೋಪದಲ್ಲಿ ಭಾಗವಹಿಸಿ ಮಾತನಾಡಿದ ಅವರು, 1970–80ರ ದಶಕದ ಈ ಶಾಲಾ ಆವರಣದಲ್ಲಿ ವ್ಯಾಸಂಗ ಮಾಡುತ್ತಿದ್ದ ವಿದ್ಯಾರ್ಥಿಗಳು ಸಮುದಾಯದಲ್ಲಿ ಸಾಮರಸ್ಯ ಮಾರ್ಗದೊಂದಿಗೆ ಬೆರೆತು ಹೊಂದಿಕೊಳ್ಳುವ ಪರಿಸರ ಕಲಿಸಿಕೊಟ್ಟಿದೆ. ಅದರಲ್ಲೂ ಶ್ರೀ ರಾಮಕೃಷ್ಣ ಪರಮಹಂಸರು ಸಾಮರಸ್ಯದ ಮಾರ್ಗವನ್ನು ಬೋಧಿಸುತ್ತಿದ್ದರು. ಎಲ್ಲರನ್ನು ಒಳಗೊಳ್ಳುವುದು ಅವರ ಚಿಂತನೆಯ ಅಂಶ ಹಾಗೂ ಶಕ್ತಿಯಾಗಿತ್ತು ಎಂದರು.

ಹಾಗಾಗಿಯೇ ಆಶ್ರಮ, ವಿದ್ಯಾಶಾಲೆ ಎಲ್ಲಾ ಸಂಸ್ಕೃತಿಗೂ ಪೂರಕವಾಗಿ ತನ್ನ ಕಾರ್ಯಚಟುವಟಿಕೆಗಳನ್ನು ಅಳವಡಿಸಿಕೊಂಡಿದೆ. ಅಲ್ಲದೆ, ನಾವು ವಿದ್ಯಾರ್ಥಿಗಳಾಗಿದ್ದಾಗ ನಮ್ಮ ಕಾಲದ ಕ್ಯಾಂಪಸ್‌ಗೂ ಈಗಿನ ಕ್ಯಾಂಪಸ್‌ಗೂ ಸಾಕಷ್ಟು ಬದಲಾವಣೆಯಾಗಿದೆ. ಅಂದಿನ ಸ್ವಾಮೀಜಿಯೂ ನಮ್ಮ ಮೂಲಕ ಇಲ್ಲಿ ಗಿಡಗಳನ್ನು ನೆಡೆಸಿದ್ದರು. ಇಂದಿನ ಹಸಿರನ್ನು ಕಣ್ತುಂಬಿಕೊಂಡಾಗ ಅವರ ದೂರದೃಷ್ಟಿ ಅರಿವಿಗೆ ಬರುತ್ತಿತ್ತು. ಉತ್ತಮ ಉದ್ದೇಶ ಹೊಂದುವುದು ಯಾವಾಗಲೂ ಯಶಸ್ಸನ್ನು ನೀಡುತ್ತದೆ ಎಂದು ಅಭಿಪ್ರಾಯಪಟ್ಟರು.

ನಮ್ಮ ಕಾಲಕ್ಕಿಂತ ಈಗಿನ ವಿದ್ಯಾರ್ಥಿಗಳು ತಂತ್ರಜ್ಞಾನದಲ್ಲಿ ಹೆಚ್ಚು ಪಳಗಿದ್ದಾರೆ. ವಿವಿಧ ಅವಕಾಶಗಳನ್ನು ಹೊಂದಿದ್ದಾರೆ. ಉತ್ತಮ ಭವಿಷ್ಯ ನಿರ್ಮಾಣದಲ್ಲಿ ವಿದ್ಯಾರ್ಥಿ ದಿಸೆಯಲ್ಲಿ ಕಲಿತ, ಸಂಸ್ಕೃತಿ, ಪರಂಪರೆ, ಮೌಲ್ಯಗಳು ಪ್ರಮುಖ ಪಾತ್ರ ವಹಿಸುತ್ತದೆ. ಅದನ್ನು ಕಲಿಸಿಕೊಡುವಲ್ಲಿ ರಾಮಕೃಷ್ಣ ವಿದ್ಯಾಶಾಲಾ ಪ್ರಯತ್ನಿಸಿದೆ ಎಂದರು.

ಹಳೆ ವಿದ್ಯಾರ್ಥಿಗಳು ಹಾಗೂ ಶಾಲೆ ಸಿಬ್ಬಂದಿಯಿಂದ ಗುಂಪು ಗಾಯನ, ಸಂಗೀತ ವಾದ್ಯಗಳ ಗೋಷ್ಠಿ ನಡೆಯಿತು. ಹಳೆ ವಿದ್ಯಾರ್ಥಿಗಳಾದ ಕೃಷ್ಣ ಶಾಂತಕುಮಾರ್, ಜಿ.ಕೆ.ಪ್ರಮೋದ್, ಡಾ.ಸಂಜೀವ್ ಗುಪ್ತಾ ಶಾಲೆ ಕುರಿತ ತಮ್ಮ ನೆನಪುಗಳನ್ನು ಹಾಗೂ ಸಾಗಬೇಕಾದ ದಾರಿ ಬಗ್ಗೆ ಮಾತನಾಡಿದರು. ವೇದಿಕೆಯಲ್ಲಿ ರಾಮಕೃಷ್ಣ ಆಶ್ರಮದ ಶ್ರೀ ಮುಕ್ತಿದಾನಂದ ಸ್ವಾಮೀಜಿ, ಶ್ರೀ ಯುಕ್ತೇಶಾನಂದ ಸ್ವಾಮೀಜಿ, ಪ್ರಾಂಶುಪಾಲ ಟಿ.ಕೆ.ಚಂದ್ರಶೇಖರ್, ಸಂಘದ ಉಪಾಧ್ಯಕ್ಷ ಪಾರ್ಥಸಾರಥಿ ಉಪಸ್ಥಿತರಿದ್ದರು. ನಂತರ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನೆರವೇರಿದವು.

ನಿರೀಕ್ಷೆಗೂ ಮೀರಿ ಯಶಸ್ವಿಗೊಂಡ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ

●ಮೂರು ದಿನದಲ್ಲಿ ಏಳರಿಂದ ಎಂಟು ಲಕ್ಷ ಸಾಹಿತ್ಯಾಸಕ್ತರು ಭಾಗಿ ●ಅರ್ಜುನ್ ಜನ್ಯ ರಸಸಂಜೆ ಕಾರ್ಯಕ್ರಮಕ್ಕೆ 2 ಲಕ್ಷ ಮಂದಿ ●6 ಲಕ್ಷ ಜನರಿಂದ ಊಟ ಸವಿದ ಮಾಹಿತಿ, ಕಡೆ ದಿನ ರಾತ್ರಿ ಮೊಟ್ಟೆ ವಿತರಣೆ ●ಸಮ್ಮೇಳನ ಯಶಸ್ಸಿನ ಹಿಂದೆ ಚಲುವರಾಯಸ್ವಾಮಿ ಪಾತ್ರವಿದೆ ಎಂದು ಹೆಚ್ಡಿಕೆ ಮೆಚ್ಚುಗೆ

ಎಂ.ಕೆ.ಮೋಹನ್‌ರಾಜ್

ಮಂಡ್ಯ,ಡಿ.23– 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಯಶಸ್ವಿಯಾಗಿ ಮುಗಿದಿದ್ದು, ನಿರೀಕ್ಷೆಗೂ ಮೀರಿ ಸಮ್ಮೇಳನ ಅಚ್ಚುಕಟ್ಟಾಗಿ ನಡೆದಿದೆ. ಜೊತೆಗೆ ಅಕ್ಷರ ಜಾತ್ರೆಗೆ ಏಳರಿಂದ ಎಂಟು ಲಕ್ಷ ಜನ ಭಾಗಿಯಾಗಿರಬಹುದೆಂದು ಅಂದಾಜಿಸಲಾಗಿದೆ.

ಕಳೆದ ಶುಕ್ರವಾರ, ಶನಿವಾರ ಮತ್ತು ಭಾನುವಾರ ಮಂಡ್ಯ ನಗರದ ಹೊರವಲಯದ ಸ್ಯಾಂಜೋ ಆಸ್ಪತ್ರೆಯ ಹಿಂಭಾಗ ಬೃಹತ್ ವೇದಿಕೆಯಲ್ಲಿ ನಡೆದಿದ್ದ ಕಾರ್ಯಕ್ರಮ ಯಾವುದೇ ಲೋಪದೋಷವಾಗಂತೆ ಆಯೋಜಕರು ಎಚ್ಚರಿಕೆಯಿಂದ ನಡೆಸಿ ಸೈ ಎನಿಸಿಕೊಂಡಿದ್ದಾರೆ.

ಎಂಟು ಲಕ್ಷ ಜನ ಭಾಗಿ: ಸಮ್ಮೇಳನದ ಜಾಗ ಮಂಡ್ಯ ನಗರದಿಂದ ಮೂರ್‍ನಾಲ್ಕು ಕಿಲೋ ಮೀಟರ್ ದೂರವಿದೆ. ಜನರು ಬರುತ್ತಾರೆಯೇ ಎಂಬ ಪ್ರಶ್ನೆ ಕೆಲವರಲ್ಲಿ ಉದ್ಭವವಾಗಿತ್ತು. ಆದರೆ ಮೂರು ದಿನದಲ್ಲಿ ಬಂದ ಜನರು ಯಾಕಾದರೂ ಹೀಗೆ ಬರುತ್ತಿದ್ದಾರೋ ಎಂದು ಜನರನ್ನು ಕಂಟ್ರೋಲ್ ಮಾಡಲು ನಿಯೋಜಿಸಿದ್ದ ಪೊಲೀಸರಂತೂ ಹೈರಾಣಾಗಿ ತಮಗೆ ತಾವೇ ಪ್ರಶ್ನಿಸಿಕೊಳ್ಳುವಂತೆ ಜನರು ಆಗಮಿಸಿದರು.



ಅದರಲ್ಲೂ ಬೆಳಿಗ್ಗೆಗಿಂತ ಮೂರು ದಿನಗಳ ರಾತ್ರಿ ಕನಿಷ್ಠ ಒಂದು ಲಕ್ಷ ಜನರು ಆಗಮಿಸಿರುವ ಅಂದಾಜು ಮಾಡಲಾಗಿದೆ. ಅದರಲ್ಲೂ ಎರಡನೇ ದಿನ ಸಂಗೀತ ನಿರ್ದೇಶಕ ಅರ್ಜುನ್ ಜನ್ಯ, ನಿರೂಪಕಿ ಅನುಶ್ರೀ ಕಾರ್ಯಕ್ರಮಕ್ಕೆ ಎರಡು ಲಕ್ಷ ಜನ ಬಂದಿದ್ದಾರೆ ಎಂದು ಅಂದಾಜಿಸಲಾಗಿದೆ. ಅಂದು 15 ನಿಮಿಷಗಳ ಕಾಲ ಜೋರು ಮಳೆ ಬಂದರೂ ಜನ ಲೆಕ್ಕಿಸದೇ ಆಗಮಿಸಿದ್ದು ವಿಶೇಷವಾಗಿತ್ತು.

ಪಾರ್ಕಿಂಗ್‌ಗಾಗಿ ಐದು ಕಡೆ ವ್ಯವಸ್ಥೆ ಮಾಡಿದ್ದರೂ ರಾತ್ರಿ ಸೇರುತ್ತಿದ್ದ ಜನಜಂಗುಳಿ ಹೆಚ್ಚಾದ ಹಿನ್ನೆಲೆಯಲ್ಲಿ ವೇದಿಕೆ ಇನ್ನು ಎರಡು ಕಿಲೋ ಮೀಟರ್ ಅಂತರದಲ್ಲೇ ಜನ ಪಾರ್ಕಿಂಗ್ ಮಾಡಿ ವೇದಿಕೆಯತ್ತ ಹೋಗುತ್ತಿದ್ದ ದೃಶ್ಯ ಕಂಡುಬಂತು. ವೇದಿಕೆಗಳು ಸಂಪೂರ್ಣ ಭರ್ತಿಯಾಗಿ, ಜನ ಪುಸ್ತಕ ಮಳಿಗೆ, ವಾಣಿಜ್ಯ ಮಳಿಗೆಯಲ್ಲಿ ಕಾಲಹರಣ ಮಾಡುವ ಪರಿಸ್ಥಿತಿ ನಿರ್ಮಾಣವಾಗುವ ಮಟ್ಟಕ್ಕೆ ಜನರ ಉತ್ಸಾಹವಿತ್ತು.

6 ಲಕ್ಷ ಜನ ಊಟ ಮಾಡಿರುವ ಬಗ್ಗೆ ಮಾಹಿತಿ: ಸಮ್ಮೇಳನದ ಒಟ್ಟು 9 ಬಾರಿ ಊಟದ ವ್ಯವಸ್ಥೆಯಲ್ಲಿ ಎಲ್ಲೂ ಲೋಪದೋಷವಾಗದಂತೆ ಆಹಾರವನ್ನು ವಿತರಣೆ ಮಾಡಲಾಯಿತು. ಜನ ನಿರೀಕ್ಷೆಗೂ ಮೀರಿ ಆಗಮಿಸಿದರೂ ಎಲ್ಲಾ ಸಹ ಊಟ ವ್ಯತ್ಯಾಸವಾಗಲಿಲ್ಲ. 6 ಲಕ್ಷ ಮಂದಿಗೂ ಅಚ್ಚುಕಟ್ಟಾದ ಊಟ ಏರ್ಪಾಡು ಮಾಡಲಾಗಿತ್ತು. ವಿಐಪಿ, ಮೀಡಿಯಾ ಸೆಂಟರ್ ಹೊರತುಪಡಿಸಿ ಉಳಿದೆಲ್ಲರಿಗೂ ಬಫೆ ಪದ್ಧತಿಯಲ್ಲಿ ಅಚ್ಚುಕಟ್ಟಾದ ಊಟ ದೊರೆಯಿತು.

ಮೊಟ್ಟೆ ವಿತರಣೆ: ಸಮ್ಮೇಳನ ಆರಂಭದ ಎರಡು ತಿಂಗಳಿನಿಂದ ಕನ್ನಡ ಕಟ್ಟುವ ಬಗ್ಗೆ ಹಾಗೂ ಗೋಷ್ಠಿಯ ಬಗ್ಗೆ ಚಕಾರ ಎತ್ತದೇ ಬರೀ ಬಾಡೂಟದ ಬಗ್ಗೆಯೇ ಚರ್ಚೆಯನ್ನು ನಡೆಸುತ್ತಿದ್ದರು. ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಸಹ ಬಾಡೂಟ ಪ್ರಿಯರ ಜೊತೆಗೆ ಚರ್ಚಿಸಿ, ಈ ಬಗ್ಗೆ ಒಂದು ನಿರ್ಣಯ ಕೈಗೊಳ್ಳುವುದಾಗಿ ಹೇಳಿದ್ದರು. ಅದರಂತೆ ಕಡೆ ದಿನದ ರಾತ್ರಿ ಊಟಕ್ಕೆ 15 ಸಾವಿರ ಮಂದಿಗೆ ಊಟದ ಜೊತೆಗೆ ಮೊಟ್ಟೆ ವಿತರಣೆ ಮಾಡುವ ಮೂಲಕ ಬಾಡೂಟ ಪ್ರಿಯರನ್ನು ಸಮಾಧಾನ ಮಾಡಿದಂತಾಯಿತು.

ಚಲುವರಾಯಸ್ವಾಮಿ ಶ್ಲಾಘಿಸಿದ ಹೆಚ್ಡಿಕೆ: ನಿನ್ನೆ ಸಮಾರೋಪ ಸಮಾರಂಭದಲ್ಲಿ ಭಾಷಣ ಮಾಡುವ ವೇಳೆ ಹೆಚ್.ಡಿ.ಕುಮಾರಸ್ವಾಮಿ ಅವರು ಮೂರು ದಿನಗಳ ಸಮ್ಮೇಳನ ಯಶಸ್ವಿಗೆ ಕಾರಣೀಭೂತರಾದ ಚಲುವರಾಯಸ್ವಾಮಿ ಅವರಿಗೆ ಅಭಿನಂದನೆಗಳು ಎನ್ನುವ ಮೂಲಕ ತಮ್ಮ ರಾಜಕೀಯ ಬದ್ಧವೈರಿ ಚಲುವರಾಯಸ್ವಾಮಿ ಅವರನ್ನು ವೇದಿಕೆಯಲ್ಲೇ ಹೊಗಳಿದ್ದು ವಿಶೇಷವಾಗಿತ್ತು. ಹಾಗೆಯೇ ಚಲುವರಾಯಸ್ವಾಮಿ ಅವರು ಸಹ ತಮ್ಮ ರಾಜಕೀಯ ಬದ್ಧವೈರಿ ಕುಮಾರಸ್ವಾಮಿ ಅವರನ್ನು ಸನ್ಮಾನಿಸಿದರು. ಒಟ್ಟಾರೆ ಕನ್ನಡ ಸಾಹಿತ್ಯ ಸಮ್ಮೇಳನ ಜಾತ್ಯಾತೀತವಾಗಿ, ಪಕ್ಷಾತೀತವಾಗಿ, ವಯಸ್ಸಿನ ಮಿತಿ ಇಲ್ಲದಂತೆ ನಡೆದಿದ್ದು ವಿಶೇಷತೆಯಲ್ಲಿ ವಿಶೇಷವಾಗಿದೆ.

ನೆಟ್ಕಲ್ ಗ್ರಾಮದ ಅಂಬೇಡ್ಕರ್ ಭವನ ಕಾಮಗಾರಿ ನನೆಗುದಿಗೆ

ಮಳವಳ್ಳಿ, ಡಿ.23– ಮಳವಳ್ಳಿ ತಾಲೂಕು ನೆಟ್ಕಲ್ ಗ್ರಾಮದ ಡಾ.ಬಿ.ಆರ್. ಅಂಬೇಡ್ಕರ್ ಭವನ ಕಾಮಗಾರಿ ನನೆಗುದಿಗೆ ಬಿದ್ದಿದೆ.

ಈ ಗ್ರಾಮದಲ್ಲಿ ಬಡವರು, ದಲಿತರು ಸಭೆ ಸಮಾರಂಭ ಹಾಗೂ ಇತರ ಕಾರ್ಯಕ್ರಮಗಳನ್ನು ನಡೆಸಲು ಅನುಕೂಲವಾಗುವಂತೆ 2021ರಲ್ಲಿ ಅಂಬೇಡ್ಕರ್ ಭವನ ನಿರ್ಮಾಣ ಕಾಮಗಾರಿ ಆರಂಭಿಸಲಾಯಿತು. ಆದರೆ, ಕುಂಟುತ್ತಾ ಸಾಗುತ್ತಿದ್ದ ಕಾಮಗಾರಿ ಇದೀಗ ಸಂಪೂರ್ಣವಾಗಿ ನನೆಗುದಿಗೆ ಬಿದ್ದಿದೆ.

ಕಾಮಗಾರಿ ಆರಂಭವಾಗಿ ಮೂರು ವರ್ಷ ಕಳೆದರೂ ಅಲ್ಲಿ ಗೋಡೆಗಳು ಮಾತ್ರ ನಿಂತಿದ್ದು, ಯಾವಾಗ ಅಂಬೇಡ್ಕರ್ ಭವನ ಕಾಮಗಾರಿ ಪೂರ್ಣಗೊಳ್ಳುತ್ತದೋ ಎಂದು ಗ್ರಾಮಸ್ಥರು ಕಾಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಗ್ರಾಮದ ದಲಿತ ಮುಖಂಡ ಎನ್.ಎಸ್.ಶಿವಸ್ವಾಮಿ ಆರೋಪಿಸಿದ್ದಾರೆ.

ಅಂಬೇಡ್ಕರ್ ವಾದವನ್ನು ಪ್ರತಿಪಾದಿಸುತ್ತಿರುವ ಮಳವಳ್ಳಿ ಶಾಸಕ ನರೇಂದ್ರ ಸ್ವಾಮಿ ಅವರು ಇತ್ತ ಗಮನ ಹರಿಸಿ ನೆಟ್ಕಲ್ ಗ್ರಾಮದ ಅಂಬೇಡ್ಕರ್ ಭವನದ ಕಾಮಗಾರಿ ಶೀಘ್ರವಾಗಿ ಪೂರ್ಣಗೊಳಿಸಿ ಗ್ರಾಮಸ್ಥರಿಗೆ ಅನುಕೂಲ ಕಲ್ಪಿಸಲು ತ್ವರಿತವಾಗಿ ಕ್ರಮ ಕೈಗೊಳ್ಳಬೇಕಾಗಿದೆ.

ಕಿಕ್ಕೇರಿ ಯೋಗನರಸಿಂಹಸ್ವಾಮಿ ಸೊಸೈಟಿ ಶತಮಾನೋತ್ಸವ ಭವನಕ್ಕೆ ಭೂಮಿಪೂಜೆ

ಕಿಕ್ಕೇರಿ: ಗ್ರಾಮೀಣ ಪ್ರದೇಶದಲ್ಲಿ ಸಂಸ್ಥೆ ಕಟ್ಟಿ ಉಳಿಸಿ ಬೆಳೆಸುವುದು ಬಲುದೊಡ್ಡ ಸಾಹಸವಾಗಿದೆ ಎಂದು ಯೋಗನರಸಿಂಹಸ್ವಾಮಿ ಸೊಸೈಟಿ ಕಾರ್ಯನಿರ್ವಹಣಾಧಿಕಾರಿ ಸುಹಾಸ್ ನಾಡಿಗ್ ಹೇಳಿದರು.

ಪಟ್ಟಣದ ಯೋಗನರಸಿಂಹಸ್ವಾಮಿ ಸೊಸೈಟಿ ಶತಮಾನೋತ್ಸವ ಭವನ ಕಟ್ಟಡ ಭೂಮಿ ಪೂಜೆ ಕಾರ್ಯಕ್ರಮದಲ್ಲಿ ಮಾತನಾಡುತ್ತ, ಬಲು ಹಿಂದೆ ತಾಲೂಕು ಕೇಂದ್ರವಾಗಿದ್ದ ಗ್ರಾಮ ಇಂದು ಜಿಲ್ಲಾ ವಿಂಗಡಣೆ ಹಿನ್ನೆಲೆಯಲ್ಲಿ ಹೋಬಳಿಯಾಗಿದೆ. ಬಲು ಕಷ್ಟದಿಂದ ಹಿರಿಯರು ಸಂಸ್ಥೆ ಕಟ್ಟಿದ್ದಾರೆ ಎಂದರು.

ನಮ್ಮ ಹಿರಿಯರು ಕಟ್ಟಿರುವ ಸಂಸ್ಥೆಗೆ ನೂರು ವರ್ಷ ತುಂಬಿದೆ. ಇದರ ಸವಿನೆನಪಿನಲ್ಲಿ ಶತಮಾನೋತ್ಸವ ಭವನ, ವಾಣಿಜ್ಯ ಮಳಿಗೆಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ. ತದನಂತರ ಹಲವು ಜನಪರ ಯೋಜನೆಗಳನ್ನು ರೂಪಿಸಿಕೊಂಡು ಸಮಾಜಮುಖಿ ಕಾರ್ಯಗಳನ್ನು ಮಾಡಲು ಯೋಜನೆ ರೂಪಿಸಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.

ಅಧ್ಯಕ್ಷ ಕೆ.ಎಸ್.ಪರಮೇಶ್ವರಯ್ಯ, ಉಪಾಧ್ಯಕ್ಷ ಗೋಪಾಲಕೃಷ್ಣ, ನಿರ್ದೇಶಕರಾದ ಮಹಬಲಶರ್ಮ, ಮಹಬಲರಾವ್, ಕೆ.ಎಸ್. ಭಾಸ್ಕರಸ್ವಾಮಿ, ಮಾದೇಗೌಡ, ಗೌರಿಶಂಕರ್, ಶ್ರೀಹರಿ, ರಮೇಶ್, ನಾಗೇಂದ್ರ ಪುರುಷೋತ್ತಮ ಶೆಟ್ಟಿ, ಭಾಗ್ಯಮ್ಮ, ಸುಧಾ ನಾಗರಾಜು ಇದ್ದರು.

ರೈತರ ಸಮಸ್ಯೆಗಳ ಪರಿಹಾರವೇ ಎಲ್ಲಾ ಚಳುವಳಿಗಳ ಉದ್ದೇಶ

ಶಾಸಕ ದರ್ಶನ್ ಪುಟ್ಟಣ್ಣಯ್ಯ



ಮಂಡ್ಯ,ಡಿ.23– ರೈತರ ಸಮಸ್ಯೆಗಳ ಪರಿಹಾರವೇ ಎಲ್ಲಾ ಚಳುವಳಿಗಳ ಉದ್ದೇಶವಾಗಿದೆ. ಈ ಹಿನ್ನೆಲೆಯಲ್ಲಿ ರೈತ ಸಂಘಗಳು ಒಗ್ಗಟ್ಟಾಗಬೇಕು ಎಂದು ಶಾಸಕ ದರ್ಶನ್ ಪುಟ್ಟಣ್ಣಯ್ಯ ಹೇಳಿದರು.

ನಗರದ ಹಳೆ ತಾಲೂಕು ಕಚೇರಿಯಲ್ಲಿರುವ ಶಾಸಕ ದರ್ಶನ್ ಪುಟ್ಟಣ್ಣಯ್ಯ ಅವರ ಕಚೇರಿ ಆವರಣದಲ್ಲಿ ವಿಶ್ವ ರೈತ ದಿನಾಚರಣೆ ಹಾಗೂ ನಿತ್ಯ ಶಾಸಕ ಕೆ.ಎಸ್.ಪುಟ್ಟಣ್ಣಯ್ಯ ಅವರ 75ನೇ ವರ್ಷದ ಜನ್ಮದಿನ ಕಾರ್ಯಕ್ರಮ ಆಚರಿಸಿ ಅವರು ಮಾತನಾಡಿದರು.

ರೈತರು ಬೆಳೆ ಬೆಳೆಯುವ ಪದ್ಧತಿಗಳನ್ನು ಬದಲಾವಣೆ ಮಾಡದಿದ್ದರೆ ರೈತರು ಬೆಳೆದ ಬೆಳೆಗೆ ಬೆಲೆ ಸಿಗಲ್ಲ. ಇತ್ತೀಚಿನ ದಿನಗಳಲ್ಲಿ ಹವಾಮಾನ ಬದಲಾವಣೆ ಆಗುತ್ತಿದೆ ಆದ್ದರಿಂದ ರೈತರು ಬೆಳೆ ಬೆಳೆಯುವ ಪದ್ಧತಿಗಳನ್ನು ಬದಲಾವಣೆ ಮಾಡಿಕೊಳ್ಳಿ ಎಂದು ಸಲಹೆ ನೀಡಿದರು.

ಸರ್ಕಾರಗಳಿಂದ ಆಗದೇ ಇರುವ ಕೆಲಸಗಳನ್ನು ರೈತ ಸಂಘಗಳಿಂದ ಮಾಡಬಹುದು. ಪ್ರತಿ ಹಳ್ಳಿಯಲ್ಲಿ ರೈತರು ಇದ್ದಾರೆ. ರೈತ ಶಕ್ತಿಯನ್ನು ಉಪಯೋಗಿಸಿಕೊಂಡು ರೈತ ಸಂಘವನ್ನು ಒಗ್ಗಟ್ಟಾಗಿ ತೆಗೆದುಕೊಂಡು ಹೋಗುವುದು ನಮ್ಮ ಉದ್ದೇಶವಾಗಿದೆ ಎಂದು ಹೇಳಿದರು.

ಇತ್ತೀಚೆಗೆ ರೈತ ಸಂಘಗಳ 21 ಅಧ್ಯಕ್ಷರುಗಳು ಮುಖ್ಯಮಂತ್ರಿಗಳನ್ನು ಭೇಟಿ ಮಾಡಿದಾಗ ಹೋರಾಟಗಾರರು ಸತತವಾಗಿ ಹೋರಾಟದ ಚಳುವಳಿ ನಡೆಯಬೇಕು. ರೈತ ಸಂಘಗಳು ಒಗ್ಗಟ್ಟಾಗಿ, ಧ್ವನಿಯಾಗಿ ಹೋರಾಟ ಮಾಡಿ ರೈತ ಚಳುವಳಿ ನಡೆಸಿಕೊಂಡು ಹೋಗಬೇಕು ಎಂದು ಸಿಎಂ ತಿಳಿಸಿದ್ದಾರೆ ಎಂದು ಹೇಳಿದರು.

ಡಿ.23ರಂದು ರಾಷ್ಟ್ರೀಯ ರೈತರ ದಿನ ಎಂದು ಆಚರಿಸಲಾಗುತ್ತದೆ. ಈ ದಿನವು ರೈತ ಸಮುದಾಯವನ್ನು ಉನ್ನತೀಕರಿಸುವ ಕೃಷಿ ಸುಧಾರಣೆಗಳು ಮತ್ತು ನೀತಿಗಳನ್ನು ಪ್ರತಿಪಾದಿಸಿದ ಮಾಜಿ ಪ್ರಧಾನಿ ಮತ್ತು ಪ್ರಮುಖ ರೈತ ನಾಯಕ ಚೌಧರಿ ಚರಣ್ ಸಿಂಗ್ ಅವರ ಜನ್ಮದಿನವಾಗಿದೆ ಎಂದರು.

ರೈತ ಮುಖಂಡ ಮಂಜೇಶ್ ಗೌಡ ಮಾತನಾಡಿ ಸರ್ಕಾರ ಹಾಗೂ ಬಂಡವಾಳಶಾಹಿಗಳ ದೊಡ್ಡ ಶಕ್ತಿ ವಿರುದ್ಧ ರೈತರು ಒಗ್ಗಟ್ಟಾಗಿ ಚಳುವಳಿ ಮಾಡಲಿಲ್ಲ ಅಂದರೆ ರೈತ ಕುಲ ಉಳಿಯಲು ಸಾಧ್ಯವಿಲ್ಲ ಎಂದು ಹೇಳಿದರು.

ಹರಿದು ಹಂಚಿಹೋಗಿರುವ ಎಲ್ಲಾ ರೈತ ಸಂಘಟನೆಗಳು ಒಂದು ತೆಕ್ಕೆಗೆ ಬಂದಾಗ ರೈತ ಸಂಘಟನೆ ಬಲಗೊಳ್ಳುತ್ತದೆ. ಯುವ ಶಕ್ತಿಗೆ ರೈತ ಚಳುವಳಿ ನೀಡಲು ಮುಂದಾಗಬೇಕು, ಅವರಿಗೆ ಸಹಕಾರ ನೀಡಬೇಕು ಒಗ್ಗಟ್ಟಾಗಿ ಚಳುವಳಿ ಬಲಪಡಿಸಲು ಎಲ್ಲರೂ ಪಣತೊಡೋಣ ಎಂದು ಹೇಳಿದರು.

ಈ ಸಂದರ್ಭದಲ್ಲಿ ರೈತ ಮುಖಂಡರಾದ ಶಂಭೂನಹಳ್ಳಿ ಸುರೇಶ್, ಇಂಡುವಾಳು ಚಂದ್ರಶೇಖರ್, ಸೊ.ಸಿ.ಪ್ರಕಾಶ್, ಮರಿಚನ್ನೇಗೌಡ, ಅಣ್ಣೂರು ಮಹೇಂದ್ರ, ಶಿವಳ್ಳಿ ಚಂದ್ರು, ಸಿದ್ದೇಗೌಡ, ಶಾಸಕ ದರ್ಶನ್ ಪುಟ್ಟಣ್ಣಯ್ಯ ಅವರ ಮಕ್ಕಳಾದ ವಚನ್ ಪುಟ್ಟಣ್ಣಯ್ಯ, ನಿಧಿ ಪುಟ್ಟಣ್ಣಯ್ಯ ಸೇರಿದಂತೆ ಇತರರು ಪಾಲ್ಗೊಂಡಿದ್ದರು.

ಮನ್‌ಮುಲ್ ನಿರ್ದೇಶಕರ ಚುನಾವಣೆ

ಜೆಡಿಎಸ್ ಬೆಂಬಲಿತ ಅಭ್ಯರ್ಥಿಯಾಗಿ ಸಿ.ಶಿವಕುಮಾರ್



ಸಿ.ಶಿವಕುಮಾರ್

ಚಿನಕುರಳಿ, ಡಿ.23– ಮನ್‌ಮುಲ್ ನಿರ್ದೇಶಕ ಸ್ಥಾನದ ಚುನಾವಣೆಯ ಹಿನ್ನೆಲೆಯಲ್ಲಿ ಪಾಂಡವಪುರ ತಾಲೂಕಿನಿಂದ ಜೆಡಿಎಸ್ ಬೆಂಬಲಿತ ಅಭ್ಯರ್ಥಿಯನ್ನಾಗಿ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅವರ ಅಣ್ಣ ದಿವಂಗತ ಚಿಕ್ಕರಾಮೇಗೌಡ ಪುತ್ರ ಸಿ.ಶಿವಕುಮಾರ್ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

ತಾಲೂಕಿನ ಎಲೆಕೆರೆ ಹ್ಯಾಂಡ್‌ಪೋಸ್ಟ್‌ನಲ್ಲಿ ಇರುವ ರುತ್ವಿ ಅಕ್ಷಯ್ ಕನ್ವೆನ್ಷನ್ ಹಾಲ್‌ನಲ್ಲಿ ಅಭ್ಯರ್ಥಿ ಆಯ್ಕೆ ಸಂಬಂಧವಾಗಿ ಪಕ್ಷದ ಅಧ್ಯಕ್ಷ ಎಸ್.ಎ.ಮಲ್ಲೇಶ್ ಅವರ ಅಧ್ಯಕ್ಷತೆ ಹಾಗೂ ಮಾಜಿ ಸಚಿವ ಸಿ.ಎಸ್. ಪುಟ್ಟರಾಜು ಅವರ ನೇತೃತ್ವದಲ್ಲಿ ನಡೆದ ಪಕ್ಷದ ಮುಖಂಡರು, ಡೇರಿ ಡೆಲಿಗೇಟ್ಸ್ (ಮತದಾರರು) ಸಭೆಯಲ್ಲಿ ಚರ್ಚಿಸಿ ಎಲ್ಲರೂ ಸರ್ವಾನುಮತದಿಂದ ಚಿನಕುರಳಿ ಡೇರಿ ಅಧ್ಯಕ್ಷ ಸಿ.ಶಿವಕುಮಾರ್ ಅವರ ಹೆಸರನ್ನು ಅಂತಿಮಗೊಳಿಸಿ ಘೋಷಿಸಿದರು.

ಮನ್‌ಮುಲ್ ನಿರ್ದೇಶಕರ ಸ್ಥಾನದ ಚುನಾವಣೆಗೆ ಆಕಾಂಕ್ಷಿತ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಂಬಂಧವಾಗಿ ಎಲ್ಲಾ ಡೇರಿ ಡೆಲಿಗೇಟ್ಸ್ ಹಾಗೂ ಮುಖಂಡರು, ಕಾರ್ಯಕರ್ತರ ಸಭೆಯನ್ನು ಕರೆಯಲಾಗಿದೆ. ಆಕಾಂಕ್ಷಿತರು ತಮ್ಮ ಹೆಸರುಗಳನ್ನು ಪ್ರಸ್ತಾಪಿಸಬೇಕೆಂದು ಪಕ್ಷದ ಅಧ್ಯಕ್ಷ ಎಸ್.ಎ.ಮಲ್ಲೇಶ್ ತಿಳಿಸಿದರು.

ಸಭೆಯಲ್ಲಿ ಮನ್‌ಮುಲ್ ನಿರ್ದೇಶಕ ಸ್ಥಾನಕ್ಕೆ ಕಣಿವೆಕೊಪ್ಪಲು ಜಯರಾಮು, ಚಿಕ್ಕಾಡೆ ಗಿರೀಗೌಡ ಹಾಗೂ ಚಿನಕುರಳಿಯ ಸಿ.ಶಿವಕುಮಾರ್ ಅವರು ನಾವು ಆಕಾಂಕ್ಷಿತರು ಎಂಬುದಾಗಿ ಸಭೆಗೆ ತಿಳಿಸಿದರು.

ಮೂರು ಮಂದಿ ಆಕಾಂಕ್ಷಿತರು ಇದ್ದ ಕಾರಣ ಪಕ್ಷದ ಅಧ್ಯಕ್ಷರು ಹಾಗೂ ಕೆಲವು ಮುಖಂಡರು ಸಭೆಯಲ್ಲಿದ್ದ ಡೇರಿ ಡೆಲಿಗೇಟ್ಸ್, ಕಾರ್ಯಕರ್ತರ ಅಭಿಪ್ರಾಯ ಸಂಗ್ರಹಿಸಿದರು. ಬಳಿಕ ಪಕ್ಷದ ಅಧ್ಯಕ್ಷ ಎಸ್.ಎ.ಮಲ್ಲೇಶ್ ಅವರು ಮೂರು ಮಂದಿ ಆಕಾಂಕ್ಷಿತರನ್ನೊಂದಿಗೆ ಗುಪ್ತವಾಗಿ ಚರ್ಚಿಸಿದರು. ಅಂತಿಮವಾಗಿ ಎಲ್ಲರ ಅಭಿಪ್ರಾಯದಂತೆ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅವರ ಅಣ್ಣ ಚಿಕ್ಕರಾಮೇಗೌಡ ಪುತ್ರ ಸಿ.ಶಿವಕುಮಾರ್ ಅವರ ಅಭ್ಯರ್ಥಿ ಎಂದು ಘೋಷಿಸಿದರು. ಇದಕ್ಕೆ ಉಳಿದ ಇನ್ನಿಬ್ಬರು ಆಕಾಂಕ್ಷಿತ ಅಭ್ಯರ್ಥಿಗಳು ಸಹ ಬೆಂಬಲ ಸೂಚಿಸಿದರು.

ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಮಾತನಾಡಿ, ಪಕ್ಷ ಸಂಘಟನೆಗೆ ಸ್ಥಳೀಯ ಸಂಸ್ಥೆಯ ಚುನಾವಣೆಗಳು ಪ್ರಮುಖವಾಗಿದೆ. ಪಕ್ಷ ತಾಯಿ ಇದ್ದಂತೆ ಯಾರೂ ಪಕ್ಷಕ್ಕೆ ಮೋಸಮಾಡಬೇಡಿ, ಮನ್‌ಮುಲ್ ಚುನಾವಣೆಯ ಅಭ್ಯರ್ಥಿ ಆಯ್ಕೆ ಜವಾಬ್ದಾರಿಯನ್ನು ಪಕ್ಷದ ಅಧ್ಯಕ್ಷರಿಗೆ ನೀಡಲಾಗಿದೆ. ಅಧ್ಯಕ್ಷರು ಆಯ್ಕೆ ಮಾಡುವ ಅಭ್ಯರ್ಥಿಯ ಗೆಲುವಿಗೆ ಎಲ್ಲರು ಶ್ರಮಿಸಬೇಕೆಂದು ಮನವಿ ಮಾಡಿದರು.

ಸಭೆಯಲ್ಲಿ ಎಚ್.ಮಂಜುನಾಥ್, ಗುರುಸ್ವಾಮಿ, ಪಿ.ಚಲುವರಾಜು, ಲಿಂಗರಾಜು, ಸಿ.ಎಸ್.ಗೋಪಾಲಗೌಡ, ಆನಂದ್, ಹುಚ್ಚೇಗೌಡ, ಶ್ರೀನಿವಾಸ್, ರಾಜಪ್ಪ ಸೇರಿದಂತೆ ಹಲವು ಮುಖಂಡರು ಭಾಗವಹಿಸಿದ್ದರು.

ಒಂದನೇ ಪುಟದಿಂದ

ಕಠಿಣ ಕ್ರಮ

ರಚಿಸಲಾಗಿತ್ತು. ಈ ಸಂಬಂಧ ಕೂಲಂಕುಷವಾಗಿ ತನಿಖೆ ನಡೆಸಿ ಸಮಿತಿಯು ಸರ್ಕಾರಕ್ಕೆ ದಾಖಲೆಗಳೊಂದಿಗೆ ವರದಿ ಸಲ್ಲಿಸಿದ್ದು, ಈ ಹಿಂದಿನ ಮುಡಾ ಆಯುಕ್ತರಾದ ಜಿ.ಟಿ. ದಿನೇಶ್‌ಕುಮಾರ್ ಆ ಅವಧಿಯಲ್ಲಿ ಪ್ರಕರಣಗಳನ್ನು ನಿರ್ವಹಿಸಿದ ಪ್ರಾಧಿಕಾರದ ಭೂಸ್ವಾಧೀನ ಶಾಖೆ, ನಿವೇಶನ ಶಾಖೆ, ಲೆಕ್ಕಪತ್ರ ಶಾಖೆ, ವಲಯ ಅಭಿಯಂತರ ಕಚೇರಿ, ರೆಕಾರ್ಡ್ ರೂಂ, ಉಪನೋಂದಣಾಧಿಕಾರಿ ಕಚೇರಿ ಅಧಿಕಾರಿಗಳು, ನೌಕರರು ಭಾಗಿಯಾಗಿರುವುದು ಮೇಲ್ನೋಟಕ್ಕೆ ಕಂಡುಬಂದಿದೆ ಎಂಬ ಅಂಶವನ್ನು ವರದಿಯಲ್ಲಿ ತಿಳಿಸಲಾಗಿತ್ತು. ನಿಯಮಬಾಹಿರವಾಗಿ ನಿವೇಶನ ಮಂಜೂರು ಮಾಡಿರುವ ಪ್ರಕರಣಗಳಲ್ಲಿ ಹಕ್ಕುಪತ್ರ ನೀಡಿ ನಿವೇಶನ ನೋಂದಣಿ ಮಾಡಿ ಖಾತೆ ಹಂಚಿಕೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಿದ್ದು, ಇದರಿಂದ ಸರ್ಕಾರ ಮತ್ತು ಪ್ರಾಧಿಕಾರಕ್ಕೆ ಅಪಾರ ಆರ್ಥಿಕ ನಷ್ಟ ಉಂಟು ಮಾಡಿರುವುದು ಮೇಲ್ನೋಟಕ್ಕೆ ಕಂಡುಬಂದಿದೆ. ಆದ್ದರಿಂದ ಈ ಅಧಿಕಾರಿಗಳ ಹೆಸರು, ಹುದ್ದೆ, ಜನ್ಮ ದಿನಾಂಕ, ಎರವಲು ಸೇವೆ ಪಡೆದಿದ್ದಲ್ಲಿ ಮಾತ್ರ ಇಲಾಖೆಯ ವಿವರ, ವರ್ಗಾವಣೆಗೊಂಡಿದ್ದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಕಚೇರಿ ವಿಳಾಸ, ಹುದ್ದೆಯ ವಿವರ, ಸೇವೆಯಿಂದ ನಿವೃತ್ತರಾಗಿದ್ದಲ್ಲಿ ಹಾಲಿ ವಾಸದ ವಿಳಾಸ ಮತ್ತಿತರ ಮಾಹಿತಿಯನ್ನು ಜರೂರಾಗಿ ನೀಡುವಂತೆ ಸರ್ಕಾರ ನಿರ್ದೇಶನ ನೀಡಿದೆ.

ಭೂ ಸ್ವಾಧೀನ ಶಾಖೆಯ ವಿಶೇಷ ಭೂಸ್ವಾಧೀನಾಧಿಕಾರಿ, ವ್ಯವಸ್ಥಾಪಕ, ವಿಷಯ ನಿರ್ವಾಹಕ, ಕಂದಾಯ ನಿರೀಕ್ಷಕರು, ಭೂ ಮಾಪಕರು, ನಿವೇಶನ ಶಾಖೆಯ ಮುಡಾ ಕಾರ್ಯದರ್ಶಿ, ವಿಶೇಷ ತಹಸೀಲ್ದಾರ್, ವ್ಯವಸ್ಥಾಪಕರು, ವಿಷಯ ನಿರ್ವಾಹಕರು, ಲೆಕ್ಕಪತ್ರ ಶಾಖೆಯ ಮುಖ್ಯ ಲೆಕ್ಕಾಧಿಕಾರಿ, ಲೆಕ್ಕಾಧಿಕಾರಿ, ಲೆಕ್ಕ ಅಧೀಕ್ಷಕರು, ಪ್ರಥಮ ದರ್ಜೆ ಲೆಕ್ಕ ಸಹಾಯಕರು, ಇಂಜಿನಿಯರಿಂಗ್ ಶಾಖೆಯ ಅಸಿಸ್ಟೆಂಟ್ ಎಕ್ಸಿಕ್ಯೂಟಿವ್ ಇಂಜಿನಿಯರ್, ಅಸಿಸ್ಟೆಂಟ್ ಇಂಜಿನಿಯರ್, ಜೂನಿಯರ್ ಇಂಜಿನಿಯರ್, ರೆಕಾರ್ಡ್ ರೂಂನ ನಿರ್ವಹಣಾಧಿಕಾರಿ, ಮುಡಾ ಪರವಾಗಿ ಕಾರ್ಯನಿರ್ವಹಿಸಿದ ಉಪನೋಂದಣಾಧಿಕಾರಿಗಳ ಮಾಹಿತಿ ನೀಡುವಂತೆ ಅಧೀನ ಕಾರ್ಯದರ್ಶಿಗಳು ಸೂಚಿಸಿದ್ದಾರೆ.

ಪ್ರಕರಣ ನಡೆದ ಸಂದರ್ಭ ಅಧಿಕಾರಿ ಅಥವಾ ನೌಕರರು ಸದರಿ ಹುದ್ದೆಯಲ್ಲಿ ಕಾರ್ಯನಿರ್ವಹಿಸಿದ ಬಗ್ಗೆ ದೃಢೀಕರಿಸುವ ಕಚೇರಿ ಆದೇಶ ಪ್ರತಿಗಳು, ಅವರು ನಿರ್ವಹಿಸಿದ ಜವಾಬ್ದಾರಿ ಹಾಗೂ ಇದರಿಂದ ಪ್ರಾಧಿಕಾರಕ್ಕೆ ಮತ್ತು ಸರ್ಕಾರಕ್ಕೆ ಉಂಟಾಗಿರುವ ಆರ್ಥಿಕ ನಷ್ಟ ಮೊತ್ತದ ಅಂದಾಜು ವಿವರಗಳನ್ನು ಸಲ್ಲಿಸಬೇಕು. ಒಂದು ವೇಳೆ ಈ ಪ್ರಕರಣದಲ್ಲಿ ಭಾಗಿಯಾಗಿರುವ ಅಧಿಕಾರಿಗಳು ಮತ್ತು ನೌಕರರನ್ನು ಗುರುತಿಸುವಲ್ಲಿ ಬೇಜವಾಬ್ದಾರಿ ಕಂಡುಬಂದಲ್ಲಿ ಅಥವಾ ಸರ್ಕಾರದ ನಿರ್ದೇಶನವನ್ನು ಸೂಕ್ತ ರೀತಿಯಲ್ಲಿ ಪಾಲಿಸದೆ ಭಾಗಿಯಾದವರನ್ನು ಶಿಸ್ತು ಕ್ರಮದಿಂದ ಹೊರಗುಳಿಯಲು ಆಸ್ಪದ ನೀಡಿದಲ್ಲಿ ಗಂಭೀರವಾಗಿ ಪರಿಗಣಿಸಲಾಗುವುದು ಎಂದೂ ಅವರು ತಮ್ಮ ಪತ್ರದಲ್ಲಿ ನಿರ್ದೇಶನ ನೀಡಿದ್ದಾರೆ.

ಈಗಾಗಲೇ ಲೋಕಾಯುಕ್ತ ಎಸ್‌ಪಿ ಉದೇಶ್ ನೇತೃತ್ವದಲ್ಲಿ ತನಿಖೆ ನಡೆಯುತ್ತಿದ್ದು, ಮತ್ತೊಂದೆಡೆ ನಿವೃತ್ತ ನ್ಯಾಯಮೂರ್ತಿ ಪಿ.ಎನ್.ದೇಸಾಯಿ ನೇತೃತ್ವದ ಏಕಸದಸ್ಯ ಸಮಿತಿಯು ಮುಡಾ ನಿವೇಶನ ಹಂಚಿಕೆ ಹಗರಣಗಳ ಸಂಬಂಧ ತನಿಖೆ ನಡೆಸುತ್ತಿದ್ದು, ಮತ್ತೊಂದೆಡೆ ಜಾರಿ ನಿರ್ದೇಶನಾಲಯ (ಇಡಿ)ದ ಅಧಿಕಾರಿಗಳು ಸಹ ತನಿಖೆ ನಡೆಸಿ, ಮಧ್ಯಂತರ ವರದಿಯನ್ನು ಸಲ್ಲಿಸಿದ್ದು, ಒಟ್ಟಾರೆ ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ ಇದುವರೆಗೂ ಓರ್ವ ಅಂದಿನ ಆಯುಕ್ತರನ್ನು ಹೊರತುಪಡಿಸಿ ಯಾವ ಅಧಿಕಾರಿ ಹಾಗೂ ಸಿಬ್ಬಂದಿಯ ವಿರುದ್ಧವೂ ಶಿಸ್ತು ಕ್ರಮವಾಗಿಲ್ಲ ಎಂಬುದನ್ನು ಇಲ್ಲಿ ಗಮನಿಸಬಹುದು.

ಇ–ಖಾತಾ ಅಭಿಯಾನ

ದೇವಸ್ಥಾನ, ಲಕ್ಷ್ಮಿಕಾಂತನಗರದ ಸಮುದಾಯ ಭವನ ಹಾಗೂ 20ನೇ ವಾರ್ಡಿನ ವಿಜಯನಗರ 1ನೇ ಹಂತದ ಶ್ರೀ ಯೋಗಾನರಸಿಂಹ ಸ್ವಾಮಿ ದೇವಸ್ಥಾನ ಎದುರಿನ ಸಂಜೀವಯ್ಯ ಸ್ಮಾರಕ ಶಾಲೆಯಲ್ಲಿ ಇ–ಖಾತಾ ನೋಂದಣಿ ಅಭಿಯಾನವನ್ನು ವಲಯ ಕಚೇರಿ 5ರ ವಲಯಾಧಿಕಾರಿ ನಾಗೇಶ್ ಡಿ., ಕಂದಾಯಾಧಿಕಾರಿ ಎಂ.ಪ್ರಸಾದ್, ಕಂದಾಯ ನಿರೀಕ್ಷಕಿ ಪಿ.ನಯನ, ಸಿಬ್ಬಂದಿಗಳೊಂದಿಗೆ ಆರಂಭಿಸಿದರು.

ನಾಳೆ (ಡಿ.24) ವಾರ್ಡ್ ನಂ.2ರ ಹೆಬ್ಬಾಳು 1ನೇ ಹಂತದ ಶ್ರೀ ಅನ್ನಪೂರ್ಣೇಶ್ವರಿ ದೇವಸ್ಥಾನ, ಮಂಚೇಗೌಡನಕೊಪ್ಪಲಿನ ಸಮುದಾಯ ಭವನ, ನಾರಾಯಣಶಾಸ್ತ್ರಿ ರಸ್ತೆಯ ಹೊಯ್ಸಳ ಕರ್ನಾಟಕ ಸಂಘದ ಕಚೇರಿ, ಡಿ.27ರಂದು ಮಲೆ ಮಹದೇಶ್ವರ ಸ್ವಾಮಿ ದೇವಸ್ಥಾನ, 2025ರ ಜನವರಿ 2ರಂದು ಇಟ್ಟಿಗೆಗೂಡಿನ ದುರ್ಗಾ ಪರಮೇಶ್ವರಿ ದೇವಸ್ಥಾನ, ಜನವರಿ 4ರಂದು ಶಂಕರಮಠದ ರಸ್ತೆಯ ನಟರಾಜ ಕಲ್ಯಾಣ ಮಂಟಪ, ಜನವರಿ 6ರಂದು ಕರುಮಾರಿಯಮ್ಮ ಸಮುದಾಯ ಭವನ, ಜನವರಿ 8ರಂದು ಜೆಎಲ್‌ಬಿ ರಸ್ತೆಯ ಆರಾಧ್ಯ ವಿದ್ಯಾರ್ಥಿನಿಲಯ, ಜನವರಿ 10ರಂದು ವಿದ್ಯಾರಣ್ಯಪುರಂನ ಒಕ್ಕಲಿಗರ ಸಮುದಾಯ ಭವನದಲ್ಲಿ ಇ–ಸ್ವತ್ತು ನೋಂದಣಿ ಪ್ರಕ್ರಿಯೆ ನಡೆಯಲಿದೆ.

ವಲಯ ಕಚೇರಿ 4ಕ್ಕೆ ಸಂಬಂಧಪಟ್ಟ ವಾರ್ಡ್ ನಂ.6ಕ್ಕೆ ಸಂಬಂಧಪಟ್ಟಂತೆ ಡಿ.27 ರಂದು ಮಧ್ಯಾಹ್ನ 2.30 ರಿಂದ ಸಂಜೆ 4ರವರೆಗೆ ಡಾಕ್ಟರ್ಸ್ ಕಾರ್ನರ್‌ನಲ್ಲಿರುವ ಮೈಸೂರು ಒನ್ ಕಚೇರಿ ಆವರಣ, ವಾರ್ಡ್ 18ಕ್ಕೆ ಸಂಬಂಧಿಸಿದಂತೆ ಡಿ.27 ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 1 ರವರೆಗೆ ಯಾದವಗಿರಿಯಲ್ಲಿರುವ ಸಂಕಲ್ಪ್ ಸೆಂಟ್ರಲ್ ಪಾರ್ಕ್ ಅಪಾರ್ಟ್‌ಮೆಂಟ್‌ನಲ್ಲಿ, ವಾರ್ಡ್ 21ಕ್ಕೆ ಸಂಬಂಧಿಸಿದಂತೆ ಡಿ.30 ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 1ರವರೆಗೆ ಸರಸ್ವತಿಪುರಂ ಈಜುಕೊಳ ರಸ್ತೆಯಲ್ಲಿರುವ ಕರ್ನಾಟಕ ಗೃಹ ಮಂಡಲಿ ಕಚೇರಿ ಆವರಣ, ವಾರ್ಡ್ 22ಕ್ಕೆ ಸಂಬಂಧಿಸಿದಂತೆ ಡಿ.30 ರಂದು ಮಧ್ಯಾಹ್ನ 2.30 ರಿಂದ ಸಂಜೆ 4 ರವರೆಗೆ ಪಡುವಾರಹಳ್ಳಿಯ ಮಹದೇಶ್ವರ ದೇವಸ್ಥಾನ, ವಾರ್ಡ್ 19ಕ್ಕೆ ಸಂಬಂಧಿಸಿದಂತೆ ಜ.2 ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 1 ರವರೆಗೆ ಜಯಲಕ್ಷ್ಮಿಪುರಂನಲ್ಲಿರುವ ವಾಣಿ ವಿಲಾಸ ನೀರು ಸರಬರಾಜು ಮತ್ತು ಒಳಚರಂಡಿ ಮಂಡಲಿಯ ನೀರಿನ ತೆರಿಗೆ ವಸೂಲಾತಿ ಕೇಂದ್ರದಲ್ಲಿ ಇ–ಖಾತಾ ಅಭಿಯಾನ ನಡೆಯಲಿದೆ.

ಅದೇ ರೀತಿ ಮೈಸೂರಿನ ನಗರದಾದ್ಯಂತ ಎಲ್ಲಾ 65 ವಾರ್ಡ್‌ಗಳಲ್ಲೂ ಜನವರಿ ತಿಂಗಳಲ್ಲಿ ಇ–ಸ್ವತ್ತು ನೋಂದಣಿ ಅಭಿಯಾನ ನಡೆಯಲಿದ್ದು, ಸಾರ್ವಜನಿಕರು ತಮ್ಮ ವ್ಯಾಪ್ತಿಯಲ್ಲಿ ಕೇಂದ್ರಗಳಿಗೆ ತೆರಳಿ ಅಗತ್ಯ ಪೂರಕ ದಾಖಲೆಗಳನ್ನು ಸಲ್ಲಿಸಿ, ತಮ್ಮ ಆಸ್ತಿಗಳ ಇ–ಸ್ವತ್ತು ನೋಂದಣಿ ಮಾಡಿಸಿಕೊಳ್ಳುವಂತೆ ಮೈಸೂರು ಮಹಾನಗರಪಾಲಿಕೆ ಆಯುಕ್ತ ಅಶಾದ್ ಉರ್ ರೆಹಮಾನ್ ಷರೀಫ್ ಅವರು ತಿಳಿಸಿದ್ದಾರೆ. ಆಸ್ತಿಗಳನ್ನು ಅಡಮಾನವಿಟ್ಟು ಬ್ಯಾಂಕ್ ಅಥವಾ ಇತರೆ ಹಣಕಾಸು ಸಂಸ್ಥೆಗಳಿಂದ ಸಾಲ ಪಡೆಯಲು ಅಥವಾ ಮಾರಾಟ ಮಾಡಲು ಇ–ಸ್ವತ್ತು ನೋಂದಣಿಯಾಗಿರಬೇಕು ಎಂಬುದನ್ನು ಸರ್ಕಾರ ಕಡ್ಡಾಯ ಮಾಡಿರುವ ಹಿನ್ನೆಲೆಯಲ್ಲಿ ಆಸ್ತಿಗಳ ಮಾಲೀಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕೆಂದೂ ತಿಳಿಸಿದ್ದಾರೆ.

ವಿರೋಧಿಗಳ ದಮನ

ನಡೆಯುತ್ತಿವೆ. ಕರ್ನಾಟಕಕ್ಕೆ ಭವಿಷ್ಯದಲ್ಲಿ ಅತ್ಯಂತ ಕೆಟ್ಟ ದಿನಗಳು ಕಾದಿವೆ ಎಂದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜಕಾರಣದಲ್ಲಿ ವೈಷಮ್ಯ, ದ್ವೇಷ ಬೆಳೆಯಲು ಸಿದ್ದರಾಮಯ್ಯ ಸರ್ಕಾರ ಬೀಜ ಬಿತ್ತನೆ ಮಾಡಿದೆ. ಮುಂದೆಯೂ ಸಹ ಇಂತಹದ್ದೇ ಕೆಟ್ಟ ಪರಿಸ್ಥಿತಿ ಮುಂದುವರೆಯಲಿದೆ ಎಂಬುದರಲ್ಲಿ ಯಾವುದೇ ಅನುಮಾನ ಇಲ್ಲ ಎಂದರು. ರಾಜ್ಯದಲ್ಲಿ ಪೊಲೀಸ್ ವ್ಯವಸ್ಥೆ ಇಡೀ ದೇಶಕ್ಕೆ ಮಾದರಿಯಾಗಿತ್ತು. ನಮ್ಮ ಪೂರ್ವಿಕರು ಉತ್ತಮ ವಾತಾವರಣ ರೂಪಿಸಿದ್ದರು, ನಮ್ಮ ಪೊಲೀಸ್ ಎಂದರೆ, ರಾಷ್ಟ್ರದಲ್ಲಿ ಗೌರವ ಇತ್ತು. ದುರದೃಷ್ಟವೆಂದರೆ, ಅದೆಲ್ಲವನ್ನೂ ಸರ್ವ ನಾಶ ಮಾಡಲು ಈ ಸರ್ಕಾರ ಹೊರಟಿದೆ. ಪೊಲೀಸ್ ಗೌರವ ಮಣ್ಣುಪಾಲು ಮಾಡುವಲ್ಲಿ ಮುಂದಾಗಿದೆ.

ಸಿ.ಟಿ.ರವಿ ಪ್ರಕರಣದಲ್ಲಿ ಬೆಳಗಾವಿ ಪೊಲೀಸರು ನಡೆದುಕೊಂಡ ರೀತಿಯ ಬಗ್ಗೆ ತೀವ್ರ ಬೇಸರ ವ್ಯಕ್ತಪಡಿಸಿದ ಅವರು, ಬಿಜೆಪಿ ಸ್ನೇಹಿತರು ಸರಿಯಾದ ರೀತಿಯಲ್ಲಿ ಕಾನೂನು ಹೋರಾಟ ಮಾಡಿದರೆ ಪ್ರಕರಣಕ್ಕೆ ಸಂಬಂಧಪಟ್ಟ ಎಲ್ಲಾ ಪೊಲೀಸ್ ಅಧಿಕಾರಿಗಳು ಸಸ್ಪೆಂಡ್ ಆಗಲಿದ್ದಾರೆ. ರಾಜ್ಯಸಭೆಯಲ್ಲಿನ ಅಮಿತ್ ಷಾ ಹೇಳಿಕೆ ಬಗ್ಗೆ ರಾಜ್ಯ ವಿಧಾನ ಸಭೆಯಲ್ಲಿ ಚರ್ಚೆ ಮಾಡಿದ್ದಾರೆ. ರಾಜ್ಯಸಭೆಯಲ್ಲಿ ಪ್ರಾರಂಭವಾದ ವಿಷಯ ಆ ಸದನಕ್ಕೆ ಸಂಬಂಧಪಟ್ಟಿದ್ದು. ಅಮಿತ್ ಷಾ ಅವರು ವಿಧಾನ ಪರಿಷತ್ ಸದಸ್ಯರೆ ಎಂದು ಖಾರವಾಗಿ ಪ್ರಶ್ನಿಸಿದರು. ಸಿ.ಟಿ.ರವಿ ಅವರನ್ನು ರಾತ್ರಿಯೆಲ್ಲಾ ಸುತ್ತಿಸಬೇಕಿತ್ತಾ, ಅವರು ಒಬ್ಬ ಜನಪ್ರತಿನಿಧಿ, ಬಂಧಿಸುವುದಿದ್ದರೆ ನೇರವಾಗಿ ಬೆಂಗಳೂರಿನ ಜನಪ್ರತಿನಿಧಿ ಕೋರ್ಟ್‌ಗೆ ಕರೆದುಕೊಂಡು ಬರಬಹುದಿತ್ತು. ರಾತ್ರಿಯೆಲ್ಲಾ ಸುತ್ತಿಸಬೇಕಾದ ಅವಶ್ಯಕತೆ ಏನಿತ್ತು. ಇದಕ್ಕೆಲ್ಲ ಯಾರು ಡೈರೆಕ್ಷನ್ ಕೊಟ್ಟವರು.

ಮಂತ್ರಿಯೊಬ್ಬರ ಚಿತಾವಣೆಯಿಂದ ಯಾವ ಅಧಿಕಾರಿಗಳು ಸಿ.ಟಿ.ರವಿಗೆ ಮಾನಸಿಕವಾಗಿ ಹಿಂಸೆ ಕೊಟ್ಟಿದ್ದಾರೋ ಅವರು ಅದರ ಪ್ರತಿಫಲ ಎದುರಿಸಬೇಕಾಗುತ್ತದೆ ಎಂದರು. ಮಾಜಿ ಸಚಿವ ವಿನಯ್ ಕುಲಕರ್ಣಿ ಪ್ರಕರಣವನ್ನು ಏನು ಮಾಡಿದಿರಿ, ಕಾಂಗ್ರೆಸ್ ನಾಯಕ ಗುರಪ್ಪ ನಾಯ್ಡು ಮೇಲೆ ಶಿಕ್ಷಕರೊಬ್ಬರು ದೂರು ಕೊಟ್ಟರಲ್ಲ, ಆ ದೂರು ಏನಾಯಿತು. ರಾಜ್ಯದಲ್ಲಿ ಏನೇನು ನಡೆಯುತ್ತಿದೆ ಎಂಬುದನ್ನು ಗಮನಿಸುತ್ತಿದ್ದೇನೆ.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ರಾಜಕೀಯ ವಿರೋಧಿಗಳಿಗೆ ಹೇಗೆಲ್ಲಾ ಕಿರುಕುಳ ನೀಡುತ್ತಿದೆ ಎಂಬುದನ್ನು ನಾನು ಬಲ್ಲೆ. ಕರ್ನಾಟಕದಲ್ಲಿ ಮುಂದಿನ ದಿನಗಳಲ್ಲಿ ರಾಜಕಾರಣ ಯಾವ ದಿಕ್ಕಿನಲ್ಲಿ ಸಾಗಬಹುದು ಎನ್ನುವುದಕ್ಕೆ ಕಾಂಗ್ರೆಸ್‌ನವರು ವೇದಿಕೆ ಸಿದ್ಧ ಮಾಡುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

ಲಕ್ಷ್ಮಿ ಹೆಬ್ಬಾಳ್ಕರ್ ಬಿಡಲ್ಲ

ಛೀಮಾರಿ ಹಾಕುತ್ತಿದ್ದಾರೆ. ಕಾನೂನು ಪ್ರಕಾರ ಪೋಲಿಸರು ಏನು ಮಾಡಬೇಕೋ ಅದನ್ನು ಮಾಡಿದ್ದಾರೆ. ಪ್ರಕರಣ ದಾರಿ ತಪ್ಪಿಸುವ ಕೆಲಸವನ್ನು ಬಿಜೆಪಿಯವರು ಮಾಡುತ್ತಿದ್ದಾರೆ, ನಾನು ಈ ಘಟನೆ ಬಗ್ಗೆ ಪ್ರಧಾನಿ ಹಾಗೂ ರಾಷ್ಟ್ರಪತಿ ಅವರಿಗೂ ಪತ್ರ ಬರೆಯುವುದಾಗಿ ಹೆಬ್ಬಾಳ್ಕರ್ ತಿಳಿಸಿದರು.

ಮೈಸೂರಿನಲ್ಲಿ ಕಾಂಗ್ರೆಸ್ ಭಾರಿ ಪ್ರತಿಭಟನೆ

ಹೇಳಿಕೆಗಳಿಂದ ಸ್ಪಷ್ಟವಾಗಿದೆ. ಕೋಮು ಸೌಹಾರ್ದತೆ ಹಾಗೂ ಸಮಾನತೆ ವಿರೋಧಿಗಳಾಗಿರುವ ಬಿಜೆಪಿಯವರು ತಮ್ಮ ನೂರು ವರ್ಷದ ಹಿಂದಿನ ನಿಲುವುಗಳನ್ನು ಈಗ ಬಹಿರಂಗಗೊಳಿಸುತ್ತಿದ್ದಾರೆ ಎಂದು ಕಿಡಿಕಾರಿದರು. ಆರ್‌ಎಸ್‌ಎಸ್‌ನವರು ಮನುವಾದವನ್ನು ಗಟ್ಟಿಗೊಳಿಸುತ್ತಿದ್ದಾರೆ. ತಾವು ಮನುಸ್ಮೃತಿ ಪರವಾಗಿದ್ದೇವೆ ಎಂಬುದನ್ನು ಪ್ರತಿ ಹಂತದಲ್ಲೂ ಸಾಬೀತು ಮಾಡುತ್ತಿದ್ದಾರೆ. ಇದನ್ನು ನಾವು, ನೀವೆಲ್ಲರೂ ಅರಿತುಕೊಂಡು ಇವರಿಗೆ ತಕ್ಕ ಪಾಠ ಕಲಿಸಬೇಕು ಎಂದು ಡಾ.ಮಹದೇವಪ್ಪ ಸಲಹೆ ನೀಡಿದರು. ಅಂಬೇಡ್ಕರ್ ಅವರು ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧೆ ಮಾಡಿದಾಗ ಹಿಂದೂ ಮಹಾಸಭಾ ಅವರನ್ನು ಸೋಲಿಸಿತು. ಆದರೆ ಆ ತಪ್ಪನ್ನು ಕಾಂಗ್ರೆಸ್ ಮೇಲೆ ಹೊರೆಸಿದೆ ಎಂದು ಆರೋಪಿಸಿದರು. ಅಂಬೇಡ್ಕರ್ ಅಂತ್ಯಕ್ರಿಯೆ ನಡೆಸಲು ದೆಹಲಿಯಲ್ಲಿ ಅಂಗೈ ಅಗಲ ಜಾಗ ನೀಡಲಿಲ್ಲ ಎಂದು ಬಿಜೆಪಿಯವರು ಈಗ ಕಾಂಗ್ರೆಸ್ ವಿರುದ್ಧ ಆರೋಪ ಮಾಡುತ್ತಿದ್ದಾರೆ. ಆದರೆ ಮುಂಬೈನಲ್ಲಿಯೇ ಅಂತ್ಯಕ್ರಿಯೆ ನಡೆಸಬೇಕು ಎಂದು ಅಂಬೇಡ್ಕರ್ ಕುಟುಂಬಸ್ಥರು ನಿರ್ಧಾರ ಮಾಡಿದರು. ಆದರೆ ವಾಸ್ತವ ಮರೆಮಾಚುತ್ತಿರುವ ಬಿಜೆಪಿಯವರು ಕಾಂಗ್ರೆಸ್ ಬಗ್ಗೆ ಜನರಲ್ಲಿ ತಪ್ಪು ಭಾವನೆ ಮೂಡಿಸುತ್ತಿದ್ದಾರೆ ಎಂದು ಡಾ.ಮಹದೇವಪ್ಪ ಆರೋಪಿಸಿದರು.

ಈ ವೇಳೆ ಮಾತನಾಡಿದ ಪಶು ಸಂಗೋಪನಾ ಸಚಿವ ವೆಂಕಟೇಶ್, ಅಂಬೇಡ್ಕರ್ ಸಂವಿಧಾನ ಬರೆಯದಿದ್ದರೆ ಇಂದು ನಾವು, ನೀವೆಲ್ಲಾ ನೆಮ್ಮದಿಯಿಂದ ಬದುಕಲು ಸಾಧ್ಯವಾಗುತ್ತಿರಲಿಲ್ಲ ಎಂದು ಅಭಿಪ್ರಾಯಪಟ್ಟರು. ಕೇಂದ್ರ ಬಿಜೆಪಿ ಸರ್ಕಾರ ಸಂವಿಧಾನ ಬದಲಾವಣೆ ಮಾಡುವ ಹುನ್ನಾರ ನಡೆಸುತ್ತಿದೆ. ತಮ್ಮ ಹೇಳಿಕೆಗಳ ಮೂಲಕ ಅಮಿತ್ ಶಾ ಇದನ್ನು ಸ್ಪಷ್ಟಪಡಿಸುತ್ತಿದ್ದಾರೆ. ಈ ಹಿನ್ನೆಲೆ ಅಮಿತ್ ಶಾ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು. ಕೆಪಿಸಿಸಿ ಕಾರ್ಯಾಧ್ಯಕ್ಷರೂ ಆದ ಶಾಸಕ ತನ್ವೀರ್ ಸೇಠ್ ಮಾತನಾಡಿ, ಅಮಿತ್ ಶಾ ಹೇಳಿಕೆಯಿಂದ ದಲಿತ ಸಮುದಾಯ ಮಾತ್ರವಲ್ಲದೆ ಸಂವಿಧಾನ ಒಪ್ಪಿರುವ ದೇಶದ ಎಲ್ಲರ ಭಾವನೆಗೆ ಧಕ್ಕೆಯಾಗಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಕೂಡಲೇ ಅಮಿತ್ ಶಾ ರಾಜೀನಾಮೆ ಪಡೆಯಬೇಕು. ಇಲ್ಲದಿದ್ದರೂ ಕಾಂಗ್ರೆಸ್ ನಿರಂತರ ಹೋರಾಟ ಮಾಡಲಿದೆ ಎಂದು ಎಚ್ಚರಿಸಿದರು.

ವಿಧಾನ ಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯ ಮಾತನಾಡಿ, ಯಾವ ದೇವರು ನಮಗೆ ಸಮಾನತೆಯ ಹಕ್ಕು ನೀಡಿಲ್ಲವೊ ಅದನ್ನು ಅಂಬೇಡ್ಕರ್ ನೀಡಿದ್ದಾರೆ. ಅಂಬೇಡ್ಕರ್ ದೇವರಿಗಿಂತ ದೊಡ್ಡವರು. ಅವರ ಜಪತಪವೇ ನಮಗೆ ಮುಖ್ಯ ಎಂದು ಹೇಳಿದರು. ಮನುಸ್ಮೃತಿಗೆ ವಿರುದ್ಧವಾಗಿ ಅಂಬೇಡ್ಕರ್ ಸಂವಿಧಾನ ಜಾರಿಗೊಳಿಸಿದ್ದಾರೆ. ಆದರೆ ಬಿಜೆಪಿಯವರು ಈಗ ಸಂವಿಧಾನ ಬದಲಾವಣೆ ಮಾಡಲು ಮುಂದಾಗಿದ್ದಾರೆ. ಇದರ ವಿರುದ್ಧ ನಾವು ನೀವೆಲ್ಲಾ ಒಗ್ಗಟ್ಟಿನಿಂದ ಹೋರಾಟ ಮಾಡಬೇಕು ಎಂದು ಕರೆ ನೀಡಿದರು.

ಸಂಗೊಳ್ಳಿ ರಾಯಣ್ಣ ವೃತ್ತದಿಂದ ಹೊರಟ ಪ್ರತಿಭಟನಾ ಮೆರವಣಿಗೆ ಸಿದ್ಧಾರ್ಥ ನಗರ, ತಿ.ನರಸೀಪುರ ರಸ್ತೆ ಮೂಲಕ ಜಿಲ್ಲಾಧಿಕಾರಿ ಕಚೇರಿ ತಲುಪಿ ಅಲ್ಲಿ ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತ ರೆಡ್ಡಿ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಶಾಸಕರಾದ ಕೆ.ಹರೀಶ್ ಗೌಡ, ದರ್ಶನ್ ಧ್ರುವನಾರಾಯಣ್, ರವಿಶಂಕರ್, ಡಾ. ತಿಮ್ಮಯ್ಯ, ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಎಂ.ಶಿವಣ್ಣ, ಮರಿತಿಬ್ಬೇಗೌಡ, ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ, ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್ ಸೇರಿದಂತೆ ನೂರಾರು ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಸಿ.ಟಿ.ರವಿ ಎನ್‌ಕೌಂಟರ್ ಮಾಡಲು ಪ್ಲಾನ್ ಮಾಡಲಾಗಿತ್ತು ಎಂಬ ಆರೋಪ; ಪ್ರಹ್ಲಾದ್ ಜೋಷಿ ಹೇಳಿಕೆಗೆ ಡಾ.ಮಹದೇವಪ್ಪ ತಿರುಗೇಟು

ಮೈಸೂರು, ಡಿ.23(ಬಿಎಲ್‌ಯು)– ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಅವರಿಗೆ ನಕಲಿ ಎನ್ ಕೌಂಟರ್ ಮಾಡಲು ಪ್ಲಾನ್ ಮಾಡಲಾಗಿತ್ತು ಎಂಬ ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ಹೇಳಿಕೆಗೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಆಕ್ರೋಶ ವ್ಯಕ್ತಪಡಿಸಿದ್ದಾರೆ. ನಗರದ ಕುರುಬಾರಹಳ್ಳಿ ವೃತ್ತದಲ್ಲಿ ಇಂದು ಕಾಂಗ್ರೆಸ್ ಪ್ರತಿಭಟನೆ ನಡೆಸುತ್ತಿದ್ದ ಸಂದರ್ಭದಲ್ಲಿ ಪತ್ರಕರ್ತರ ಜೊತೆ ಮಾತನಾಡಿದ ಅವರು, ತಪ್ಪು ಮಾಡಿದವರು ಮಾತ್ರ ಇಂತಹ ಸುಳ್ಳುಗಳ ಹೇಳುತ್ತಾರೆ ಎಂದು ತಿರುಗೇಟು ನೀಡಿದರು. ಸಿ.ಟಿ.ರವಿ ವಿಚಾರದಲ್ಲಿ ಬಿಜೆಪಿ ನಾಯಕರು ನೀಡುತ್ತಿರುವ ಹೇಳಿಕೆಗಳೆಲ್ಲಾ ಶುದ್ಧ ಸುಳ್ಳಾಗಿದ್ದು, ನಿರಾಧಾರ ಆರೋಪ ಎಂದು ಡಾ.ಮಹದೇವಪ್ಪ ಹೇಳಿದರು.

ಕೇಂದ್ರ ಗೃಹ ಸಚಿವ ಅಮಿತ್ ಶಾ ಸಂವಿಧಾನ ವಿರೋಧಿ ಹೇಳಿಕೆ ನೀಡಿದ್ದಾರೆ. ಕಳೆದ 11 ವರ್ಷಗಳಿಂದ ಸಂವಿಧಾನದ ಆಶಯಕ್ಕೆ ವಿರುದ್ಧವಾಗಿ ಬಿಜೆಪಿ ಸರ್ಕಾರ ನಡೆಯುತ್ತಿದೆ. ಮನುಸ್ಮೃತಿ ಸರ್ಕಾರ ನಡೆಸುತ್ತಿರುವುದಕ್ಕೆ ಇದೊಂದು ಸ್ಪಷ್ಟ ನಿದರ್ಶನ ಎಂದು ಡಾ.ಮಹದೇವಪ್ಪ ಆರೋಪಿಸಿದರು.

ಮಹಿಳೆ ವೇಲ್ ಎಳೆದಿದ್ದ ಕೇಸ್: 6 ವರ್ಷದ ನಂತರ ಸಿದ್ದರಾಮಯ್ಯ ವಿರುದ್ಧ ಮಹಿಳಾ ಆಯೋಗಕ್ಕೆ ಬಿಜೆಪಿ ಕಾರ್ಯಕರ್ತ ದೂರು

ಮಂಡ್ಯ, ಡಿ.23: ಬಿಜೆಪಿ ಎಂಎಲ್‌ಸಿ ಸಿಟಿ ರವಿ ವಿಧಾನ ಪರಿಷತ್ ಕಲಾಪದಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್‌ಗೆ ಅಶ್ಲೀಲ ಶಬ್ದದಲ್ಲಿ ನಿಂದಿಸಿದ್ದಾರೆ ಎಂಬ ಆರೋಪ ರಾಜ್ಯ ರಾಜಕೀಯದಲ್ಲಿ ಸಾಕಷ್ಟು ಚರ್ಚೆಗೆ ಗ್ರಾಸವಾಗಿದೆ. ಇದೇ ವಿಚಾರವಾಗಿ ಸಿಟಿ ರವಿ ಜೈಲಿಗೂ ಹೋಗಿ ಬಂದರು. ಸಿಟಿ ರವಿ ವಿರುದ್ಧ ರಾಷ್ಟ್ರಪತಿಗೆ ಪತ್ರ ಬರೆಯುವುದಾಗಿ ಹೆಬ್ಬಾಳ್ಕರ್ ಹೇಳಿದ್ದಾರೆ. ಇದೆಲ್ಲದರ ಮಧ್ಯೆ ಇದೀಗ ಸಿಎಂ ಸಿದ್ದರಾಮಯ್ಯ ಮಹಿಳೆ ವೇಲ್ ಎಳೆದು ಅಪಮಾನಿಸಿದ್ದಾರೆ ಎನ್ನಲಾದ 6 ವರ್ಷದ ಹಿಂದಿನ ಘಟನೆಗೆ ಸಂಬಂಧಿಸಿದಂತೆ ರಾಜ್ಯ ಮಹಿಳಾ ಆಯೋಗಕ್ಕೆ ಆನ್‌ಲೈನ್ ಮೂಲಕ ಬಿಜೆಪಿ ಕಾರ್ಯಕರ್ತ ದೂರು ನೀಡಿದ್ದಾರೆ.

ಸಿದ್ದರಾಮಯ್ಯ ಮೊದಲ ಬಾರಿ ಸಿಎಂ ಆಗಿದ್ದಾಗ ಅಂದರೆ 6 ವರ್ಷದ ಹಿಂದೆ, ಮೈಕ್ ಕಿತ್ತುಕೊಳ್ಳಲು ಹೋಗಿ ಮಹಿಳೆ ವೇಲ್ ಎಳೆದಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಎಂ ಸಿದ್ದರಾಮಯ್ಯ ವಿರುದ್ಧ ಮಂಡ್ಯ ಜಿಲ್ಲಾ ಬಿಜೆಪಿ ವಕ್ತಾರ ಸಿ.ಟಿ.ಮಂಜುನಾಥ್ ಅವರು ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌಧರಿಗೆ ದೂರು ನೀಡಿದ್ದಾರೆ.

ಸಿ.ಟಿ.ರವಿ ಅಶ್ಲೀಲ ಪದ ಬಳಸಿದ್ದಾರೆಂದು ಮಹಿಳಾ ಆಯೋಗ ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡಿದೆ. ಈ ಹಿಂದೆ ಸಿದ್ದರಾಮಯ್ಯ ಮಹಿಳೆ ವೇಲ್ ಎಳೆದು ಅಪಮಾನಿಸಿದ್ದು. ಆ ಮಹಿಳೆ ದೂರು ದಾಖಲಿಸಿದ್ದಾರೋ ಇಲ್ಲವೋ ಗೊತ್ತಿಲ್ಲ. ಅಲ್ಲದೇ ದೂರು ಸಲ್ಲಿಸದಂತೆ ಮಹಿಳೆಗೆ ಬೆದರಿಕೆ ಹಾಕಿರಬಹುದು. ಸೀರೆ ಎಳೆದು ಅವಮಾನಿಸಿರುವ ವಿಡಿಯೋ ಸಹ ವೈರಲ್ ಆಗಿತ್ತು. ಕೂಡಲೇ ಸಿಎಂ ವಿರುದ್ಧ ಸ್ವಯಂಪ್ರೇರಿತ ಕೇಸ್ ದಾಖಲಿಸಬೇಕು. ತನಿಖೆ ಮಾಡಿ ಮಹಿಳೆಗೆ ನ್ಯಾಯ ದೊರಕಿಸಿಕೊಡುವಂತೆ ದೂರಿನ ಮೂಲಕ ಒತ್ತಾಯಿಸಲಾಗಿದೆ.

ಅಂದು ಮೈಸೂರಿನಲ್ಲಿ ನಡೆದಿದ್ದ ಜನತಾ ದರ್ಶನ ಕಾರ್ಯಕ್ರಮದಲ್ಲಿ ಸಾರ್ವಜನಿಕವಾಗಿ ಕಷ್ಟ ಹೇಳಿಕೊಳ್ಳಲು ಓರ್ವ ಮಹಿಳೆ ಬಂದಿದ್ದರು. ತಮ್ಮ ಸಮಸ್ಯೆ ಹೇಳುತ್ತಿದ್ದ ಮಹಿಳೆಯ ಮೇಲೆ ಸಿಎಂ ಸಿದ್ದರಾಮಯ್ಯ ಗರಂ ಆಗಿದ್ದರು. ಈ ವೇಳೆ ಮಹಿಳೆ ಬಳಿಯಿದ್ದ ಮೈಕ್ ಅನ್ನು ಕಸಿದುಕೊಳ್ಳುವಾಗ ವೇಲ್ ಎಳೆದು ಅವಮಾನಿಸಿದ್ದಾರೆ ಎಂದು ಆರೋಪ ಮಾಡಲಾಗಿತ್ತು.

ಅಮಿತ್ ಶಾ ಹೇಳಿಕೆ ಖಂಡಿಸಿ ಜಯಪುರ ಸರ್ಕಲ್‌ನಲ್ಲಿ ಪ್ರತಿಭಟನೆ



ಅಂಬೇಡ್ಕರ್ ಬಗ್ಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ನೀಡಿರುವ ಹೇಳಿಕೆ ಖಂಡಿಸಿ ದಲಿತಪರ ಸಂಘಟನೆಗಳು ಮೈಸೂರಿನ ಜಯಪುರ ಸರ್ಕಲ್‌ನಲ್ಲಿ ಪ್ರತಿಭಟನೆ ನಡೆಸಿತು.

ಮೈಸೂರು, ಡಿ.23(ಬಿಎಲ್‌ಯು)– ಅಂಬೇಡ್ಕರ್ ಬಗ್ಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ನೀಡಿರುವ ಹೇಳಿಕೆ ಖಂಡಿಸಿ ದಲಿತಪರ ಸಂಘಟನೆಗಳು ಮೈಸೂರಿನ ಜಯಪುರ ಸರ್ಕಲ್‌ನಲ್ಲಿ ಸೋಮವಾರ ಪ್ರತಿಭಟನೆ ನಡೆಸಿದವು.

ವೃತ್ತದಲ್ಲಿ ಮಾನವ ಸರಪಳಿ ರಚಿಸಿದ ದಲಿತಪರ ಸಂಘಟನೆ ಮುಖಂಡರು ಅಮಿತ್ ಶಾ ಪ್ರತಿಕೃತಿ ದಹಿಸಿ ಆಕ್ರೋಶ ವ್ಯಕ್ತಪಡಿಸಿದರು. ಈ ವೇಳೆ ಮಾತನಾಡಿದ ತಾಲೂಕು ಪಂಚಾಯತ್ ಮಾಜಿ ಸದಸ್ಯ ಸುರೇಶ್ ಕುಮಾರ್, ಬಾಬಾ ಸಾಹೇಬ್ ಅಂಬೇಡ್ಕರ್ ಅವರು ವಿಶ್ವಜ್ಞಾನಿಯಾಗಿದ್ದು, ದೇವರಿಗಿಂತ ಪೂಜ್ಯನೀಯ ಭಾವನೆ ಅವರ ಮೇಲಿದೆ. ಇಂತಹ ವ್ಯಕ್ತಿಯ ಬಗ್ಗೆ ಅಮಿತ್ ಶಾ ನೀಡಿರುವ ಹೇಳಿಕೆ ಖಂಡನೀಯ. ದಲಿತ ವಿರೋಧಿ ಅಮಿತ್ ಶಾ ಅವರನ್ನು ಸಚಿವ ಸಂಪುಟದಿಂದ ವಜಾ ಮಾಡಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆ ನಂತರ ಜಯಪುರ ಹೋಬಳಿ ನಾಡಕಚೇರಿ ಉಪ ತಹಸೀಲ್ದಾರ್ ಎಂ.ನಿಂಗಪ್ಪ ಅವರಿಗೆ ಮನವಿ ಪತ್ರ ಸಲ್ಲಿಸಿದರು. ದಲಿತ ಮುಖಂಡರಾದ ಮುರುಡಗಹಳ್ಳಿ ಮಹದೇವು, ಧನಗಹಳ್ಳಿ ಸ್ವಾಮಿ, ಮಾವಿನಹಳ್ಳಿ ಸಿ.ರವಿ, ಕಲ್ಲಹಳ್ಳಿ ಕುಮಾರ್, ಕೆಂಚಲಗೂಡು ಪಿ.ಮರಂಕಯ್ಯ, ಜಯಪುರ ಕೆಂಪರಾಜು, ರೇವಣ್ಣ, ತಳೂರು ಪ್ರಸನ್ನ ಸೇರಿದಂತೆ ಹಲವರು ಈ ಸಂದರ್ಭದಲ್ಲಿ ಹಾಜರಿದ್ದರು.

ಪುಸ್ತಕದ ಓದು ನಮ್ಮನ್ನು ಹೊಸ ಆಲೋಚನೆಗೆ ಹಚ್ಚುತ್ತದೆ

ತಿಂಗಳ ಪುಸ್ತಕ ಓದು ಕಾರ್ಯಕ್ರಮದಲ್ಲಿ ಖ್ಯಾತ ಲೇಖಕ ಚಿದಾನಂದ ಸಾಲಿ ಅಭಿಮತ



ಮೈಸೂರಿನ ವಿ ಕೇರ್ ಸಂಸ್ಥೆಯಲ್ಲಿ ಸೋಮವಾರ ಏರ್ಪಡಿಸಿದ್ದ 'ತಿಂಗಳ ಪುಸ್ತಕ ಓದು' ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಮೈಸೂರು, ಡಿ.23(ಜಿಎ)– ಎಳೆಯ ವಯಸ್ಸಿನಲ್ಲಿ ಅನುಭವದ ಬುತ್ತಿಯನ್ನು ಪಿಟಿಗೆ ಅರ್ಜಿಸಿಕೊಳ್ಳುವುದು ನಮ್ಮನ್ನು ಎತ್ತರಕ್ಕೆ ಕೊಂಡೊಯ್ಯುತ್ತದೆ ಎಂದು ಕೇಂದ್ರ ಸಾಹಿತ್ಯ ಅಕಾಡೆಮಿಯ ಸಲಹಾ ಸದಸ್ಯ, ಖ್ಯಾತ ಲೇಖಕ ಚಿದಾನಂದ ಸಾಲಿ ತಿಳಿಸಿದರು.

ಮೈಸೂರಿನ ಹೂಟಗಳ್ಳಿಯ ವಿ ಕೇರ್ ಸಂಸ್ಥೆ ಆವರಣದಲ್ಲಿ ಸಂಸ್ಥೆ ವತಿಯಿಂದ ಆಯೋಜಿಸಿದ್ದ 'ತಿಂಗಳ ಪುಸ್ತಕ ಓದು' ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಅನುಭವದ ಸರ್ಟಿಫಿಕೆಟ್ ಸಿಲಬಿಕ ಯಾವ ಕಲ್ಲು ಸಹಾ ಗೌಣವಾಗಲಾರದು. ಉಳಿ ಪೆಟ್ಟು ಹೆಚ್ಚು ಪಡೆದ ಶಿಲೆ ಗರ್ಭ ಗುಡಿ ಸೇರಿದರೆ ಕಡಿಮೆ ಪೆಟ್ಟು ಪಡೆದ ಶಿಲೆ ಮೆಟ್ಟಿಲು ಅಥವಾ ಮೂರ್ತಿಯನ್ನು ರಕ್ಷಿಸುವ ಗುಡಿಯ ಭಾಗವಾಗಬಹುದು ಎಂದರು.

ಪ್ರತಿಯೊಂದಕ್ಕೂ ಅದರದ್ದೇ ಆದ ಮಹತ್ವವಿದೆ. ತನ್ನದೇ ಆದ ಜವಾಬ್ದಾರಿಯನ್ನು ಮೆರೆಯುತ್ತದೆ. ಇಲ್ಲಿ ಯಾವುದೂ ಮುಖ್ಯವಲ್ಲ, ಅಮುಖ್ಯವೂ ಅಲ್ಲ. ಪುಸ್ತಕಗಳ ಓದು ನಮಗೆ ಅನೇಕ ದಾರ್ಶನಿಕರ, ಅನುಭವಿಗಳ, ವಿವಿಧ ವಿಚಾರಗಳ ತಾತ್ವಿಕರ ಜೀವನವನ್ನು ತೆರೆದಿಡುತ್ತದೆ. ಅವರ ಜೀವನವನ್ನು ನಮ್ಮದಾಗಿಸುತ್ತದೆ. ಹೊಸ ಆಲೋಚನೆಗೆ ನಮ್ಮನ್ನು ಹಚ್ಚುತ್ತದೆ. ವ್ಯಕ್ತಿ ಆರಾಧನೆಯನ್ನು ದೂರ ಮಾಡುತ್ತದೆ. ಎಲ್ಲವನ್ನೂ ನೀಡಿ, ಪುಸ್ತಕಗಳ ಓದಿಗೆ ಮಕ್ಕಳನ್ನು ಪ್ರೋತ್ಸಾಹಿಸುವ ವಿ–ಕೇರ್ ಸಂಸ್ಥೆಯ ಕಾರ್ಯ ನಿಜಕ್ಕೂ ಸ್ತುತ್ಯಾರ್ಹ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ವಿಕೇರ್ ಸಂಸ್ಥೆಯ ಸಂಸ್ಥಾಪಕಿ ಡಾ.ಕುಮುದಿನಿ ಅಚ್ಚಿ ಮಾತನಾಡಿ, ಜನರಿಂದ ಕಥೆಗಳು ಪ್ರಾರಂಭಗೊಂಡು ಇಂದು ಅವು ಅಕ್ಷರ ಸಂಸ್ಕೃತಿಯ ಉತ್ಪನ್ನಗಳಾಗಿವೆ. ಜನಸಾಮಾನ್ಯರು ಸೇರಿಯಲ್ಲಿ ಕಥೆಗಳನ್ನು ಕಟ್ಟಿ ಹೇಳುತ್ತಾ, ನಾಟಕ, ಹಾಡುಗಳ ರೂಪಕ್ಕೆ ತರುತ್ತಾ ಸಮುದಾಯಕ್ಕೆ ಅದನ್ನು ಪಸರಿಸುವ ಕಾಯಕಕ್ಕೆ ಜನಪದರು ಪ್ರಾಮಾಣಿಕವಾಗಿ ತೊಡಗಿಸಿಕೊಂಡಿದ್ದರು. ಹಾಗಾಗಿ ಕೆಲವರ ಅನುಭವ, ನೋವು, ನಲಿವು, ಜ್ಞಾನ ಎಲ್ಲರ ಆಸ್ತಿಯಾಗಿ ಮಾರ್ಪಾಡಾಗುತ್ತಿತ್ತು ಎಂದರು.

ಇಂದು ಎಲ್ಲವೂ ಸರಾಗವಾಗಿದೆ. ಅಕ್ಷರ ಸಂಸ್ಕೃತಿಯಲ್ಲಿ ರೂಪು ಪಡೆಯುತ್ತಿರುವ ಕಥೆಗಳು ನಾಟಕಗಳು ಪ್ರವಾಸ ಕಥನಗಳು ಕವನ ಸಂಕಲನಗಳು ಜಂಜಾಟದ ಬದುಕಿನಲ್ಲಿ ಥೆರಪಿಯಾಗಿ ಕಾರ್ಯನಿರ್ವಹಿಸುತ್ತಿವೆ. ಆದರೆ ಓದು ಬರಹಗಳು ವ್ಯಕ್ತಿ ಕೇಂದ್ರಿತವಾಗಿ ನಡೆಯುತ್ತಿರುವುದು ಚಿಂತಿಸಬೇಕಾದ ಸಂಗತಿ. ಜ್ಞಾನವನ್ನು ಅಗತ್ಯ ಇರುವ ಕಡೆ ಪಸರಿಸಬೇಕಾದ ಜವಾಬ್ದಾರಿ ಉಳ್ಳವರ, ಶಿಕ್ಷಿತರ ಸಾಮಾಜಿಕ ಜವಾಬ್ದಾರಿಯಾಗಬೇಕಿದೆ. ಪುಸ್ತಕ ಓದು ಈ ನಿಟ್ಟಿನಲ್ಲಿ ಅತ್ಯಂತ ಪ್ರಸ್ತುತ. ದಿನೇ ದಿನೇ ಈ ಕಾರ್ಯಕ್ರಮಕ್ಕೆ ಹೆಚ್ಚಿನ ಜನ ಸ್ಪಂದನೆ ದೊರೆಯುತ್ತಿರುವುದು ಸಂತಸದ ವಿಚಾರವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪೂರ್ಣಚಂದ್ರ ತೇಜಸ್ವಿಯವರ 'ಪರಿಸರದ ಕತೆ'ಯ ಎರಡು ಕಥೆಗಳನ್ನು ವೈದ್ಯ ರವ್ಯಾ, ಲೇಖಕ ತ್ರಿಪುರಾಂತಕ, ಒಡನಾಡಿಯ ಲಲಿತಾ ಮನೋಜ್ಞವಾಗಿ ಓದಿ ಮಲೆನಾಡಿನ ಬದುಕು, ಕಾಡು ಮತ್ತು ಬೇಟೆಯ ಚಿತ್ರಗಳನ್ನು ಕಣ್ಣಿಗೆ ಕಟ್ಟಿಕೊಟ್ಟರು.

ಪ್ರೊ.ಪ್ರಸನ್ನ ಸಂತೆಕಡೂರ್ 'ಬಾಲಕ ಮತ್ತು ಕಾಡಂಚು' ಕಥೆಯನ್ನು ಯುವ ರಂಗಕರ್ಮಿ ಚಂದ್ರು ಮಂಡ್ಯ ಓದಿದರು. ಈ ವೇಳೆ ಹೋರಾಟಗಾರ ಅಯ್ಯಪ್ಪ ಹೂಗಾರ, ವಿ ಕೇರ್ ಸಂಸ್ಥೆಯ ಧರ್ಮದರ್ಶಿ ವಕೀಲ ಶೋಭಾ, ಡಾ.ಸಾರಿಕಾ ಪ್ರಸಾದ್ 'ಗುಡ್ ವಿಶ್ ಕಾರ್ಯಕರ್ತೆ ಸರಸ್ವತಿ, ವೀಕೇರ್ ಸಂಘಟಕಿ ಸಿಂಚನ, ಒಡನಾಡಿ ಸ್ಟ್ಯಾನ್ಲಿ, ಅಭಿವೃದ್ಧಿ ಚಿಂತಕ ಅಣ್ಣಾರಾಯ, ಉಪನ್ಯಾಸಕರಾದ ಪ್ರಾಂತ್, ಮೂಡಿಗೆರೆ ಗೋಪಾಲ್ ಹಾಗೂ ಗುಡ್ ವಿಶ್ ಸಂಸ್ಥೆ, ಒಡನಾಡಿ ಸಂಸ್ಥೆಯ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಡಿ.26ರಂದು ವಿಶೇಷ 'ಸ್ವಾತಿ' ಪೂಜೆ





ಮೈಸೂರು, ಡಿ.23– ನಗರದ ಕಾಳಿದಾಸ ರಸ್ತೆಯಲ್ಲಿರುವ ಇತಿಹಾಸ ಪ್ರಸಿದ್ಧ ಶ್ರೀ ಯದುಗಿರಿ ಯತಿರಾಜ ಮಠ, ಮೈಸೂರು ಶಾಖೆಯ ಶ್ರೀ ಲಕ್ಷ್ಮೀನರಸಿಂಹ ಸ್ವಾಮಿ ದೇವಸ್ಥಾನದಲ್ಲಿ ಡಿ.26ರಂದು ಗುರುವಾರ 'ಸ್ವಾತಿ' ನಕ್ಷತ್ರದ ಪ್ರಯುಕ್ತ ವಿಶೇಷ ಪೂಜೆ ಆಯೋಜಿಸಲಾಗಿದೆ. ಅಂದು ಬೆಳಗ್ಗೆ 8ಕ್ಕೆ ಸಂಕಲ್ಪ, 9ಕ್ಕೆ ಅಭಿಷೇಕ, 10.30ಕ್ಕೆ ಅಲಂಕಾರ, 11.30ಕ್ಕೆ ಮಹಾಮಂಗಳಾರತಿ, ಮಧ್ಯಾಹ್ನ 12.30ಕ್ಕೆ ಶಾತ್ತುಮೊರೈ, 1 ಗಂಟೆಗೆ ತೀರ್ಥ ಪ್ರಸಾದ ವಿನಿಯೋಗವನ್ನು ಏರ್ಪಡಿಸಲಾಗಿದೆ (ಧನುರ್ಮಾಸದ ಪ್ರಯುಕ್ತ ಸಂಜೆ ಪ್ರಾಕಾರೋತ್ಸವ ಇರುವುದಿಲ್ಲ) ಎಂದು ದೇವಸ್ಥಾನದ ಪ್ರಧಾನ ವ್ಯವಸ್ಥಾಪಕ ವಿದ್ವಾನ್ ಕೆ.ಆರ್.ಯೋಗಾನರಸಿಂಹನ್ (ಮುರುಳಿ ಅಯ್ಯಂಗಾರ್) ತಿಳಿಸಿದ್ದಾರೆ. ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಸ್ವಾಮಿಯ ಕೃಪೆಗೆ ಪಾತ್ರರಾಗಬೇಕೆಂದು ಕೋರಿದ್ದಾರೆ. ಮಾಹಿತಿ ಮೊಬೈಲ್ 9342188323, 7598832271 ಸಂಪರ್ಕಿಸಬಹುದು.

ಕಲಬುರಗಿಯಲ್ಲಿ ಜಯದೇವ ಆಸ್ಪತ್ರೆ ಉದ್ಘಾಟನೆ; ಡಾ.ಮಂಜುನಾಥ್‌ಗೆ ಆಹ್ವಾನ ನೀಡದ್ದಕ್ಕೆ ಬೇಸರ

ಬೆಂಗಳೂರು, ಡಿ.23(ಕೆಎಂಶಿ)– ಕಲಬುರಗಿಯಲ್ಲಿ ಜಯದೇವ ಆಸ್ಪತ್ರೆ ಸ್ಥಾಪನೆಗೆ ಕಾರಣೀಭೂತರಾದ ಹಿಂದಿನ ನಿರ್ದೇಶಕ ಡಾ.ಮಂಜುನಾಥ್ ಅವರನ್ನೇ ಸರ್ಕಾರ ಕಡೆಗಣಿಸಿ ಉದ್ಘಾಟನೆ ಮಾಡಿದೆ.

ಮಂಜುನಾಥ್ ಅವರು ನಿರ್ದೇಶಕರಾಗಿದ್ದ ಸಂದರ್ಭದಲ್ಲಿ 40 ಕೋಟಿ ರೂ.ಗಳನ್ನು ದಾನಿಗಳಿಂದ ಸಂಗ್ರಹಿಸಿ ಆಸ್ಪತ್ರೆ ಸ್ಥಾಪನೆಗೆ ಬುನಾದಿ ಹಾಕಿದ್ದರು.

ನಂತರ ಎಚ್.ಡಿ.ಕುಮಾರಸ್ವಾಮಿ ಆಡಳಿತದಲ್ಲಿ ಆಸ್ಪತ್ರೆಗೆ ಅನುಮತಿ ಪಡೆದು ಶಿಲಾನ್ಯಾಸ ನಡೆಸಿದರು. ನಂತರ ಬಂದ ಬಿಜೆಪಿ ಸರ್ಕಾರ 128 ಕೋಟಿ ರೂ. ಬಿಡುಗಡೆ ಮಾಡಿ, ಕಲ್ಯಾಣ ಕರ್ನಾಟಕ ಭಾಗದಲ್ಲಿ ಹೃದ್ರೋಗಿಗಳಿಗೆ ಚಿಕಿತ್ಸೆ ಕಲ್ಪಿಸಲು ಆಸ್ಪತ್ರೆ ತಲೆ ಎತ್ತುವಂತೆ ಮಾಡಿದರು. ಮೈಸೂರು ನಂತರ ಕಲಬುರಗಿಯಲ್ಲಿ ನಿನ್ನೆ ಜಯದೇವ ಹೃದ್ರೋಗ ಆಸ್ಪತ್ರೆ ಕಾರ್ಯಾರಂಭ ಮಾಡಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಸಮ್ಮುಖದಲ್ಲಿ ಲೋಕಾರ್ಪಣೆ ಮಾಡಲಾಯಿತು.

ಸರ್ಕಾರ ನಿನ್ನೆ ದೊಡ್ಡ ಮಟ್ಟದಲ್ಲೇ ಉದ್ಘಾಟನಾ ಸಮಾರಂಭ ಏರ್ಪಡಿಸಿತ್ತು. ಆದರೆ, ಆಸ್ಪತ್ರೆ ಸ್ಥಾಪನೆಗೆ ಕಾರಣರಾದ ಡಾ.ಮಂಜುನಾಥ್ ಅವರನ್ನೇ ಆಹ್ವಾನಿಸದಷ್ಟು ಬೇಜವಾಬ್ದಾರಿ ಮೆರೆದಿದೆ ಎಂದು ಆಕ್ರೋಶ ವ್ಯಕ್ತವಾಗಿದೆ.

ವಿದ್ಯಾರ್ಥಿಗಳಿಗೆ ಹಣ್ಣು ಹಂಪಲು ವಿತರಣೆ



ಮೈಸೂರಿನ ಕುವೆಂಪುನಗರದ ಮಾತಾ ಲೋಕದ ವಿದ್ಯಾರ್ಥಿನಿಲಯದ ವಿದ್ಯಾರ್ಥಿಗಳಿಗೆ ಮಾಜಿ ಪ್ರಧಾನಿ ಚರಣ್ ಸಿಂಗ್ ಚೌದರಿ ಸ್ಮರಣಾರ್ಥ ಆಚರಿಸುತ್ತಿರುವ ರೈತ ದಿನಾಚರಣೆ ಅಂಗವಾಗಿ ಎಸ್.ಪ್ರಕಾಶ್ ಪ್ರಿಯದರ್ಶನ್ ಸ್ನೇಹ ಬಳಗದಿಂದ ಹಣ್ಣು ಹಂಪಲು, ಲೇಖನಿ ಸಾಮಗ್ರಿಗಳನ್ನು ವಿತರಿಸಲಾಯಿತು. ವಿಶುದ್ಧ ಶೀಲವರ್ಧನ ಬಂತೆಜಿ, ಮೆತ್ತ ಲೋಕದ ಪನ್ಯ, ಮೈಸೂರು ನಗರ ಜೆಡಿಎಸ್ ಕಾರ್ಯಾಧ್ಯಕ್ಷ ಎಸ್.ಪ್ರಕಾಶ್ ಪ್ರಿಯದರ್ಶನ್, ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಹೋಮದೇವ್, ವೀರಭದ್ರಸ್ವಾಮಿ, ಸುಬ್ರಮಣಿ, ಮಹದೇವ್, ಯಶ್ವಂತ್‌ಕುಮಾರ್, ಮಹೇಶ್, ಮಹದೇವಸ್ವಾಮಿ, ಅಕ್ಷಯ್ ಪ್ರಿಯದರ್ಶನ್, ಹರ್ಷಿತ್ ನಾಗೇಶ್ ಇನ್ನಿತರರಿದ್ದರು.

ರಾಷ್ಟ್ರೋತ್ಥಾನ ವಿದ್ಯಾ ಕೇಂದ್ರದ ಮಕ್ಕಳಿಗೆ ಪ್ರಥಮ ಸ್ಥಾನ



ಮೈಸೂರಿನ ಶ್ರೀಕಾಂತ ಶಾಲೆಯಲ್ಲಿ ಆಯೋಜಿಸಿದ್ದ ಸಂಸ್ಕೃತ ವಿಭಾಗದ ವಿವಿಧ ಸ್ಪರ್ಧೆಗಳಲ್ಲಿ ರಾಷ್ಟ್ರೋತ್ಥಾನ ವಿದ್ಯಾ ಕೇಂದ್ರದ ಮಕ್ಕಳು 17 ಪ್ರಶಸ್ತಿಗಳನ್ನು ಗೆಲ್ಲುವ ಮೂಲಕ ಪ್ರಥಮ ಸ್ಥಾನಗಳಿಸಿದ್ದಾರೆ. ಅಷ್ಟೇ ಅಲ್ಲದೇ ದ್ವಿತೀಯ ಬಾರಿಗೆ ಪರ್ಯಾಯ ಪಾರಿತೋಷಕ ಗಳಿಸಿದ್ದಾರೆ. ಈ ವೇಳೆ ಪ್ರಧಾನ ಪ್ರಾಚಾರ್ಯ ಶ್ರೀಮತಿ ಜಿ. ಅನಿತಾ, ಶಿಕ್ಷಕರಾದ ಶ್ರೀಹರ್ಷ ಜಿ, ಶ್ರೀಮತಿ ಪೂರ್ಣಿಮಾ ಅಭಿನಂದಿಸಿದರು.

ಸದೃಢ ದೇಹ ಕಾಪಾಡಲು ಕ್ರೀಡಾ ಚಟುವಟಿಕೆ ಸಹಕಾರಿ

ಲಕ್ಷ್ಮೀಪುರಂ ಪೊಲೀಸ್ ಠಾಣೆಯ ವೃತ್ತ ನಿರೀಕ್ಷಕ ಬಿ.ಎಸ್.ರವಿಶಂಕರ್



ಶಾರದಾ ವಿಲಾಸ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ವಾರ್ಷಿಕ ಕ್ರೀಡಾಕೂಟಕ್ಕೆ ಚಾಲನೆ ನೀಡಲಾಯಿತು.

ಮೈಸೂರು,ಡಿ.23–ಮೈಸೂರಿನ ಶಾರದಾ ವಿಲಾಸ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ವಾರ್ಷಿಕ ಕ್ರೀಡಾಕೂಟ ಸಮಷ್ಟಿ ಆಯೋಜಿಸಲಾಗಿತ್ತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಲಕ್ಷ್ಮೀಪುರಂ ಪೊಲೀಸ್ ಠಾಣೆಯ ವೃತ್ತ ನಿರೀಕ್ಷಕ ಬಿ.ಎಸ್. ರವಿಶಂಕರ್ ಕ್ರೀಡಾ ಜ್ಯೋತಿ ಬೆಳಗಿಸಿ ಮಾತನಾಡಿ, ಸದೃಢ ದೇಹವನ್ನು ಹೊಂದಲು ಕ್ರೀಡಾ ಚಟುವಟಿಕೆಗಳು ಅತ್ಯಂತ ಸಹಕಾರಿ. ಯಾವ ವ್ಯಕ್ತಿ ದೇಹವನ್ನು ಪ್ರತಿನಿತ್ಯವೂ ದಂಡಿಸಿ, ಕ್ರಮವಹಿಸಿ ಬದುಕುತ್ತಾನೋ ಅಂತಹ ವ್ಯಕ್ತಿಗೆ ಖಾಯಿಲೆಗಳಿಂದ ದೂರವಿರಲು ಸಾಧ್ಯವಾಗುತ್ತದೆಂದು ಅಭಿಪ್ರಾಯಪಟ್ಟರು.

ಇತ್ತೀಚಿನ ದಿನಗಳಲ್ಲಿ ರಾಸಾಯನಿಕ ಔಷಧಿಗಳ ಸಿಂಪಡಣೆಯಿಂದ ತಯಾರದ ಆಹಾರವನ್ನು ನಾವು ತಿನ್ನುತ್ತಿದ್ದೇವೆ. ಇದರಿಂದ ಅನೇಕ ರೋಗಗಳಿಗೆ ನಾವೇ ಆಹ್ವಾನ ನೀಡುತ್ತಿದ್ದೇವೆ. ರೋಗ ಮುಕ್ತ ಸಮಾಜಕ್ಕೆ ಸಾವಯವ ಆಹಾರ ಪದ್ಧತಿ ಮತ್ತು ಯೋಗ, ಧ್ಯಾನ, ಕ್ರೀಡೆಗಳಲ್ಲಿ ಭಾಗವಹಿಸುವುದರಿಂದ ಆರೋಗ್ಯವನ್ನು ಸಮತೋಲನದಲ್ಲಿಟ್ಟುಕೊಳ್ಳಬಹುದು ಎಂದು ತಿಳಿಸಿದರು.

ಶಾರದಾವಿಲಾಸ ವಿದ್ಯಾಸಂಸ್ಥೆಗಳ ಆಡಳಿತ ಮಂಡಳಿ ಹಿರಿಯ ಸದಸ್ಯ ಎಸ್.ಎಲ್.ರಾಮಚಂದ್ರ ಮಾತನಾಡಿ, ನೆನಪಿನ ಶಕ್ತಿಯನ್ನು ಹೆಚ್ಚಿಸಿಕೊಳ್ಳಲು ದೈನಂದಿನ ಚಟುವಟಿಕೆಗಳು ಸಕ್ರಿಯವಾಗಿರಬೇಕು. ಪ್ರಸ್ತುತ ಒತ್ತಡ ಬದುಕಿನಲ್ಲಿರುವ ನಾವು, ನೆಮ್ಮದಿ ಮತ್ತು ಶಾಂತಿಯಿಂದ ಇರಬೇಕಾದರೆ ಪ್ರತಿನಿತ್ಯವೂ ದೇಹದ ವಿವಿಧ ಅಂಗಾಂಗಗಳು ಚಟುವಟಿಕೆಯಿಂದ ಕೂಡಿರಬೇಕೆಂದು ಅಭಿಪ್ರಾಯಿಸಿದರು. ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಂಶುಪಾಲ ಸಿ.ಕೆ.ಅಶೋಕ್ ಕುಮಾರ್ ವಹಿಸಿದ್ದರು. ವೇದಿಕೆಯಲ್ಲಿ ದೈಹಿಕ ಶಿಕ್ಷಣ ಉಪನ್ಯಾಸಕ ಡಿ.ಶಿವಶಂಕರ್, ರಾಜೇಂದ್ರಪ್ರಸಾದ್ ಹೊನ್ನಲಗೆರೆ, ಡಾ.ಪೂಜಾ, ಉಪನ್ಯಾಸಕ ಡಾ.ಡಿ.ಸಿ.ಉಮೇಶ್, ಡಾ.ಎಂ.ಲಾವಣ್ಯ ಮತ್ತಿತರರು ಉಪಸ್ಥಿತರಿದ್ದರು.

ನಾಳೆವರೆಗೆ ದಸರಾ ವಸ್ತುಪ್ರದರ್ಶನದಲ್ಲಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ



ಮೈಸೂರು,ಡಿ.23– ದಸರಾ ವಸ್ತು ಪ್ರದರ್ಶನ–2024ರ ಅಂಗವಾಗಿ ಡಿ.23 ರಿಂದ 25ರವರೆಗೆ ದಸರಾ ವಸ್ತುಪ್ರದರ್ಶನ ಪ್ರಾಧಿಕಾರದ ಗಾನಕೋಗಿಲೆ ಪಿ.ಕಾಳಿಂಗರಾವ್ ರಂಗಮಂಟಪದಲ್ಲಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ಡಿ.23ರಂದು ಸಂಜೆ 6 ರಿಂದ 7 ಗಂಟೆವರೆಗೆ ಯಳಂದೂರು ತಾಲೂಕಿನ ಅಂಬಾಳೆ ಗ್ರಾಮದ ಜಯಗುರು ಮತ್ತು ತಂಡದವರಿಂದ ಸುಗಮ ಸಂಗೀತ ಕಾರ್ಯಕ್ರಮ, ರಾತ್ರಿ 7 ಗಂಟೆಯಿಂದ 7.30 ರವರೆಗೆ ಎಚ್.ಐ.ವಿ.ಗೆ ಸಂಬಂಧಿಸಿದಂತೆ ಕಿರು ನಾಟಕ ಹಾಗೂ ರಾತ್ರಿ 8 ಗಂಟೆಯಿಂದ 9.30 ಗಂಟೆಯವರೆಗೆ ಅನಿಲ್ ಮತ್ತು ತಂಡದವರಿಂದ ರಸ ಮಂಜರಿ ಕಾರ್ಯಕ್ರಮ. ಡಿ.24ರಂದು ಸಂಜೆ 6ರಿಂದ 7.30 ಗಂಟೆವರೆಗೆ ಸ್ಟೀಪರ್ ಡಾನ್ಸ್ ಸ್ಟುಡಿಯೋನ ಚಂದ್ರು ಅವರಿಂದ ಚಲನಚಿತ್ರ ಗೀತೆಗಳ ನೃತ್ಯ, ರಾತ್ರಿ 7.30ರಿಂದ 9.30 ಗಂಟೆವರೆಗೆ ಮ್ಯೂಸಿಕಲ್ ನೈಟ್ ಹಾಗೂ ಡಿಸೆಂಬರ್ 25ರಂದು ಸಂಜೆ 6.30ರಿಂದ 7 ಗಂಟೆವರೆಗೆ ಮೈತ್ರೇಯ ಲಲಿತಕಲಾ ಅಕಾಡೆಮಿ ತಂಡದವರಿಂದ ಭರತ ನಾಟ್ಯ, ರಾತ್ರಿ 7 ಗಂಟೆಯಿಂದ 7:15 ಗಂಟೆವರೆಗೆ ಜೀನತ್ ಬೇಗಂ ಹಾಗೂ ಶ್ರೀಕಂಠೇಶ್ವರ ವಿದ್ಯಾಸಂಸ್ಥೆ ಶಾಲಾ ವಿದ್ಯಾರ್ಥಿಗಳಿಂದ ನೃತ್ಯ ಕಾರ್ಯಕ್ರಮ, ರಾತ್ರಿ 7.15 ಗಂಟೆಯಿಂದ 7.30 ರವರೆಗೆ ಹರ್ಬನ್ ಡ್ಯಾನ್ಸ್ ಕಂಪನಿಯ ರೋಹಿತ್ ರವರಿಂದ ವೆಸ್ಟರ್ನ್ ಡಾನ್ಸ್, ರಾತ್ರಿ 7.30 ಗಂಟೆಯಿಂದ 8.30 ಗಂಟೆವರೆಗೆ ನಾಟ್ಯ ಸ್ವರಾಂಜಲಿ ತಂಡದವರಿಂದ ಸುಗಮ ಸಂಗೀತ ಹಾಗೂ ರಾತ್ರಿ 8.30 ಗಂಟೆಯಿಂದ 9:30 ಗಂಟೆವರೆಗೆ ಚಿದಂಬರ ನಟೇಶ ನಾಟ್ಯ ಶಾಲೆಯ ಸುನಿತಾ.ಎಸ್ ರವರಿಂದ ನೃತ್ಯ ವೈಭವ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ ಎಂದು ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲಾ ಪುರುಷರ ಖೋ ಖೋ ತಂಡದ ಆಯ್ಕೆ




ಮೈಸೂರು, ಡಿ. 23– ಜನವರಿ 1ರಿಂದ 5ರವರೆಗೆ ಹಾವೇರಿ ಜಿಲ್ಲಾ ಅಮೆಚೂರು ಖೋ ಖೋ ಸಂಸ್ಥೆ ವತಿಯಿಂದ, ರಾಣಿಬೆನ್ನೂರು ತಾಲೂಕು, ಹಲಗೇರಿಯಲ್ಲಿ ನಡೆಯಲಿರುವ ಅಂತರ ಜಿಲ್ಲಾ ಪುರುಷರ ಖೋ ಖೋ ಪಂದ್ಯಾವಳಿಗೆ ಮೈಸೂರು ಜಿಲ್ಲಾ ಅಮೆಚೂರು ಖೋ ಖೋ ಸಂಸ್ಥೆಯ ವತಿಯಿಂದ ಜಿಲ್ಲಾ ಪುರುಷರ ಖೋ ಖೋ ತಂಡದ ಆಯ್ಕೆಯನ್ನು ಡಿ.29ರಂದು ಬೆಳಗ್ಗೆ 10 ಗಂಟೆಗೆ ಹರಿವಿದ್ಯಾಲಯ ಶಾಲಾ ಕ್ರೀಡಾಂಗಣದಲ್ಲಿ ನಡೆಸಲಾಗುತ್ತಿದೆ. ಆಸಕ್ತ ಪುರುಷ ಕ್ರೀಡಾಪಟುಗಳು ಮೈಸೂರು ಜಿಲ್ಲೆಯವರೇ ಆಗಿದ್ದು, ಬರುವಾಗ ಒರಿಜಿನಲ್ ಆಧಾರ್ ಕಾರ್ಡ್‌ನೊಂದಿಗೆ ಪ್ರಕ್ರಿಯೆಯಲ್ಲಿ ಭಾಗವಹಿಸಬಹುದೆಂದು ತಿಳಿಸಲಾಗಿದೆ. ಹೆಚ್ಚಿನ ವಿವರಗಳಿಗೆ ಮೊ. 8123087678, 8095444156 ಸಂಪರ್ಕಿಸಬಹುದು.

ಏಕಲವ್ಯ ನಗರಕ್ಕೆ ಸರ್ಕಾರಿ ಆಸ್ಪತ್ರೆ ಮಂಜೂರಾತಿಗೆ ದಸಂಸ ಮನವಿ

ಮೈಸೂರು, ಡಿ. 23– ಮೈಸೂರಿನ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರಕ್ಕೆ ಒಳಪಡುವ ಅಲೆಮಾರಿ ಸಮುದಾಯಗಳು ಹೆಚ್ಚು ವಾಸ ಮಾಡುತ್ತಿರುವ ಏಕಲವ್ಯ ನಗರಕ್ಕೆ ಹೊಸದಾಗಿ ಸರ್ಕಾರಿ ಆಸ್ಪತ್ರೆಯನ್ನು ಮಂಜೂರು ಮಾಡುವಂತೆ ಒತ್ತಾಯಿಸಿ ಗುರುವಾರ ದ.ಸಂ.ಸ ವತಿಯಿಂದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಪ್ರಾಜೆಕ್ಟ್ ಆಫೀಸರ್ ದಿವಾಕರ್ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ದ.ಸಂ.ಸ ಮುಖಂಡ ನಿಂಗರಾಜ್ ಮಲ್ಲಾಡಿ ಮಾತನಾಡಿ, ಏಕಲವ್ಯ ನಗರದಲ್ಲಿ ಅಲೆಮಾರಿ ಸಮುದಾಯಗಳಾದ ದೊಂಬಿದಾಸ, ಕೋಲೆ ಬಸವ, ಸಿಳ್ಳೆಕ್ಯಾತ, ಹಕ್ಕಿಪಿಕ್ಕಿ, ಕೊರಮ, ಕೊರಚ, ಚೆನ್ನದಾಸ, ಸುಡುಗಾಡು ಸಿದ್ದ, ಬೈಲ್ ಪತ್ತರ್ ಮುಂತಾದ ಅಲೆಮಾರಿ ಕುಟುಂಬಗಳು ವಾಸ ಮಾಡುತ್ತಿದ್ದು, ಇತರೆ ಪರಿಶಿಷ್ಟ ಜಾತಿ ಪಂಗಡದ ಬಡ ಕುಟುಂಬಗಳು ಸಹ ನೂರಾರು ಸಂಖ್ಯೆಯಲ್ಲಿ ವಾಸ ಮಾಡುತ್ತಿದ್ದಾರೆ. ಈ ಸಮುದಾಯಗಳಿಗೆ ಮೈಸೂರಿನ ಕೊಳೆಗೇರಿ ಅಭಿವೃದ್ಧಿ ಮಂಡಳಿ ವತಿಯಿಂದ ನರ್ಮ್ ಯೋಜನೆಯಡಿ ಬಹುಮಹಡಿಗಳ ಮನೆಯನ್ನು ನಿರ್ಮಾಣ ಮಾಡಿಕೊಡಲಾಗಿದೆ. ಈಗ ಏಕಲವ್ಯ ನಗರ 5000 ಜನಸಂಖ್ಯೆ ಹೊಂದಿದ್ದು, ಈ ಗ್ರಾಮಕ್ಕೆ ಸರ್ಕಾರಿ ಆಸ್ಪತ್ರೆ ಇಲ್ಲದೆ ಅಲೆಮಾರಿ ಸಮುದಾಯಗಳು, ಬಡ ಕುಟುಂಬಗಳು ಸುತ್ತಮುತ್ತಲಿನ ಖಾಸಗಿ ಆಸ್ಪತ್ರೆಗೆ ಹೋಗುವ ಸ್ಥಿತಿ ಇದೆ. ಸಣ್ಣಪುಟ್ಟ ಕಾಯಿಲೆಗಳಿಗೂ ಖಾಸಗಿ ಆಸ್ಪತ್ರೆಗಳಲ್ಲಿ ದುಬಾರಿ ವೆಚ್ಚ ಭರಿಸಲಾಗದೆ ಆರೋಗ್ಯ ಸಮಸ್ಯೆಗಳಿಂದ ಅಲೆಮಾರಿ ಸಮುದಾಯಗಳು ತತ್ತರಿಸುತ್ತಿವೆ. ಈ ಬಗ್ಗೆ ಕ್ಷೇತ್ರದ ಶಾಸಕ ಜಿ.ಟಿ. ದೇವೇಗೌಡ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಕುಮಾರಸ್ವಾಮಿ ಅವರಿಗೆ ಕೂಡಲೇ ಏಕಲವ್ಯ ನಗರ ಗ್ರಾಮಕ್ಕೆ ಹೊಸದಾಗಿ ಆಸ್ಪತ್ರೆಯನ್ನು ಮಂಜೂರು ಮಾಡುವಂತೆ ಮನವಿ ಮಾಡಲಾಗಿದೆ ಎಂದರು. ಡಿಹೆಚ್‌ಓ ಡಾ.ಕುಮಾರಸ್ವಾಮಿ ಸೂಚನೆಯಂತೆ ಕಚೇರಿಯ ಪ್ರಾಜೆಕ್ಟ್ ಆಫೀಸರ್ ದಿವಾಕರ್ ಏಕಲವ್ಯ ನಗರಕ್ಕೆ ಭೇಟಿ ನೀಡಿ ಸ್ಥಳ ಪರಿಶೀಲಿಸಿ ಮಾತನಾಡಿ, ಏಕಲವ್ಯ ನಗರ ಗ್ರಾಮಕ್ಕೆ ಹೊಸದಾಗಿ ಆಸ್ಪತ್ರೆ ಮಾಡುವ ಅಗತ್ಯವಿದ್ದು, ಇದರಿಂದ ಬಡ ಕುಟುಂಬಗಳಿಗೆ ಅನುಕೂಲವಾಗಲಿದೆ. ಸರ್ಕಾರದ ವತಿಯಿಂದ ಮಂಜೂರಾಗುತ್ತಿರುವ ನಮ್ಮ ಕ್ಲಿನಿಕ್ ಯೋಜನೆಯಡಿ ಹೊಸ ಆಸ್ಪತ್ರೆಯನ್ನು ಮಂಜೂರು ಮಾಡಲು ಕ್ರಮವಹಿಸಲಾಗುವುದು ಎಂದರು.



ಏಕಲವ್ಯ ನಗರಕ್ಕೆ ಹೊಸದಾಗಿ ಸರ್ಕಾರಿ ಆಸ್ಪತ್ರೆಯನ್ನು ಮಂಜೂರು ಮಾಡುವಂತೆ ಒತ್ತಾಯಿಸಿ ದ.ಸಂ.ಸ ವತಿಯಿಂದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಪ್ರಾಜೆಕ್ಟ್ ಆಫೀಸರ್ ದಿವಾಕರ್ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ದೇಶ - ವಿದೇಶ

ಶ್ವೇತಭವನದ ಮತ್ತೊಂದು ಪ್ರಮುಖ ಹುದ್ದೆಗೆ ಭಾರತೀಯ ಶ್ರೀರಾಮಕೃಷ್ಣನ್



ವಾಷಿಂಗ್ಟನ್: ಶ್ವೇತಭವನದ ಮತ್ತೊಂದು ಪ್ರಮುಖ ಹುದ್ದೆಗೆ ಅನಿವಾಸಿ ಭಾರತೀಯನನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನೇಮಿಸಿದ್ದಾರೆ. ಭಾರತೀಯ ಅಮೆರಿಕನ್ ಉದ್ಯಮಿ ಮತ್ತು ಲೇಖಕ ಶ್ರೀರಾಮಕೃಷ್ಣನ್ ಅವರನ್ನು ಕೃತಕ ಬುದ್ಧಿಮತ್ತೆಯ ಶ್ವೇತಭವನದ ಹಿರಿಯ ನೀತಿ ಸಲಹೆಗಾರರನ್ನಾಗಿ ನೇಮಿಸಿದ್ದಾರೆ. ಶ್ರೀರಾಮಕೃಷ್ಣನ್ ಅವರು ಶ್ವೇತಭವನದ ವಿಜ್ಞಾನ ಮತ್ತು ತಂತ್ರಜ್ಞಾನ ನೀತಿಯ ಕಚೇರಿಯಲ್ಲಿ ಕೃತಕ ಬುದ್ಧಿಮತ್ತೆ ನೀತಿಯ ಹಿರಿಯ ಸಲಹೆಗಾರರಾಗಿ ಸೇವೆ ಸಲ್ಲಿಸಲಿದ್ದಾರೆ ಎಂದು ಟ್ರಂಪ್ ಹೇಳಿದ್ದಾರೆ. ಈ ಹಿಂದೆ ಮೈಕ್ರೋಸಾಫ್ಟ್, ಟ್ವಿಟರ್, ಯಾಹೂ, ಫೇಸ್‌ಬುಕ್ ಮತ್ತು ಸ್ನ್ಯಾಪ್‌ನಲ್ಲಿ ಉತ್ಪನ್ನ ತಂಡಗಳನ್ನು ಮುನ್ನಡೆಸಿರುವ ಕೃಷ್ಣನ್, ವೈಟ್‌ಹೌಸ್ AI ಮತ್ತು ಕ್ರಿಪ್ಟೋ ಝಾರ್ ಆಗಿರುವ ಡೇವಿಡ್ ಓ ಸ್ಯಾಕ್ಸ್ ಜೊತೆಗೆ ಕೆಲಸ ಮಾಡಲಿದ್ದಾರೆ. ವಿಜ್ಞಾನ ಮತ್ತು ತಂತ್ರಜ್ಞಾನದ ಸಲಹೆಗಾರರ ಅಧ್ಯಕ್ಷರ ಮಂಡಳಿಯೊಂದಿಗೆ ಕೆಲಸ ಸೇರಿದಂತೆ ಸರ್ಕಾರದಾದ್ಯಂತ AI ನೀತಿಯನ್ನು ರೂಪಿಸಲು ಮತ್ತು ಸಂಘಟಿಸಲು ನೆರವಾಗಲಿದ್ದಾರೆ. ಶ್ರೀರಾಮ್ ವಿಂಡೋಸ್ ಅಜುರೆ ಸ್ಥಾಪಕ ಸದಸ್ಯರಾಗಿ ಮೈಕ್ರೋಸಾಫ್ಟ್‌ನಲ್ಲಿ ತಮ್ಮ ವೃತ್ತಿಜೀವನ ಆರಂಭಿಸಿದ್ದರು ಎಂದು ಟ್ರಂಪ್ ತಿಳಿಸಿದ್ದಾರೆ.

ಮೃತದೇಹದೊಂದಿಗಿನ ಸಂಭೋಗ; ಅತ್ಯಾಚಾರವಲ್ಲ

ಛತ್ತೀಸಗಢ: ಮೃತದೇಹದೊಂದಿಗಿನ ಸಂಭೋಗವು ಭಾರತೀಯ ದಂಡ ಸಂಹಿತೆ ಸೆಕ್ಷನ್ 376 ರಡಿ ಅಥವಾ ಪೋಕ್ಸೊ ಕಾಯ್ದೆಯಡಿ ಅತ್ಯಾಚಾರವೆಂದು ಪರಿಗಣಿಸಲಾಗದು ಎಂದು ಛತ್ತೀಸಗಢ ಹೈಕೋರ್ಟ್ ಇತ್ತೀಚೆಗೆ ನೀಡಿದ ತೀರ್ಪಿನಲ್ಲಿ ಹೇಳಿದೆ. ಭಾರತದಲ್ಲಿನ ಕ್ರಿಮಿನಲ್ ಕಾನೂನುಗಳ ಪ್ರಕಾರ ಮೃತದೇಹದೊಂದಿಗೆ ಲೈಂಗಿಕ ಸಂಭೋಗದಲ್ಲಿ ತೊಡಗುವುದು ಅತ್ಯಾಚಾರಕ್ಕೆ ಸಮನಾಗುವುದಿಲ್ಲ ಎಂದು ಛತ್ತೀಸ್‌ಗಢ ಹೈಕೋರ್ಟ್ ಅಭಿಪ್ರಾಯಪಟ್ಟಿದೆ. ಅಪ್ರಾಪ್ತ ಬಾಲಕಿಯ ಅಪಹರಣ, ಅತ್ಯಾಚಾರ ಮತ್ತು ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರು ವ್ಯಕ್ತಿಗಳು ಸಲ್ಲಿಸಿರುವ ಅರ್ಜಿಯನ್ನು ಆಲಿಸಿದ ಮುಖ್ಯ ನ್ಯಾಯಮೂರ್ತಿ ರಮೇಶ್ ಸಿನ್ಹಾ ಮತ್ತು ನ್ಯಾಯಮೂರ್ತಿ ಬಿಭು ದತ್ತ ಗುರು ಅವರ ಪೀಠವು, ಮೃತದೇಹದ ಜೊತೆ ಸಂಭೋಗ ಮಾಡುವುದು ಭಯಾನಕ ಅಪರಾಧವಾಗಿದೆ ಎಂದು ಅಭಿಪ್ರಾಯಪಟ್ಟಿದೆ. ಇದು ಭಾರತೀಯ ದಂಡ ಸಂಹಿತೆ ಮತ್ತು ಪೋಕ್ಸೊ ಸಂಬಂಧಿತ ಅಪರಾಧಗಳ ಪ್ರಕಾರ ಅತ್ಯಾಚಾರವಾಗಿರುವುದಿಲ್ಲ. ಮೃತದೇಹದೊಂದಿಗಿನ ಲೈಂಗಿಕ ಕ್ರಿಯೆಯು ಯೋಚನೆ ಮಾಡಲೂ ಆಗದ ಹೀನಾಯ ಕೃತ್ಯವಾದರೂ, ಅದನ್ನು ಐಪಿಸಿ ಹಾಗೂ ಪೋಕ್ಸೊ ಕಾಯ್ದೆಯಡಿ ಅಪರಾಧ ಎಂದು ಪರಿಗಣಿಸಲಾಗದು ಎಂದು ಪೀಠ ಹೇಳಿದೆ.

ಅಂಗಡಿಗೆ ಅಪ್ಪಳಿಸಿದ ವಿಮಾನ; 10 ಜನ ಸಾವು



ಬ್ರೆಜಿಲ್: ದಕ್ಷಿಣ ಬ್ರೆಜಿಲ್‌ನ ಪ್ರವಾಸಿ ನಗರವಾದ ಗ್ರಾಮಡೊದಲ್ಲಿ 10 ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದ ಸಣ್ಣ ವಿಮಾನವು ಅಂಗಡಿಗಳಿಗೆ ಅಪ್ಪಳಿಸಿದ್ದು, ಎಲ್ಲಾ 10 ಪ್ರಯಾಣಿಕರು ಮೃತಪಟ್ಟಿದ್ದಾರೆ. ವಿಮಾನ ಪತನದ ಬಳಿಕ ಹೊತ್ತಿಕೊಂಡ ಬೆಂಕಿಯಲ್ಲಿ ಅನೇಕರು ಗಾಯಗೊಂಡಿದ್ದಾರೆ.

ನಿಯಂತ್ರಣ ಕಳೆದುಕೊಂಡ ವಿಮಾನವು ಹಲವಾರು ಕಟ್ಟಡಗಳಿಗೆ ಡಿಕ್ಕಿ ಹೊಡೆದು ವ್ಯಾಪಕ ಹಾನಿಯನ್ನುಂಟು ಮಾಡಿದೆ. ಈ ಘಟನೆಯಲ್ಲಿ 12 ಜನರು ಗಾಯಗೊಂಡಿದ್ದಾರೆ ಎಂದು ಬ್ರೆಜಿಲಿಯನ್ ಅಧಿಕಾರಿಗಳು ತಿಳಿಸಿದ್ದಾರೆ. ಘರ್ಷಣೆಯಿಂದ ಉಂಟಾದ ಬೆಂಕಿಯಿಂದಾಗಿ ಅನೇಕರು ಉಸಿರಾಟದ ಸಮಸ್ಯೆಯಿಂದ ಬಳಲಿದರು ಎಂದು ವರದಿಯಾಗಿದೆ. ವಿಮಾನ ಕಟ್ಟಡಗಳಿಗೆ ಅಪ್ಪಳಿಸಿದ್ದರಿಂದ ಬೆಂಕಿ ಹೊತ್ತಿಕೊಂಡಿದೆ, ತೀವ್ರ ಸುಟ್ಟಗಾಯಗಳಿಂದ ಬಳಲುತ್ತಿರುವ ಇಬ್ಬರ ಸ್ಥಿತಿ ಗಂಭೀರವಾಗಿದೆ ಎಂದು ವರದಿಗಳು ತಿಳಿಸಿವೆ.

ವಿಮಾನವು ಸ್ಥಳೀಯ ವಿಮಾನ ನಿಲ್ದಾಣದಿಂದ ಟೇಕ್ ಆಫ್ ಆದ ಸ್ವಲ್ಪ ಸಮಯದ ನಂತರ ಅಪಘಾತ ಸಂಭವಿಸಿದೆ. ವಿಮಾನವು ವಸತಿ ಗೃಹಕ್ಕೆ ಅಪ್ಪಳಿಸುವ ಮೊದಲು ಕಟ್ಟಡದ ಚಿಮಣಿಗೆ ಡಿಕ್ಕಿ ಹೊಡೆದು ನಂತರ ಪೀಠೋಪಕರಣ ಅಂಗಡಿಗೆ ಅಪ್ಪಳಿಸಿ, ಹೋಟೆಲ್ ಅಪ್ಪಳಿಸಿವೆ.

ಮಹಾರಾಷ್ಟ್ರದಲ್ಲಿ ನ್ಯಾಯಾಧೀಶರತ್ತ ಚಪ್ಪಲಿ ಎಸೆದ ಕೊಲೆ ಆರೋಪಿ

ಥಾಣೆ: ಪ್ರಕರಣವೊಂದರ ವಿಚಾರಣೆ ವೇಳೆಯಲ್ಲಿ 22 ವರ್ಷದ ಕೊಲೆ ಆರೋಪಿಯೊಬ್ಬ ನ್ಯಾಯಾಧೀಶರತ್ತ ಚಪ್ಪಲಿ ಎಸೆದಿರುವ ಘಟನೆ ಮಹಾರಾಷ್ಟ್ರದ ಥಾಣೆಯ ಜಿಲ್ಲಾ ಸೆಷನ್ಸ್ ಕೋರ್ಟಿನಲ್ಲಿ ನಡೆದಿದೆ. ಚಪ್ಪಲಿ ಜಡ್ಜ್‌ಗೆ ತಾಕಿಲ್ಲ. ಬದಲಿಗೆ ಅವರ ಮೇಜಿನ ಮುಂಭಾಗದ ಮರದ ಪಟ್ಟಿಗೆ ಹೊಡೆದಿದ್ದು, ಕ್ಲರ್ಕ್ ಬೆಂಚ್ ಕಡೆಯಿಂದ ಕೆಳಗೆ ಬಿದ್ದಿದೆ.

ಕಲ್ಯಾಣ್ ಪಟ್ಟಣದ ಕೋರ್ಟ್‌ನಲ್ಲಿ ಈ ಘಟನೆ ನಡೆದಿದೆ. ತದನಂತರ ಆರೋಪಿ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ. ಹೀಗೆ ಮಾಡಿದ ಆರೋಪಿಯನ್ನು ಕಿರಣ್ ಸಂತೋಷ್ ಭರವ್ ಎಂದು ಗುರುತಿಸಲಾಗಿದೆ.

ಕೊಲೆ ಪ್ರಕರಣವೊಂದರ ವಿಚಾರಣೆಗಾಗಿ ಆತನನ್ನು ಜಿಲ್ಲಾ ಮತ್ತು ಹೆಚ್ಚುವರಿ ಸೆಷನ್ಸ್ ನ್ಯಾಯಾಧೀಶರಾದ ಆರ್.ಜಿ. ವಾಗ್ಮರೆ ಅವರ ಮುಂದೆ ಹಾಜರುಪಡಿಸಿದಾಗ ಅವರತ್ತ ಆರೋಪಿ ಚಪ್ಪಲಿ ಎಸೆದಿರುವುದಾಗಿ ಮಹಾತ್ಮ ಫುಲೆ ಪೊಲೀಸ್ ಠಾಣೆಯ ಅಧಿಕಾರಿಯೊಬ್ಬರು ಹೇಳಿದ್ದಾರೆ.

ಮತ್ತೊಂದು ಕೋರ್ಟ್‌ಗೆ ತನ್ನ ಕೇಸ್‌ನ್ನು ವರ್ಗಾಯಿಸುವಂತೆ ಆರೋಪಿ ನ್ಯಾಯಾಧೀಶರ ಬಳಿ ಮನವಿ ಮಾಡಿದ್ದಾನೆ. ಇದೇ ರೀತಿಯಲ್ಲಿ ವಕೀಲರ ಮೂಲಕ ಅರ್ಜಿ ಸಲ್ಲಿಸುವಂತೆ ನ್ಯಾಯಾಧೀಶರು ಆರೋಪಿಗೆ ಹೇಳಿದ್ದಾರೆ. ಬಳಿಕ ಆರೋಪಿ ಪರ ವಕೀಲರನ್ನು ಕರೆಯಲಾಗಿದೆ. ಆದರೆ ವಕೀಲರು ನ್ಯಾಯಾಲಯದಲ್ಲಿ ಇರಲಿಲ್ಲ.

ನ್ಯೂಯಾರ್ಕ್‌ನಲ್ಲಿ ಚಲಿಸುತ್ತಿದ್ದ ರೈಲಿನಲ್ಲಿ ಮಹಿಳೆಗೆ ಬೆಂಕಿ ಹಚ್ಚಿ ಕೊಲೆ



ನ್ಯೂಯಾರ್ಕ್: ಅಮೆರಿಕದ ನ್ಯೂಯಾರ್ಕ್‌ನಲ್ಲಿ ಸಬ್ ವೇ ರೈಲೊಂದರಲ್ಲಿ ಮಹಿಳೆಗೆ ಬೆಂಕಿ ಹಚ್ಚಿ ಕೊಲೆ ಮಾಡಲಾಗಿದೆ. ಮಹಿಳೆಯ ಗುರುತು ಪತ್ತೆಯಾಗಿಲ್ಲ. ಬೆಳಗ್ಗೆ 7.30ರ ಸುಮಾರಿಗೆ ಬ್ರೂಕ್ಲಿನ್ ಮಾರ್ಗದಲ್ಲಿ ಈ ಘಟನೆ ನಡೆದಿದೆ ಎಂದು ನ್ಯೂಯಾರ್ಕ್ ಸಿಟಿ ಪೊಲೀಸ್ ಆಯುಕ್ತ ಜೆಸ್ಸಿಕಾ ಟಿಸ್ಕಾ ಹೇಳಿದ್ದಾರೆ. ರೈಲು ನಿಲ್ದಾಣವೊಂದರ ಬಳಿ ಬಂದಾಗ, ಸೀಟಿನಲ್ಲಿ ಹಾಗೆಯೇ ಮಲಗಿದ್ದ ಮಹಿಳೆಯ ಬಳಿ ಬಂದ ಹಂತಕ, ಲೈಟರ್‌ನಂತೆ ಕಾಣಿಸುತ್ತಿದ್ದ ಸಾಧನದಿಂದ ಆಕೆಯ ಬಟ್ಟೆಗೆ ಬೆಂಕಿ ಹಚ್ಚಿದ್ದಾನೆ. ನಂತರ ಮಹಿಳೆ ಬಟ್ಟೆ ನೋಡನೋಡುತ್ತಿದ್ದಂತೆಯೇ ಸುಟ್ಟು ಹೋಗಿದೆ.

ನಂತರ ಘಟನೆ ನೋಡಿದ ಕೆಲವರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಮತ್ತೊಂದು ಸಬ್‌ವೇ ರೈಲಿನಲ್ಲಿ ಪರಾರಿಯಾಗುತ್ತಿದ್ದ ಹಂತಕನನ್ನು ಬಂಧಿಸಿದ್ದಾರೆ. ಆತನ ಪಾಕೆಟ್‌ನಲ್ಲಿ ಲೈಟರ್ ಇತ್ತು ಎಂದು ಟಿಸ್ಕಾ ಹೇಳಿದ್ದಾರೆ. ಮಹಿಳೆ ಸ್ಥಳದಲ್ಲೇ ಸಾವನ್ನಪ್ಪಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

ಸಾಧಕರ ಸಾಧನೆಯ ಪುಸ್ತಕದಿಂದ ಯುವಕರಿಗೆ ಸ್ಫೂರ್ತಿ

● ಹೈಕೋರ್ಟ್ ನ್ಯಾಯಾಧೀಶ ಚೆಪ್ಪುಡೀರ ಎಂ.ಪೂಣಚ್ಚ ಅಭಿಮತ ● ಹಾಕಿ ಆಟಗಾರ ಎ.ಕಾರ್ಯಪ್ಪ ಪುಸ್ತಕ ಬಿಡುಗಡೆ


ಮಡಿಕೇರಿ ಪತ್ರಿಕಾ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಹಾಕಿ ಆಟಗಾರ ಚೆಪ್ಪುಡೀರ ಎ.ಕಾರ್ಯಪ್ಪ ಅವರ ಪುಸ್ತಕವನ್ನು ಹೈಕೋರ್ಟ್ ನ್ಯಾಯಾಧೀಶ ಚೆಪ್ಪುಡೀರ ಎಂ.ಪೂಣಚ್ಚ ಬಿಡುಗಡೆಗೊಳಿಸಿದರು.

ಮಡಿಕೇರಿ, ಡಿ.23–ಕ್ರೀಡೆ ಸೇರಿದಂತೆ ಯಾವುದೇ ಕ್ಷೇತ್ರದಲ್ಲಿ ಖ್ಯಾತಿ ಗಳಿಸಿದ ಸಾಧಕರ ಸಾಧನೆ ಪುಸ್ತಕದ ರೂಪದಲ್ಲಿ ದಾಖಲಿಸಿದರೆ ಅದು ಮುಂದಿನ ಯುವ ಪೀಳಿಗೆಗೆ ಸ್ಫೂರ್ತಿಯಾಗಿ ಉಳಿಯಲಿದೆ ಎಂದು ಹೈಕೋರ್ಟ್ ನ್ಯಾಯಾಧೀಶ ಚೆಪ್ಪುಡೀರ ಎಂ.ಪೂಣಚ್ಚ ಅಭಿಪ್ರಾಯಪಟ್ಟರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಕೊಡವ ಮಕ್ಕಡ ಕೂಟದ 105ನೇ ಪುಸ್ತಕ ಹಾಗೂ ಹಾಕಿ ಆಟಗಾರ, ಬರಹಗಾರ ಚೆಪ್ಪುಡೀರ ಎ.ಕಾರ್ಯಪ್ಪ ರಚಿಸಿರುವ 'ಕೊಡಗಿನ ಕ್ರೀಡಾಪಟುಗಳ ಜೀವನ ಚರಿತ್ರೆ' ಪುಸ್ತಕ ಬಿಡುಗಡೆ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಪತ್ರಿಕೆಗಳಲ್ಲಿ ಸಾಧಕರ ಸಾಧನೆ ಪ್ರಕಟಗೊಂಡರೆ ಇಂದು ಓದಿ ನಾಳೆ ಮರೆಯುತ್ತೇವೆ. ಆದರೆ, ಅವರ ಸಾಧನೆ ಪುಸ್ತಕದ ರೂಪದಲ್ಲಿ ಹೊರ ಬಂದರೆ ದಾಖಲೆ ಮೂಲಕ ನೆನಪು ಸದಾ ಇರುವುದಲ್ಲದೆ, ಯುವ ಸಮೂಹದಲ್ಲಿ ಹೊಸ ಸ್ಫೂರ್ತಿ ತುಂಬುತ್ತದೆ. ಕ್ರೀಡಾ ಜಿಲ್ಲೆ ಕೊಡಗು ಈಗ ಕೇವಲ ಕ್ರೀಡೆಗೆ ಮಾತ್ರ ಸೀಮಿತವಾಗಿಲ್ಲ, ಎಲ್ಲಾ ಕ್ಷೇತ್ರಗಳಲ್ಲೂ ಕೊಡಗಿನ ಸಾಧಕರು ಗುರುತಿಸಿಕೊಳ್ಳುತ್ತಿದ್ದಾರೆ. ಶಿಸ್ತಿಗೆ ಹೆಸರಾದ ಕೊಡಗಿನಿಂದ ಅನೇಕ ಕ್ರೀಡಾಪಟುಗಳು ರಾಜ್ಯ, ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿದ್ದಾರೆ. ಇದಕ್ಕೆ ಸತತ ಪರಿಶ್ರಮವೇ ಕಾರಣ. ಕೊಡಗಿನ ಕ್ರೀಡಾಪಟುಗಳ ಜೀವನ ಚರಿತ್ರೆ ಪುಸ್ತಕ ರಚನೆಗೂ ಚೆಪ್ಪುಡೀರ ಕಾರ್ಯಪ್ಪ ಶ್ರಮ ವಹಿಸಿದ್ದಾರೆ ಎಂದು ಶ್ಲಾಘಿಸಿದರು.

ಪುಸ್ತಕ ಬಿಡುಗಡೆ ಮಾಡಿ ಮಾತನಾಡಿದ ಮಾಜಿ ಸಚಿವ ಎಂ.ಸಿ.ನಾಣಯ್ಯ, ಹಾಕಿ ಕ್ರೀಡೆಯಲ್ಲಿ ಪಾಲ್ಗೊಳ್ಳಲು ಉತ್ತರ ಭಾರತದವರಿಗೆ ಮಾತ್ರ ಅವಕಾಶ ದೊರೆಯುತ್ತಿದ್ದ ಕಾಲದಲ್ಲೇ ಅದನ್ನು ಮೆಟ್ಟಿನಿಂತು ರಾಷ್ಟ್ರೀಯ ತಂಡದಲ್ಲಿ ಕೊಡಗಿನವರು ಅವಕಾಶ ಪಡೆದುಕೊಂಡಿರುವುದು ಹೆಮ್ಮೆಯ ವಿಚಾರ. ಕೊಡಗಿನ ಎಲ್ಲರೂ ಒಗ್ಗಟ್ಟಾಗಿ ಹಾಕಿ ಕ್ರೀಡಾಕೂಟವನ್ನು ನಿರಂತರವಾಗಿ ನಡೆಸಿಕೊಂಡು ಹೋಗುವ ಮೂಲಕ ಉತ್ತಮ ಕ್ರೀಡಾಪಟುಗಳ ಆಯ್ಕೆಗೆ ಕಾರಣವಾಗಬೇಕು. ಕೊಡವ ಕೌಟುಂಬಿಕ ಹಾಕಿ ಹಬ್ಬ ಲಿಮ್ಕಾ ಮತ್ತು ಗಿನ್ನಿಸ್ ದಾಖಲೆ ಅರ್ಹತೆಯನ್ನು ಪಡೆದುಕೊಂಡಿದೆ. ದೊಡ್ಡ ಮಟ್ಟದ ಹಾಕಿ ಹಬ್ಬ ಪ್ರತಿವರ್ಷ ಒಂದೇ ಸ್ಥಳದಲ್ಲಿ ನಡೆಯುವಂತಾಗಬೇಕು. ಇದಕ್ಕಾಗಿ ಶಾಶ್ವತ ಮೈದಾನದ ವ್ಯವಸ್ಥೆಯಾಗಬೇಕು ಎಂದು ತಿಳಿಸಿದರು.

ಪುಸ್ತಕದ ಬರಹ ಚೆಪ್ಪುಡೀರ ಎ. ಕಾರ್ಯಪ್ಪ ಮಾತನಾಡಿ, ಹಾಕಿ ಸ್ಫೂರ್ತಿ ಕೊಡಗಿನ ಮಕ್ಕಳ ರಕ್ತದಲ್ಲಿ ಶೇ.70ರಷ್ಟಿದೆ. ಉಳಿದ ಶೇ.30ರಷ್ಟು ಪ್ರೋತ್ಸಾಹ ಪೋಷಕರಿಂದ ಸಿಗಬೇಕಾಗಿದೆ. ಕ್ರೀಡಾ ಸಾಧಕರ ಸಾಧನೆಯನ್ನು ಕೊಡಗಿನ ಚರಿತ್ರೆ ಮರೆಯಬಾರದು ಎನ್ನುವ ಕಾರಣಕ್ಕಾಗಿ ಪುಸ್ತಕವನ್ನು ಬರೆದಿದ್ದೇನೆ. ಜಿಲ್ಲೆಯ ಶಾಲಾ–ಕಾಲೇಜು ಮತ್ತು ಗ್ರಂಥಾಲಯಗಳಿಗೆ ಪುಸ್ತಕವನ್ನು ಉಚಿತವಾಗಿ ನೀಡಲಾಗುವುದು. ಮಕ್ಕಳು ಈ ಪುಸ್ತಕವನ್ನು ಹೆಚ್ಚು ಓದಬೇಕು. ಸಾಧಕರ ಆದರ್ಶಗಳನ್ನು ಅಳವಡಿಸಿಕೊಂಡು ಮತ್ತಷ್ಟು ಕ್ರೀಡಾ ಸಾಧನೆ ಮಾಡಬೇಕು ಎನ್ನುವುದು ನಮ್ಮ ಉದ್ದೇಶ ಎಂದರು.

ಶಕ್ತಿ ದಿನಪತ್ರಿಕೆ ಪ್ರಧಾನ ಸಂಪಾದಕ ಜಿ.ರಾಜೇಂದ್ರ, ಕೊಡವ ಹಾಕಿ ಅಕಾಡೆಮಿ ಅಧ್ಯಕ್ಷ ಪಾಂಡಂಡ ಕೆ.ಬೋಪಣ್ಣ, ಕೊಡವ ಮಕ್ಕಡ ಕೂಟದ ಅಧ್ಯಕ್ಷ ಬೊಳ್ಳಜಿರ ಬಿ.ಅಯ್ಯಪ್ಪ, ಕ್ರೀಡಾಪಟು ಬಾಳೆಯಡ ಕಾಳಪ್ಪ ಹಾಗೂ ಲೆ.ಕ.ಬಾಳೆಯಡ ಸುಬ್ರಮಣಿ ಮಾತನಾಡಿದರು.1975ರ ವಿಶ್ವಕಪ್ ಹಾಕಿ ಪಂದ್ಯಾವಳಿಯ ವಿಜೇತ ಪೈಕೇರ ಇ.ಕಾಳಯ್ಯ ಉಪಸ್ಥಿತರಿದ್ದರು.

ಇದೇ ವೇಳೆ ಕ್ಷೇತ್ರ ಶಿಕ್ಷಣ ಸಂಪನ್ಮೂಲ ಸಮನ್ವಯಾಧಿಕಾರಿ ಕೆ.ಪಿ.ಗುರುರಾಜ್, ಮುದೆ ಪದವಿಪೂರ್ವ ಕಾಲೇಜು ಪ್ರಾಂಶುಪಾಲ ಸಿದ್ದರಾಜು ಬೆಳ್ಳಯ್ಯ ಹಾಗೂ ವಿವಿಧ ಶಾಲೆಗಳಿಗೆ ಪುಸ್ತಕಗಳನ್ನು ವಿತರಿಸಲಾಯಿತು.

ಸಹೋದರನ ಮೂಳೆ ದಾನ: ಸಾರ್ಥಕತೆ ಮೆರೆದ ಸಹೋದರಿ



ಮಡಿಕೇರಿ, ಡಿ.23–ಅಪಘಾತದಿಂದ ಚಿಂತಾಜನಕ ಸ್ಥಿತಿಯಲ್ಲಿದ್ದ ಸಹೋದರನ ಅಂಗಾಂಗ (ಮೂಳೆ) ದಾನ ಮಾಡುವ ಮೂಲಕ ಸಾವಿನಲ್ಲೂ ಸಹೋದರಿ ಸಾರ್ಥಕತೆ ಮೆರೆದಿದ್ದಾರೆ.

ಸೋಮವಾರಪೇಟೆಯ ಜಂಬೂರು ಗ್ರಾಮದ ನಿವಾಸಿ ಎನ್.ಈಶ್ವರ(32) ಅವರ ದೇಹದ ಮೂಳೆಗಳನ್ನು ಸಹೋದರಿ ಸೌಮ್ಯ ದಾನ ಮಾಡಿದ್ದಾರೆ.

ಡಿ.21ರಂದು ರಾತ್ರಿ ಎನ್.ಈಶ್ವರ ಪಿಕ್‌ಅಪ್ ವಾಹನವನ್ನು ಚಲಾಯಿಸಿಕೊಂಡು ಹೋಗುತ್ತಿದ್ದರು. ಈ ವೇಳೆ ಗರಗಂದೂರು ಬಳಿ ನಿಯಂತ್ರಣ ತಪ್ಪಿ ವಾಹನ ಮಗುಚಿ ಬಿದ್ದಿದೆ. ಪರಿಣಾಮ ಈಶ್ವರ್ ತಲೆಗೆ ಗಂಭೀರ ಗಾಯವಾಗಿ, ಚಿಂತಾಜನಕ ಸ್ಥಿತಿಯಲ್ಲಿದ್ದರು. ನಂತರ ಈತನನ್ನು ಮಂಗಳೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ, ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟಿದ್ದರು.

ಸಹೋದರಿ ಸೌಮ್ಯ ಹಾಗೂ ಕುಟುಂಬ ವರ್ಗ ಈಶ್ವರ ಅವರ ಮೂಳೆಗಳನ್ನು ದಾನ ನೀಡಿದರು. ದಾನ ಪಡೆದ ಮೂಳೆಗಳನ್ನು ಕಸಿ ಮಾಡುವ ಮೂಲಕ ಕ್ಯಾನ್ಸರ್ ಪೀಡಿತ ಆರು ಮಕ್ಕಳ ಕೈ–ಕಾಲುಗಳನ್ನು ಸಮರ್ಥವಾಗಿ ಉಳಿಸಬಹುದು ಎಂದು ಡಾ.ವರುಣ್ ಶೆಟ್ಟಿ ತಿಳಿಸಿದರು.

ಕೊಡಗು ಹಿಂದೂ ಮಲಯಾಳಿ ಮಹಿಳಾ ಅಸೋಸಿಯೇಷನ್ ವಾರ್ಷಿಕೋತ್ಸವ


ವಿರಾಜಪೇಟೆ ಪುರಭವನದಲ್ಲಿ ನಡೆದ ಕೊಡಗು ಹಿಂದೂ ಮಲಯಾಳಿ ಮಹಿಳಾ ಅಸೋಸಿಯೇಷನ್ ವಾರ್ಷಿಕೋತ್ಸವದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದವರನ್ನು ಸನ್ಮಾನಿಸಲಾಯಿತು.

ವಿರಾಜಪೇಟೆ, ಡಿ.23–ಮಲಯಾಳಿ ಮಹಿಳಾ ಅಸೋಸಿಯೇಷನ್ ಸಂಘಟನೆ ತಮ್ಮ ಸಂಸ್ಕೃತಿ, ಆಚಾರ, ವಿಚಾರಗಳನ್ನು ಉಳಿಸುವ ನಿಟ್ಟಿನಲ್ಲಿ ವಿವಿಧ ಸ್ಪರ್ಧಾ ಕಾರ್ಯಕ್ರಮ ಆಯೋಜಿಸುತ್ತಿದೆ ಎಂದು ವಿಧಾನ ಪರಿಷತ್ ಸದಸ್ಯ ಸುಜಾ ಕುಶಾಲಪ್ಪ ಹೇಳಿದರು.

ಪಟ್ಟಣದ ಪುರಭವನದಲ್ಲಿ ನಡೆದ ಕೊಡಗು ಹಿಂದೂ ಮಲಯಾಳಿ ಮಹಿಳಾ ಅಸೋಸಿಯೇಷನ್ ವಾರ್ಷಿಕೋತ್ಸವದಲ್ಲಿ ಮಾತನಾಡಿದ ಅವರು, ಗ್ರಾಮೀಣ ಪ್ರದೇಶದ ಮಹಿಳೆಯರಿಗೆ ಸೋಷಿಯೇಷನ್ ಉತ್ತಮ ವೇದಿಕೆಯಾಗಿದೆ ಶ್ಲಾಘಿಸಿದರು.

ಪುರಸಭೆ ಅಧ್ಯಕ್ಷೆ ಎಂ.ಕೆ.ದೇಚಮ್ಮ ಮಾತನಾಡಿ, ಹಿಂದೂ ಮಲಯಾಳಿ ಜನಾಂಗದ ಮಹಿಳೆಯರನ್ನು ಒಗ್ಗೂಡಿಸುವ ಮೂಲಕ ಅವರಿಗೆ ಅನೇಕ ಕಾರ್ಯಕ್ರಮ ಹಮ್ಮಿಕೊಂಡಿರುವುದು ಮೆಚ್ಚುಗೆ ಎಂದರು.

ಅಸೋಸಿಯೇಷನ್ ಅಧ್ಯಕ್ಷೆ ಶೀಭಾ ಪ್ರಥ್ವಿನಾಥ್ ಮಾತನಾಡಿ, ಕೊಡಗಿನಲ್ಲಿ ಹೆಚ್ಚು ಮಲಯಾಳಿ ಜನಾಂಗದವರಿದ್ದು, ಸರ್ಕಾರ ಓಣಂ ಹಬ್ಬಕ್ಕೆ ಶಾಲಾ ವಿದ್ಯಾರ್ಥಿಗಳಿಗೆ ರಜೆ ನೀಡಬೇಕೆಂದು ಶಾಸಕ ಎ.ಎಸ್.ಪೊನ್ನಣ್ಣ ಅವರಿಗೆ ಮನವಿ ಮಾಡಿದರು.

ಇದೇ ವೇಳೆ ಶಾಸಕ ಎ.ಎಸ್.ಪೊನ್ನಣ್ಣ, ಕೊಡಗು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷೆ ಸವಿತಾ ರೈ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಕೊಡಗು ಜಿಲ್ಲಾ ಹಿಂದೂ ಮಲಯಾಳಿ ಸಂಘದ ಅಧ್ಯಕ್ಷ ವೈ.ಎಂ.ವಿಜಯನ್, ಮುತ್ತಪ್ಪನ್ ಮಲೆಯಾಳಿ ಸಂಘದ ಅಧ್ಯಕ್ಷ ಸುಮೇಶ್, ತಾಲೂಕು ಅಧ್ಯಕ್ಷ ವಿನೂಪ್ ಕುಮಾರ್, ದೇವಾಲಯ ಆಡಳಿತ ಮಂಡಳಿ ಅಧ್ಯಕ್ಷ ಟಿ.ಕೆ.ರಾಜನ್, ಎಸ್‌ಎನ್ ಡಿಪಿ ವಿರಾಜಪೇಟೆ ಶಾಖೆ ಅಧ್ಯಕ್ಷ ನಾರಾಯಣ, ಪುರಸಭೆ ಸದಸ್ಯರಾದ ಸಿ.ಕೆ.ಪ್ರಥ್ವಿನಾಥ್, ಡಿ.ಪಿ.ರಾಜೇಶ್, ಮತೀನ್, ಸಂಘದ ಸದಸ್ಯರಾದ ಪುಷ್ಪಲತಾ, ಕೆ.ಆರ್.ಬಿಂದು, ಶ್ರೀದೇವಿ ಸಂತೋಷ್ ಮತ್ತಿತರರಿದ್ದರು.

ಅರಣ್ಯ ಕೃಷಿಯಿಂದ ಆರ್ಥಿಕ ಸುಧಾರಣೆ

● ರೈತರಿಗೆ ಪೊನ್ನಂಪೇಟೆ ಅರಣ್ಯ ಮಹಾವಿದ್ಯಾಲಯ ಡೀನ್ ದೇವಗಿರಿ ಸಲಹೆ ● ಚಿಕ್ಕನಾಯಕನಹೊಸಳ್ಳಿಯಲ್ಲಿ ರೈತ ದಿನಾಚರಣೆ


ಚಿಕ್ಕನಾಯಕನಹೊಸಳ್ಳಿಯಲ್ಲಿ ನಡೆದ ರೈತ ದಿನಾಚರಣೆಯಲ್ಲಿ ಸಾಧಕ ರೈತರನ್ನು ಸನ್ಮಾನಿಸಲಾಯಿತು.

> “ಕೃಷಿ ಅರಣ್ಯದಲ್ಲಿ ರೈತರಿಗೆ ಸಾಕಷ್ಟು ಪ್ರಯೋಜನಗಳಿದ್ದು, ಹೆಚ್ಚು ಲಾಭದಾಯಕ ಕೃಷಿಯಾಗಿದೆ. ಜೊತೆಗೆ ಭೂಮಿಯ ಫಲವತ್ತತೆಯೂ ಹೆಚ್ಚುತ್ತದೆ.
> –ಡಾ.ಜಿ.ಎಂ.ದೇವಗಿರಿ, ಪೊನ್ನಂಪೇಟೆ ಅರಣ್ಯ ಮಹಾವಿದ್ಯಾಲಯದ ಡೀನ್

ಕುಶಾಲನಗರ: ರೈತರು ಕೃಷಿ ಚಟುವಟಿಕೆಯೊಂದಿಗೆ ಅರಣ್ಯ ಕೃಷಿ ಕೈಗೊಂಡರೇ ಆರ್ಥಿಕ ಮಟ್ಟ ಸುಧಾರಿಸಲಿದೆ ಎಂದು ಪೊನ್ನಂಪೇಟೆ ಅರಣ್ಯ ಮಹಾವಿದ್ಯಾಲಯ ಡೀನ್ ಡಾ.ಜಿ.ಎಂ.ದೇವಗಿರಿ ಸಲಹೆ ನೀಡಿದರು.

ಸಮೀಪದ ಚಿಕ್ಕನಾಯಕನಹೊಸಳ್ಳಿ ಗ್ರಾಮದಲ್ಲಿ ಸೋಮವಾರ ಕೃಷಿ ಇಲಾಖೆ ವತಿಯಿಂದ ನಡೆದ ರೈತ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ರೈತರು ಕೃಷಿಯಲ್ಲಿ ಆಧುನಿಕ ತಂತ್ರಜ್ಞಾನದ ಬೇಸಾಯ ಪದ್ಧತಿ ಅಳವಡಿಸುವ ಮೂಲಕ ಆರ್ಥಿಕವಾಗಿ ಸದೃಢರಾಗಬೇಕು. ಜೊತೆಗೆ ಯುವಜನತೆಯನ್ನು ಅರಣ್ಯ ಕೃಷಿಯತ್ತ ಆಕರ್ಷಿಸಬೇಕು ಎಂದರು.

ರೈತರು ಕೇವಲ ಭತ್ತ, ಜೋಳದಂತಹ ಬೆಳೆಗಳಿಗೆ ಸೀಮಿತವಾಗದೇ ಸಮಗ್ರ ಬೆಳೆಗಳತ್ತ ಮುಂದಾಗಬೇಕು. ಕೃಷಿ ಅರಣ್ಯ ಪ್ರೋತ್ಸಾಹ ಯೋಜನೆಯಡಿ ರೈತರಿಗೆ ಅರಣ್ಯ ಇಲಾಖೆಯಿಂದ ಸಾಕಷ್ಟು ಪ್ರಯೋಜನಗಳಿದ್ದು, ಈ ಯೋಜನೆಗಳ ಬಗ್ಗೆ ರೈತರಿಗೆ ಅರಿವಿಲ್ಲ. ಅರಣ್ಯ ಇಲಾಖೆ ರೈತರ ಮನೆ ಬಾಗಿಲಿಗೆ ತೆರಳಿ ಯೋಜನೆಗಳ ಮಾಹಿತಿಯನ್ನಾಗಲಿ ಅಥವಾ ಅನುಕೂಲಗಳನ್ನಾಗಲೀ ಒದಗಿಸುತ್ತಿಲ್ಲ ಎಂದು ವಿಷಾದಿಸಿದರು.

ಕೃಷಿ ಇಲಾಖೆ ಉಪನಿರ್ದೇಶಕ ಡಾ.ಸೋಮಶೇಖರ್ ಮಾತನಾಡಿ, ಚಳವಳಿ ಮೂಲಕ ರೈತರ ಒಳಿತಿಗಾಗಿಯೇ ತಮ್ಮ ಹೋರಾಟ ಹಾಗೂ ಜೀವನವನ್ನು ಮುಡಿಪಾಗಿಟ್ಟ ಮಾಜಿ ಪ್ರಧಾನಿ ಚರಣ್ ಸಿಂಗ್ ಅವರ ಸ್ಮರಣೆಗಾಗಿ ರೈತ ದಿನವಾಗಿ ಆಚರಿಸುತ್ತಿದೆ. ಇತ್ತೀಚಿನ ದಿನಗಳಲ್ಲಿ ಕಾರ್ಮಿಕರ ಕೊರತೆಯಿಂದಾಗಿ ಭತ್ತದ ಕೃಷಿ ಕ್ಷೀಣಿಸುತ್ತಿದೆ. ದೇಶದಲ್ಲಿ ಹೆಚ್ಚುತ್ತಿರುವ ಜನಸಂಖ್ಯೆಗೆ ಅನುಗುಣವಾಗಿ ಆಹಾರ ಪೂರೈಕೆ ಮಾಡುವ ಸಲುವಾಗಿ ಭತ್ತದ ಬೆಳೆ ಕ್ಷೀಣಿಸಲು ರೈತರು ಬಿಡಬಾರದು. ಜೊತೆಗೆ ರೈತರು ಸುಸ್ಥಿರ ಕೃಷಿಗೆ ಮುಂದಾಗುವ ಮೂಲಕ ಆರ್ಥಿಕ ಸ್ವಾವಲಂಬನೆ ಹೊಂದಬೇಕು ಎಂದು ಸಲಹೆ ನೀಡಿದರು.

ಕೃಷಿ ವಿವಿ ವಿಸ್ತರಣಾ ಘಟಕದ ಮುಖ್ಯಸ್ಥ ಡಾ.ಆರ್.ಎನ್.ಕೆಂಚರೆಡ್ಡಿ ಮಾತನಾಡಿದರು. ಭತ್ತದ ಹಾಗೂ ವಿವಿಧ ಬೆಳೆಗಳ ಕುರಿತು ಕೃಷಿ ವಿಜ್ಞಾನಿ ಡಾ.ಬಸವಲಿಂಗಯ್ಯ, ಡಾ.ದೇವರಾಜು ರೈತರಿಗೆ ಮಾಹಿತಿ ನೀಡಿದರು.

ಈ ಸಂದರ್ಭ ಸಾಧಕ ರೈತರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ರೈತ ಉತ್ಪಾದಕ ಸಂಸ್ಥೆ ಅಧ್ಯಕ್ಷ ದೇವರಾಜು, ಪ್ರಗತಿಪರ ಕೃಷಿಕ ಮರೂರು ಗ್ರಾಮದ ಹೆಚ್.ವಿ.ಶಿವರುದ್ರಪ್ಪ, ಟಿ.ಜೆ.ಶೇಷಪ್ಪ, ಮಣಜೂರು ಗ್ರಾಮದ ಗುರುಲಿಂಗಪ್ಪ ಟಿ.ಕೆ.ಪಾಂಡುರಂಗ, ಟಿ.ಬಿ.ಜಗದೀಶ್, ಎನ್.ಎಸ್.ರಮೇಶ್, ತೊರೆನೂರು ಗ್ರಾಪಂ ಉಪಾಧ್ಯಕ್ಷೆ ರೂಪಾ ಮಹೇಶ್, ಗ್ರಾಪಂ ಮಾಜಿ ಅಧ್ಯಕ್ಷ ಟಿ.ಕೆ.ವಸಂತ್, ಕೃಷಿ ಇಲಾಖೆ ತಾಂತ್ರಿಕ ವ್ಯವಸ್ಥಾಪಕರಾದ ಶಾರದಾ, ಸುಪರ್ಣಾ, ಕೃಷಿ ಇಲಾಖೆಯ ಮೈಥಿಲಿ, ಅರ್ಪಿತಾ ಇದ್ದರು.

ತೇಲಪಂಡ ಮಾಚಯ್ಯ ನಿಧನ



ಕುಶಾಲನಗರ: ಪಟ್ಟಣದ ಶಕ್ತಿ ಬಡಾವಣೆ ನಿವಾಸಿ, ನಿವೃತ್ತ ಸೇನಾ ಜೂನಿಯರ್ ಕಮಿಷನ್ಡ್ ಅಧಿಕಾರಿ ಮತ್ತು ಭಾರತೀಯ ತೋಟಗಾರಿಕಾ ಸಂಶೋಧನಾ ಮಾಜಿ ಉದ್ಯೋಗಿ ತೇಲ ಪಂಡ ಮಾಚಯ್ಯ (ಲಾಲು(80) ಭಾನುವಾರ ನಿಧನರಾದರು. ಮೃತರು ಪತ್ನಿ, ಪುತ್ರ ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಕುಶಾಲನಗರ ಕೊಡವ ಸಮಾಜದ ಸ್ಮಶಾನದಲ್ಲಿ ಸೋಮವಾರ ಅಂತ್ಯಕ್ರಿಯೆ ನೆರವೇರಿಸಲಾಯಿತು.

ಬಹಿಷ್ಕಾರ ವಿಧಿಸುವವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ

ಸಭೆಯಲ್ಲಿ ಜಿಲ್ಲಾ ನ್ಯಾಯಾಧೀಶೆ ಜಿ.ಎಸ್.ಭಾರತಿ ಎಚ್ಚರಿಕೆ


ಜಿಲ್ಲಾ ನ್ಯಾಯಾಲಯದ ವ್ಯಾಜ್ಯ ಪೂರ್ವ ಪರಿಹಾರ ಕೇಂದ್ರದಲ್ಲಿ ನ್ಯಾಯಾಧೀಶೆ ಬಿ.ಎಸ್.ಭಾರತಿ ನೇತೃತ್ವದಲ್ಲಿ ಬಹಿಷ್ಕಾರ ಪ್ರಕರಣದ ಸಭೆ ನಡೆಯಿತು.

ಚಾಮರಾಜನಗರ, ಡಿ.23–ಗ್ರಾಮಗಳಲ್ಲಿ ಬಹಿಷ್ಕಾರ, ದಂಡ ವಿಧಿಸುವಿಕೆ, ಕಾನೂನು ಕೈಗೆತ್ತಿಕೊಳ್ಳುವ ಪ್ರಕರಣಗಳು ಕಂಡು ಬಂದರೆ ನಿರ್ದಾಕ್ಷಿಣ್ಯವಾಗಿ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಪ್ರಧಾನ ಜಿಲ್ಲಾ, ಸೆಷನ್ಸ್ ನ್ಯಾಯಾಧೀಶೆ ಬಿ.ಎಸ್.ಭಾರತಿ ಎಚ್ಚರಿಕೆ ನೀಡಿದರು.

ನಗರದ ಜಿಲ್ಲಾ ನ್ಯಾಯಾಲಯ ಆವರಣದ ವ್ಯಾಜ್ಯ ಪೂರ್ವ ಪರಿಹಾರ ಕೇಂದ್ರದಲ್ಲಿ ಸೋಮವಾರ ನಡೆದ ಗುಂಡ್ಲುಪೇಟೆ ತಾಲೂಕಿನ ಯಡವನಹಳ್ಳಿ ಗ್ರಾಮದ ಬಹಿಷ್ಕಾರ ಪ್ರಕರಣದ ಸಭೆಯಲ್ಲಿ ಮಾತನಾಡಿದ ಅವರು, ಗ್ರಾಮದಲ್ಲಿ ಯಾವುದೇ ತಪ್ಪುಗಳಾದರೆ ಪೊಲೀಸ್‌ನವರಿಗೆ ಮಾಹಿತಿ ನೀಡಬೇಕು. ಬಹಿಷ್ಕಾರ ಹಾಕುವ ಪದ್ಧತಿ ಯಾರಿಗೂ ಇಲ್ಲ. ತಪ್ಪು ಎಸಗಿದ್ದಾರೆ ಎನ್ನುವವರ ವಿರುದ್ಧ ದಂಡ ವಿಧಿಸುವ ಯಾವುದೇ ಅಧಿಕಾರವೂ ಇಲ್ಲ. ಕಾನೂನು ಕೈಗೆತ್ತಿಕೊಳ್ಳುವ ಪ್ರಕರಣಗಳಿಗೆ ಕ್ರಮ ಕೈಗೊಳ್ಳಲಾಗುವುದು ಎಂದರು.

ಬಹಿಷ್ಕಾರ ಹೇರುವುದು ಕಾನೂನು ಬಾಹಿರ. ಇದಕ್ಕೆ ಯಾವುದೇ ಮಾನ್ಯತೆ ಇಲ್ಲ. ಬಹಿಷ್ಕಾರ ಸೇರಿದಂತೆ ತೊಂದರೆ ನೀಡುವ ಕಟ್ಟುಪಾಡುಗಳನ್ನು ಕೈಬಿಡಬೇಕು. ಕಾನೂನು ಪಾಲನೆಯನ್ನು ಪ್ರತಿಯೊಬ್ಬರು ಪಾಲಿಸಬೇಕು. ಕಾನೂನಿಗೆ ಹೊರತಾದ ಯಾವುದೇ ತೀರ್ಮಾನ ಮಾಡುವಂತಿಲ್ಲ. ತಪ್ಪು ನಿರ್ಧಾರ ಕೈಗೊಂಡು ಮತ್ತೊಂದು ಕುಟುಂಬವನ್ನು ಸಂಕಷ್ಟಕ್ಕೆ ಗುರಿ ಮಾಡಿದರೆ ಸೂಕ್ತ ಕ್ರಮ ಎದುರಿಸಬೇಕಾಗುತ್ತದೆ ಎಂದು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ.ಕವಿತಾ ಮಾತನಾಡಿ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಎಲ್ಲರೂ ಇದ್ದೇವೆ. ಕಾನೂನನ್ನು ಪ್ರತಿಯೊಬ್ಬರು ಗೌರವಿಸಬೇಕು. ಬಹಿಷ್ಕಾರ, ದಂಡ ವಿಧಿಸುವಂತಹ ಪದ್ಧತಿಗಳನ್ನು ಮುಂದುವರೆಸಿದರೆ ಕಾನೂನು ಪ್ರಕಾರ ಕ್ರಮ ತೆಗೆದುಕೊಳ್ಳಲಾಗುವುದು ಎಂದರು.

ಗ್ರಾಮದಲ್ಲಿ ಯಾವುದೇ ಕಲಹ, ಇನ್ನಿತರ ವ್ಯತ್ಯಾಸಗಳಾದಾಗ ನಮಗೆ ಮಾಹಿತಿ ನೀಡಿ, ದೂರು ದಾಖಲಿಸಬೇಕು. ನಿಮ್ಮಲ್ಲಿಯೇ ತೀರ್ಮಾನ ಮಾಡಿ ಕಠಿಣ ಕ್ರಮಗಳನ್ನು ಹೇರುವಂತಿಲ್ಲ. ಒಳ್ಳೆಯ ಉದ್ದೇಶಗಳಿಗೆ, ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮಗಳಿಗೆ ಊರಿನ ಯಜಮಾನರು ಮುಂದಾಗಬೇಕು. ಕಾನೂನು ಬಾಹಿರ ಕ್ರಮಗಳಿಗೆ ಅವಕಾಶ ಕೊಡಬಾರದು ಎಂದು ಸಲಹೆ ನೀಡಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಈಶ್ವರ ಮಾತನಾಡಿ, ಕಾನೂನಿಗೆ ವಿರುದ್ಧವಾದ ಯಾವುದೇ ಕ್ರಮ ತೆಗೆದುಕೊಳ್ಳಬಾರದು. ಗ್ರಾಮದ ಹಂತದಲ್ಲಿ ಮತ್ತೊಬ್ಬರಿಗೆ ತೊಂದರೆ ಉಂಟುಮಾಡುವ ಯಾವುದೇ ನಿರ್ಧಾರ ಕೈಗೊಳ್ಳಬಾರದು ಎಂದರು.

ಸಭೆಯಲ್ಲಿ ಜಿಲ್ಲಾ ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ರಂಗಸ್ವಾಮಿ ಇತರರು ಇದ್ದರು.

ಸಾವಯವ ಕೃಷಿ ಮೂಲಕ ಲಾಭದಾಯಕ ಬೆಳೆ ಬೆಳೆಯಿರಿ

● ರೈತರಿಗೆ ಶಾಸಕ ಸಿ.ಪುಟ್ಟರಂಗಶೆಟ್ಟಿ ಸಲಹೆ ● ಚಾ.ನಗರದಲ್ಲಿ ಜಿಲ್ಲಾ ಮಟ್ಟದ ಸಿರಿಧಾನ್ಯ ಹಬ್ಬ


ಚಾ.ನಗರದಲ್ಲಿ ನಡೆದ ಸಿರಿಧಾನ್ಯ ಹಬ್ಬ ಕಾರ್ಯಕ್ರಮದಲ್ಲಿ ಸ್ಪರ್ಧೆ ವಿಜೇತರು ಮತ್ತು ಜಿಲ್ಲಾ ಮಟ್ಟದ ಶ್ರೇಷ್ಠ ರೈತ ಪ್ರಶಸ್ತಿ ಪುರಸ್ಕೃತರನ್ನು ಸನ್ಮಾನಿಸಲಾಯಿತು.

ಚಾಮರಾಜನಗರ, ಡಿ.23–ರೈತರು ಸಾವಯವ ಕೃಷಿಗೆ ಒತ್ತು ನೀಡುವ ಮೂಲಕ ಲಾಭದಾಯಕ ಬೆಳೆ ಬೆಳೆದು ಆರ್ಥಿಕವಾಗಿ ಸದೃಢರಾಗಬೇಕು ಎಂದು ಶಾಸಕ ಸಿ.ಪುಟ್ಟರಂಗಶೆಟ್ಟಿ ಸಲಹೆ ನೀಡಿದರು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕೃಷಿ ಹಾಗೂ ವಿವಿಧ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ರೈತ ದಿನಾಚರಣೆ ಹಾಗೂ ಜಿಲ್ಲಾ ಮಟ್ಟದ ಸಿರಿಧಾನ್ಯ ಹಬ್ಬ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ರೈತರಿಗೆ ಸಮಸ್ಯೆಗಳು ನಿರಂತರವಾಗಿದೆ. ಇದನ್ನು ಮನಗಂಡಿರುವ ಸರ್ಕಾರ ರೈತರ ಸಮಸ್ಯೆಗಳನ್ನು ಪರಿಹರಿಸಲು ಮುಂದಾಗಿದೆ. ಬೆಳೆಗಳಿಗೆ ಸೂಕ್ತ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸಬೇಕು. ಆಹಾರ ಪದಾರ್ಥಗಳಿಗೆ ವೈಜ್ಞಾನಿಕ ಬೆಲೆ ದೊರೆಯಬೇಕು. ಸರ್ಕಾರ ರೈತರ ಪರವಾಗಿದ್ದು, ಈ ಬಗ್ಗೆ ತಜ್ಞರ ಜೊತೆ ಚರ್ಚಿಸಿ, ಸಮಸ್ಯೆ ಪರಿಹರಿಸಲಾಗುವುದು ಎಂದರು.

ಇಂದಿನ ಪರಿಸ್ಥಿತಿಗೆ ಅನುಗುಣವಾಗಿ ಲಾಭ ತರುವ ಬೆಳೆ ಬೆಳೆಯಲು ಮುಂದಾಗಬೇಕು. ರೈತರು ಸಾವಯವ ಕೃಷಿಗೆ ಆದ್ಯತೆ ನೀಡಿ ಸಿರಿಧಾನ್ಯಗಳನ್ನು ಬೆಳೆದು ಆರ್ಥಿಕವಾಗಿ ಸದೃಢರಾಗಬೇಕು. ಜೊತೆಗೆ ವಿವಿಧ ಸೊಪ್ಪು ಬೆಳೆಯಬೇಕು. ಸಿರಿಧಾನ್ಯ ಹಾಗೂ ಸೊಪ್ಪು ಸೇವನೆಯಿಂದ ರೋಗ ನಿರೋಧಕ ಶಕ್ತಿ ಹೆಚ್ಚಾಗಿ ಆರೋಗ್ಯಯುತ ಜೀವನ ನಡೆಸಲು ಸಹಕಾರಿಯಾಗಲಿದೆ ಎಂದು ತಿಳಿಸಿದರು.

ಶಾಸಕ ಎ.ಆರ್.ಕೃಷ್ಣಮೂರ್ತಿ ಮಾತನಾಡಿ, ಬೆಳೆಗೆ ನ್ಯಾಯಯುತ ಬೆಲೆ ದೊರೆಯದೇ ಸಂಕಷ್ಟದಲ್ಲಿರುವ ರೈತರಿಗೆ ನೆರವಾಗುವುದು ಸರ್ಕಾರದ ಜವಾಬ್ದಾರಿಯಾಗಿದೆ. ಸ್ವಾಮಿನಾಥನ್ ಸಮಿತಿ ವರದಿ ಜಾರಿಯಾಗಿದ್ದರೆ ರೈತರಿಗೆ ಸಾಕಷ್ಟು ಅನುಕೂಲವಾಗುವುದಿತ್ತು. ರೋಗನಿರೋಧಕ ಶಕ್ತಿ ವೃದ್ಧಿಸುವ ಸಿರಿಧಾನ್ಯಗಳ ಮಹತ್ವವನ್ನು ಪ್ರತಿಯೊಬ್ಬರು ಅರಿಯಬೇಕು. ಸಿರಿಧಾನ್ಯಗಳು ಇಂದು ನ್ಯೂಟ್ರಿಷಿಯನ್, ಡಯಟ್ ಆಹಾರವಾಗಿ ಪರಿವರ್ತನೆ ಹೊಂದಿ ಮಾರುಕಟ್ಟೆಗೆ ಪ್ರವೇಶಿಸಿವೆ ಎಂದರು.

ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ, ರೈತ ಮುಖಂಡರಾದ ಹೊನ್ನೂರು ಪ್ರಕಾಶ್ ಹಾಗೂ ಭಾಗ್ಯರಾಜ್, ಕೃಷಿ ಜಂಟಿ ನಿರ್ದೇಶಕ ಅಬೀದ್ ಮಾತನಾಡಿದರು. ಇದೇ ವೇಳೆ ಸಿರಿಧಾನ್ಯ ಪಾಕ ಹಾಗೂ ಮರೆತುಹೋದ ಆಹಾರ, ತಿನಿಸುಗಳ ತಯಾರಿಕೆ ಸ್ಪರ್ಧೆ ವಿಜೇತ ಮಹಿಳೆಯರು ಮತ್ತು ಆತ್ಮ ಯೋಜನೆಯಡಿ ಜಿಲ್ಲಾ ಮಟ್ಟದ ಶ್ರೇಷ್ಠ ರೈತ ಪ್ರಶಸ್ತಿ ಪುರಸ್ಕೃತರಿಗೆ ಪ್ರಮಾಣ ಪತ್ರ ನೀಡಿ ಸನ್ಮಾನಿಸಲಾಯಿತು. ವೇದಿಕೆ ಮುಂಭಾಗದಲ್ಲಿ ಸಿರಿಧಾನ್ಯಗಳಿಂದ ಅಲಂಕೃತಗೊಳಿಸಿದ್ದ ರಾಶಿ ಪೂಜೆ ನೆರವೇರಿಸಲಾಯಿತು. ಕಾರ್ಯಕ್ರಮಕ್ಕೂ ಮೊದಲು ಸಿರಿಧಾನ್ಯ ಹಬ್ಬದ ಅಂಗವಾಗಿ ಜಿಲ್ಲಾಡಳಿತದ ಮುಂಭಾಗದಿಂದ ಭುವನೇಶ್ವರಿ ವೃತ್ತದ ಮಾರ್ಗವಾಗಿ ಡಾ.ಬಿ.ಆರ್.ಅಂಬೇಡ್ಕರ್ ಭವನದವರೆಗೆ ಸಿರಿಧಾನ್ಯ ನಡಿಗೆ ಏರ್ಪಡಿಸಲಾಗಿತ್ತು.ಚುಡಾ ಅಧ್ಯಕ್ಷ ಮಹಮ್ಮದ್ ಅಸ್ಗರ್ ಮುನ್ನಾ, ಜಿಪಂ ಸಿಇಓ ಮೋನಾ ರೋತ್, ಕೃಷಿ ಇಲಾಖೆ ಉಪನಿರ್ದೇಶಕಿ ಸುಷ್ಮಾ, ರೈತ ಮುಖಂಡರಾದ ಎಂ.ಸಂಪತ್, ಎಸ್.ಮಹದೇವಪ್ಪ, ಎಚ್.ಕೆ.ಮಂಜೇಶ್, ಮಹೇಶ್ ಮೂಡ್ನಾಕೂಡು, ಆಲೂರು ಸಂತೋಷ್, ಚಿನ್ನಸ್ವಾಮಿ ಕಾಡಹಳ್ಳಿ, ಮಹದೇವಮೂರ್ತಿ, ಹೊನ್ನೂರು ಬಸವಣ್ಣ, ಹೆಬ್ಬಸೂರು ಬಸವಣ್ಣ, ಶಿವಮೂರ್ತಿ ನಾಯಕ, ನಾಗರಾಜು, ಸೋಮಣ್ಣ, ಕರಿಯಪ್ಪ, ಚಿಕ್ಕರಾಜು, ರಾಜು, ಶಿವಕುಮಾರ್, ಕೆವಿಕೆ ಮುಖ್ಯಸ್ಥರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ನಾನು ಯಾವುದೇ ಜಾತಿ ರಾಜಕೀಯ ಮಾಡುತ್ತಿಲ್ಲ


ಸುದ್ದಿಗೋಷ್ಠಿಯಲ್ಲಿ ಶಾಸಕ ಹೆಚ್.ಎಂ.ಗಣೇಶ್ ಪ್ರಸಾದ್ ಮಾತನಾಡಿದರು.

ಗುಂಡ್ಲುಪೇಟೆ: ನಾನು ಯಾವುದೇ ಜಾತಿ ಆಧಾರದ ಮೇಲೆ ರಾಜಕೀಯ ಮಾಡದೆ, ಬಸವ ತತ್ವದಡಿ ಕ್ಷೇತ್ರದಲ್ಲಿ ದುಡಿಯುತ್ತಿದ್ದೇನೆ ಎಂದು ಶಾಸಕ ಹೆಚ್.ಎಂ.ಗಣೇಶ್‌ಪ್ರಸಾದ್ ಹೇಳಿದರು.

ಪಟ್ಟಣದ ಕಾಂಗ್ರೆಸ್ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚಿಗೆ ಕೆಲವರು ನನ್ನನ್ನು ದಲಿತ ವಿರೋಧಿ ರಾಜಕಾರಣ ಮಾಡುತ್ತಿದ್ದಾರೆ ಎಂದು ಆರೋಪಿಸುತ್ತಿದ್ದಾರೆ. ಆದರೆ, ನಾನು ಯಾವುದೇ ಒಂದು ಜಾತಿಗೆ ಸೀಮಿತವಾಗದೆ ಬಸವ ತತ್ವದ ಆಧಾರದ ಮೇಲೆ ಸರ್ವರಿಗೂ ಸಮಬಾಳು, ಸರ್ವರಿಗೂ ಸಮಪಾಲು ಎಂಬಂತೆ ಕ್ಷೇತ್ರದಲ್ಲಿ ಅಭಿವೃದ್ಧಿ ಕೆಲಸ ಮಾಡಿಕೊಂಡು ಹೋಗುತ್ತಿದ್ದೇನೆ. ಇದನ್ನು ಸಹಿಸದ ವಿರೋಧಿಗಳು ಇಲ್ಲಸಲ್ಲದ ಆರೋಪ ಮಾಡುತ್ತಿದ್ದಾರೆ ಇದು ಸತ್ಯಕ್ಕೆ ದೂರವಾದದ್ದು ಎಂದರು.

ಪಟ್ಟಣ ಹಾಗೂ ಕ್ಷೇತ್ರದ ಅಭಿವೃದ್ಧಿಗೆ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿ ಹಂತ ಹಂತವಾಗಿ ಕೆರೆಕಟ್ಟೆಗಳ ಅಭಿವೃದ್ಧಿ, ರಸ್ತೆ, ಸಾರಿಗೆ ವ್ಯವಸ್ಥೆ ಹಾಗೂ ಮೂಲ ಸೌಕರ್ಯಗಳ ಕಡೆ ಹೆಚ್ಚಿನ ಗಮನ ಹರಿಸುತ್ತಿದ್ದೇನೆ. ಇದನ್ನು ಸಹಿಸದ ವಿರೋಧಿಗಳು ಆರೋಪ ಮಾಡುತ್ತಿದ್ದಾರೆ ಎಂದರು.

ಸುದ್ದಿಗೋಷ್ಠಿಯಲ್ಲಿ ಚಾಮುಲ್ ನಿರ್ದೇಶಕ ನಂಜುಂಡ ಪ್ರಸಾದ್, ಮುಖಂಡರಾದ ನಂಜಪ್ಪ, ಸಿದ್ದಪ್ಪ, ರಾಜಶೇಖರ್ ಇದ್ದರು.

ಭೋಗಯ್ಯನಹುಂಡಿಯಲ್ಲಿ ಶಿವಪ್ಪಶ್ರೀಗಳ ಸಂಸ್ಮರಣೋತ್ಸವ


ಭೋಗಯ್ಯನಹುಂಡಿ ಗ್ರಾಮದಲ್ಲಿ ನಡೆದ ಶಿವಪ್ಪಸ್ವಾಮೀಜಿ ಸಂಸ್ಮರಣೋತ್ಸವ ಕಾರ್ಯಕ್ರಮವನ್ನು ವಿವಿಧ ಮಠಾಧೀಶರು ಉದ್ಘಾಟಿಸಿದರು.

ಬೇಗೂರು, ಡಿ.23–ಸಮೀಪದ ಭೋಗಯ್ಯನಹುಂಡಿ ಗ್ರಾಮದಲ್ಲಿ ಶ್ರೀ ಗುರುಮಲ್ಲೇಶ್ವರ ಭಿಕ್ಷದ ಮಠದ ಶ್ರೀ ಶಿವಪ್ಪಸ್ವಾಮೀಜಿ ಅವರ 75ನೇ ಸಂಸ್ಮರಣೋತ್ಸವ ಮತ್ತು ಧಾರ್ಮಿಕ ಸಭೆ ನಡೆಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಸೋಮಹಳ್ಳಿ ಶಿಲಾ ಮಠಾಧ್ಯಕ್ಷ ಶ್ರೀ ಸಿದ್ದಮಲ್ಲಸ್ವಾಮೀಜಿ, ಸೋಮಹಳ್ಳಿ, ಕೊಡಗಾಪುರ, ಹರವೆ ಗ್ರಾಮದಲ್ಲಿ ಮಠವನ್ನು ಸ್ಥಾಪಿಸಿದ ಕೀರ್ತಿ ಶಿವಪ್ಪಶ್ರೀಗಳಿಗೆ ಸಲ್ಲುತ್ತದೆ ಎಂದರು. ಕನಕಪುರ ದೇಗುಲ ಮಠದ ಕಿರಿಯಶ್ರೀ ಚನ್ನಬಸವಸ್ವಾಮೀಜಿ ಮಾತನಾಡಿ, ಶಿವಪ್ಪಸ್ವಾಮೀಜಿಯವರನ್ನು ನೆನಪಿಸಿಕೊಳ್ಳುವುದೇ ಒಂದು ಪುಣ್ಯ. ಗುರು ಮಲ್ಲೇಶ್ವರರ ಮಹಾಜ್ಯೋತಿಯನ್ನು ಅನೇಕ ಗ್ರಾಮಗಳಿಗೆ ಪ್ರಜ್ವಲಿಸಿದ ಶಿವಪ್ಪಶ್ರೀಗಳು ಭಕ್ತರಿಗೆ ಧರ್ಮ ಬೋಧನೆ ಮಾಡಿದವರು ಎಂದು ಸ್ಮರಿಸಿದರು.

ಸಿದ್ಧಗಂಗಾ ಮಠದ ಕಿರಿಯಶ್ರೀ ಶಿವಸಿದ್ದೇಶ್ವರ ಸ್ವಾಮೀಜಿ ಮಾತನಾಡಿ, 12ನೇ ಶತಮಾನದಲ್ಲಿ ದಾಸೋಹದ ಮಹತ್ವ ಇತ್ತು. ಕಲ್ಯಾಣ ಕ್ರಾಂತಿ ನಂತರದಲ್ಲಿ ದಾಸೋಹದ ಮಹತ್ವ ಕ್ಷೀಣಿಸುತ್ತಿದ್ದ ಸಂದರ್ಭ ಮತ್ತೆ 19ನೇ ಶತಮಾನದಲ್ಲಿ ದಾಸೋಹವನ್ನು ಪ್ರಾರಂಭಿಸಿದ ಕೀರ್ತಿ ಗುರುಮಲ್ಲೇಶ್ವರರಿಗೆ ಸಲ್ಲುತ್ತದೆ ಎಂದರು. ಶಾಸಕ ಎಚ್.ಎಂ.ಗಣೇಶ್ ಪ್ರಸಾದ್, ಕಾಡಾ ಮಾಜಿ ಅಧ್ಯಕ್ಷ ಹಂಗಳ ನಂಜಪ್ಪ, ದೇವನೂರು ದಾಸೋಹ ಮಠಾಧ್ಯಕ್ಷ ಶ್ರೀ ಮಹಾಂತಸ್ವಾಮೀಜಿ, ಹರವೆ ವಿರಕ್ತ ಮಠದ ಶ್ರೀ ಸರ್ಪಭೂಷಣ ಸ್ವಾಮೀಜಿ, ಮಾದಾಪಟ್ಟಣ ಮಠದ ಶ್ರೀ ತೋಂಟದಾರ್ಯಸ್ವಾಮೀಜಿ, ಶ್ರೀ ಗಂಗಾಧರ ಸ್ವಾಮೀಜಿ, ಶ್ರೀ ನಂಜುಂಡಸ್ವಾಮೀಜಿ, ವಾಣಿಜ್ಯ ತೆರಿಗೆ ಇಲಾಖೆ ನಿವೃತ್ತ ಅಧಿಕಾರಿ ಡಿ.ವಿ.ಉಮಾಕಾಂತ್ ಇದ್ದರು.

ಡಿ.27, ಆರೋಗ್ಯ ತಪಾಸಣೆ ಉಚಿತ ಶಿಬಿರ




ಚಾಮರಾಜನಗರ, ಡಿ.23–ಮೈಸೂರಿನ ಜೆಎಸ್‌ಎಸ್ ಆಸ್ಪತ್ರೆ, ಡಾ.ಬಾಬು ಸೋಶಿಯಲ್ ವೆಲ್‌ಫೇರ್ ಅಂಡ್ ಚಾರಿಟಬಲ್ ಟ್ರಸ್ಟ್ ಮತ್ತು ಮೈಸೂರ್ ಇಎನ್‌ಟಿ ರಿಸರ್ಚ್ ಅಂಡ್ ಚಾರಿಟಬಲ್ ಟ್ರಸ್ಟ್ ಸಹಯೋಗದಲ್ಲಿ ಡಿ.27ರಂದು ನಗರದ ಜೆಎಸ್‌ಎಸ್ ಆಸ್ಪತ್ರೆಯಲ್ಲಿ ಆರೋಗ್ಯ ತಪಾಸಣೆ ಉಚಿತ ಶಿಬಿರ ಆಯೋಜಿಸಲಾಗಿದೆ ಎಂದು ಕಿವಿ, ಮೂಗು ಮತ್ತು ಗಂಟಲು ತಜ್ಞ ಡಾ.ಎ.ಆರ್.ಬಾಬು ತಿಳಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಗ್ಗೆ 9 ರಿಂದ ಮಧ್ಯಾಹ್ನ 1 ಗಂಟೆವರೆಗೆ ಶಿಬಿರ ನಡೆಯಲಿದೆ. ಶಿಬಿರದಲ್ಲಿ ಕಿವುಡುತನ, ಗಂಟಲು, ಕಿವಿ, ಮೂಗು ಕ್ಯಾನ್ಸರ್, ಅಲರ್ಜಿ, ಹೃದಯ ಸಂಬಂಧಿ, ಮೂಳೆ ರೋಗ ಸೇರಿದಂತೆ ಇತರೆ ತಪಾಸಣೆ ನಡೆಸ ಲಾಗುವುದು ಎಂದರು.

ಶಿಬಿರದಲ್ಲಿ ಮೈಸೂರಿನ ಜೆಎಸ್‌ಎಸ್ ಆಸ್ಪತ್ರೆಯ ತಜ್ಞ ವೈದ್ಯರು, ಚಾಮರಾಜನಗರ ಜೆಎಸ್‌ಎಸ್ ಆಸ್ಪತ್ರೆ ಸಿಬ್ಬಂದಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಜೆಎಸ್‌ಎಸ್ ಆಸ್ಪತ್ರೆ ಆಡಳಿತಾಧಿಕಾರಿ ವಿಕಾಸ್ ಹಾಜರಿದ್ದರು.

ಶ್ರೀಕಂಠಾರಾಧ್ಯ ನಿಧನ



ಚಾಮರಾಜನಗರ: ನಗರದ ಮಾರುತಿ ಲೇಔಟ್ ನಿವಾಸಿ ಹಾಗೂ ಕುಲಗಾಣ ಗ್ರಾಮದ ಶ್ರೀಕಂಠಾರಾಧ್ಯ (86) ಸೋಮವಾರ ರಾತ್ರಿ ನಿಧನರಾದರು.

ಮೃತರು ಪತ್ನಿ ಹಾಗೂ ಪುತ್ರರಾದ ಪತ್ರಕರ್ತ ಬನಶಂಕರ ಆರಾಧ್ಯ ಹಾಗೂ ಫಾಲಲೋಚನ ಆರಾಧ್ಯ ಅಗಲಿದ್ದಾರೆ. ಮಂಗಳವಾರ ಬೆಳಗ್ಗೆ 11 ಗಂಟೆಗೆ ಸ್ವಗ್ರಾಮ ಕುಲಗಾಣದಲ್ಲಿ ಅಂತ್ಯಕ್ರಿಯೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಬಾಲಿವುಡ್ ಖ್ಯಾತ ನಿರ್ದೇಶಕ ಶ್ಯಾಮ್ ಬೆನಗಲ್ ನಿಧನ



ಮುಂಬೈ, ಡಿ. 23– ತೀವ್ರ ಅನಾರೋಗ್ಯದಿಂದ ಬಳಲುತ್ತಿದ್ದ ಬಾಲಿವುಡ್ ಖ್ಯಾತ ನಿರ್ದೇಶಕ ಶ್ಯಾಮ್ ಬೆನಗಲ್ ಅವರು ಮುಂಬೈನ ವೊಕಾರ್ಡ್ ಆಸ್ಪತ್ರೆಯಲ್ಲಿ ನಿಧನರಾಗಿದ್ದಾರೆ ಎಂದು ಅವರ ಪುತ್ರಿ ಪಿಯಾ ಬೆನಗಲ್ ದೃಢಪಡಿಸಿದ್ದಾರೆ.

ಕಿಡ್ನಿ ಸಂಬಂಧಿ ಸಮಸ್ಯೆಗಳಿಂದ ಬಳಲುತ್ತಿದ್ದ 90 ವರ್ಷದ ಶ್ಯಾಮ್ ಬೆನಗಲ್ ಅವರು ಚಿಕಿತ್ಸೆ ಫಲಕಾರಿಯಾಗದೆ ಇಂದು ಸಂಜೆ 6.30ಕ್ಕೆ ನಿಧನರಾದರು ಎಂದು ಪುತ್ರಿ ಮಾಧ್ಯಮಕ್ಕೆ ತಿಳಿಸಿದ್ದಾರೆ.

ಡಿಸೆಂಬರ್ 14 ರಂದು ತಮ್ಮ 90ನೇ ಹುಟ್ಟುಹಬ್ಬವನ್ನು ಸ್ನೇಹಿತರು ಮತ್ತು ಕುಟುಂಬದೊಂದಿಗೆ ಆಚರಿಸಿಕೊಂಡಿದ್ದರು. ನಟರಾದ ಕುಲಭೂಷಣ್ ಖರ್ಬಂದಾ, ನಾಸಿರುದ್ದೀನ್ ಶಾ, ದಿವ್ಯಾ ದತ್ತಾ, ಶಬಾನಾ ಅಜ್ಮಿ, ರಜಿತ್ ಕಪೂರ್, ಅತುಲ್ ತಿವಾರಿ, ಚಲನಚಿತ್ರ ನಿರ್ಮಾಪಕ–ನಟ ಮತ್ತು ಶಶಿ ಕಪೂರ್ ಅವರ ಪುತ್ರ ಕುನಾಲ್ ಕಪೂರ್ ಮತ್ತು ಇತರರು ಅವರ ಹುಟ್ಟುಹಬ್ಬದಲ್ಲಿ ಭಾಗಿಯಾಗಿದ್ದರು.

'ಮಂಥನ್' ಮತ್ತು 'ಜುಬೇದಾ' ಚಿತ್ರಗಳಿಂದ ಖ್ಯಾತಿ ಪಡೆದಿದ್ದ ಬೆನಗಲ್ ಅವರಿಗೆ 1976 ರಲ್ಲಿ ಪದ್ಮಶ್ರೀ ಮತ್ತು 1991 ರಲ್ಲಿ ಪದ್ಮಭೂಷಣ ನೀಡಿ ಕೇಂದ್ರ ಸರ್ಕಾರ ಗೌರವಿಸಿತ್ತು

ರೈಲ್ವೆ ಕಾರ್ಯಾಗಾರ ಆವರಣದಲ್ಲಿ ನಾಲ್ವಡಿ ಪ್ರತಿಮೆ ಸ್ಥಾಪನೆಗೆ ಕ್ರಮ

ಕನ್ನಡ ರಾಜ್ಯೋತ್ಸವ ಉದ್ಘಾಟಿಸಿ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಭರವಸೆ

ಮೈಸೂರು,ಡಿ.23(ಪಿಎಂ)– ಮೈಸೂರಿನ ಅಶೋಕಪುರಂನಲ್ಲಿರುವ ನೈರುತ್ಯ ರೈಲ್ವೆಯ ಕೇಂದ್ರೀಯ ಕಾರ್ಯಾಗಾರದ (ಮೈಸೂರು ದಕ್ಷಿಣ) ಆವರಣದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಪ್ರತಿಮೆ ಸ್ಥಾಪನೆಗೆ ಕ್ರಮ ವಹಿಸುವುದಾಗಿ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಭರವಸೆ ನೀಡಿದರು.



ಮೈಸೂರಿನ ರೈಲ್ವೆ ಕಾರ್ಯಾಗಾರದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಕನ್ನಡ ರಾಜ್ಯೋತ್ಸವವನ್ನು ಸಚಿವ ವಿ.ಸೋಮಣ್ಣ ಉದ್ಘಾಟಿಸಿದರು.

ಸದರಿ ಕಾರ್ಯಾಗಾರ ಆವರಣದ ಸ್ವಾತಂತ್ರ್ಯ ಅಮೃತ ಮಹೋತ್ಸವ ಉದ್ಯಾನವನದಲ್ಲಿ ಶ್ರೀನಾಲ್ವಡಿ ಕೃಷ್ಣರಾಜ ಒಡೆಯರ್ ನೈರುತ್ಯ ರೈಲ್ವೆ ನೌಕರರ ಕನ್ನಡ ಸಂಘದ ವತಿಯಿಂದ ಸೋಮವಾರ ಹಮ್ಮಿಕೊಂಡಿದ್ದ ಕನ್ನಡ ರಾಜ್ಯೋತ್ಸವ ಹಾಗೂ ಅಭಿನಂದನಾ ಸಮಾರಂಭ ಉದ್ಘಾಟಿಸಿ ನಾಲ್ವಡಿಯವರ ಪ್ರತಿಮೆ ಸ್ಥಾಪಿಸಬೇಕೆಂಬ ಸಂಘದವರ ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಿದರು.

ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಈ ನಾಡಿಗೆ ಅಪಾರ ಕೊಡುಗೆ ನೀಡಿದ್ದಾರೆ. ಅವರ ಆಡಳಿತ ಅತ್ಯಂತ ಜನಪರವಾಗಿತ್ತು. ಕನ್ನಡದ ಸಾರ್ವಭೌಮತೆಗೆ ಅವರ ಉತ್ತೇಜನ ಸ್ಮರಣೀಯ. ಅವರ ಪ್ರತಿಮೆ ಇಲ್ಲಿ ಯಾವಾಗಲೋ ಆಗಬೇಕಿತ್ತು. ಎಲ್ಲೋ ಒಂದು ಕಡೆ ಇದನ್ನು ಕಾರ್ಯಗತಗೊಳಿಸುವಲ್ಲಿ ಕುಂಟು ನೆಪವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಶಾಸಕ ಟಿ.ಎಸ್.ಶ್ರೀವತ್ಸ ಅವರನ್ನು ಉದ್ದೇಶಿಸಿ ಮಾತನಾಡಿದ ಸಚಿವರು, ನಾಲ್ವಡಿಯವರ ಪ್ರತಿಮೆ ಸ್ಥಾಪನೆಗೆ ಏನೇನು ಸಿದ್ಧತೆಗಳು ಆಗಬೇಕೋ ಮಾಡಿ. ನಾವೇ ಸೇರಿ ಮಾಡೋಣ. ಸರ್ಕಾರದಿಂದ ಮಾಡುವುದು ಬೇಡ. ಸರ್ಕಾರದಿಂದ ಮಾಡಿಸಿ ಎಲ್ಲೋ ಒಂದು ಕಡೆ ಟೀಕೆ ಟಿಪ್ಪಣಿಗೆ ಗುರಿಯಾಗುವುದು ಬೇಡ. ಅದೇನೂ ಅಂತಹ ದೊಡ್ಡದ್ದಲ್ಲ. ಮನಸ್ಸು ಇರಬೇಕಷ್ಟೇ. ಪ್ರತಿಮೆ ಸ್ಥಾಪನೆಗೆ ಏನೇನು ಆಗಬೇಕು, ಎಷ್ಟು ವೆಚ್ಚವಾಗಲಿದೆ ಎಂದು ನೋಡಿ ನನಗೆ ತಿಳಿಸಿ, ಮುಂದಿನ ವರ್ಷದ ವೇಳೆಗೆಯೇ ಕಾರ್ಯಗತಗೊಳಿಸೋಣ ಎಂದು ತಿಳಿಸಿದರು.

> ಕನ್ನಡ ಭಾಷೆ ಮತ್ತು ಸಾಹಿತ್ಯ ಉಳಿಸಿ ಬೆಳೆಸುವುದು ಪ್ರತಿದಿನದ ಆಚರಣೆಯಾಗಬೇಕು. ಪ್ರತಿಯೊಬ್ಬ ಕನ್ನಡಿಗರು ನಾವು ಭಾರತೀಯರು ಎಂಬ ತತ್ವದಡಿ ಮುನ್ನಡೆಯಬೇಕು. ಕರ್ನಾಟಕ ಏಕೀಕರಣಕ್ಕೆ ಕೊಡುಗೆ ನೀಡಿದ ಮಹನೀಯರನ್ನು ಸದಾ ಸ್ಮರಿಸಬೇಕು. ಕಳೆದ 10 ವರ್ಷಗಳಲ್ಲಿ ದೇಶವು ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಅಭಿವೃದ್ಧಿ ಹೊಂದಿದ ದೇಶಗಳಿಗೆ ಸರಿಸಾಟಿಯಾಗಿ ಮುನ್ನಡೆಯುತ್ತಿದೆ. ದೇಶವು ಅಭಿವೃದ್ಧಿಯತ್ತ ಸಾಗಿದೆ.
>
> -ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಸಂಸದರು.

ರೈಲ್ವೆ ಇಲಾಖೆಯಲ್ಲಿ ಉನ್ನತ ಅಧಿಕಾರಿ ಹುದ್ದೆಗಳಲ್ಲಿ ಕನ್ನಡಿಗರು ತೀರಾ ಕಡಿಮೆ. ಇಂತಹ ಹುದ್ದೆಗಳನ್ನು ಪಡೆಯಲು ನಮ್ಮವರಲ್ಲಿ ಬಹುತೇಕ ಮಂದಿಗೆ ಆಸಕ್ತಿಯೇ ಇಲ್ಲ. ಏಕೆಂದು ಕೇಳಿದರೆ 24 ಗಂಟೆ ದುಡಿಯಬೇಕೆಂದು ಮೂಗು ಮುರಿಯುತ್ತಾರೆ. ಆದರೆ ಅನ್ಯಭಾಷಿಗರು ದೇಶದ ಯಾವುದೇ ಮೂಲೆಯಾದರೂ ಹೋಗಿ ಕಾರ್ಯನಿರ್ವಹಿಸುತ್ತಾರೆ. ನಾನು ಓದಬೇಕಾದರೆ ಹಿಂದಿ ಕಲಿಯಲು ಅವಕಾಶವೇ ಇರಲಿಲ್ಲ ಎಂದರು.

ಸ್ವಾತಂತ್ರ್ಯ ಬಂದು ಇಷ್ಟು ವರ್ಷಗಳು ಕಳೆದರೂ, ರೈಲ್ವೆ ಇಲಾಖೆ ಸೃಜಿಸಿ ನೂರಾರು ವರ್ಷಗಳಾದರೂ ಕನ್ನಡಿಗರು ರೈಲ್ವೆ ಇಲಾಖೆ ನೇಮಕಾತಿಗೆ ಕನ್ನಡದಲ್ಲಿ ಪರೀಕ್ಷೆ ಬರೆಯಲು ಅವಕಾಶವೇ ಇರಲಿಲ್ಲ. ಇದಕ್ಕೆ ಅವಕಾಶ ಕಲ್ಪಿಸಬೇಕೆಂದು ಪ್ರಧಾನಿ ನರೇಂದ್ರ ಮೋದಿಯವರು ರೈಲ್ವೆ ಮಂತ್ರಿ ಅಶ್ವಿನಿ ವೈಷ್ಣವ್ ಅವರಿಗೆ ಸೂಚನೆ ನೀಡುತ್ತಿದ್ದಂತೆ ಅವರ ಕ್ರಮ ವಹಿಸಿದರು. ಹಾಗಾಗಿ ಈಗ ಕನ್ನಡದಲ್ಲಿ ಪರೀಕ್ಷೆ ಬರೆಯಲು ಅವಕಾಶವಿದ್ದು, ಪಾಸ್ ಮಾಡಿಕೊಂಡರೆ ಉದ್ಯೋಗ ನೀಡುವ ವ್ಯವಸ್ಥೆ ಜಾರಿಗೊಂಡಿದೆ ಎಂದು ಹೇಳಿದರು.

ಮೈಸೂರು ಇತಿಹಾಸ ಪ್ರಸಿದ್ಧ ನಗರ. ದೇಶ–ವಿದೇಶಗಳಲ್ಲಿ ಇಂದಿಗೂ ಕರ್ನಾಟಕ ಎಂದರೆ ಬಹುತೇಕರು ಮೈಸೂರು ನೆನಪಿಸಿಕೊಳ್ಳುತ್ತಾರೆ ನಮ್ಮ ದೇಶಕ್ಕೆ ಉಜ್ವಲ ಭವಿಷ್ಯವಿದೆ. ನಾವು ಭಾರತೀಯರು ಬದುಕಿ ಬಾಳುವಂತಹ ಸಾಕಷ್ಟು ಅವಕಾಶಗಳನ್ನು ಪ್ರಧಾನಿ ನರೇಂದ್ರ ಮೋದಿಯವರ ಸರ್ಕಾರ ಕಲ್ಪಿಸಿಕೊಟ್ಟಿದೆ. ಅಂತಹ ಒಬ್ಬ ನಾಯಕರಾದ ಮೋದಿಯವರಿಗೆ ಕನ್ನಡಿಗರಾದ ನಾವು ಅಭಿನಂದಿಸಬೇಕು ಎಂದು ತಿಳಿಸಿದರು.

ಬಳಿಕ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕ ಟಿ.ಎಸ್.ಶ್ರೀವತ್ಸ, ರೈಲ್ವೆ ಕಾರ್ಯಾಗಾರದ ಮುಖ್ಯ ಪ್ರಬಂಧಕ ಓಂಪ್ರಕಾಶ್ ಷಾ, ಉಪ ಮುಖ್ಯ ಪ್ರಬಂಧಕ ಬಿ.ಆಂಜನೇಯಲು, ಬಿಬಿಎಂಪಿ ಮಾಜಿ ಸದಸ್ಯ ದಾಸೇಗೌಡ, ಕನ್ನಡ ಸಂಘದ ಗೌರವಾಧ್ಯಕ್ಷ ಸಿ.ಕೃಷ್ಣಮೂರ್ತಿ, ಅಧ್ಯಕ್ಷ ಆರ್.ಬಸವಲಿಂಗಪ್ಪ, ಕಾರ್ಯದರ್ಶಿ ಯಶ್ವಂತ್‌ಕುಮಾರ್ ಮತ್ತಿತರರು ಹಾಜರಿದ್ದರು.

ಡಿಆರ್‌ಎಂಗೆ ಎಕ್ಸ್‌ಕ್ಯೂಸ್!

ಸಮಾರಂಭಕ್ಕೆ ಗೈರಾಗಿದ್ದ ಡಿಆರ್‌ಎಂ ಶಿಲ್ಪಿ ಅಗರ್ವಾಲ್ ಕುರಿತಂತೆ ರೈಲ್ವೆ ಅಧಿಕಾರಿ ಗಿರೀಶ್ ಅವರನ್ನು ಉದ್ದೇಶಿಸಿ ಮಾತನಾಡಿದ ಸಚಿವ ವಿ.ಸೋಮಣ್ಣ, ಡಿಆರ್‌ಎಂ ಅಮ್ಮನಿಗೆ ಏನೋ ಫ್ಯಾಮಿಲಿ ಬಂದಿದ್ದಾರಂತೆ. ಅದಕ್ಕೆ ಸ್ವಲ್ಪ ಎಸ್‌ಕ್ಯೂಸ್ ಕೊಟ್ಟಿದ್ದೇನೆ. ಅದ್ಯಾವುದೋ ಜಾಗದಲ್ಲಿ ಶಾಲಾ ಮಕ್ಕಳು ಓಡಾಡಲು ಅವಕಾಶವಿತ್ತಂತೆ. ಆದರೆ ಆ ಜಾಗದಲ್ಲಿ ಗೇಟ್‌ಗೆ ಬೀಗ ಹಾಕಿಸಿದ್ದಾರಂತೆ. ಅದನ್ನು ತೆಗೆಸಿಕೊಡಿ ಮಕ್ಕಳು ಓಡಾಡಲಿ ಎಂದು ತಾಕೀತು ಮಾಡಿದರು.

ಹನುಮ ಹಬ್ಬ ಪ್ರಚಾರ ರಥಕ್ಕೆ ಚಾಲನೆ




ಮೈಸೂರಿನಲ್ಲಿ ಡಿ.28ರಂದು ನಡೆಯಲಿರುವ ಹನುಮ ಹಬ್ಬದ ಪ್ರಚಾರ ರಥಕ್ಕೆ ಅವಧೂತ ದತ್ತ ಪೀಠದ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಅವರು ಪೂಜೆ ಸಲ್ಲಿಸುವ ಮೂಲಕ ಚಾಲನೆ ನೀಡಿದರು. ಬ್ರಾಹ್ಮಣ ಮಹಾ ಸಭಾ ಅಧ್ಯಕ್ಷ ಡಿ.ಟಿ.ಪ್ರಕಾಶ್, 'ಲಾ ಗೈಡ್' ಕನ್ನಡ ಕಾನೂನು ಪತ್ರಿಕೆ ಗೌರವ ಸಂಪಾದಕರೂ ಆದ ಹಿರಿಯ ವಕೀಲ ಹೆಚ್.ಎನ್.ವೆಂಕಟೇಶ್, ಹಿರಿಯ ಬಿಜೆಪಿ ಮುಖಂಡ ಶಿವಕುಮಾರ್, ರಮೇಶ್, ಸಂತೋಷ್(ಶಂಭು), ಹೇಮಂತ್ ಕುಮಾರ್, ಮನು ಶೈವ್, ಸಂಜಯ್ ಬಾಬಾ, ಗುರುದತ್ ಹಾಗೂ ಹನುಮ ಮಹೋತ್ಸವ ಸಮಿತಿ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಶಾಸಕ ಜಿ.ಟಿ.ದೇವೇಗೌಡರಿಂದ 2025ರ ವರ್ಷದ ಕ್ಯಾಲೆಂಡರ್ ಬಿಡುಗಡೆ...



ಮೈಸೂರು ನಗರಪಾಲಿಕೆ 44ನೇ ವಾರ್ಡ್‌ನ ಮಾಜಿ ಕಾರ್ಪೋರೇಟರ್ ಸವಿತಾ ಸುರೇಶ್ ಹೊರ ತಂದಿರುವ 2025ರ ಕ್ಯಾಲೆಂಡರ್ ಅನ್ನು ಶಾಸಕರಾದ ಜಿ.ಟಿ.ದೇವೇಗೌಡ ಮತ್ತು ಅವರ ಪತ್ನಿ ಶ್ರೀಮತಿ ಲಲಿತಾ ಜಿ.ಟಿ.ದೇವೇಗೌಡರು ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ಮುಖಂಡರಾದ ಉಮಾಶಂಕರ್, ಸುರೇಶ್, ಟೆಂಟ್ ಕುಮಾರ್, ಶಶಿಧರ್, ಕೃಷ್ಣೇಗೌಡ, ಲಿಂಗೇಗೌಡ, ಕಂಟ್ರಾಕ್ಟರ್ ಮಂಜು, ಆರ್‌ಎಕ್ಸ್ ಮಂಜು, ಸೊಸೈಟಿ ಕುಮಾರ್, ಪರಮೇಶ್, ವಾಲ್ ಮಂಜು, ನಾರಾಯಣ್, ಅನಿಲ್ ಇನ್ನಿತರರಿದ್ದರು.

ಎನ್‌ಎಚ್‌ಆರ್‌ಸಿ ಅಧ್ಯಕ್ಷರಾಗಿ ಸುಪ್ರೀಂಕೋರ್ಟ್ ನಿವೃತ್ತ ನ್ಯಾಯಮೂರ್ತಿ ವಿ. ರಾಮಸುಬ್ರಮಣಿಯನ್ ನೇಮಕ



ನವದೆಹಲಿ, ಡಿ. 23– ಸುಪ್ರೀಂ ಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ವಿ. ರಾಮಸುಬ್ರಮಣಿಯನ್ ಅವರನ್ನು ಎನ್‌ಎಚ್‌ಆರ್‌ಸಿ ಅಧ್ಯಕ್ಷರನ್ನಾಗಿ ನೇಮಿಸಲಾಗಿದೆ ಮಾನವ ಹಕ್ಕುಗಳ ಸಂರಕ್ಷಣಾ ಕಾಯ್ದೆ 1993ರ ಅಡಿಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಈ ನೇಮಕ ಮಾಡಿದರು.

ನಿವೃತ್ತ ನ್ಯಾಯಮೂರ್ತಿ ರಾಮಸುಬ್ರಮಣಿಯನ್ ಅವರು ಅಧಿಕಾರ ವಹಿಸಿಕೊಂಡ ದಿನಾಂಕದಿಂದ ಎನ್‌ಎಚ್‌ಆರ್‌ಸಿ ಅಧ್ಯಕ್ಷರಾಗಿರುತ್ತಾರೆ ಎಂದು ಕೇಂದ್ರ ಸರ್ಕಾರ ಗೆಜೆಟ್ ಹೊರಡಿಸಿದೆ.

ನಿವೃತ್ತ ನ್ಯಾಯಮೂರ್ತಿ ವಿ.ರಾಮಸುಬ್ರಮಣ್ಯಂ ಅವರು 30 ಜೂನ್ 1958ರಂದು ಜನಿಸಿದರು. ಚೆನ್ನೈನ ರಾಮಕೃಷ್ಣ ಮಿಷನ್ ವಿವೇಕಾನಂದ ಕಾಲೇಜಿನಲ್ಲಿ ರಸಾಯನಶಾಸ್ತ್ರದಲ್ಲಿ ಪದವಿ ಪಡೆದಿದ್ದು ಮದ್ರಾಸ್ ಕಾನೂನು ಕಾಲೇಜಿನಲ್ಲಿ ಕಾನೂನು ಅಧ್ಯಯನವನ್ನು ಪೂರ್ಣಗೊಳಿಸಿದರು.

ಮದ್ರಾಸ್ ಹೈಕೋರ್ಟ್, ಹೈದರಾಬಾದ್ ಹೈಕೋರ್ಟ್, ತೆಲಂಗಾಣ ಹೈಕೋರ್ಟ್‌ಗಳ ನ್ಯಾಯಮೂರ್ತಿಯಾಗಿ ಕರ್ತವ್ಯ ನಿರ್ವಹಿಸಿದ್ದ ಅವರನ್ನು 2019ರ ಜೂನ್ 22ರಂದು ಅವರನ್ನು ಹಿಮಾಚಲ ಪ್ರದೇಶ ಹೈಕೋರ್ಟ್‌ನ ಮುಖ್ಯ ನ್ಯಾಯ ಮೂರ್ತಿಯಾಗಿ ನೇಮಿಸಲಾಯಿತು. ನಂತರ 2019ರ ಸೆಪ್ಟೆಂಬರ್ 23ರಂದು ಅವರು ಸುಪ್ರೀಂ ಕೋರ್ಟ್‌ನ ನ್ಯಾಯಾಧೀಶರಾದರು. 2023ರ ಜೂನ್ 29ರಂದು ನಿವೃತ್ತರಾದರು.

ಕ್ಯಾನ್ಸರ್ ಉಚಿತ ತಪಾಸಣಾ ಶಿಬಿರ

ಮೈಸೂರು,ಡಿ.23–ಪ್ರೀತಿ ಕ್ಯಾನ್ಸರ್ ಸೆಂಟರ್‌ನಲ್ಲಿ ಡಿ.26ರಂದು ಬೆಳಗ್ಗೆ 10ರಿಂದ ರಾತ್ರಿ 8 ಗಂಟೆಯವರೆಗೆ ಕ್ಯಾನ್ಸರ್ ಉಚಿತ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ದೂ.0821–4259259 ಸಂಪರ್ಕಿಸಬಹುದು.

ಸಂಗೀತ ಸುಧೆಯಲ್ಲಿ ಹೂವಿನ ಅಂದ ಸವಿದ ಸಾವಿರಾರು ಜನ

ಪುಷ್ಪರಾಶಿ ನಡುವೆ ಅರಮನೆ ಅಂದ ಇಮ್ಮಡಿ



'ಫಲಪುಷ್ಪ ಪ್ರದರ್ಶನ'ದ ಅಂಗವಾಗಿ ಅರಮನೆ ಅಂಗಳದ ವೇದಿಕೆಯಲ್ಲಿ ಸೋಮವಾರ ಮೃದಂಗ ವಿದ್ವಾನ್ ಆನೂರು ಅನಂತಕೃಷ್ಣ ಶರ್ಮ ನೇತೃತ್ವದಲ್ಲಿ 'ಲಯ–ಲಾವಣ್ಯ' ಪ್ರಸ್ತುತಗೊಂಡಿತು.

ಮೈಸೂರು, ಡಿ.23(ಎಸ್‌ಬಿಡಿ)– ಮೈಸೂರು ಅರಮನೆ ಆವರಣದಲ್ಲಿ ವಾದ್ಯ ಸಂಗೀತದ ನಿನಾದದೊಂದಿಗೆ ಸಾವಿರಾರು ಮಂದಿ ಪುಷ್ಪವನದ ಸೊಬಗು ಸವಿದರು.

ಅರಮನೆ ಮಂಡಳಿ ವತಿಯಿಂದ 'ಫಲಪುಷ್ಪ ಪ್ರದರ್ಶನ'ದ ಜೊತೆಗೆ ಆಯೋಜಿಸಿರುವ ಸಾಂಸ್ಕೃತಿಕ ಕಾರ್ಯಕ್ರಮದ ಮೂರನೆಯ ದಿನವಾದ ಇಂದು, ವಾದ್ಯ ಸಂಗೀತ ಮೇಳೈಸಿತ್ತು. ಮನೋ ಮ್ಯೂಸಿಕ್ ಲೈನ್ಸ್ ತಂಡದಿಂದ ಮೂಡಿಬಂದ 'ಟ್ರೆಂಡ್ ಬೀಟ್ಸ್' ಸಂಗೀತ ಮುದ ನೀಡಿತು. ಗಾಯನವಿಲ್ಲದ ಬರೀ ವಾದ್ಯಗಳ ರಾಗ ಲಹರಿ ವಿಶೇಷವಾಗಿತ್ತು.

ಚಾಮುಂಡೇಶ್ವರಿ ದೇವಿಯ ಮಹಿಷಿ ಮರ್ಧಿನಿ ಅವತಾರವನ್ನು ಕಣ್ಮನದಲ್ಲಿ ಕಟ್ಟಿಕೊಡುವ 'ಐಗಿರಿ ನಂದಿನಿ...' ಗೀತೆ ವಾದ್ಯಗಳಲ್ಲಿ ಹೊಮ್ಮಿತು. ಈ ಮೂಲಕ ಆರಂಭವಾದ ವಾದ್ಯಗೋಷ್ಠಿಯಲ್ಲಿ ಕಾಂತಾರಾ ಸಿನಿಮಾದ 'ವರಹ ರೂಪಂ...' ಹಾಗೂ 'ಸಿಂಗಾರ ಸಿರಿಯೇ...' ಹಾಡುಗಳನ್ನು ವಿಭಿನ್ನ ರಾಗ ಸಂಯೋಜನೆಯಲ್ಲಿ ಪ್ರಸ್ತುತಪಡಿಸಲಾಯಿತು. ಮಂಜುಲಿನ್ ಥೀಮ್, 'ಸೋಜುಗಾದ ಸೂಜಿ ಮಲ್ಲಿಗೆ...' ಸೇರಿದಂತೆ ವಿವಿಧ ರಾಗಲಹರಿಗೆ ನೆರೆದಿದ್ದವರು ಮನಸೋತರು. ಕೀ ಬೋರ್ಡ್‌ನಲ್ಲಿ ವೇಣುಗೋಪಾಲ್ ವೆಂಕಿ, ವಯಲಿನ್‌ನಲ್ಲಿ ರಂಜನ್, ಕೊಳಲಿನಲ್ಲಿ ಸುದರ್ಶನ್, ಡ್ರಮ್ಸ್‌ನಲ್ಲಿ ಸುಜಿತ್, ಗಿಟಾರ್‌ನಲ್ಲಿ ರೋನಿ, ಚೆಂಡೆಯಲ್ಲಿ ಭಟ್ಕಳದ ಸುಬ್ರಹ್ಮಣ್ಯ ಅತ್ಯುತ್ತಮ ಸಾಥ್ ನೀಡಿದರು.

ಇದೇ ವೇಳೆ ಆಯುಷ್ ಎಂ.ಡಿ ಮತ್ತು ತಂಡದವರು ಕರ್ನಾಟಕ ಶಾಸ್ತ್ರೀಯ ಸಂಗೀತ ಪ್ರಸ್ತುತಪಡಿಸಿದರು. ಬಳಿಕ ಮೃದಂಗ ವಿದ್ವಾನ್ ಆನೂರು ಅನಂತಕೃಷ್ಣ ಶರ್ಮ ಮತ್ತು ತಂಡದವರು 'ಲಯ–ಲಾವಣ್ಯ' ವಿಶೇಷ ಕಾರ್ಯಕ್ರಮದ ಮೂಲಕ ಸಂಗೀತ ರಸದೌತಣ ನೀಡಿದರು.

ವಿದ್ಯುತ್ ದೀಪಾಲಂಕಾರದಲ್ಲಿ ಕಂಗೊಳಿಸುವ ಐತಿಹಾಸಿಕ ಅರಮನೆ ಸೊಬಗು ಸವಿಯುತ್ತಾ, ಸುಮಧುರ ಸಂಗೀತವನ್ನು ಆಸ್ವಾದಿಸುತ್ತಾ ಬಣ್ಣ ಬಣ್ಣದ ಪುಷ್ಪಕಾಶಿಯನ್ನು ಕಣ್ತುಂಬಿಕೊಳ್ಳುವುದು ಒಂದು ಅದ್ಭುತ ಅನುಭವ. ಡಿ.31ರವರೆಗೆ ಈ ಅದ್ಭುತ ಸುಂದರ ಲೋಕದಲ್ಲಿ ವಿಹರಿಸಬಹುದಾಗಿದೆ.

ರೈತನ ತೋಟದಲ್ಲಿ ಟೀಂ ಮೈಸೂರು ಸದಸ್ಯರಿಂದ ರೈತ ದಿನಾಚರಣೆ

● ಕುಂಚ ಕಲಾವಿದ ಯಶಸ್ವಿ ರೈತನಾದ ಯಶೋಗಾಥೆ ● ಸಾಧಕ ರೈತ ದಂಪತಿಗೆ ಸನ್ಮಾನ

ಮೈಸೂರು, ಡಿ.23(ಎಸ್‌ಬಿಡಿ)– ಕೋವಿಡ್‌ನಲ್ಲಿ ಕೃಷಿ ಬದುಕು ಕಟ್ಟಿಕೊಂಡ ಕುಂಚ ಕಲಾವಿದರೊಬ್ಬರ ತೋಟದಲ್ಲಿ ಟೀಂ ಮೈಸೂರು ವತಿಯಿಂದ ರೈತ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.



ಟೀಂ ಮೈಸೂರು ವತಿಯಿಂದ ರೈತ ದಿನದ ಅಂಗವಾಗಿ ರೈತ ದಂಪತಿಯನ್ನು ಅಭಿನಂದಿಸಲಾಯಿತು.

ನಂಜನಗೂಡು ತಾಲೂಕು, ಹಂಡುವಿನಹಳ್ಳಿಯಲ್ಲಿ ಸಾವಯವ ಪದ್ಧತಿಯಲ್ಲಿ ಮಿಶ್ರ ಬೇಸಾಯ ಮಾಡುತ್ತಿರುವ ರವಿಚಂದ್ರ ಅವರ 'ನಂದಿನಿ ವನ' ತೋಟದಲ್ಲಿ ರೈತ ದಿನವನ್ನು ಹಬ್ಬದಂತೆ ಆಚರಿಸಿದ ಟೀಂ ಮೈಸೂರು ಸದಸ್ಯರು, ಕುಂಚ ಕಲಾವಿದ ರೈತನಾದ ಕತೆಯನ್ನು ಕೇಳಿ ಬಣ್ಣಿಸಿದರು.

ಈ ವೇಳೆ ರೈತ ರವಿಚಂದ್ರ ಮಾತನಾಡಿ, ಯುವ ಸಮೂಹ ಕೃಷಿಯಿಂದ ವಿಮುಖರಾಗುತ್ತಿರುವ ಸ್ಥಿತಿಯಲ್ಲಿ ನಮ್ಮ ಕುಟುಂಬ ಕೃಷಿಯಲ್ಲಿ ನೆಮ್ಮದಿಯ ಬದುಕು ಕಟ್ಟಿಕೊಂಡಿರುವುದಕ್ಕೆ ಖುಷಿ ಇದೆ. ನಾನು ಕುಂಚ ಕಲಾವಿದ. 2019ರಲ್ಲಿ ಕೋವಿಡ್ ಸಂದಿಗ್ಧತೆ ಪರಿಣಾಮದಿಂದ ಎಲ್ಲರಂತೆ ನಾನೂ ಕಂಗಾಲಾಗಿದ್ದೆ. ಆದರೆ ಕುಗ್ಗದೆ ಜಮೀನು ತೆಗೆದುಕೊಂಡು ತೋಟ ಮಾಡಿದೆವು ಎಂದು ತಿಳಿಸಿದರು.

ಕೃಷಿಯ ಬಗ್ಗೆ ತಿಳುವಳಿಕೆ ಇಲ್ಲದ ನಾನು ಸಾಮಾಜಿಕ ಜಾಲತಾಣಗಳಿಂದ ಸಾಕಷ್ಟು ಮಾಹಿತಿ ಅರಿತುಕೊಂಡೆ. ಅವಿರತವಾಗಿ ಶ್ರಮಿಸುವ ಜೊತೆಗೆ ಕೃಷಿ ಬಗ್ಗೆ ಹಂತ ಹಂತವಾಗಿ ಕಲಿತುಕೊಂಡು ಯಶಸ್ವಿ ಕೃಷಿಕರಾಗಿದ್ದೇವೆ. ಇರುವ ಜಮೀನಿನಲ್ಲಿ ಏನೆಲ್ಲಾ ಮಾಡಲು ಸಾಧ್ಯ ಎಂಬುದನ್ನು ಕಂಡುಕೊಂಡಿದ್ದೇವೆ. 5 ಎಕರೆಯಲ್ಲಿ ಏಲಕ್ಕಿ ಬಾಳೆ ಬೆಳೆದು ಒಂದು ಬಾರಿಗೆ 18 ಲಕ್ಷ ರೂ. ಸಂಪಾದನೆ ಮಾಡಿದ್ದೇವೆ ಎಂದು ಖುಷಿಯಿಂದ ಹೇಳಿದರು.

ವೈಜ್ಞಾನಿಕ ಮಾಹಿತಿ ತಿಳಿದುಕೊಂಡು ಕಷ್ಟಪಟ್ಟು ದುಡಿದರೆ ಪ್ರತಿಫಲ ಸಿಕ್ಕೇ ಸಿಗುತ್ತದೆ. ಆದರೆ ತಾಳ್ಮೆ ತುಂಬಾ ಮುಖ್ಯ. ಯಾವುದೋ ಒಂದು ಬೆಳೆಗೆ ಸೀಮಿತವಾಗಬಾರದು. ಯಾವ ಬೆಳೆಯಿಂದ ಹೆಚ್ಚು ಲಾಭಗಳಿಸಬಹುದು, ಯಾವ ರೀತಿಯ ನಿರ್ವಹಣೆ ಅಗತ್ಯ ಎಂದು ತಿಳಿದುಕೊಳ್ಳಬೇಕು. ರೈತರು ಆಗಾಗ ಅಪ್ಡೇಟ್ ಆಗಬೇಕು. ಪ್ರೀತಿಯಿಂದ ಕೃಷಿ ಮಾಡಿದರೆ ಯಶಸ್ಸು ಖಂಡಿತ ಸಿಗುತ್ತದೆ ಎಂದು ಅಭಿಪ್ರಾಯಿಸಿದರು.

ಟೀಂ ಮೈಸೂರು ತಂಡದ ಗೋಕುಲ್ ಗೋವರ್ಧನ್ ಮಾತನಾಡಿ, ದೇಶದ ಪ್ರಧಾನಿಯಾಗಿದ್ದ ಚೌದರಿ ಚರಣ್ ಸಿಂಗ್ ಅವರು ರೈತಪರ ಹೋರಾಟಕ್ಕಾಗಿ ಜೀವನ ಮುಡಿಪಿಟ್ಟರು. ಸದಾ ಖಾದಿ ಉಡುಪು ಧರಿಸುತ್ತಿದ್ದ ಅವರು ಸರಳ ಜೀವನದ ಮೂಲಕ ಇತರರಿಗೆ ಪ್ರೇರಣೆಯಾಗಿದ್ದರು. ಅವರ ಜನ್ಮದಿನವನ್ನು ರೈತ ದಿನವನ್ನಾಗಿ ಆಚರಿಸಲಾಗುತ್ತಿದೆ. ನಮ್ಮ ತಂಡ ಯಶಸ್ವಿ ರೈತ ಕುಟುಂಬದೊಂದಿಗೆ ರೈತ ದಿನ ಆಚರಿಸಿದ್ದಕ್ಕೆ ಸಂತಸವಾಗಿದೆ ಎಂದರು. ಉರಗ ರಕ್ಷಕ ಗೋಳೂರು ಬಸವರಾಜು, ಹಾವುಗಳ ಬಗ್ಗೆ ಜಾಗೃತಿ ಮೂಡಿಸಿದರು.

ಇದೇ ವೇಳೆ ರವಿಚಂದ್ರ ಹಾಗೂ ಶ್ರೀಮತಿ ಕಮಲಾ ರೈತ ದಂಪತಿಯನ್ನು ಆತ್ಮೀಯವಾಗಿ ಅಭಿನಂದಿಸಿ, ಗೌರವಿಸಲಾಯಿತು. ಇವರ ಕುಟುಂಬ ದವರು, ಟೀಂ ಮೈಸೂರು ಸದಸ್ಯರಾದ ರಾಮಪ್ರಸಾದ್, ಯತೀಶ್, ಹೇಮಂತ್, ಬಾಲಕೃಷ್ಣ, ಹರೀಶ್ ಶೆಟ್ಟಿ, ಬಸವರಾಜು, ನವೀನ್ ಶೆಟ್ಟಿ, ಸೃಜನ್, ಬಸವರಾಜ್ ಫ್ಯಾಕ್ಟರಿ, ದಿನೇಶ್, ಸುನೀಲ್, ಶ್ರೀಮತಿ ನಂದಿನಿ, ಮನೋಹರ್, ಕಲ್ಯಾಣಿ, ಮಿನುಗು, ವಿಸ್ಮಯ, ನಯನಿತಾ, ವೇದಶ್ರೀ, ಯಶ್ಮಿತ್ ಮತ್ತಿತರರು ಉಪಸ್ಥಿತರಿದ್ದರು.

ಭಾರತೀಯ ಕಿಸಾನ್ ಸಂಘದಿಂದ ಸಾಧಕ ರೈತರಿಗೆ ಸನ್ಮಾನ



ಹೊಸಕೋಟೆ ಗ್ರಾಮದ ಭಾರತೀಯ ಕಿಸಾನ್ ಸಂಘದ ಕಚೇರಿಯಲ್ಲಿ ಸಾಧಕ ರೈತರನ್ನು ಸನ್ಮಾನಿಸಲಾಯಿತು.

ಮೈಸೂರು,ಡಿ.23(ಪಿಎಂ)– ಭಾರತೀಯ ಕಿಸಾನ್ ಸಂಘ–ಕರ್ನಾಟಕ ಪ್ರದೇಶದ ನಂಜನಗೂಡು ತಾಲೂಕು ಘಟಕ ಮತ್ತು ಹೊಸಕೋಟೆ ಗ್ರಾಮ ಘಟಕದ ಜಂಟಿ ಆಶ್ರಯದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ರೈತ ದಿನಾಚರಣೆಯಲ್ಲಿ ಸಾಧಕ ರೈತರನ್ನು ಸನ್ಮಾನಿಸಲಾಯಿತು.

ಹೊಸಕೋಟೆ ಗ್ರಾಮದ ಸಂಘದ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಾವಯುವ ಕೃಷಿಯಲ್ಲಿ ಸಾಧನೆಗೈದ ಕೆರೆಹಳ್ಳಿ ಬಿ.ದೊರೆಸ್ವಾಮಿ, ಹೊಸಕೋಟೆ ಸಿದ್ದಪ್ಪ, ದೇವನೂರು ನಾಗೇಂದ್ರ ಮತ್ತು ಬಸವಟ್ಟಿಗೆ ಪ್ರಭುಸ್ವಾಮಿ ಅವರನ್ನು ಸನ್ಮಾನಿಸಲಾಯಿತು.

ಇದೇ ವೇಳೆ ಮಾತನಾಡಿದ ಬಸವಟ್ಟಿಗೆ ಪ್ರಭುಸ್ವಾಮಿ, ರೈತರು ನಮ್ಮ ದೇಶದ ಬೆನ್ನೆಲುಬು. ಬ್ಯಾಂಕಿನಲ್ಲಿ ಸಾಲ ಸೋಲ ಮಾಡಿ ವ್ಯವಸಾಯ ಮಾಡಿ ಕಷ್ಟಪಡುತ್ತಾರೆ. ಆದರೆ ಸರ್ಕಾರ, ರೈತರು ಬೆಳೆದ ಬೆಳೆಗೆ ಸೂಕ್ತ ಬೆಂಬಲ ಬೆಲೆ ನೀಡುವಲ್ಲಿ ನಿರ್ಲಕ್ಷ್ಯ ತಾಳಿದೆ. ಸರ್ಕಾರ ಉತ್ತಮ ಬೆಲೆ ನೀಡಿದ್ದೆ ಆದ್ದಲ್ಲಿ ರೈತನ ಕುಟುಂಬದ ಜೊತೆ, ನಾಡಿನ ಜನತೆಗೂ ಅನುಕೂಲವಾಗಲಿದೆ ಎಂದು ಹೇಳಿದರು.

ಹೊಸಕೋಟೆ ಸಿದ್ದಪ್ಪ ಮಾತನಾಡಿ, ದೇಶದ ಐದನೇ ಪ್ರಧಾನಿಯಾಗಿದ್ದ ಚೌಧರಿ ಚರಣ್ ಸಿಂಗ್ ರೈತರ ಕಲ್ಯಾಣಕ್ಕಾಗಿ ಅಪಾರ ಕೊಡುಗೆ ನೀಡಿದ್ದಾರೆ. ಅವರ ಜನ್ಮದಿನದ ಪ್ರಯುಕ್ತ ಡಿ.23 ಅನ್ನು ರಾಷ್ಟ್ರೀಯ ರೈತ ದಿನವನ್ನಾಗಿ ಆಚರಣೆ ಮಾಡಲಾಗುತ್ತಿದೆ. ರೈತರು ತಮ್ಮ ಜಮೀನು ಮಾರಿಕೊಳ್ಳದೇ ಪರಿಣಿತರಿಂದ ಮಾಹಿತಿಯೊಂದಿಗೆ ಬೇಸಾಯದಲ್ಲಿ ತೊಡಗಿಸಿಕೊಳ್ಳಬೇಕು. ಆ ಮೂಲಕ ಸಾವಯವ–ಜೈವಿಕ ಅಂಶದಿಂದ ವ್ಯವಸಾಯ ಮಾಡಿದರೆ, ಪ್ರತಿಯೊಬ್ಬರ ಆರೋಗ್ಯ ರಕ್ಷಣೆಯಾಗುವ ಜೊತೆಗೆ ರೈತರು ಉತ್ತಮ ಫಸಲು ಸಹ ಪಡೆಯಲು ಸಾಧ್ಯವಿದೆ ಎಂದು ಅಭಿಪ್ರಾಯಪಟ್ಟರು.

ಭಾರತೀಯ ಕಿಸಾನ್ ಸಂಘದ ನಂಜನಗೂಡು ತಾಲೂಕು ಅಧ್ಯಕ್ಷ ಹೊಸಕೋಟೆ ಪ್ರಭುಸ್ವಾಮಿ, ಗ್ರಾಮ ಘಟಕದ ಅಧ್ಯಕ್ಷ ನಾಗೇಂದ್ರ, ಉಪಾಧ್ಯಕ್ಷ ಪ್ರಸನ್ನ, ಕಾರ್ಯದರ್ಶಿ ಇಂದೂಧರ, ಗ್ರಾಮದ ರೈತರಾದ ಶಿವಮಲ್ಲಪ್ಪ, ರಾಜಶೇಖರ್‌ಮೂರ್ತಿ, ಸ್ವಾಮಿ, ಮಹೇಶ್, ವಿಜಯ, ಬಿಜೆಪಿ ಮುಖಂಡರಾದ ಲೋಹಿತ್, ಮಧು ಮತ್ತಿತರರು ಹಾಜರಿದ್ದರು.

ವಿಪಕ್ಷ ನಾಯಕ ಚೈಲ್ಡ್ ರೀತಿ ವರ್ತಿಸುತ್ತಾ ವಿಪಕ್ಷ ನಾಯಕ ಸ್ಥಾನದ ಘನತೆಗೆ ಧಕ್ಕೆ ತರುತ್ತಿದ್ದಾರೆ

● ಕೇಂದ್ರ ರೈಲ್ವೆ, ಜಲಶಕ್ತಿ ರಾಜ್ಯ ಸಚಿವ ಸೋಮಣ್ಣ ವಿಷಾಧ ● ಮಾಧ್ಯಮಗಳೇನಾದರೂ ಇಲ್ಲದೇ ಹೋಗಿದ್ದರೆ ಸಿ.ಟಿ.ರವಿ ಪಾಡೇನು

ಮೈಸೂರು, ಡಿ.23(ಎಸ್‌ಪಿಎನ್)– ಲೋಕಸಭೆಯ ಪ್ರತಿಪಕ್ಷದ ಸ್ಥಾನ ಘನತೆ ಉಳ್ಳದ್ದು, ಆದರೆ, ಆ ಸ್ಥಾನಕ್ಕೆ ರಾಹುಲ್ ಗಾಂಧಿ ಚ್ಯುತಿ ತರುವ ಕೆಲಸ ಮಾಡುತ್ತಿದ್ದಾರೆ. ಇತ್ತೀಚಿನ ಅವರ ನಡವಳಿಕೆ ಗಮನಿಸಿದರೆ, ಚೈಲ್ಡ್ ರೀತಿ ವರ್ತಿಸುತ್ತಿದ್ದಾರೆ ಎಂದು ಕೇಂದ್ರ ಸರ್ಕಾರದ ರೈಲ್ವೆ ಮತ್ತು ಜಲಶಕ್ತಿ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಬೇಸರ ವ್ಯಕ್ತಪಡಿಸಿದರು.



ಮೈಸೂರು ಹೊರವಲಯದಲ್ಲಿ ಕೇಂದ್ರ ಸಚಿವ ವಿ.ಸೋಮಣ್ಣ ಮಾಧ್ಯಮಗಳೊಂದಿಗೆ ಮಾತನಾಡುತ್ತಿರುವುದು

ಮೈಸೂರು ಹೊರವಲಯದ ಏಟ್ರಿಯಾ ಹೋಟೆಲ್ ಬಳಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ರಾಹುಲ್ ಗಾಂಧಿ ಸಂಸತ್ ಒಳಗೆ ಚೈಲ್ಡ್ ರೀತಿ ವರ್ತಿಸುತ್ತಿದ್ದಾರೆ. ಇನ್ಮುಂದೆ ಇವರ ಯಾವ ಆಟವೂ ನಡೆಯುವುದಿಲ್ಲ ಎಂದು ವಾಗ್ದಾಳಿ ನಡೆಸಿದರು.

ಅಂಬೇಡ್ಕರ್ ಕುರಿತು ಗೃಹ ಸಚಿವ ಅಮಿತ್ ಶಾ ನೀಡಿರುವ ಹೇಳಿಕೆಗಳನ್ನು ತಿರುಚಿ ಕಾಂಗ್ರೆಸ್ ಹೋರಾಟ ಮಾಡುತ್ತಿದೆ. ಮೋದಿ ಸರ್ಕಾರದ ವಿರುದ್ಧ ಟೀಕಿಸಲು ಕಾಂಗ್ರೆಸ್‌ಗೆ ಯಾವುದೇ ವಿಷಯವಿಲ್ಲ. ಜನರ ಗಮನ ಬೇರೆಡೆ ಸೆಳೆದು ಕೇಂದ್ರದ ವಿರುದ್ಧ ಎತ್ತಿ ಕಟ್ಟಲು ಈ ಹುನ್ನಾರ ನಡೆಯುತ್ತಿದೆ ಎಂದು ರಾಜ್ಯ ಕಾಂಗ್ರೆಸ್ ನಡೆಯನ್ನು ಕಟುವಾಗಿ ಟೀಕಿಸಿದರು.

ಉತ್ತರ ಭಾರತದ ರಾಜ್ಯಗಳಲ್ಲಿ ಈ ಹೋರಾಟದ ಸದ್ದಿಲ್ಲ. ಆದರೆ, ದಕ್ಷಿಣ ರಾಜ್ಯಗಳಲ್ಲಷ್ಟೇ ಈ ಸದ್ದು ಮಾಡುತ್ತಿದೆ ಎಂದ ಅವರು, ಕರ್ನಾಟಕದ ಮತದಾರರನ್ನು ಕಾಂಗ್ರೆಸ್ ದಡ್ಡರೆಂದು ಭಾವಿಸಿ ಸುಳ್ಳಿನ ಮೇಲೆ ಸುಳ್ಳು ಹೇಳುತ್ತಿದೆ. ಇಲ್ಲಿನ ಜನರು ಒಮ್ಮೆ ಕಾಂಗ್ರೆಸ್ ಸುಳ್ಳನ್ನು ನಂಬಿ ದಡ್ಡರಾಗಿದ್ದಾರೆ. ಈ ಬಾರಿ ಕಾಂಗ್ರೆಸ್ ನಂಬಿ ಆ ದಡ್ಡತನ ಪ್ರದರ್ಶಿಸುವುದಿಲ್ಲ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಮಾಧ್ಯಮಗಳಿಲ್ಲದಿದ್ದರೇ ರವಿ ಗತಿಯೇನು: ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಪ್ರಕರಣದ ಕುರಿತು ಮಾಧ್ಯಮ ಪ್ರತಿನಿಧಿಗಳು ಗಮನ ಸೆಳೆದಾಗ, ಗಲಾಟೆ ನಡೆದ ದಿನ ಸಿ.ಟಿ.ರವಿ ಜೊತೆ ಮಾಧ್ಯಮಗಳು ಇರದಿದ್ದರೆ ರವಿ ಕಥೆ ಏನಾಗುತ್ತಿತ್ತು ಅದನ್ನು ಸ್ವಲ್ಪ ಊಹೆ ಮಾಡಿಕೊಳ್ಳಿ, ಮಾಧ್ಯಮಗಳು ಇದ್ದಿದ್ದಕ್ಕೆ ರವಿ ಅಂದು ಬಚಾವ್ ಆಗಿದ್ದಾರೆ. ಈ ಪ್ರಕರಣದ ಹಾದಿಯನ್ನು ಗಮನಿಸಿದರೆ, ರಾಜ್ಯದಲ್ಲಿ ಈ ಸರ್ಕಾರ ದ್ವೇಷದ ರಾಜಕಾರಣಕ್ಕೆ ಶುರು ಮಾಡಿದೆ ಎಂದು ಅನುಮಾನ ವ್ಯಕ್ತಪಡಿಸಿದರು.

ಸಿ.ಟಿ.ರವಿ ಪ್ರಕರಣ ಬೆಳೆಸುವುದು ಬೇಡ. ಈ ವಿಚಾರ ಇಲ್ಲಿಗೆ ಬಿಟ್ಟುಬಿಡಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಗೃಹ ಸಚಿವ ಪರಮೇಶ್ವರ್ ಹೇಳಿಲ್ಲವಾ ಎಂದು ಇಬ್ಬರು ಅವರವರ ಆತ್ಮಸಾಕ್ಷಿಗೆ ಅನುಗುಣವಾಗಿ ಹೇಳಲಿ. ಹಿರಿಯ ರಾಜಕಾರಣಿ ಸಿಎಂ ಸಿದ್ದರಾಮಯ್ಯ ಅವರು ರಾಜಕಾರಣದ ಕೊನೆಗಾಲದಲ್ಲಿ ಇರುವಾಗ ಈ ರೀತಿಯ ದ್ವೇಷ ರಾಜಕಾರಣ ಶುರು ಮಾಡಿದ್ದು, ನನಗೆ ಬೇಸರ ಮೂಡಿಸುತ್ತಿದೆ. ಸದನದ ವಿಚಾರ ಸ್ಪೀಕರ್ ತೀರ್ಮಾನವೇ ಅಂತಿಮ ಎಂದು ಸ್ಪಷ್ಟಪಡಿಸಿದರು.

ಪ್ರಕರಣದಲ್ಲಿ ಯಾರದ್ದು ತಪ್ಪು ಎಂಬುದನ್ನು ಸ್ಪೀಕರ್ ನೋಡಿಕೊಳ್ಳುತ್ತಾರೆ. ನಮ್ಮ ಅಭ್ಯಂತರವಿಲ್ಲ. ನಮ್ಮದ್ದು ತಪ್ಪಾಗಿದ್ದರೆ ನಾವು ಅದನ್ನು ಸ್ವೀಕರಿಸುತ್ತೇವೆ. ಆದರೆ, ಇದನ್ನು ಬಿಟ್ಟು ಪೊಲೀಸರ ಮೂಲಕ ರವಿಗೆ ಟಾರ್ಚರ್ ಕೊಡಿಸಿದ್ದು ಎಷ್ಟು ಸರಿ ಎಂದು ಪ್ರಶ್ನಿಸಿದ ಸಚಿವರು, ಏಳೆಂಟು ಗಂಟೆ ಸಿ.ಟಿ.ರವಿ ಅವರನ್ನು ಮೂರು ಜಿಲ್ಲೆಯಲ್ಲಿ ಸುತ್ತಿಸುವ ಅಗತ್ಯತೆ ಏನಿತ್ತು? ಈ ಪ್ರಕರಣದಲ್ಲಿ ಆತ್ಮಸಾಕ್ಷಿಗೆ ಅನುಗುಣವಾಗಿ ಹೇಳಿಕೆ ನೀಡಲಿ ಎಂದು ಸವಾಲು ಹಾಕಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರದ ಖಜಾನೆ ಖಾಲಿಯಾಗಿದೆ. ಹಣಕಾಸು ವಿಚಾರವಾಗಿ ಸರ್ಕಾರದಲ್ಲಿ ಬಹಳಷ್ಟು ಹುಳುಕುಗಳು ಶುರುವಾಗಿವೆ. ಇವುಗಳನ್ನು ಮುಚ್ಚಿಕೊಳ್ಳಲು ಈ ವಿಚಾರ ದೊಡ್ಡದು ಮಾಡುತ್ತಿದ್ದಾರೆ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಕೇಂದ್ರದಲ್ಲಿ ಯಾರಿಗೆ ಬೇಕಾದರೂ ದೂರು ಕೊಡಲಿ. ನಮಗೆ ಏನು ತೊಂದರೆ ಇಲ್ಲ. ಇದು ಸದನದ ವಿಚಾರ. ಅದನ್ನು ಎಲ್ಲಿ ಹೇಗೆ ಮಾತನಾಡಬೇಕು ಎಂಬುದಕ್ಕೆ ಕಾನೂನು ಇದೆ. ಅದರ ವ್ಯಾಪ್ತಿಯಲ್ಲಿ ಎಲ್ಲರೂ ಇರಬೇಕು ಎಂದು ಕಿವಿಮಾತು ಹೇಳಿದರು. ಇದಕ್ಕೂ ಮುನ್ನ ಕೇಂದ್ರ ಸಚಿವ ವಿ.ಸೋಮಣ್ಣ ಅವರನ್ನು ಮೈಸೂರು ಹೊರವಲಯದ ಏಟ್ರಿಯಾ ಹೋಟೆಲ್ ಮುಂಭಾಗ ಶಾಸಕ ಟಿ.ಎಸ್.ಶ್ರೀವತ್ಸ ನೇತೃತ್ವದಲ್ಲಿ ಸನ್ಮಾನಿಸಿ ಸ್ವಾಗತಿಸಲಾಯಿತು.

ಕೃಷಿಯಲ್ಲಿ ಹೊಸ ತಾಂತ್ರಿಕತೆ ಅಳವಡಿಸಿ

ರೈತರಿಗೆ ಸುತ್ತೂರಿನ ಜೆಎಸ್‌ಎಸ್ ಕೆವಿಕೆ ಸಂಸ್ಥೆಯ ಕೃಷಿ ವಿಜ್ಞಾನಿ ದಿವ್ಯ ಸಲಹೆ



ಕಾರ್ಯಕ್ರಮದಲ್ಲಿ ರೈತರನ್ನು ಸನ್ಮಾನಿಸಲಾಯಿತು.

ನಂಜನಗೂಡು, ಡಿ.23– ರೈತರಿಗೆ ಬರಗಾಲ ಸಮಸ್ಯೆಗಿಂತಲೂ ಕೃಷಿ ಕಾರ್ಮಿಕರ ಕೊರತೆ ಹೆಚ್ಚಾಗಿದೆ. ಕೃಷಿ ಚಟುವಟಿಕೆ ಸುಗಮಗೊಳಿಸುವ ಸಲುವಾಗಿ ರೈತರು ಕೃಷಿಯಲ್ಲಿ ಹೊಸ ತಾಂತ್ರಿಕತೆ ಅಳವಡಿಸಿಕೊಳ್ಳಬೇಕು ಎಂದು ಸುತ್ತೂರಿನ ಜೆಎಸ್‌ಎಸ್ ಕೆವಿಕೆ ಸಂಸ್ಥೆಯ ಕೃಷಿ ವಿಜ್ಞಾನಿ ದಿವ್ಯ ಸಲಹೆ ನೀಡಿದರು.

ನಗರದ ಕೃಷಿ ಇಲಾಖೆ ಕಚೇರಿ ಆವರಣದಲ್ಲಿ ಸೋಮವಾರ ರೈತ ದಿನಾಚರಣೆ ಅಂಗವಾಗಿ ನಡೆದ ಕಿಸಾನ್ ಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಹಿಂದೆ ಒಂದು ಮನೆಯಲ್ಲಿ ಕನಿಷ್ಠ ನಾಲ್ವರು ಕೃಷಿ ಅವಲಂಬಿಸಿದ್ದರು. ಪ್ರಸ್ತುತ ಕನಿಷ್ಠ ಒಬ್ಬರು ಸಿಗುವುದು ಕಷ್ಟವಾಗಿದೆ. ಕೆಲವರು ಆಧುನಿಕ ರೈತರೆಂದು ಹೇಳಿಕೊಂಡು ತಾವು ಕೆಲಸ ಮಾಡುವ ಬದಲು ಕೃಷಿ ಕಾರ್ಮಿಕರಿಂದ ಕೆಲಸ ಮಾಡಿಸುತ್ತಾರೆ. ಪ್ರಮುಖವಾಗಿ ಕೃಷಿ ಲಾಭದಾಯಕವಾಗಿಲ್ಲ ಎಂದು ರೈತರೇ ತಮ್ಮ ಮಕ್ಕಳನ್ನು ಕೃಷಿ ಚಟುವಟಿಕೆಯಲ್ಲಿ ತೊಡಗಿಸಿಕೊಳ್ಳಲು ಹಿಂದೇಟು ಹಾಕುತ್ತಿದ್ದಾರೆ. ಆದ್ದರಿಂದ ಕೃಷಿ ಚಟುವಟಿಕೆಯಲ್ಲಿ ಕಾರ್ಮಿಕರ ಸಮಸ್ಯೆ ಹೆಚ್ಚಾಗಿದೆ. ವಿದೇಶಗಳಲ್ಲಿ ರೋಬೋಟ್‌ಗಳು ಕೃಷಿ ಕಾಯಕದಲ್ಲಿ ತೊಡಗಿಸಿಕೊಂಡಿವೆ. ಆದರೆ ನಮ್ಮ ದೇಶ ಇನ್ನೂ ಆ ಹಂತವನ್ನು ತಲುಪಿಲ್ಲ. ಔಷಧ ಸಿಂಪಡಣೆಗೆ ಡ್ರೋನ್ ಬಳಕೆ, ನಾಟಿ ಮಾಡುವ ಯಂತ್ರ, ಡ್ರಮ್ ಸೀಡರ್, ಪವರ್ ವೀಡರ್‌ಗಳಂತಹ ಯಂತ್ರೋಪಕರಣಗಳನ್ನು ಬಳಸಿಕೊಂಡು ಕೃಷಿಯನ್ನು ಸುಗಮಗೊಳಿಸಬಹುದು. ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು. ಅಲ್ಲದೆ ಬೆಳೆಗಳನ್ನು ಮೌಲ್ಯವರ್ಧನೆ ಮಾಡುವ ಮೂಲಕ ಹೆಚ್ಚು ಲಾಭಗಳಿಸಬಹುದಾಗಿದ್ದು, ಭತ್ತಕ್ಕಿಂತ ಉದ್ದು ಬೆಳೆಗೆ ಬೆಲೆ ಹೆಚ್ಚಾಗಿದೆ. ಉದ್ದು ಬೆಳೆಯುವುದರಿಂದ ಮಣ್ಣಿನ ಆರೋಗ್ಯ ಕಾಪಾಡಿಕೊಳ್ಳಬಹುದು ಎಂದು ಸಲಹೆ ನೀಡಿದರು.

ಕೃಷಿ ಸಹಾಯಕ ನಿರ್ದೇಶಕ ರವಿ ಮಾತನಾಡಿ, ರೈತರು ತಮ್ಮ ಬೆಳೆಗಳನ್ನು ಮೌಲ್ಯವರ್ಧನೆ ಮಾಡುವ ಮೂಲಕ ಉದ್ಯಮಿಗಳಾಗುವ ಅವಕಾಶವಿದ್ದು, ಉದ್ಯೋಗಶೀಲತಾ ಕಾರ್ಯಕ್ರಮದಡಿಯಲ್ಲಿ ಸರ್ಕಾರದಿಂದ ಕೃಷಿ ಸಂಬಂಧಿತ ಉದ್ಯಮ ಸ್ಥಾಪನೆ ಮಾಡಲು ಸಬ್ಸಿಡಿಯೊಂದಿಗೆ ಸಾಲ ಸೌಲಭ್ಯ ದೊರಕುತ್ತದೆ. ರೈತ ಮಹಿಳೆಯರು ಮತ್ತು ರೈತರು ಇದರ ಸದುಪಯೋಗ ಪಡೆದುಕೊಂಡು ಆರ್ಥಿಕವಾಗಿ ಮುಂದೆ ಬರಬೇಕು ಎಂದರು.

ಕಾರ್ಯಕ್ರಮದಲ್ಲಿ ಪ್ರಗತಿಪರ ಕೃಷಿಕರನ್ನು ಸನ್ಮಾನಿಸಲಾಯಿತು. ತೋಟಗಾರಿಕೆ ಸಹಾಯಕ ನಿರ್ದೇಶಕ ಚಂದ್ರು, ಪಶು ಸಂಗೋಪನೆ ಇಲಾಖೆ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ್, ರೇಷ್ಮೆ ಇಲಾಖೆ ಸಹಾಯಕ ನಿರ್ದೇಶಕ ನಾಗರಾಜು, ಮೀನುಗಾರಿಕೆ ಸಹಾಯಕ ನಿರ್ದೇಶಕಿ ಶಿಲ್ಪ, ತಾಲೂಕು ರೈತ ಸಂಘದ ಅಧ್ಯಕ್ಷ ಸತೀಶ್ ರಾವ್, ರೈತ ಮುಖಂಡರಾದ ನಂಜುಂಡಸ್ವಾಮಿ, ಶಿವಕುಮಾರ್, ಚೆನ್ನಪ್ಪ ಸೇರಿದಂತೆ ರೈತ ಮಹಿಳೆಯರು ಮತ್ತು ರೈತರು ಉಪಸ್ಥಿತರಿದ್ದರು.

ಅನ್ನದಾತರನ್ನು ಪ್ರತಿಯೊಬ್ಬರೂ ಗೌರವಿಸಬೇಕು

ರೈತ ದಿನಾಚರಣೆಯಲ್ಲಿ ಕೃಷಿಕ ಸಮಾಜದ ಅಧ್ಯಕ್ಷ ಬಿ.ಎಂ.ಶಿವಮಲ್ಲಪ್ಪ



ಬೆನಕನಹಳ್ಳಿಯಲ್ಲಿ ರೈತ ದಿನಾಚರಣೆಯನ್ನು ಭತ್ತದ ರಾಶಿ, ನೇಗಿಲಿಗೆ ಪೂಜೆ ಸಲ್ಲಿಸುವ ರೈತರು ಉದ್ಘಾಟಿಸಲಾಯಿತು.

ತಿ.ನರಸೀಪುರ, ಡಿ.23– ದೇಶಕ್ಕೆ ಅನ್ನ ನೀಡುವ ರೈತರನ್ನು ಪ್ರತಿಯೊಬ್ಬರೂ ಗೌರವಿಸಬೇಕು ಎಂದು ಕೃಷಿಕ ಸಮಾಜದ ಅಧ್ಯಕ್ಷ ಬಿ.ಎಂ.ಶಿವಮಲ್ಲಪ್ಪ ತಿಳಿಸಿದರು.

ತಾಲೂಕಿನ ಬೆನಕನಹಳ್ಳಿಯಲ್ಲಿ ಕೃಷಿ ಇಲಾಖೆ ಹಾಗೂ ತಾಲೂಕು ಕೃಷಿಕ ಸಮಾಜದ ಆಶ್ರಯದಲ್ಲಿ ನಡೆದ ರೈತ ದಿನಾಚರಣೆಯಲ್ಲಿ ಮಾತನಾಡಿದ ಅವರು, ರೈತರ ಸಮಸ್ಯೆಗಳಿಗೆ ಗಟ್ಟಿ ದನಿಯಾದ ಮಾಜಿ ಪ್ರಧಾನಿ ಚೌಧರಿ ಚರಣ್ ಸಿಂಗ್ ಅವರ ಜನ್ಮ ದಿನವನ್ನು ದೇಶವು ರೈತರ ದಿನವಾಗಿ ಆಚರಿಸುವ ಮೂಲಕ ಸದಾ ಸ್ಮರಣೀಯವಾಗಿಸಿದೆ. ಭಾರತ ಕೃಷಿ ಪ್ರಧಾನ ದೇಶವಾಗಿದ್ದು, ರೈತನೇ ಬೆನ್ನೆಲುಬು. ಹೀಗಾಗಿ ಅವರ ಶ್ರಮಕ್ಕೆ ಗೌರವ ಸಿಗಬೇಕಾಗಿದೆ. ರೈತರಿಗೆ ಸಾಕಷ್ಟು ಸಮಸ್ಯೆಗಳಿದ್ದು, ಎಲ್ಲರೂ ಒಗ್ಗಟ್ಟಿನಿಂದ ಹೋರಾಡುವ ಮೂಲಕ ಸಮಸ್ಯೆ ಬಗೆಹರಿಸಿಕೊಳ್ಳಬೇಕಾದ ಅವಶ್ಯಕತೆ ಇದೆ ಎಂದರು.

ಅಲ್ಪಾವಧಿಗೆ ಪ್ರಧಾನಿಯಾಗಿದ್ದ ಚೌಧರಿ ಚರಣ್ ಸಿಂಗ್ ಅವರು ರೈತರ ಕಲ್ಯಾಣಕ್ಕೆ ಜಾರಿಗೆ ತಂದ ಯೋಜನೆಗಳು ಇಂದಿಗೂ ಜನಪ್ರಿಯವಾಗಿವೆ. ಪ್ರಧಾನಿ ಹುದ್ದೆಗೇರುವ ಮೊದಲು 2 ಬಾರಿ ಸಚಿವರಾಗಿದ್ದ ಅವರು ಲಾಭದಾಯಕ ಖಾತೆ ಕೇಳದೆ ಕೃಷಿ ಖಾತೆ ಪಡೆದು ಆ ಕ್ಷೇತ್ರದಲ್ಲೇ ಆಮೂಲಾಗ್ರ ಬದಲಾವಣೆ ತಂದರು. ಅಲ್ಲದೇ ಇಸ್ರೇಲ್‌ಗೆ ಹೋಗಿ ಅಲ್ಲಿನ ವ್ಯವಸಾಯ ಪದ್ಧತಿ ಅಧ್ಯಯನ ಮಾಡಿ ಆಧುನಿಕ ಕೃಷಿ ಪದ್ಧತಿ ಜಾರಿಗೆ ತಂದು ರೈತರ ಆರ್ಥಿಕ ವ್ಯವಸ್ಥೆ ಮೇಲೆ ಪ್ರಭಾವ ಬೀರಿದರು ಎಂದರು.

ರೈತರು ಒಟ್ಟಾಗಬೇಕು: ರೈತರ ಶ್ರಮಕ್ಕೆ ತಕ್ಕ ಪ್ರತಿಫಲ ದೊರಕುತ್ತಿಲ್ಲ. ಇದಕ್ಕೆ ನಮ್ಮಲ್ಲಿರುವ ಒಗ್ಗಟ್ಟಿನ ಕೊರತೆ ಕಾರಣ. ಶಿಕ್ಷಕರು ಸೇರಿದಂತೆ ಅನೇಕ ಸರ್ಕಾರಿ ನೌಕರರು ತಮ್ಮ ಬೇಡಿಕೆಗಳನ್ನು ಪ್ರತಿಭಟನೆ ಮೂಲಕ ಈಡೇರಿಸಿಕೊಳ್ಳುತ್ತಾರೆ. ವೇತನ ಆಯೋಗದ ಅಡಿ ಅವರಿಗೆ ಸಿಗಬೇಕಾದ ವೇತನ ಸಹ ಹೆಚ್ಚು ಮಾಡಲಾಗುತ್ತದೆ. ಭತ್ಯೆ, ಸಂಬಳ ಎಲ್ಲಾ ಸಿಗುತ್ತದೆ. ಅದು ತಪ್ಪಲ್ಲ. ಆದರೆ ರೈತರನ್ನೇಕೆ ಕಡೆಗಣನೆ ಮಾಡುತ್ತೀರಾ. ಭತ್ತದ ಬೆಲೆ 3 ಸಾವಿರದಿಂದ 2300 ರೂ.ಗೆ ಇಳಿಕೆಯಾಗಿದ್ದು, ಸರಿಯಾದ ಬೆಂಬಲ ಬೆಲೆ ಸಿಗುತ್ತಿಲ್ಲ. ನಮ್ಮಲ್ಲಿ ಸಂಘಟಿತ ಹೋರಾಟ ಕಂಡು ಬರದ ಹಿನ್ನೆಲೆಯಲ್ಲಿ ನಮಗೆ ಅನ್ಯಾಯವಾಗುತ್ತಿದೆ. ರೈತರ ಸಮಸ್ಯೆಗಳನ್ನು ಬಗೆಹರಿಸಲು ಕೃಷಿಕ ಸಮಾಜ ಪ್ರಾಮಾಣಿಕ ಪ್ರಯತ್ನ ಮಾಡುತ್ತದೆ ಎಂದರು.

ಕೃಷಿ ಸಹಾಯಕ ನಿರ್ದೇಶಕಿ ಸುಹಾಸಿನಿ ಮಾತನಾಡಿದರು. ಗ್ರಾಪಂ ಅಧ್ಯಕ್ಷೆ ಮಂಜುಳಾ, ಉಪಾಧ್ಯಕ್ಷೆ ಮಮತಾ, ತಾಲೂಕು ಕೃಷಿಕ ಸಮಾಜದ ಅಧ್ಯಕ್ಷ ಶಿವಮಲ್ಲಪ್ಪ, ನಿರ್ದೇಶಕರಾದ ಆಲಗೂಡು ನಾಗರಾಜು, ಶಶಿಧರ್, ರಾಜಗೋಪಾಲ್, ಕೆ.ಜಿ.ವೀರಣ್ಣ, ಪ್ರಗತಿಪರ ರೈತ ಸುಂದರಸ್ವಾಮಿ, ಸ್ವಾಮಿರಾಜ್, ನಾರಾಯಣ್, ಮಾಜಿ ಅಧ್ಯಕ್ಷೆ ಗೌರಮ್ಮ, ಮಂಟೇಲಿಂಗು, ತಾಂತ್ರಿಕ ಅಧಿಕಾರಿ ರಾಘವೇಂದ್ರ, ಶಿವಣ್ಣ, ಪಿಎಸಿಸಿ ಮಾಜಿ ಅಧ್ಯಕ್ಷ ಪ್ರಭುಸ್ವಾಮಿ, ವಿರೂಪಾಕ್ಷಪ್ಪ ಸೇರಿದಂತೆ ರೈತರು, ಗ್ರಾಮಸ್ಥರು ಹಾಜರಿದ್ದರು.

ವಿದ್ಯುತ್ ಸ್ಪರ್ಶ: ವ್ಯಕ್ತಿ ಸಾವು

ತಿ.ನರಸೀಪುರ, ಡಿ.23– ವಿದ್ಯುತ್ ಸ್ಪರ್ಶದಿಂದ ವ್ಯಕ್ತಿ ಸ್ಥಳದಲ್ಲೇ ಸಾವನ್ನಪ್ಪಿರುವ



ಘಟನೆ ತಾಲೂಕಿನ ಕೊತ್ತೇಗಾಲದಲ್ಲಿ ನಡೆದಿದೆ.

ಗ್ರಾಮದ ನಿವಾಸಿ ಲೋಕೇಶ್ (33) ಸಾವನ್ನಪ್ಪಿರುವುದು. ಭಾನುವಾರ ರಾತ್ರಿ ಮನೆಯಲ್ಲಿ ಪತ್ನಿ ಕಾವ್ಯ ಹಾಗೂ ತಾಯಿ ನಾಗಮ್ಮಗೆ ವಿದ್ಯುತ್ ಸ್ಪರ್ಶಿಸಿದ್ದು, ಈ ವೇಳೆ ಅವರನ್ನು ರಕ್ಷಿಸಲು ಹೋದ ಲೋಕೇಶ್ ವಿದ್ಯುತ್ ಸ್ಪರ್ಶದಿಂದ ಸಾವನ್ನಪ್ಪಿದ್ದಾರೆ ಎನ್ನಲಾಗಿದೆ. ಇದೀಗ ಲೋಕೇಶ್ ಪತ್ನಿ, ತಾಯಿಯನ್ನು ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಲಾಗಿದೆ. ಸ್ಥಳಕ್ಕೆ ಚೆಸ್ಕಾಂ ಅಧಿಕಾರಿಗಳು ಹಾಗೂ ಪೊಲೀಸರು ಭೇಟಿ ನೀಡಿ ಪರಿಶೀಲಿಸಿದರು. ಈ ಸಂಬಂಧ ತಿ.ನರಸೀಪುರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕೇಂದ್ರ ಗೃಹ ಸಚಿವ ಅಮಿತ್ ಶಾ ವಿರುದ್ಧ

ಹುಣಸೂರಲ್ಲಿ 'ಕೈ', ಪ್ರಗತಿಪರ ಸಂಘಟನೆಗಳ ಪ್ರತಿಭಟನೆ



ಹುಣಸೂರಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಹುಣಸೂರು, ಡಿ.23– ಅಂಬೇಡ್ಕರ್ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಸಚಿವ ಸ್ಥಾನದಿಂದ ವಜಾಗೊಳಿಸಬೇಕು ಎಂದು ಆಗ್ರಹಿಸಿ ನಗರದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ದಲಿತ, ಪ್ರಗತಿಪರ ಸಂಘಟನೆಗಳ ಕಾರ್ಯಕರ್ತರು ಮತ್ತು ದಿ.ಡಿ.ದೇವರಾಜ ಅರಸು ವೇದಿಕೆ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ಕಾಂಗ್ರೆಸ್: ನಗರದ ಸಂವಿಧಾನ ಸರ್ಕಲ್‌ನಲ್ಲಿ ಜಮಾಯಿಸಿದ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿ ಅಮಿತ್ ಶಾ ಅವರ ವಿರುದ್ಧ ಸೂಕ್ತ ಕ್ರಮ ಕೈಗೊಂಡು ಸಚಿವ ಸ್ಥಾನದಿಂದ ವಜಾಗೊಳಿಸಬೇಕು ಒತ್ತಾಯಿಸಿ ತಹಸೀಲ್ದಾರ್ ಜೆ.ಮಂಜುನಾಥ್ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿದರು. ಈ ವೇಳೆ ಹುಣಸೂರು ನಗರಾಭಿವೃದ್ಧಿ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಹೆಚ್.ಪಿ.ಅಮರ್‌ನಾಥ್, ಕಾಂಗ್ರೆಸ್ ಕಾರ್ಯಾಧ್ಯಕ್ಷ ವಕೀಲ ಪುಟ್ಟರಾಜು ಮಾತನಾಡಿದರು. ಪ್ರತಿಭಟನೆಯಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಟಿ.ವಿ. ನಾರಾಯಣ್, ರಮೇಶ್, ಪ್ರೇಮ್ ಕುಮಾರ್, ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ರಾಘು, ಮುಖಂಡರಾದ ಸ್ವಾಮಿ, ಬಸವರಾಜ್, ಹೊನ್ನಪ್ಪ, ರವಿಪ್ರಸನ್ನ, ರಾಜು, ಶಿವರಾಜೇಗೌಡ, ಕೃಷ್ಣ, ಅಜ್ಗರ್ ಪಾಷಾ, ಅಕ್ರಮ ಸಕ್ರಮ ಸಮಿತಿ ಸದಸ್ಯ ಕುಮಾರ್, ಲತಾ, ಮಹದೇವ್, ಕುಪ್ಪುಸ್ವಾಮಿ, ಸುರೇಶ್, ಮಹಿಳಾ ಮುಖಂಡರಾದ ಕಲ್ಪನಾ, ಶಾಂತ, ರೇಖಾ, ನೇತ್ರಾವತಿ, ರೇಣುಕ ಸೇರಿದಂತೆ 500ಕ್ಕೂ ಹೆಚ್ಚು ಕಾರ್ಯಕರ್ತರಿದ್ದರು.

ಪ್ರಗತಿಪರ ಸಂಘಟನೆಗಳು: ನಗರದ ಸಂವಿಧಾನ ಸರ್ಕಲ್‌ನಲ್ಲಿ ಜಮಾಯಿಸಿದ ದಲಿತ, ಪ್ರಗತಿಪರ ಸಂಘಟನೆಗಳು ಮತ್ತು ದಿ. ಡಿ.ದೇವರಾಜ ಅರಸು ವೇದಿಕೆ ಕಾರ್ಯಕರ್ತರು ಪ್ರತಿಭಟನೆ ನಡೆಸಿ ಅಮಿತ್ ಶಾ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ದಿ.ಡಿ.ದೇವರಾಜ ಅರಸು ವೇದಿಕೆ ಅಧ್ಯಕ್ಷ ರಾಜು, ದಸಂಸ ಜಿಲ್ಲಾ ಸಂಘಟನಾ(ಡಿ.ಜಿ.ಸಾಗರ್ ಬಣ) ಸಂಚಾಲಕ ಕೃಷ್ಣ ಮಾತನಾಡಿದರು. ಪ್ರತಿಭಟನೆಯಲ್ಲಿ ದಸಂಸ ಮುಖಂಡರಾದ ಹೆಚ್.ಎಸ್.ವರದರಾಜು, ಜೆ.ಮಹದೇವ್, ಶಿವರಾಜು, ನಾಗಯ್ಯ, ಪುಟ್ಟಮಲ್ಲು, ಕಾಂತರಾಜು, ಶಾಂತರಾಜು, ಮಹದೇವು, ಸಣ್ಣಸ್ವಾಮಿ, ಮೂರ್ತಿ, ಮಂಜು, ವಾಸು ಸೇರಿದಂತೆ ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು.

ಆಕಸ್ಮಿಕ ಬೆಂಕಿಗೆ ನಂದಿನಿ ಹಾಲಿನ ಕೇಂದ್ರ, ಚಾಟ್ ಸೆಂಟರ್ ಭಸ್ಮ



ನಂದಿನಿ ಹಾಲಿನ ಕೇಂದ್ರ ಸಂಪೂರ್ಣ ಸುಟ್ಟು ಹೋಗಿರುವುದು.

ಬನ್ನೂರು, ಡಿ.23– ಆಕಸ್ಮಿಕ ಬೆಂಕಿಗೆ ನಂದಿನಿ ಹಾಲಿನ ಕೇಂದ್ರ ಮತ್ತು ಚಾಟ್ ಸೆಂಟರ್ ಸಂಪೂರ್ಣ ಭಸ್ಮವಾಗಿರುವ ಘಟನೆ ಇಲ್ಲಿನ ಬಸ್ ನಿಲ್ದಾಣದ ಸಮೀಪ ಭಾನುವಾರ ರಾತ್ರಿ ನಡೆದಿದೆ.

ಕೇತುಪುರ ಶಿವಕುಮಾರ್ ಅವರಿಗೆ ಸೇರಿದ ಅಂಗಡಿಗಳು ಆಕಸ್ಮಿಕ ಬೆಂಕಿಗೆ ಸುಟ್ಟು ಹೋಗಿರುವುದು. ಇವರು ಬಸ್ ನಿಲ್ದಾಣದ ಸಮೀಪ 2 ಮಳಿಗೆಗಳಲ್ಲಿ ನಂದಿನಿ ಹಾಲಿನ ಕೇಂದ್ರ ಹಾಗೂ ಬಂಗಾರ್‌ಪೇಟೆ ಪಾನಿಪುರಿ ಚಾಟ್ ಸೆಂಟರ್ ನಡೆಸುತ್ತಿದ್ದರು. ಎಂದಿನಂತೆ ರಾತ್ರಿ 10 ಗಂಟೆಗೆ ಅಂಗಡಿ ಗಳನ್ನು ಮುಚ್ಚಿ ಮನೆಗೆ ತೆರಳಿದ್ದರು. ಆದರೆ ರಾತ್ರಿ 12 ಗಂಟೆ ವೇಳೆಗೆ ಆಕಸ್ಮಿಕವಾಗಿ ಬೆಂಕಿ ಬಿದ್ದಿದೆ ಎನ್ನಲಾಗಿದೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಶಿವಕುಮಾರ್ ಬೆಂಕಿ ನಂದಿಸಲು ಪ್ರಯತ್ನ ಪಟ್ಟರಾದರೂ ಯಾವುದೇ ಪ್ರಯೋಜನ ವಾಗಿಲ್ಲ. ಇದರಿಂದ ಅಂಗಡಿ ಗಳಲ್ಲಿದ್ದ ವಸ್ತುಗಳು ಸುಟ್ಟು ಹೋಗಿವೆ. ಸ್ಥಳಕ್ಕಾಗಮಿಸಿದ ಅಗ್ನಿಶಾಮಕ ದಳದ ಸಿಬ್ಬಂದಿ ಬೆಂಕಿ ನಂದಿಸಿ ಹೆಚ್ಚಿನ ಅನಾಹುತ ತಪ್ಪಿಸಿದ್ದಾರೆ. ಘಟನೆಗೆ ನಿಖರ ಕಾರಣ ತಿಳಿದು ಬಂದಿಲ್ಲ ಈ ಸಂಬಂಧ ಬನ್ನೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಅಂಗಡಿ ಮಾಲೀಕ ಶಿವಕುಮಾರ್ ಮಾತ ನಾಡಿ, ಘಟನೆಯಲ್ಲಿ 1.25 ಲಕ್ಷ ರೂ. 1 ಲ್ಯಾಪ್‌ಟಾಪ್, ಮೊಬೈಲ್, 4 ಫ್ರೀಡ್ಜ್, 2 ಶೋಕೇಸ್ ಸೇರಿದಂತೆ 70 ಸಾವಿರ ರೂ. ಮೌಲ್ಯದ ಹಾಲು, ಮೊಸರು ಸೇರಿದಂತೆ ಇನ್ನಿತರ ವಸ್ತುಗಳು ಬೆಂಕಿಗೆ ಆಹುತಿಯಾಗಿ 7 ಲಕ್ಷ ರೂ. ಗೂ ಹೆಚ್ಚು ನಷ್ಟ ಸಂಭವಿಸಿದೆ ಎಂದು ತಿಳಿಸಿದರು.

ಬೈಕ್‌ಗೆ ಬೊಲೆರೋ ಡಿಕ್ಕಿ; ಸವಾರನಿಗೆ ತೀವ್ರ ಗಾಯ

ಹುಣಸೂರು, ಡಿ.23– ಬೈಕ್‌ಗೆ ಬೊಲೆರೋ ವಾಹನ ಡಿಕ್ಕಿ ಹೊಡೆದ ಪರಿಣಾಮ ಸವಾರ ಗಂಭೀರವಾಗಿ ಗಾಯಗೊಂಡಿರುವ ಘಟನೆ ನಗರದ ನರಸಿಂಹಸ್ವಾಮಿ ಬಡಾವಣೆ ಬಳಿ ಸೋಮವಾರ ರಾತ್ರಿ ನಡೆದಿದೆ.

ಮಂಡ್ಯ ಮೊತ್ತಹಳ್ಳಿ ಗ್ರಾಮದ ನಿವಾಸಿ ಕುಮಾರ್(43) ಗಾಯಗೊಂಡವರು. ಈತ ತಾಲೂಕಿನ ಬನ್ನಿಕುಪ್ಪೆಯಲ್ಲಿರುವ ಪತ್ನಿ ಊರಿಗೆ ಆಗಮಿಸಿದ್ದರು. ಕಾರ್ಯ ನಿಮಿತ್ತ ಬೈಕ್(ಕೆಎ.11, ಎಬಿ.8867)ನಲ್ಲಿ ಹುಣಸೂರಿಗೆ ಬಂದು, ವಾಪಸ್ ಬನ್ನಿಕುಪ್ಪೆಗೆ ತೆರಳುತ್ತಿದ್ದ ವೇಳೆ ಮೈಸೂರು ಕಡೆಯಿಂದ ಬಂದ ಬೊಲೆರೋ (ಕೆಎ.09, ಎ.7872) ವಾಹನ ಇವರ ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಕುಮಾರ್ ಅವರ ತಲೆಗೆ ಗಂಭೀರ ಗಾಯವಾಗಿದೆ. ಈ ವೇಳೆ ಅವರನ್ನು ನಗರದ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಪ್ರಾಥಮಿಕ ಚಿಕಿತ್ಸೆ ಕೊಡಿಸಿ ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿನ ಕೆ.ಆರ್.ಆಸ್ಪತ್ರೆಗೆ ದಾಖಲಿಸಲಾಗಿದೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಇನ್ಸ್‌ಪೆಕ್ಟರ್ ಕಶ್ಯಪ್, ಸಿಬ್ಬಂದಿ ರಮೇಶ್ ಎರಡೂ ವಾಹನಗಳನ್ನು ವಶಕ್ಕೆ ಪಡೆದು ಪರಿಶೀಲನೆ ನಡೆಸಿದರು. ಈ ಸಂಬಂಧ ಹುಣಸೂರು ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಹಳ್ಳಿಗಳಲ್ಲಿ ಲಿಂಗಾಯತ ಸಮುದಾಯದ ಸಂಘಟನೆ ಬಹುಮುಖ್ಯ



ಹಲ್ಲರೆಯಲ್ಲಿ ಲಿಂಗಾಯತ ಸಮುದಾಯದ ಸಭೆ ನಡೆಯಿತು.

ಮಲ್ಕುಂಡಿ, ಡಿ.23– ಗ್ರಾಮೀಣ ಭಾಗದಲ್ಲಿ ಲಿಂಗಾಯತ ಸಮುದಾಯದ ಸಂಘಟನೆ ಬಹುಮುಖ್ಯವಾಗಿದೆ ಎಂದು ಅಖಿಲ ಭಾರತ ವೀರಶೈವ ಮಹಾಸಭಾ ತಾಲೂಕು ಅಧ್ಯಕ್ಷ ಎಸ್.ಎಂ.ಕೆಂಪಣ್ಣ ತಿಳಿಸಿದರು.

ಹಲ್ಲರೆ ಗ್ರಾಮದ ಗುರುಮಲ್ಲೇಶ್ವರ ದಾಸೋಹ ಮಠದಲ್ಲಿ ಲಿಂಗಾಯತ ಸಮುದಾಯದ ಸಭೆಯಲ್ಲಿ ಮಾತನಾಡಿದ ಅವರು, ನಮ್ಮ ಸಮುದಾಯದ ಜನರು ಶೈಕ್ಷಣಿಕ, ಆರ್ಥಿಕ, ಸಾಮಾಜಿಕ, ರಾಜಕೀಯವಾಗಿ ಸದೃಢವಾಗಲು ಶ್ರಮಿಸಲಾಗುವುದು. ಸರ್ಕಾರದ ಸವಲತ್ತುಗಳನ್ನು ಪ್ರತಿಯೊಬ್ಬರಿಗೂ ತಲುಪಿಸಲಾಗುವುದು. ಪ್ರತಿ ಗ್ರಾಮದಲ್ಲೂ ಲಿಂಗಾಯತ ಸಂಘದ ಸದಸ್ಯತ್ವ ನೋಂದಣಿ ಆರಂಭಿಸಿ ಸಂಘಟನೆ ಚುರುಕುಗೊಳಿಸಲಾಗುವುದು. ಆದ್ದರಿಂದ ಪ್ರತಿ ಗ್ರಾಮದಲ್ಲಿ ಸಂಘಟನೆಗೆ ಹೆಚ್ಚು ಒತ್ತು ನೀಡಬೇಕು ಎಂದರು.

ಮಹಾಸಭಾ ಯುವ ಘಟಕದ ಅಧ್ಯಕ್ಷ ಮಹದೇವಸ್ವಾಮಿ, ಪ್ರಧಾನ ಕಾರ್ಯದರ್ಶಿ ಶಿವಪ್ಪದೇವರು, ಮಹಿಳಾ ಘಟಕ ಅಧ್ಯಕ್ಷೆ ಶಶಿಕಲಾ, ವಿದ್ಯಾರ್ಥಿ ಘಟಕ ಅಧ್ಯಕ್ಷ ರಾಜೇಂದ್ರ ಪ್ರಸಾದ್, ನಿರ್ದೇಶಕರಾದ ಶಿವನಾಗಪ್ಪ, ಮಹೇಶ್, ಮಂಜುನಾಥ್, ಕೋಮಲ, ಬಿಂದು, ಶಿವಕುಮಾರ್, ಶಿವಮೂರ್ತಿ, ನಟರಾಜ್ ಇತರರಿದ್ದರು.

ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ



ಶಾಸಕ ಜಿ.ಟಿ.ದೇವೇಗೌಡ, ಎಂಎಲ್‌ಸಿ ಡಾ.ಯತೀಂದ್ರ ಅವರನ್ನು ಸನ್ಮಾನಿಸಲಾಯಿತು.

ಜಯಪುರ, ಡಿ.23– ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರ ನನ್ನ ತಂದೆ, ಸಿಎಂ ಸಿದ್ದರಾಮಯ್ಯ ಅವರಿಗೆ ರಾಜಕೀಯವಾಗಿ ಪುನರ್ಜನ್ಮ ನೀಡಿದ ಕ್ಷೇತ್ರವಾಗಿದ್ದು, ಮುಂದಿನ ದಿನಗಳಲ್ಲಿ ವಿಶೇಷ ಅನುದಾನ ನೀಡಿ ಕ್ಷೇತ್ರ ಅಭಿವೃದ್ಧಿಗೊಳಿಸಲಾಗುವುದು ಎಂದು ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ತಿಳಿಸಿದರು.

ಇಲ್ಲಿನ ಕಾಡನಹಳ್ಳಿ ಗ್ರಾಮದಿಂದ ಮೈಸೂರು–ಮಾನಂದವಾಡಿ ಹೆದ್ದಾರಿಗೆ ಸಂಪರ್ಕ ಕಲ್ಪಿಸುವ 7 ಕೋಟಿ ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡ ಮತ್ತು ನಮ್ಮ ತಂದೆ ಸಿದ್ದರಾಮಯ್ಯ ನಡುವೆ ಉತ್ತಮ ಸ್ನೇಹ ಸಂಬಂಧವಿದ್ದರೂ ರಾಜಕೀಯ ಕಾರಣಗಳಿಂದ ಬೇರೆ ಬೇರೆ ಪಕ್ಷದಲ್ಲಿದ್ದಾರೆ. ಆದರೂ ಇಬ್ಬರ ನಡುವೆ ಉತ್ತಮ ಬಾಂಧವ್ಯ ಇದೆ. ಶಾಸಕರು ಉತ್ತಮವಾಗಿ ಕೆಲಸ ಮಾಡುತ್ತಿದ್ದಾರೆ. ಹೀಗಾಗಿ ಕ್ಷೇತ್ರದ ಅಭಿವೃದ್ಧಿ ಕಾರ್ಯಗಳಿಗೆ ಅವರೊಂದಿಗೆ ಕೈಜೋಡಿಸಿ ಕೆಲಸ ಮಾಡಲಾಗುವುದು ಎಂದರು.

ಶಾಸಕ ಜಿ.ಟಿ.ದೇವೇಗೌಡ ಮಾತನಾಡಿ, ರಾಜ್ಯದ ಮುಖ್ಯಮಂತ್ರಿಯಾಗಿರುವ ಸಿದ್ದರಾಮಯ್ಯನವರು ಹಾಗೂ ಅವರ ಪುತ್ರ ಎಂಎಲ್‌ಸಿ ಡಾ.ಯತೀಂದ್ರ ಅವರು ಸಾಕಷ್ಟು ಉತ್ತಮ ಕೆಲಸ ಮಾಡಿದ್ದಾರೆ. ಅಲ್ಲದೇ ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುತ್ತಿದ್ದಾರೆ. ನನ್ನ ಕ್ಷೇತ್ರಕ್ಕೂ ಹೆಚ್ಚಿನ ಅನುದಾನ ನೀಡಿದರೆ ಅಭಿವೃದ್ಧಿ ಕಾರ್ಯ ಕೈಗೊಳ್ಳಲು ಅನುಕೂಲವಾಗುತ್ತದೆ ಎಂದರು.

ಇದೇ ವೇಳೆ ಕಾಡನಹಳ್ಳಿ ಸುತ್ತಮುತ್ತಲ ನೂರಾರು ಗ್ರಾಮಸ್ಥರು ಎಂಎಲ್‌ಸಿ ಡಾ. ಯತೀಂದ್ರ ಅವರಿಗೆ ಮನವಿ ಸಲ್ಲಿಸಿದರು. ಬಳಿಕ ಯತೀಂದ್ರ ಜಿ.ಟಿ.ದೇವೇಗೌಡ ಒಂದೇ ಕಾರಿನಲ್ಲಿ ಕುಳಿತು ಪ್ರಯಾಣಿಸಿದರು.

ಈ ವೇಳೆ ಶಾಸಕ ಡಿ.ರವಿಶಂಕರ್, ಜಿಪಂ ಮಾಜಿ ಸದಸ್ಯ ರಾಕೇಶ್ ಪಾಪಣ್ಣ, ತಾಪಂ ಮಾಜಿ ಸದಸ್ಯ ಸುರೇಶ್ ಕುಮಾರ್, ಗ್ರಾಮದ ಯುವ ಮುಖಂಡರಾದ ಕೆ.ಪಿ. ಚಿಕ್ಕಸ್ವಾಮಿ, ಡಿ.ಸ್ವಾಮಿಗೌಡ, ಡಾ.ಬೀರಪ್ಪ, ಗ್ರಾಪಂ ಮಾಜಿ ಅಧ್ಯಕ್ಷ ಜಯಪ್ಪ, ಹಿರಿಯ ಕಾಂಗ್ರೆಸ್ ಮುಖಂಡರಾದ ಮರಿಸ್ವಾಮಿಗೌಡ, ರವೀಶ, ಕೆ.ಬಿ.ಮಲ್ಲಪ್ಪ, ಮಹಾಲಿಂಗ, ಮಹದೇವು, ಹಾರೋಹಳ್ಳಿ ಗ್ರಾಪಂ ಅಧ್ಯಕ್ಷ ರೇವಣ್ಣ, ಉಪಾಧ್ಯಕ್ಷೆ ಜ್ಯೋತಿ, ಸ್ವಾಮಿ, ಜವರಪ್ಪ ಇತರರಿದ್ದರು.

ಪ್ರಸ್ತುತ ಸಂವಿಧಾನ, ಅಂಬೇಡ್ಕರ್ ಹೆಸರು ದುರ್ಬಳಕೆ

ಜನಜಾಗೃತಿ ವೇದಿಕೆ ಜಿಲ್ಲಾಧ್ಯಕ್ಷ ಕೆ.ಎನ್.ಪ್ರಭುಸ್ವಾಮಿ ಆರೋಪ



ತಿ.ನರಸೀಪುರದಲ್ಲಿ ದುಂಡು ಮೇಜಿನ ಚರ್ಚೆ ಆಯೋಜಿಸಲಾಗಿತ್ತು.

ತಿ.ನರಸೀಪುರ, ಡಿ.23– ದೇಶಾದ್ಯಂತ ಇತ್ತೀಚಿನ ದಿನಗಳಲ್ಲಿ ಸಂವಿಧಾನ ಮತ್ತು ಡಾ.ಬಿ.ಆರ್.ಅಂಬೇಡ್ಕರ್ ಹೆಸರು ದುರ್ಬಳಕೆಯಾಗುತ್ತಿದ್ದು, ಅಂಬೇಡ್ಕರ್ ವ್ಯಕ್ತಿತ್ವಕ್ಕೆ ಧಕ್ಕೆಯಾಗುವಂತಹ ಹೇಳಿಕೆಗಳಿಗೆ ಕಡಿವಾಣ ಹಾಕಬೇಕು. ಸಂಘಟಿತ ಹೋರಾಟಕ್ಕೆ ದಲಿತ ಸಂಘಟನೆಗಳು ಮುಂದಾಗಬೇಕು ಎಂದು ಜನಜಾಗೃತಿ ವೇದಿಕೆ ಜಿಲ್ಲಾಧ್ಯಕ್ಷ ಕೆ.ಎನ್.ಪ್ರಭುಸ್ವಾಮಿ ಕರೆ ನೀಡಿದರು.

ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಸಮುದಾಯ ಭವನದಲ್ಲಿ ಪ್ರಗತಿಪರ ಸಂಘಟನೆಗಳು ಹಮ್ಮಿಕೊಂಡಿದ್ದ ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಮತ್ತು ಸಂವಿಧಾನ ವಿರೋಧಿ ರಾಜಕಾರಣದ ಹಿಂದಿನ ಕುತಂತ್ರದ ದುಂಡು ಮೇಜಿನ ಚರ್ಚೆ ಸಭೆಯಲ್ಲಿ ಮಾತನಾಡಿದ ಅವರು, ದೇಶದ ಎಲ್ಲಾ ಪಕ್ಷಗಳು ಸಂವಿಧಾನ ಮತ್ತು ಅಂಬೇಡ್ಕರ್ ಹೆಸರನ್ನು ದುರ್ಬಳಕೆ ಮಾಡಿಕೊಳ್ಳುತ್ತಿವೆ ಎಂದು ಆರೋಪಿಸಿದರು.

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಅಂಬೇಡ್ಕರ್ ಬಗ್ಗೆ ಅವಹೇಳನವಾಗಿ ಮಾತನಾಡಿರುವುದು ಖಂಡನೀಯ ಎಂದ ಅವರು ದೇಶದಲ್ಲಿ ಸುದೀರ್ಘ ಅವಧಿಗೆ ಆಡಳಿತ ನಡೆಸಿದ ಕಾಂಗ್ರೆಸ್ ಪಕ್ಷ ಸಂವಿಧಾನ ಮತ್ತು ಅಂಬೇಡ್ಕರ್ ಅವರನ್ನು ಗುತ್ತಿಗೆ ಪಡೆದವರಂತೆ ವರ್ತಿಸುತ್ತಿದ್ದು, ಅಂಬೇಡ್ಕರ್ ಅವರನ್ನು ಕಾಂಗ್ರೆಸ್ ಅತ್ಯಂತ ಹೀನಾಯವಾಗಿ ನಡೆಸಿಕೊಂಡಿತ್ತು. ಅಲ್ಲದೇ ಅವರವರ ಸಾವಿನಲ್ಲೂ ರಾಜಕೀಯ ಮಾಡಿತ್ತು. ಅವರ ಮೃತದೇಹ ಹೂಳಲು ಕಾಂಗ್ರೆಸ್ ಪಕ್ಷ ಜಾಗ ನೀಡಿಲ್ಲ. ಬಿಜೆಪಿ ಕೂಡ ಅಂಬೇಡ್ಕರ್ ಅವರನ್ನು ಸಾಂದರ್ಭಿಕವಾಗಿ ಬಳಸಿಕೊಳ್ಳುತ್ತಿದೆ. ಚುನಾವಣೆ ವೇಳೆ ಮುನ್ನೆಲೆಗೆ ಬರುವ ಸಂವಿಧಾನ ಮತ್ತು ಅಂಬೇಡ್ಕರ್ ಹೆಸರು ದುರ್ಬಳಕೆ ಅಂಬೇಡ್ಕರ್ ಅಭಿಮಾನಿಗಳಿಗೆ ಇರಿಸುಮುರಿಸು ಉಂಟು ಮಾಡುತ್ತಿದೆ. ಇದನ್ನು ತಪ್ಪಿಸಲು ಅಂಬೇಡ್ಕರ್ ಅನುಯಾಯಿಗಳು ಜಾಗೃತಗೊಳ್ಳಬೇಕು ಎಂದರು.

ದಸಂಸ ಜಿಲ್ಲಾ ಸಂಚಾಲಕ ಸೋಸಲೆ ಎಸ್.ಆರ್.ಶಶಿಕಾಂತ್ ಮಾತನಾಡಿ, ಕಾಂಗ್ರೆಸ್ ದಲಿತ ಮತ್ತು ಅಲ್ಪಸಂಖ್ಯಾತರ ಪರವಾಗಿದೆ ಎಂದು ಎಲ್ಲಾ ಕಡೆ ಹೇಳುತ್ತದೆ. ಆದರೆ ದಲಿತರ ಏಳಿಗೆಗೆ ಯಾವುದೇ ನಿರ್ದಿಷ್ಟ ಯೋಜನೆ ಹಮ್ಮಿಕೊಳ್ಳದೆ ರಾಜಕೀಯ ಇಚ್ಛಾಶಕ್ತಿ ಕೊರತೆ ಹೊಂದಿದೆ. ದಲಿತ ಸಂಘಟನೆಗಳು ರಾಜಕಾರಣಿಗಳ ಅಣತಿಯಂತೆ ಕೆಲಸ ಮಾಡುವುದನ್ನು ಬಿಡಬೇಕು. ಚುನಾವಣೆ ಸಂದರ್ಭದಲ್ಲಿ ದಸಂಸ ಸಂಘಟನೆಗಳು ವಿಘಟನೆಯಾಗುವುದನ್ನು ತಪ್ಪಿಸಬೇಕು ಕಿವಿಮಾತು ಹೇಳಿದರು.

ತಾಲೂಕು ಅಂಬೇಡ್ಕರ್ ಸಂಘದ ಅಧ್ಯಕ್ಷ ಮಹದೇವಯ್ಯ ಮಾತನಾಡಿದರು. ತಾಪಂ ಮಾಜಿ ಉಪಾಧ್ಯಕ್ಷ ಪ್ರಸನ್ನ, ಡಿಜೆಎಸ್ ಜಿಲ್ಲಾ ಸಂಚಾಲಕ ಮಂಜುನಾಥ್, ದಸಂಸ ಜಿಲ್ಲಾ ಸಂಚಾಲಕರಾದ ಸೋಮಣ್ಣ, ರಾಜಶೇಖರ ಮೂರ್ತಿ, ಎಂ.ಎಸ್.ಬಸವರಾಜು, ಮಹದೇವಸ್ವಾಮಿ, ಮುಖಂಡರಾದ ಶಿವಣ್ಣ, ಎಂ.ಆರ್. ಸುಂದರ, ಎಂ.ಕೆ.ಸಿದ್ದರಾಜು, ಪುಟ್ಟಸ್ವಾಮಿ, ಮಲ್ಲು, ಬಿ.ಎಸ್.ಮಹೇಶ್, ಶಿವಮಲ್ಲು, ಎಸ್.ನಂಜುಂಡಯ್ಯ, ಗಣೇಶ್, ಎಸ್.ರಾಮಾನುಜ, ನಾಗೇಂದ್ರ ಭರಣಿ, ಸಾಗರ್, ಮಹೇಶ್, ಸಂಭ್ರಮ್, ಬಸವರಾಜು, ಸುರೇಶ, ಪ್ರೇಮ್ ಕುಮಾರ, ಶಿವಕುಮಾರ್, ಶ್ರೀಧರ್, ಎಲ್.ಉಮಾಪತಿ, ಮಹದೇವ, ಇತರರಿದ್ದರು.

ರೈತರ ಬೆಳೆಗಳಿಗೆ ಬೆಂಬಲ ಬೆಲೆ ನಿಗದಿ ಮಾಡಲಿ

ಸರ್ಕಾರಕ್ಕೆ ರಾಜ್ಯ ರೈತ ಸಂಘ, ರೈತ ಪರ್ವ ಕಾರ್ಯಾಧ್ಯಕ್ಷ ನವೀನ್ ಕುಮಾರ್ ಒತ್ತಾಯ



ಕಾರ್ಯಕ್ರಮದಲ್ಲಿ ಪ್ರಗತಿಪರ ರೈತರನ್ನು ಸನ್ಮಾನಿಸಲಾಯಿತು.

ಹೆಚ್.ಡಿ.ಕೋಟೆ, ಡಿ.23– ಬೆಳೆಗಳಿಗೆ ಬೆಂಬಲ ಬೆಲೆ ನಿಗದಿ ಮಾಡುವ ಮೂಲಕ ಸರ್ಕಾರ ರೈತರ ನೆರವಿಗೆ ಬರಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ, ರೈತ ಪರ್ವ ಕಾರ್ಯಾಧ್ಯಕ್ಷ ನವೀನ್ ಕುಮಾರ್ ಒತ್ತಾಯಿಸಿದರು.

ತಾಲೂಕಿನ ಹ್ಯಾಂಡ್‌ಪೋಸ್ಟ್‌ನ ತಾರಕ ಶಾಲೆ ಎದುರು ರಾಜ್ಯ ರೈತ ಸಂಘ, ರೈತ ಪರ್ವ ಅಮ್ಮನ ಮಡಿಲು ಸಂಘದ ಸಹಕಾರದೊಂದಿಗೆ ಆಯೋಜಿಸಿದ್ದ ವಿಶ್ವ ರೈತ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಪ್ರಸ್ತುತ ಸರ್ಕಾರಗಳು ಬೆಳೆಗಳಿಗೆ ಬೆಂಬಲ ನಿಗದಿ ಮಾಡದ ಕಾರಣ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಈ ಸಂಬಂಧ ಸರ್ಕಾರಕ್ಕೆ ರೈತರು ಹಲವು ಬಾರಿ ಒತ್ತಾಯಿಸಿದ್ದರೂ, ತಕ್ಕ ಪ್ರತಿಫಲ ಸಿಗುತ್ತಿಲ್ಲ ಎಂದರು.

ಈಗಾಗಲೇ ಭತ್ತ ಕಟಾವಿಗೆ ಬಂದಿದ್ದು, ರೈತರಿಂದ ಖರೀದಿ ಮಾಡುವ ಕೆಲಸ ಆಗಬೇಕಾಗಿದೆ. ರಸಗೊಬ್ಬರಗಳ ದರ ದುಬಾರಿಯಾಗಿದ್ದು, ರೈತರಿಗೆ ಉಚಿತ ಬಿತ್ತನೆ ಬೀಜ ಹಾಗೂ ಕಡಿಮೆ ದರದಲ್ಲಿ ರಸಗೊಬ್ಬರ ನೀಡಬೇಕು ಎಂದರು. ಡಿ.23 ವಿಶ್ವ ರೈತ ದಿನಾಚರಣೆಯಾಗಿದ್ದು, ಈ ದಿನವನ್ನು ಸರ್ಕಾರ ಆಚರಣೆ ಮಾಡಿ ಸಾರ್ವಜನಿಕ ರಜೆ ಘೋಷಿಸಬೇಕು ಎಂದು ಮನವಿ ಮಾಡಿದರು.

ಶಾಸಕ ಅನಿಲ್ ಮಾತನಾಡಿ, ರೈತ ಮುಖಂಡರಾದ ಪ್ರೊ.ನಂಜುಂಡಸ್ವಾಮಿ ಹಾಗೂ ಮಾಜಿ ಶಾಸಕ ಕೆ.ಎಸ್. ಪುಟ್ಟಣ್ಣಯ್ಯನವರು ರೈತಪರ ಹೋರಾಡುವ ಮೂಲಕ ಅವರ ಧ್ವನಿಯಾಗಿದ್ದರು. ಅವರಂತೆ ನಾನೂ ಸಹ ರೈತರ ಪರ ನಿಲ್ಲುತ್ತೇನೆ. ಆ ಮೂಲಕ ರೈತರ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತಂದು ಅವುಗಳನ್ನು ಬಗೆಹರಿಸಲು ಪ್ರಾಮಾಣಿಕವಾಗಿ ಶ್ರಮಿಸುತ್ತೇನೆ ಎಂದು ಭರವಸೆ ನೀಡಿದರು.

ಸರ್ಕಾರ ಅಕ್ರಮ ಸಕ್ರಮ ಸಮಿತಿ ನೇಮಕ ಮಾಡಿದ್ದು, ರೈತರು ನೀಡಿರುವ ಸಾಗುವಳಿ ಪತ್ರಕ್ಕೆ ಅರ್ಜಿಗಳನ್ನು ಪರಿಶೀಲಿಸಲಾಗಿದೆ. ಈಗಾಗಲೇ 1300 ಸಾಗುವಳಿ ಪತ್ರ ನೀಡಿದ್ದು, ಇಂದು 150 ಸಾಗುವಳಿ ಪತ್ರ ವಿತರಿಸಲಾಗುವುದು ಎಂದರು.

ಕಾರ್ಯಕ್ರಮಕ್ಕೂ ಮುನ್ನ ಹ್ಯಾಂಡ್‌ಪೋಸ್ಟ್ ಸರ್ಕಲ್‌ನಿಂದ ಎತ್ತಿನಗಾಡಿಯಲ್ಲಿ ರೈತರು, ಮಂಗಳ ವಾದ್ಯ, ವೀರಗಾಸೆ, ಚಿಲಿಪಿಲಿ ಗೊಂಬೆ, ಹಳ್ಳಿಕಾರ್ ಎತ್ತುಗಳೊಂದಿಗೆ ಮೆರವಣಿಗೆ ನಡೆಸಿದರು. ಇದೇ ವೇಳೆ ಕೃಷಿಯಲ್ಲಿ ಸಾಧನೆ ಮಾಡಿದ ಪ್ರಗತಿಪರ ರೈತರನ್ನು ಸನ್ಮಾನಿಸಲಾಯಿತು. ಹಾಲು ಕರೆಯುವ ಸ್ಪರ್ಧೆ, ಉತ್ತಮ ಹಳ್ಳಿಕಾರ್ ಎತ್ತುಗಳ ಪ್ರದರ್ಶನ ಏರ್ಪಡಿಸಲಾಗಿತ್ತು. ರೈತರ ಕುಟುಂಬದವರಿಗೆ ವಿವಿಧ ಆಟೋಟ ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು.

ಕಾರ್ಯಕ್ರಮದಲ್ಲಿ ರಾಜ್ಯ ರೈತ ಸಂಘ, ರೈತ ಪರ್ವ ರಾಜ್ಯಾಧ್ಯಕ್ಷ ಟಿ.ವಿ.ಅರುಣ್ ಕುಮಾರ್, ಪುರಸಭಾ ಸದಸ್ಯ ಹರೀಶ್‌ಗೌಡ, ಮೈಸೂರು ಜಿಲ್ಲಾಧ್ಯಕ್ಷ ಅಬ್ದುಲ್ ಶಕುರ್, ತಾಲೂಕು ಅಧ್ಯಕ್ಷ ಕುಮಾರ್, ಉಪಾಧ್ಯಕ್ಷ ಏಜಾದ್ ಪಾಷಾ, ಶಿವಮಲ್ಲಪ್ಪ, ತಾಲೂಕು ಮಹಿಳಾಧ್ಯಕ್ಷೆ ಭಾಗ್ಯಮ್ಮ, ಪದಾಧಿಕಾರಿಗಳಾದ ನಾಗರಾಜು, ವೆಂಕಟೇಶ್, ಸಿದ್ದಲಿಂಗೇಗೌಡ, ವನಿತಾ, ಮೋಹನ್, ನಾಗರತ್ನ, ಯೋಗೇಶ್, ಹರೀಶ್, ಬಸವಣ್ಣ ಮಂಜುನಾಥ್, ಮಹದೇವಸ್ವಾಮಿ, ಸತೀಶ್‌ಗೌಡ, ದೇವನಾಯಕ, ಮುಖಂಡರಾದ ಮೈಮುಲ್ ನಿರ್ದೇಶಕ ಕೆ.ಈರೇಗೌಡ, ಸತೀಶ್‌ಗೌಡ, ಪ್ರದೀಪ್, ರಾಜನಾಯಕ, ನಾಗೇಶ್, ಜಶೀಲ, ಅನುಷಾ, ಜಯರಾಮೇಗೌಡ, ಗೌರಮ್ಮ, ಯೋಗೇಶ್, ಕುಮಾರ್, ಮಧುಸೂದನ್ ಸೇರಿದಂತೆ ಹೆಚ್ಚಿನ ಸಂಖ್ಯೆಯಲ್ಲಿ ರೈತರು ಭಾಗವಹಿಸಿದ್ದರು.

ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರ ಕಚೇರಿಯಲ್ಲಿ ಡಾ.ಅಂಬೇಡ್ಕರ್, ಡಾ.ಜಗಜೀವನ್ ರಾಂ ಪ್ರತಿಮೆ ಅನಾವರಣ




ಮೈಸೂರಿನ ಪಡುವಾರಹಳ್ಳಿಯಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರ ಕಚೇರಿ ಆವರಣದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಮತ್ತು ಡಾ.ಬಾಬು ಜಗಜೀವನರಾಂ ಅವರ ಪ್ರತಿಮೆಯನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅನಾವರಣಗೊಳಿಸಿದರು.

ಮೈಸೂರು,ಡಿ.23(ಎಂಟಿವೈ)– ಮೈಸೂರಿನ ಪಡುವಾರಹಳ್ಳಿಯಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರ ಕಚೇರಿ ಆವರಣದಲ್ಲಿ ನೂತನವಾಗಿ ನಿರ್ಮಿಸಿರುವ ಡಾ.ಬಿ.ಆರ್. ಅಂಬೇಡ್ಕರ್ ಮತ್ತು ಡಾ.ಬಾಬು ಜಗಜೀವನರಾಂ ಅವರ ಪ್ರತಿಮೆಗಳನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಅನಾವರಣಗೊಳಿಸಿದರು.

ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಸೋಮವಾರ ಬೆಳಗ್ಗೆ ಇಲಾಖೆಯ ಕಚೇರಿ ಆವರಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಇಬ್ಬರು ಮಹನಿಯರ ಪ್ರತಿಮೆ ಲೋಕಾರ್ಪಣೆ ಮಾಡಿದರಲ್ಲದೆ, ನವೀಕರಣಗೊಂಡ ಇಲಾಖೆಯ ಕಚೇರಿಯನ್ನು ಉದ್ಘಾಟಿಸಿದರು.

ಇದೇ ವೇಳೆ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಮಾತನಾಡಿ, ಸಮಾಜ ಕಲ್ಯಾಣ ಇಲಾಖೆಯ ಕೆಲಸಗಳನ್ನು ಸುಲಲಿತವಾಗಿ ನಡೆಸಲು ಅನುಕೂಲವಾಗುವಂತೆ ಇಲಾಖೆಯ ಅಧಿಕಾರಿಗಳು ಕಾರ್ಯನಿರ್ವಹಿಸುವ ಕಟ್ಟಡವನ್ನು ನವೀಕರಣ ಮಾಡಲಾಗಿದೆ. ಕಚೇರಿಯ ಮುಂಭಾಗ ಡಾ.ಬಿ.ಆರ್. ಅಂಬೇಡ್ಕರ್ ಮತ್ತು ಡಾ.ಬಾಬು ಜಗಜೀವನರಾಂ ಪ್ರತಿಮೆಗಳನ್ನು ನಿರ್ಮಾಣ ಮಾಡಲಾಗಿದ್ದು, ಕಚೇರಿಗೆ ಬರುವ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಲಿದೆ. ನವೀಕೃತ ಕಟ್ಟಡದಲ್ಲಿ ಸಭಾಂಗಣವೊಂದು ನಿರ್ಮಾಣವಾಗಿದ್ದು ಅದನ್ನು ಸಮರ್ಪಕವಾಗಿ ಬಳಕೆ ಮಾಡುವುದು ಸೇರಿದಂತೆ ಕಚೇರಿಯ ಸೌಲಭ್ಯಗಳನ್ನು ಬಳಕೆ ಮಾಡಿಕೊಂಡು ಅಧಿಕಾರಿಗಳು ದಕ್ಷತೆಯಿಂದ ಕೆಲಸ ಮಾಡಲು ಎಂದು ಸೂಚಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ರಂಗೇಗೌಡ ಮಾತನಾಡಿ, ಕಚೇರಿಗೆ ಹೆಚ್ಚಾಗಿ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಭೇಟಿ ನೀಡುತ್ತಾರೆ. ಹಾಗಾಗಿ ಅವರಿಗೆ ಅಂಬೇಡ್ಕರ್ ಅವರ ಬಗ್ಗೆ ತಿಳಿಸಲು ಭಾವಚಿತ್ರಗಳಲ್ಲಿ ಅಂಬೇಡ್ಕರ್ ಎಂಬ ಕಲ್ಪನೆಯಲ್ಲಿ ಬಾಬಾ ಸಾಹೇಬರ ಜೀವನ ಶೈಲಿ ಬಿಂಬಿಸುವ ಭಾವಚಿತ್ರಗಳ ಗ್ಯಾಲರಿಯನ್ನು ನಿರ್ಮಿಸಲಾಗಿದೆ. ಅಂಬೇಡ್ಕರ್ ಎಂಬ ಕಲ್ಪನೆಯಲ್ಲಿ ಡಾ.ಅಂಬೇಡ್ಕರ್ ಕುರಿತಾದ ಪುಸ್ತಕಗಳನ್ನು ಓದಲು ಗ್ರಂಥಾಲಯ ನಿರ್ಮಿಸಲಾಗಿದೆ. ಕಚೇರಿಗೆ ಭೇಟಿ ನೀಡುವವರು ಅಧಿಕಾರಿಗಳನ್ನು ಭೇಟಿಗಾಗಿ ಕಾಯುವ ಅವಧಿಯಲ್ಲಿ ಈ ಪುಸ್ತಕಗಳನ್ನು ಓದಬಹುದಾಗಿದೆ. ಒಟ್ಟು 40 ಲಕ್ಷ ರೂ. ವೆಚ್ಚದಲ್ಲಿ ಕಟ್ಟಡ ನವೀಕರಣ ಮಾಡಲಾಗಿದೆ ಎಂದು ನೀಡಿದರು.

ಈ ಸಂದರ್ಭದಲ್ಲಿ ಶಾಸಕ ಟಿ.ಎಸ್. ಶ್ರೀವತ್ಸ, ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಡಾ.ಪುಷ್ಪ ಅಮರನಾಥ್, ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತ ರೆಡ್ಡಿ, ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ಜಿಲ್ಲಾ ಪಂಚಾಯಿತಿ ಸಿಇಒ ಕೆ.ಎಂ. ಗಾಯಿತ್ರಿ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ರಂಗೇಗೌಡ, ಮಾಜಿ ಮೇಯರ್ ಪುರುಷೋತ್ತಮ್, ಡಾ.ಬಿ.ಆರ್. ಅಂಬೇಡ್ಕರ್ ಸಂಶೋಧನಾ ಸಂಸ್ಥೆ ಸಲಹೆಗಾರ ದೇವನೂರ ಬಸವರಾಜು, ಪ.ವರ್ಗಗಳ ಕಲ್ಯಾಣ ಇಲಾಖೆ ಯೋಜನಾ ಅಧಿಕಾರಿ ಮಲ್ಲೇಶ್, ಸಮಾಜ ಕಲ್ಯಾಣ ಇಲಾಖೆ ವಿಭಾಗೀಯ ನಿರ್ದೇಶಕಿ ಸರಸ್ವತಿ, ನಗರ ಪಾಲಿಕೆ ಹೆಚ್ಚುವರಿ ಆಯುಕ್ತ ಜೆ. ಸೋಮಶೇಖರ್, ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕ ಶಿವಕುಮಾರ್ ಇನ್ನಿತರರು ಉಪಸ್ಥಿತರಿದ್ದರು.

ಭಾರತ ರೋಗಮುಕ್ತ ದೇಶವಾಗಲು ಯೋಗ ಕಲಿಯಿರಿ

ವಿಧಾನಪರಿಷತ್ ಸದಸ್ಯ ಸಿ.ಎನ್. ಮಂಜೇಗೌಡ



ಯೋಗಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು

ಮೈಸೂರು, ಡಿ. 23– ಭಾರತವು ರೋಗ ಮುಕ್ತ ದೇಶವಾಗಬೇಕಾದರೆ ಪ್ರತಿಯೊಬ್ಬರೂ ಯೋಗ ಕಲಿತು ಆರೋಗ್ಯವಂತರಾಗಬೇಕು ಎಂದು ವಿಧಾನಪರಿಷತ್ ಸದಸ್ಯ ಸಿ.ಎನ್. ಮಂಜೇಗೌಡ ತಿಳಿಸಿದರು.

ಕರ್ನಾಟಕ ಯೋಗ ಶಿಕ್ಷಕರ ಒಕ್ಕೂಟ, ಹಿಮಾಲಯ ಪ್ರತಿಷ್ಠಾನ ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಸಂಯುಕ್ತ ಆಶ್ರಯದಲ್ಲಿ ಡಾ. ಕೆ.ಎಸ್. ಅಯ್ಯಂಗಾರ್ ಜಯಂತ್ಯೋತ್ಸವದ ಪ್ರಯುಕ್ತ ನಡೆದ ರಾಜ್ಯ ಮಟ್ಟದ ಮುಕ್ತ ಯೋಗಾಸನ ಸ್ಪರ್ಧೆಯ ಸಮಾರೋಪ ಸಮಾರಂಭದಲ್ಲಿ ವಿಜೇತರಾದ ಯೋಗಪಟುಗಳಿಗೆ ಬಹುಮಾನ ವಿತರಿಸಿ ಮಾತನಾಡಿದ ಅವರು, ಡಾ. ರಾಜ್‌ಕುಮಾರ್ ಅವರು ಕಾಮನಬಿಲ್ಲು ಚಲನಚಿತ್ರದಲ್ಲಿ ಯೋಗಾಸನ ಮಾಡುವುದನ್ನು ನೋಡಿದ್ದೇವೆ. ಚಿತ್ರನಟಿ ಶಿಲ್ಪಶೆಟ್ಟಿಯವರು ಯೋಗಾಸನ ಕಲಿತು ಯುವತಿಯಂತೆ ಕಾಣುತ್ತಾರೆ. ಭಾರತೀಯ ಸೇನೆಯಲ್ಲಿಯೂ ಯೋಗ ಶಿಬಿರಗಳು ನಡೆಯುತ್ತವೆ. ಯೋಗಕ್ಕೆ ಯಾವುದೇ ಜಾತಿ, ಧರ್ಮವಿಲ್ಲ. ವಿದೇಶಿಯರೂ ಕೂಡ ಮೈಸೂರಿಗೆ ಬಂದು ಯೋಗ ಕಲಿಯುತ್ತಿದ್ದಾರೆ, ಯೋಗ ಮಾಡುವುದರಿಂದ ಮನುಷ್ಯನ ದೇಹದ ಪ್ರತಿಯೊಂದು ಅಂಗವೂ ಕ್ರಿಯಾಶೀಲವಾಗುತ್ತದೆ. ಯೋಗ ಅಂತರಾಷ್ಟ್ರೀಯ ಮಟ್ಟದಲ್ಲಿಯೂ ಖ್ಯಾತಿಗಳಿಸಿದ್ದು ಜ್ಞಾನವೂ ಹೆಚ್ಚಾಗುತ್ತದೆ. ಆದ್ದರಿಂದ ಪ್ರತಿಯೊಬ್ಬರೂ ಯೋಗ ಕಲಿತು ಆರೋಗ್ಯವಂತರಾಗಿರಿ ಎಂದರು.

ಸಮಾರಂಭದಲ್ಲಿ ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ. ರಾಜೀವ್, ಡಾ. ಹೆಚ್.ಬಿ. ರಾಜ ಶೇಖರ್, ಕೆ.ಜಿ. ದೇವರಾಜ್, ಡಾ. ಬಿ.ಪಿ. ಮೂರ್ತಿ, ಡಾ. ಬಿ. ಶಾಂತರಾಂ, ಎಂ.ಬಿ. ಪಶುಪತಿ, ಎನ್. ಅನಂತ, ಯೋಗಕುಮಾರ್, ಬಿ. ರವಿ, ಬ್ಯಾಡಹಳ್ಳಿ ಸೋಮಸುಂದರ್ ಉಪಸ್ಥಿತರಿದ್ದರು.

ಪರಿಸರ ಜಾಗೃತಿ, ಆರೋಗ್ಯ ಶಿಬಿರಗಳ ಮೂಲಕ

ಅಲೆಮಾರಿಗಳ ಸಮಾವೇಶಕ್ಕೆ ಸಂಸದ ಯದುವೀರ್ ಚಾಲನೆ



ಓವರ್ ಲ್ಯಾಂಡ್ ಅಸೋಸಿಯೇಷನ್ ಆಫ್ ಇಂಡಿಯಾದ ಅಲೆಮಾರಿಗಳ ಸಮಾವೇಶಕ್ಕೆ ಮೈಸೂರಿನ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಮುಂಭಾಗ ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಸೋಮವಾರ ಚಾಲನೆ ನೀಡಿದರು.

ಮೈಸೂರು, ಡಿ.23(ಜಿಎ)–ಓವರ್ ಲ್ಯಾಂಡ್ ಅಸೋಸಿಯೇಷನ್ ಆಫ್ ಇಂಡಿಯಾದ ಅಲೆಮಾರಿಗಳ ಸಮಾವೇಶಕ್ಕೆ ಮೈಸೂರಿನ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಮುಂಭಾಗ ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಸೋಮವಾರ ಚಾಲನೆ ನೀಡಿದರು.

ದೇಶದ ವಿವಿಧ ರಾಜ್ಯಗಳಿಂದ ಪಾಲ್ಗೊಂಡಿರುವ ಓವರ್ ಲ್ಯಾಂಡ್ ಅಸೋಸಿಯೇಷನ್‌ನ ಸದಸ್ಯರು ದೇಶದಾದ್ಯಂತ ಡಿ.30ರವರೆಗೆ ಸಂಚರಿಸುತ್ತಿದ್ದು, ಇಂದು ಮೈಸೂರಿಗೆ ಆಗಮಿಸಿರುವ ಅವರು ಇಲ್ಲಿಂದ ಕೊಡಗು ತಲುಪಿದರು.

ಈ ವೇಳೆ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಮಾತನಾಡಿ, ಭಾರತವನ್ನು ವಾಹನಗಳ ಮೂಲಕ ಪ್ರವಾಸ ಮಾಡಿ, ಪ್ರಕೃತಿಯ ಸಂರಕ್ಷಣೆ ಸಂದೇಶದ ಮೂಲಕ ಸಮಾಜ ಸೇವೆ ಮಾಡುತ್ತಿರುವುದು ಶ್ಲಾಘನೀಯ. ಇಂದು ಮೈಸೂರಿನಿಂದ ಕೊಡಗಿಗೆ ತೆರಳುತ್ತಿದ್ದಾರೆ ಅವರ ಪ್ರಯತ್ನ ಯಶಸ್ವಿಯಾಗಲಿ ಅವರೊಟ್ಟಿಗೆ ಕೈ ಜೋಡಿಸೋಣ ಎಂದು ಕರೆ ನೀಡಿದರು.

ಈ ಅಲೆಮಾರಿಗಳು ಕೊಡಗಿಗೆ ಮೈಸೂರಿನ ಮೂಲಕ ತಮ್ಮದೇ ಆದ ವಾಹನದಲ್ಲಿ ಪ್ರಯಾಣಿಸಿ ಯಾವುದೇ ರೀತಿಯಲ್ಲೂ ಪರಿಸರಕ್ಕೆ ಧಕ್ಕೆಯಾಗದಂತೆ ತಮ್ಮ ತಮ್ಮ ವಾಹನದಲ್ಲಿಯೇ ವಾಸ್ತವ್ಯ ಹೂಡಿ, ಸಾಮಾಜಿಕ ಸೇವಾ ಕಾರ್ಯಗಳಲ್ಲಿ ಭಾಗವಹಿಸಿ, ಯುವ ಜನಾಂಗದಲ್ಲಿ ಜಾಗೃತಿ ಮೂಡಿಸುವ ವಿಶಿಷ್ಟ ವಿನೂತನ ಕಾರ್ಯಕ್ರಮವಾಗಿದೆ.

ಆರೋಗ್ಯ ಶಿಬಿರ, ಬಡವರಿಗೆ ಕಂಬಳಿ ವಿತರಿಸುವುದು, ಮಕ್ಕಳಿಗೆ ಪುಸ್ತಕ ವಿತರಣೆ, ಪರಿಸರ ಜಾಗೃತಿ ಮೂಲಕ ಮುಂದಿನ ತಲೆಮಾರಿಗೆ ಪರಿಸರ ಕಾಪಾಡುವುದು, ಉತ್ತಮಪಡಿಸುವುದು ಮುಖ್ಯ ಉದ್ದೇಶವಾಗಿದೆ. ಈ ವೇಳೆ ಓವರ್ ಲ್ಯಾಂಡ್ ಅಸೋಸಿಯೇಷನ್ ಆಫ್ ಇಂಡಿಯಾದ ರೋಹಿತ್, ರವೀನಾ, ಸತ್ಯಜಿತ್, ಸಿ.ಎ.ಕಾರ್ಯಪ್ಪ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಅಂಬೇಡ್ಕರ್‌ಗೆ ಅವಮಾನ ಮಾಡಿಲ್ಲ

ಓವರ್ ಲ್ಯಾಂಡ್ ಅಸೋಸಿಯೇಷನ್ ಆಫ್ ಇಂಡಿಯಾದ ಅಲೆಮಾರಿಗಳ ಸಮಾವೇಶಕ್ಕೆ ಮೈಸೂರಿನ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಮುಂಭಾಗ ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಚಾಲನೆ ನೀಡಿ, ಗೃಹ ಸಚಿವ ಅಮಿತ್ ಷಾ ಅವರು ಡಾ.ಬಿ.ಆರ್.ಅಂಬೇಡ್ಕರ್ ಕುರಿತು ನೀಡಿರುವ ಹೇಳಿಕೆ ಬಗ್ಗೆ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಅಮಿತ್ ಷಾ ಅವರು ಮಾತನಾಡಿರುವ ವಿಡಿಯೋ ತಿರುಚಲಾಗಿದೆ. ಆದರೆ, 2.30 ನಿಮಿಷದ ವಿಡಿಯೋ ಪೂರ್ತಿ ನೋಡಿದರೆ ಸತ್ಯ ತಿಳಿಯುತ್ತದೆ. ಅವರು ಯಾವುದೇ ರೀತಿ ಅವಮಾನ ಮಾಡಿಲ್ಲ ಎಂದರು.

ಕಾಂಗ್ರೆಸ್ ಪ್ರತಿಭಟನೆಗೆ ಪ್ರತಿಕ್ರಿಯಿಸಿ, ಕಾಂಗ್ರೆಸ್‌ನವರು ಅಪಪ್ರಚಾರ, ಅರ್ಧ ಸತ್ಯವನ್ನು ಬಳಸುವುದು ಅವರ ಅಸ್ತ್ರವಾಗಿದೆ. ನಿಜವಾಗಿಯೂ ಯಾರು ಅಂಬೇಡ್ಕರ್ ಅವರಿಗೆ ಅವಮಾನ ಮಾಡಿದ್ದಾರೆ ಎಂಬುದು ಎಲ್ಲರಿಗೂ ಗೊತ್ತು ಇಂದಿರಾ ಗಾಂಧಿ ರಾಜೀವ್ ಗಾಂಧಿ ಭಾರತ ರತ್ನ ನೀಡಿದವರು ಅಂಬೇಡ್ಕರ್‌ಗೆ ನೀಡಲಿಲ್ಲ ಅಂಬೇಡ್ಕರ್ ಅವರು ಎರಡು ಬಾರಿ ಚುನಾವಣೆಯಲ್ಲಿ ಸೋತ ಕೀರ್ತಿ ಕಾಂಗ್ರೆಸ್‌ಗೆ ಸಲ್ಲುತ್ತದೆ ಎಂದು ಕಿಡಿಕಾರಿದರು.

ಎಂಎಲ್‌ಸಿ ಸಿ.ಟಿ.ರವಿ ಬಂಧನ ಕುರಿತು ಮಾತನಾಡಿ, ಎಲ್ಲದಕ್ಕೂ ಕಾನೂನು ಇದೆ. ಆದರೆ, ಈ ರೀತಿ ಬಂಧಿಸಿದ್ದು ಖಂಡನೀಯ ವಿಚಾರ. ಅದಕ್ಕೆ ಸೂಕ್ತ ತನಿಖೆ ಮಾಡಬೇಕು. ಅದನ್ನು ಬಿಟ್ಟು ಅವರನ್ನು ಈ ರೀತಿ ಬಂಧಿಸಿ, ರಾತ್ರಿ ಸುತ್ತಾಡಿಸಿರುವುದು ತಪ್ಪು ಅವರೊಟ್ಟಿಗೆ ನಾವಿದ್ದೇವೆ. ಕಾನೂನು ಹೋರಾಟ ಮಾಡುತ್ತೇವೆ ಎಂದರು.

ಹರಿಯಾಣ: ಹೋಟೆಲ್ ಪಾರ್ಕಿಂಗ್‌ನಲ್ಲಿ ಗುಂಡಿಟ್ಟು ಮೂವರ ಹತ್ಯೆ

ಚಂಡೀಗಢ: ಹೋಟೇಲ್‌ವೊಂದರ ಪಾರ್ಕಿಂಗ್ ಸ್ಥಳದಲ್ಲಿ ಅಪರಿಚಿತ ದುಷ್ಕರ್ಮಿಗಳು ಮಹಿಳೆ ಸೇರಿದಂತೆ ಮೂವರನ್ನು ಗುಂಡಿಟ್ಟು ಹತ್ಯೆ ಮಾಡಿರುವ ಘಟನೆ ಹರಿಯಾಣದ ಪಂಚಕುಲಾದಲ್ಲಿ ನಡೆದಿದೆ. ಭಾನುವಾರ ರಾತ್ರಿ ಈ ಘಟನೆ ನಡೆದಿದೆ ಎಂದು ಪೊಲೀಸರು ಸೋಮವಾರ ತಿಳಿಸಿದ್ದಾರೆ. ಮೃತರನ್ನು ದೆಹಲಿಯ ವಿಕ್ಕಿ, ವಿಪಿನ್ ಮತ್ತು ಹಿಸಾರ್‌ನ ನಿಯಾ ಎಂದು ಗುರುತಿಸಲಾಗಿದೆ. ಈ ಮೂವರು ಹುಟ್ಟುಹಬ್ಬದ ಆಚರಣೆಯಲ್ಲಿ ಪಾಲ್ಗೊಳ್ಳಲು ಬಂದಿದ್ದಾಗ ಗುಂಡಿನ ದಾಳಿ ನಡೆದಿದೆ ಎಂದು ಪಂಚಕುಲ ಸಹಾಯಕ ಆಯುಕ್ತ ಅರವಿಂದ್ ಕಾಂಬೋಜ್ ತಿಳಿಸಿದ್ದಾರೆ.

ಸುಮಾರು 30 ವರ್ಷದ ವಿಕ್ಕಿ ಕ್ರಿಮಿನಲ್ ಹಿನ್ನೆಲೆವುಳ್ಳವನಾಗಿದ್ದು, ಹಲವು ಕೇಸ್‌ಗಳನ್ನು ಎದುರಿಸುತ್ತಿದ್ದ ಎಂದು ಅವರು ಮಾಹಿತಿ ನೀಡಿದ್ದಾರೆ.

ಧಾರವಾಡ: ಟಿಟಿ ವಾಹನ–ಲಾರಿ ಮುಖಾಮುಖಿ ಡಿಕ್ಕಿ, ಮೂವರ ದುರ್ಮರಣ

ಧಾರವಾಡ, ಡಿ.23– ಟಿಟಿ ವಾಹನ ಮತ್ತು ಲಾರಿ ನಡುವೆ ಸಂಭವಿಸಿದ ಮುಖಾಮುಖಿ ಡಿಕ್ಕಿ ಹೊಡೆದು ಮೂವರು ಸಾವಿಗೀಡಾಗಿರುವ ಅಪಘಡ ಅಳ್ನಾವರ ತಾಲ್ಲೂಕಿನ ಅಡಬುಗಟ್ಟಿ ಸಮೀಪ ಮುಂಜಾನೆ ಸಂಭವಿಸಿದೆ. ಲಾರಿಯಲ್ಲಿದ್ದ ಸವದತ್ತಿ ತಾಲ್ಲೂಕಿನ ಶಿರಸಂಗಿಯ ಹನುಮಂತ ಮಲ್ಲಾಡ್ (36), ಮಹಾಂತೇಶ ಚವಾಣ (37) ಹಾಗೂ ಮಹಾದೇವಪ್ಪ ಹುಲ್ಲಳ್ಳಿ (39) ಮೃತಪಟ್ಟವರು. ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

ಸೂಕ್ತ ವೇದಿಕೆಗಳಲ್ಲಿ ವಿದ್ಯಾರ್ಥಿಗಳು ತಮ್ಮಲ್ಲಿನ ಪ್ರತಿಭೆ ಅನಾವರಣ ಮಾಡಬೇಕಿದೆ

- ಮೈಸೂರು ಜಿಪಂ ಸಿಇಒ ಕೆ.ಎಂ.ಗಾಯತ್ರಿ ಕಿವಿಮಾತು
- ಜಿಲ್ಲಾಮಟ್ಟದ ಪ್ರತಿಭಾ ಕಾರಂಜಿ; ಕಲೋತ್ಸವ ಕಾರ್ಯಕ್ರಮ

ಮೈಸೂರು,ಡಿ.23(ಎಂಟಿವೈ)– ವಿದ್ಯಾರ್ಥಿಗಳು ಸೂಕ್ತ ವೇದಿಕೆಗಳಲ್ಲಿ ತಮ್ಮಲ್ಲಿರುವ ಪ್ರತಿಭೆಯನ್ನು ಅನಾವರಣ ಮಾಡಿ, ಪಠ್ಯೇತರ ಕ್ಷೇತ್ರಗಳಲ್ಲಿ ಸಾಧನೆ ಮಾಡಬೇಕು ಎಂದು ಜಿ.ಪಂ ಸಿಇಓ ಕೆ.ಎಂ.ಗಾಯತ್ರಿ ಸಲಹೆ ನೀಡಿದ್ದಾರೆ.

ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಮಹಾರಾಜ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಶಾಲಾ ಶಿಕ್ಷಣ ಇಲಾಖೆ ಆಯೋಜಿಸಿದ್ದ ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಕೇವಲ ಪಠ್ಯ ಕ್ರಮಕ್ಕೆ ಸೀಮಿತವಾಗಬಾರದು. ಸೂಕ್ತ ವೇದಿಕೆಗಳಲ್ಲಿ ತಮ್ಮಲ್ಲಿರುವಂತಹ ಪ್ರತಿಭೆಗಳನ್ನು ಅನಾವರಣಗೊಳಿಸಬೇಕು. ಶಾಲಾ ಶಿಕ್ಷಣ ಇಲಾಖೆ ವಿದ್ಯಾರ್ಥಿಗಳಲ್ಲಿರುವ ಪ್ರತಿಭೆ ಗುರುತಿಸುವ ನಿಟ್ಟಿನಲ್ಲಿ ಪ್ರತಿಭಾ ಕಾರಂಜಿ, ಕಲೋತ್ಸವದಂತಹ ಸಾಂಸ್ಕೃತಿಕ ಕಾರ್ಯಕ್ರಮಗಳ ಸ್ಪರ್ಧೆಯನ್ನು ಆಯೋಜಿಸುತ್ತಾ ಬಂದಿದೆ. ಸ್ಪರ್ಧೆಯಲ್ಲಿ ಪಾಲ್ಗೊಳ್ಳಲು ಜಿಲ್ಲೆಯ ವಿವಿಧೆಡೆಯಿಂದ ಆಗಮಿಸಿರುವ ಎಲ್ಲರೂ ವಿಜೇತರೇ ಆಗಿದ್ದು, ಸೋಲು–ಗೆಲುವನ್ನು ಸಮಾನವಾಗಿ ಸ್ವೀಕರಿಸಬೇಕು. ಗೆಲುವು ಸಾಧಿಸಿದವರು ಮುಂದಿನ ಹಂತದ ಸಾಧನೆಗೆ ಸಿದ್ದರಾದರೆ, ಸೋತವರು ಮತ್ತೊಮ್ಮೆ ಸಾಧನೆ ಮಾಡಲು ಹೆಚ್ಚಿನ ಗಮನ ಹರಿಸಬೇಕು ಎಂದರು.

ಶಿಕ್ಷಣ ಕೇವಲ ಅಕ್ಷರ ಕಲಿಸುವುದಕ್ಕೆ ಮಾತ್ರ ಸೀಮಿತವಲ್ಲ. ಪರೀಕ್ಷೆಯಲ್ಲಿ ಅಂಕ ಗಳಿಸುವುದಕ್ಕೆ ಮಾತ್ರ ವಿದ್ಯಾರ್ಥಿಗಳು ಸೀಮಿತವಾಗಬಾರದು. ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದರಿಂದ ಮನೋವಿಕಾಸವೂ ಆಗುತ್ತದೆ. ಜೀವನದಲ್ಲಿ ಸಾಧನೆಯ ಹಾದಿಯೂ ತಿಳಿಯುತ್ತದೆ. ತಮ್ಮ ವ್ಯಕ್ತಿತ್ವವನ್ನು ಗಟ್ಟಿಗೊಳಿಸುವುದಕ್ಕೆ ಪಠ್ಯೇತರ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವುದು ಅನಿವಾರ್ಯ. ಇದರಿಂದ ಉತ್ತಮವಾದ ವ್ಯಕ್ತಿತ್ವ ರೂಪಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.



ಮೈಸೂರಿನ ಮಹಾರಾಜ ಪದವಿ ಪೂರ್ವ ಕಾಲೇಜು ಆವರಣದಲ್ಲಿ ನಡೆದ ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮವನ್ನು ಜಿ.ಪಂ. ಸಿಇಓ ಕೆ.ಎಂ.ಗಾಯತ್ರಿ ಉದ್ಘಾಟಿಸಿದರು.

ಜಿಲ್ಲಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಕೆ.ಬಿ.ಸೋಮೇಗೌಡ ಮಾತನಾಡಿ, ಮಕ್ಕಳು ಹೊರ ಜಗತ್ತಿನ ಬಗ್ಗೆ ತಿಳಿದುಕೊಳ್ಳಬೇಕೆಂಬ ಉದ್ದೇಶದಿಂದ ಪ್ರತಿ ವರ್ಷ ಪ್ರತಿಭಾ ಕಾರಂಜಿ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ಈ ಕಾರ್ಯಕ್ರಮದಲ್ಲಿ ಹೊಸ ಪ್ರತಿಭೆಗಳನ್ನು ಜಗತ್ತಿಗೆ ಪರಿಚಯಿಸುವ ಕೆಲಸ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಡಿಡಿಪಿಐ ಎಸ್.ಟಿ.ಜವರೇಗೌಡ ಮಾತನಾಡಿ, ಶಾಲಾ ಮಕ್ಕಳಲ್ಲಿರುವ ಪ್ರತಿಭೆ ಗುರುತಿಸುವ ನಿಟ್ಟಿನಲ್ಲಿ ಕಳೆದ 10–15 ವರ್ಷದಿಂದ ಪ್ರತಿಭಾ ಕಾರಂಜಿ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ಜಿಲ್ಲಾ ಮಟ್ಟದಲ್ಲಿ ಭಾಗವಹಿಸುವಂತಹ ಪ್ರತಿ ಮಕ್ಕಳಿಗೂ ಆಯಾ ಶಾಲೆಯ ಶಿಕ್ಷಕರು ನಿಯೋಜನೆಗಳನ್ನು ತಮ್ಮ ತಮ್ಮ ಶಾಲೆಗಳಲ್ಲಿ ನೀಡಬೇಕು. ಮಕ್ಕಳು ಸೋಲು ಗೆಲುವನ್ನು ಸಮಾನವಾಗಿ ಸ್ವೀಕರಿಸಬೇಕು. ಎಲ್ಲಾ ಮಕ್ಕಳು ರಾಜ್ಯ ಮಟ್ಟಕ್ಕೆ ಹೋಗಿ ಸಾಧನೆ ಮಾಡಬೇಕು ಎಂದು ಶುಭ ಕೋರಿದರು.

500ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗಿ: ಜಿಲ್ಲೆಯ ವಿವಿಧ ತಾಲೂಕು ಮಟ್ಟದ ಪ್ರತಿಭಾ ಕಾರಂಜಿಯಲ್ಲಿ ಸ್ಪರ್ಧಿಸಿ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗಳು ಜಿಲ್ಲಾ ಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದ್ದು, ಇಂದು ಮಹಾರಾಜ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಸ್ಪರ್ಧೆಯಲ್ಲಿ ವಿವಿಧ ತಾಲೂಕಿನಿಂದ 50ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. 5ರಿಂದ 7ನೇ ತರಗತಿ, 8ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ಪ್ರತ್ಯೇಕ ವಿಭಾಗದಲ್ಲಿ ಸ್ಪರ್ಧೆ ನಡೆಸಲಾಯಿತು. ವಿವಿಧ ಭಾಷೆಯಲ್ಲಿ ಕಂಠಪಾಠ ಸ್ಪರ್ಧೆ, ಸಂಸ್ಕೃತ ಅರೇಬಿಕ್ ಭಾಷೆಯಲ್ಲಿ ಧಾರ್ಮಿಕ ಪಠಣ, ದೇಶಭಕ್ತಿಗೀತೆ, ಪ್ರಬಂಧ ಸ್ಪರ್ಧೆ ಕಥೆ ಹೇಳುವುದು, ಚಿತ್ರಕಲೆ ಮತ್ತು ಬಣ್ಣ ಹಚ್ಚುವಿಕೆ, ವೇಷಭೂಷಣ, ನೃತ್ಯ, ಜನಪದ ಗೀತಾಗಾಯನ ಸೇರಿದಂತೆ ಇನ್ನಿತರ ಸ್ಪರ್ಧೆ ಪ್ರತ್ಯೇಕ ಕೊಠಡಿಯಲ್ಲಿ ಜರುಗಿತು.

ಕಾರ್ಯಕ್ರಮದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಶಿಕ್ಷಣಾಧಿಕಾರಿ ಎಂ.ಆರ್ ಅನಂತರಾಜು, ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎನ್.ರಾಜು, ಶೋಭಾ, ಮಹೇಶ್, ಮೈಸೂರು ಜಿಲ್ಲಾ ಘಟಕದ ಕರಾ ಶಿಕ್ಷಣಾಧಿಕಾರಿಗಳ ಸಂಘದ ಅಧ್ಯಕ್ಷ ಕೃಷ್ಣ ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯಾಯರ ಸಂಘದ ಅಧ್ಯಕ್ಷ ದುಂಡಯ್ಯ, ಮಾಧ್ಯಮಿಕ ಶಾಲಾ ಶಿಕ್ಷಕರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಟಿ.ಸಿ ಕೃಷ್ಣಮೂರ್ತಿ, ಜಿಲ್ಲಾ ದೈಹಿಕ ಶಿಕ್ಷಣ ಶಿಕ್ಷಕರ ಸಂಘದ (ಗ್ರೇಡ್–2)ಅಧ್ಯಕ್ಷ ರಾಜೇಂದ್ರ, ಅನುಪಾಲನ ಅಧಿಕಾರಿಗಳು, ಶಿಕ್ಷಕರ ಸಂಘದ ಪದಾಧಿಕಾರಿಗಳು ಹಾಗೂ ಶಿಕ್ಷಕರು, ವಿದ್ಯಾರ್ಥಿಗಳು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಪುಷ್ಪ–2 (ಕ)	3 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಯುಐ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಪುಷ್ಪ–2 (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಪುಷ್ಪ–2 (ಕ)	4 ಪ್ರದರ್ಶನಗಳು
ಗಾಯಿತ್ರಿ	
ಯುಐ (ಕ)	4 ಪ್ರದರ್ಶನಗಳು
ರಾಜಕಮಲ್	
ವಿಡುದಲೈ (ತ)	4 ಪ್ರದರ್ಶನಗಳು
ಸಂಗಂ	
ಪುಷ್ಪ–2 (ಕ)	4 ಪ್ರದರ್ಶನಗಳು
ಲಿಡೋ	
ಲಕ್ಕಿ ಭಾಸ್ಕರ್ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಭೈರತಿ ರಣಗಲ್ (ಕ)	4 ಪ್ರದರ್ಶನಗಳು
ಪ್ರಭಾ	
ಪುಷ್ಪ–2 (ತೆ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಯುಐ (2024) (ಕ): ಬೆ.9.30ಕ್ಕೆ, ಮುಫಾಸ ದಿ ಲಯನ್ ಕಿಂಗ್ (3ಡಿ)(ಇಂ): ಮ.12.10ಕ್ಕೆ, ಮ.2.35ಕ್ಕೆ, ಸಂ.5ಕ್ಕೆ, ರಾ.7.25ಕ್ಕೆ, ಮಾರ್ಕೋ (ಮ): ರಾ.9.55ಕ್ಕೆ.
ಸ್ಕ್ರೀನ್ 2	ಯುಐ (2024) (ಕ): ಬೆ.9ಕ್ಕೆ, ಪುಷ್ಪಾ 2 (ತೆ): ಮ.12.05ಕ್ಕೆ, ವಿಡುತಲೈ 2 (ತ): ಮ.3.55ಕ್ಕೆ, ರಾ.10.05ಕ್ಕೆ, ವನ್ವಾಸ್ (ಹಿಂ): ರಾ.7ಕ್ಕೆ.
ಸ್ಕ್ರೀನ್ 3	ಇಡಿ ಎಕ್ಸ್ಟ್ರಾ ಡಿಸೆಂಟ್ (ಮ): ಬೆ.9.50ಕ್ಕೆ, ಪುಷ್ಪಾ 2 (ಕ): ಮ.12.15ಕ್ಕೆ, ಸಂ.6.10ಕ್ಕೆ, ಹರಿದಾಸರ ದಿನಚರಿ (ಕ): ಸಂ.4.05ಕ್ಕೆ, ಬಚ್ಚಲ ಮಲ್ಲಿ (ತೆ): ರಾ.10.05ಕ್ಕೆ,
ಸ್ಕ್ರೀನ್ 4	ಯುಐ (2024) (ಕ): ಬೆ.8.30ಕ್ಕೆ, ಬೆ.11.10ಕ್ಕೆ, ಮ.1.50ಕ್ಕೆ, ಸಂ.4.30.ಕ್ಕೆ, ರಾ.7.15ಕ್ಕೆ, ರಾ.10ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ಅಮರನ್ (ಕ): ಬೆ.10.30ಕ್ಕೆ, ರಾ.7.30ಕ್ಕೆ, ಭೈರತಿ ರಣಗಲ್ (ಕ): ಮ.1.45ಕ್ಕೆ, ಧೀರ ಭಗತ್ ರಾಯ್ (ಕ): ಸಂ.4.30ಕ್ಕೆ.
ಸ್ಕ್ರೀನ್ 2	ಭೈರತಿ ರಣಗಲ್ (ಕ): ಬೆ.10.40ಕ್ಕೆ, ಪುಷ್ಪಾ 2 (ಕ): ಮ.1.15ಕ್ಕೆ, ಸಂ.5.15ಕ್ಕೆ, ರಾ.9.15ಕ್ಕೆ
ಸ್ಕ್ರೀನ್ 3	ಪುಷ್ಪಾ 2 (ಕ): ಬೆ.11.30ಕ್ಕೆ, ರಾ.7.45ಕ್ಕೆ, ಪುಷ್ಪಾ 2 (ತೆ): ಸಂ.4ಕ್ಕೆ.
ಸ್ಕ್ರೀನ್ 4	ಪುಷ್ಪಾ 2 (ತೆ): ಬೆ.10.30ಕ್ಕೆ, ಸಂ.6ಕ್ಕೆ, ರಾ.9.45ಕ್ಕೆ, ಪುಷ್ಪಾ 2 (ಕ): ಮ.2.15ಕ್ಕೆ.

ಪಿವಿಆರ್ ಸಿನಿಮಾಸ್

PVR CINEMAS
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ಸಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಮೈಸೂರು-ಬೆಂಗಳೂರು ರಸ್ತೆಯಲ್ಲಿ

ಕಾರಿಗೆ ಮೊಟ್ಟೆ ಹೊಡೆದು, ಚಾಲಕನ ಕಣ್ಣಿಗೆ ಕಾರದ ಪುಡಿ ಎರಚಿ ನಗದು ದರೋಡೆ

ಮಂಡ್ಯ: ಚಲಿಸುತ್ತಿದ್ದ ಕಾರಿಗೆ ಮೊಟ್ಟೆ ಹೊಡೆದು ಚಾಲಕನ ಕಣ್ಣಿಗೆ ಕಾರದ ಪುಡಿ ಎರಚಿ ನಗದು ದರೋಡೆ ಮಾಡಿರುವ ಘಟನೆ ಮಂಡ್ಯ ತಾಲ್ಲೂಕಿನ ಬೂದನೂರು ಬಳಿ ಬೆಂಗಳೂರು–ಮೈಸೂರು ರಾಷ್ಟ್ರೀಯ ಹೆದ್ದಾರಿಯ ಸರ್ವೀಸ್ ರಸ್ತೆಯಲ್ಲಿ ಸೋಮವಾರ ರಾತ್ರಿ ಜರುಗಿದೆ.

ಮಂಡ್ಯದ ಗುತ್ತಲು ನಿವಾಸಿ ವಿನೋದ್ ದರೋಡೆಗೆ ಒಳಗಾದವರು. ಬೆಲ್ಲದ ವ್ಯಾಪಾರಿಯಾದ ವಿನೋದ್ ವ್ಯಾಪಾರ ಮುಗಿಸಿಕೊಂಡು ಮದ್ದೂರಿನಿಂದ ಮಂಡ್ಯ ನಗರಕ್ಕೆ ಹಿಂದಿರುಗುವ ವೇಳೆ ಹಳೇ ಬೂದನೂರು–ಹೊಸ ಬೂದನೂರು ನಡುವಿನ ಕಾಲುವೆ ಬಳಿ ಬೈಕ್‌ನಲ್ಲಿ ಬಂದ ಮೂವರು ದುಷ್ಕರ್ಮಿಗಳು ಕಾರಿನ ಗಾಜಿನ ಮೇಲೆ ಮೊಟ್ಟೆ ಹೊಡೆದು ವಾಹನ ಚಾಲನೆ ಮಾಡುತ್ತಿದ್ದ ವಿನೋದ್ ಅವರ ಕಣ್ಣಿಗೆ ಖಾರದ ಪುಡಿ ಎರಚಿದಾಗ ವಾಹನ ನಿಲ್ಲಿಸಲಾಗಿದೆ. ಈ ವೇಳೆ ವ್ಯಕ್ತಿಯ ಮೇಲೆರಗಿ ಹಲ್ಲೆ ಮಾಡಿರುವ ದುಷ್ಕರ್ಮಿಗಳು 55 ಸಾವಿರ ಹಣ ಕಿತ್ತುಕೊಂಡು ಪರಾರಿಯಾಗಿದ್ದಾರೆ ಎನ್ನಲಾಗಿದೆ.

ಘಟನಾ ಸ್ಥಳಕ್ಕೆ ಮಂಡ್ಯ ಗ್ರಾಮಾಂತರ ಠಾಣೆಯಲ್ಲಿ ದೂರು ದಾಖಲಾಗಿದ್ದು, ಪೊಲೀಸರು ಸ್ಥಳಕ್ಕೆ ಆಗಮಿಸಿ ಮಹಜರು ನಡೆಸಿ ತನಿಖೆ ಆರಂಭಿಸಿದ್ದಾರೆ. ಬೂದನೂರು ಬಳಿ ಹೆದ್ದಾರಿ ಸರ್ವೀಸ್ ರಸ್ತೆಯಲ್ಲಿ ಬೀದಿ ದೀಪವಿಲ್ಲದೆ ಕತ್ತಲು ಆವರಿಸಿದ್ದು ವಾಹನ ಸವಾರರು ಒಬ್ಬಂಟಿಯಾಗಿ ಓಡಾಡಲು ಜೀವ ಭಯ ಉಂಟಾಗಿದೆ. ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಅಥವಾ ಸ್ಥಳೀಯ ಗ್ರಾಪಂ ಬೀದಿ ದೀಪ ವ್ಯವಸ್ಥೆ ಮಾಡುವಂತೆ ಯುವ ಮುಖಂಡ ಶಾಮಿಯಾನ ನಾರಾಯಣ್ ಒತ್ತಾಯಿಸಿದ್ದಾರೆ.

ಫುಟ್‌ಪಾತ್‌ನಲ್ಲಿ ಮಲಗಿದ್ದವರ ಮೇಲೆ ಹರಿದ ಟ್ರಕ್: ಮೂವರ ದುರ್ಮರಣ

ಪುಣೆ, ಡಿ.23– ಪಾದಚಾರಿ ಮಾರ್ಗದಲ್ಲಿ ಮಲಗಿದ್ದವರ ಮೇಲೆ ಟ್ರಕ್ ಹರಿದ ಪರಿಣಾಮ ಇಬ್ಬರು ಮಕ್ಕಳು ಸೇರಿ ಮೂವರು ಸ್ಥಳ ದಲ್ಲಿಯೇ ಸಾವನ್ನಪ್ಪಿದ್ದು, ಆರು ಮಂದಿ ಗಾಯ ಗೊಂಡಿರುವ ಘಟನೆ ಮಹಾರಾಷ್ಟ್ರದ ಪುಣೆ ನಗರದಲ್ಲಿ ಸೋಮವಾರ ಬೆಳಗಿನ ಜಾವ ನಡೆದಿದೆ.

ಮೃತರನ್ನು ವೈಭವಿ ಪವಾರ್ (1), ವೈಭವ್ ಪವಾರ್ (2) ಮತ್ತು ವಿಶಾಲ್ ಪವಾರ್ (22) ಎಂದು ಗುರುತಿಸಲಾಗಿದೆ. ಗಾಯಾಳುಗಳನ್ನು ಸಸೂನ್ ಜನರಲ್ ಆಸ್ಪತ್ರೆಗೆ ದಾಖಲಿಸಲಾಗಿದ್ದು ಚಿಕಿತ್ಸೆ ಕೊಡಸಲಾಗುತ್ತಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ವಘೋಲಿ ಪ್ರದೇಶದ ಫುಟ್‌ಪಾತ್‌ನಲ್ಲಿ ಮಧ್ಯರಾತ್ರಿ 12.30ರ ಸುಮಾರಿಗೆ ಈ ಘಟನೆ ನಡೆದಿದ್ದು, ಘಟನೆಯ ನಂತರ ಟ್ರಕ್ ಚಾಲಕನನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಕೇಶ್ನಂದ್ ಫಾಟಾ ಪ್ರದೇಶದ ಬಳಿಯ ಫುಟ್‌ಪಾತ್‌ನಲ್ಲಿ ಹಲವರು ಮಲಗಿದ್ದರು, ಬಹುತೇಕ ಮಂದಿ ದಿನಗೂಲಿ ಕಾರ್ಮಿಕರಾಗಿದ್ದಾರೆಂದು ತಿಳಿದುಬಂದಿದೆ.

ನಿಂಗಪ್ಪ ನಿಧನ



ಮೈಸೂರು, ಡಿ.23– ವರುಣ ಹೋಬಳಿ ಶಿವಪುರ ಗ್ರಾಮದ ನಿವಾಸಿ ನಿಂಗಪ್ಪ(78) ಸೋಮವಾರ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರರು, ಓರ್ವ ಪುತ್ರಿ ಹಾಗೂ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮಧ್ಯಾಹ್ನ ನೆರವೇರಿತು ಎಂದು ಕುಟುಂಬ ಮೂಲಗಳು ತಿಳಿಸಿವೆ.

ಮೈಸೂರು ಮಿತ್ರ 45
ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

–ಜಾಹೀರಾತು ವ್ಯವಸ್ಥಾಪಕರು

ಪ್ಲಾಸ್ಟಿಕ್ ಬಳಕೆ ನಿಷೇಧಿಸಿ ಪರಿಸರವನ್ನು ಕಾಪಾಡಿ